ಸಂಪುಟ: 22, ಸಂಚಿಕೆ: 121, ಪುಟಗಳು: 8, ಭಾನುವಾರ, 9 ಫೆಬ್ರವರಿ 2025 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...

### ಸುಭಾಷಿತ

ಒಬ್ಬ ವ್ಯಕ್ತಿಯನ್ನು, ಪದೇ ಪದೇ ಕ್ಷಮಿಸಬಹುದು. ಆದರೆ ಪದೇ ಪದೇ ನಂಬಬಾರದು.

### ಪಂಚಾಂಗ

(ಭಾನುವಾರ 9, ಫೆಬ್ರವರಿ-2025)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು
- ಮಾಘ ಮಾಸ, ಶುಕ್ಲ ಪಕ್ಷ
- ವಾರ: ಭಾನುವಾರ, ತಿಥಿ: ದ್ವಾದಶಿ
- ನಕ್ಷತ್ರ: ಆರಿದ್ರ
- ರಾಹುಕಾಲ: 5.09 ರಿಂದ 6.42
- ಗುಳಿಕಕಾಲ: 3.35 ರಿಂದ 5.09
- ಯಮಗಂಡಕಾಲ: 12.27 ರಿಂದ 2.01




## ಸಂಕ್ಷಿಪ್ತ ಸುದ್ದಿ

## ಮಹಾ ಕುಂಭಮೇಳಕ್ಕೆ ತೆರಳಿದ ಡಿಕೆಶಿ

**ಬೆಂಗಳೂರು:** ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ಇಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕುಟುಂಬ ಸಮೇತರಾಗಿ ತೆರಳಿದ್ದಾರೆ. ಮುಂಜಾನೆ 5:30ಕ್ಕೆ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ಗೆ ಕುಟುಂಬದೊಂದಿಗೆ ಡಿಕೆಶಿ ತೆರಳಿದ್ದಾರೆ.



ಕುಂಭಮೇಳಕ್ಕೆ ಹೋಗುವ ಮುನ್ನ ಸದಾಶಿವ ನಗರದ ಮನೆ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಮ್ಮ ಧರ್ಮದ ನಂಬಿಕೆಯಿಂದ ಇವತ್ತು ಕುಂಭಮೇಳಕ್ಕೆ ಹೋಗುತ್ತಿದ್ದೇನೆ ಎಂದರು. ಕರ್ನಾಟಕದಲ್ಲಿ ಡಿಸಿ, ಎಸ್ಪಿ ಸೇರಿ ಮೈಸೂರಿನವರು ಬಂದಿದ್ದರು. ಅಲ್ಲಿನ ಕುಂಭಮೇಳಕ್ಕೂ ಹೋಗುತ್ತೇನೆ. ಸ್ವಾಮಿಗಳು ಎಲ್ಲಾ ಮಾತನಾಡಿದ್ದೇವೆ. ಅವರು ಎಲ್ಲಾ ಬರುತ್ತಿದ್ದಾರೆ. ಅಲ್ಲಿಯೂ ಭಾಗವಹಿಸುತ್ತೇವೆ. ನಮ್ಮ ಕರ್ನಾಟದ ಕಾವೇರಿ ಕುಂಭಮೇಳದಲ್ಲಿ ಭಾಗಿಯಾಗುತ್ತೇನೆ ಎಂದು ತಿಳಿಸಿದರು. ಪುಟ 2

## ಬಿಹಾರದತ್ತ ಬಿಜೆಪಿಯ ಚಿತ್ತ

**ನವದೆಹಲಿ:** 27 ವರ್ಷಗಳ ಬಳಿಕ ಭಾರತೀಯ ಜನತಾ ಪಕ್ಷ(ಬಿಜೆಪಿ) ದೆಹಲಿಯಲ್ಲಿ ಮತ್ತೆ ಅಧಿಕಾರಕ್ಕೆ ಮರಳಿದೆ. ದೆಹಲಿಯಲ್ಲಿ ಮತ್ತೆ ಅಧಿಕಾರಕ್ಕೆ ಬಂದ ನಂತರ, ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ 225 ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುವ ಮಹತ್ವಾಕಾಂಕ್ಷೆಯ ಗುರಿಯನ್ನು ಹೊಂದಿದೆ. ಅಕ್ಟೋಬರ್-ನವೆಂಬರ್‌ನಲ್ಲಿ ನಡೆಯಲಿರುವ ಚುನಾವಣೆಗಳು ಈಗಾಗಲೇ ಅತ್ಯಂತ ಕಠಿಣ ಹೋರಾಟವಾಗಿ ರೂಪುಗೊಳ್ಳುತ್ತಿದೆ.





### ಸಿಎಂ ಪ್ರಭಾವ ಬಳಸಿಲ್ಲ; ಲೋಕಾ ಅಂತಿಮ ವರದಿಯಲ್ಲಿ ಉಲ್ಲೇಖ

# ಮುಡಾ ಕೇಸ್‌ನಲ್ಲಿ ಸಿಎಂ ಕುಟುಂಬಸ್ಥರೇ ಸಂತ್ರಸ್ತರು

» ತನಿಖೆ ನಡೆಸಿದ ಲೋಕಾ ಅಂತಿಮ ವರದಿ

**ಬೆಂಗಳೂರು/ಮೈಸೂರು:** ಸಿಎಂ ಮತ್ತು ಕುಟುಂಬದ ವಿರುದ್ಧದ ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಅಂತಿಮ ವರದಿ ತಯಾರಿಸಿದ್ದು, ಇದರಲ್ಲಿನ ಸ್ಫೋಟಕ ಅಂಶಗಳು ಲಭ್ಯವಾಗಿದೆ. ವರದಿಯಲ್ಲಿ ಸಿಎಂ ಕುಟುಂಬಕ್ಕೆ ಕ್ಲೀನ್‌ಚಿಟ್ ಕೊಡುವ ಜೊತೆಗೆ ಸಿಎಂ ಕುಟುಂಬವೇ ಸಂತ್ರಸ್ತರು ಎಂದು ಲೋಕಾಯುಕ್ತ ಉಲ್ಲೇಖಿಸಿರುವುದಾಗಿ ಉನ್ನತ ಮೂಲಗಳಿಂದ ತಿಳಿದುಬಂದಿದೆ.




ಹೌದು. ಮೈಸೂರಿನ ಕೆಸರೆಯಲ್ಲಿನ ತಮ್ಮ ಜಮೀನಿಗೆ ಬದಲಿಯಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ವಿಜಯನಗರದ 3 ಮತ್ತು 4ನೇ ಹಂತಗಳಲ್ಲಿ ವಿವಿಧ ಅಳತೆಯಲ್ಲಿ ಸಿಎಂ ಕುಟುಂಬಕ್ಕೆ 14 ನಿವೇಶನಗಳನ್ನ ಹಂಚಿಕೆ ಮಾಡಿತ್ತು. ಇದರಲ್ಲಿ ಅಕ್ರಮ ನಡೆದಿದೆ ಎಂದು ಪ್ರಕರಣ ದಾಖಲಾದ ಬಳಿಕ ಹೈಕೋರ್ಟ್ ಲೋಕಾಯುಕ್ತ ತನಿಖೆಗೆ ನೀಡಿತ್ತು. ಇದೀಗ ತನಿಖೆ ನಡೆಸಿದ ಲೋಕಾ ಅಂತಿಮ ವರದಿ ತಯಾರಿಸಿದ್ದು, ಸಿಎಂ ಕುಟುಂಬವೇ ಸಂತ್ರಸ್ತರು ಎಂದು ಉಲ್ಲೇಖಿಸಿದೆ ಎನ್ನಲಾಗಿದೆ.

### ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ

# ಬಸ್ ಧಗಧಗ

## 18 ಪ್ರಯಾಣಿಕರು ಗ್ರೇಟ್ ಎಸ್ಕೇಪ್

**ಮಂಡ್ಯ:** ಚಲಿಸುತ್ತಿದ್ದ ಬಸ್‌ನ ಟೈಯರ್ ಬ್ಲಾಸ್ಟ್ ಆಗಿ ಖಾಸಗಿ ಬಸ್‌ವೊಂದು ಧಗ ಧಗನೆ ಹೊತ್ತಿ ಉರಿದ ಘಟನೆ ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ ನಡೆದಿದೆ. ಮಂಡ್ಯದ ಸ್ಯಾಂಜೋ ಆಸ್ಪತ್ರೆ ಸಮೀಪ ಘಟನೆ ನಡೆದಿದ್ದು, 18 ಮಂದಿ ಪ್ರಯಾಣಿಕರು ಗ್ರೇಟ್ ಎಸ್ಕೇಪ್ ಆಗಿದ್ದಾರೆ. ಅಶೋಕ್ ಅಂಡ್ ಲಾಜೆಸ್ಟಿಕ್ ಟ್ರಾವೆಲ್ಸ್‌ಗೆ ಸೇರಿದ KA01 AL 5736 ಸಂಖ್ಯೆಯ ಬಸ್ ಬೆಂಗಳೂರಿನಿಂದ ಕಣ್ಣೂರಿಗೆ ತೆರಳುತ್ತಿದ್ದ ವೇಳೆ ಟೈಯರ್ ಬ್ಲಾಸ್ಟ್ ಆಗಿ ದುರಂತ ಸಂಭವಿಸಿದೆ. ಟೈಯರ್ ಬ್ಲಾಸ್ಟ್ ಆಗ್ತಿದ್ದಂತೆ ಬೆಂಕಿ ಕಾಣಿಸಿಕೊಂಡಿದೆ. ಎಚ್ಚೆತ್ತ ಚಾಲಕ ಕೂಡಲೇ ಬಸ್ ನಿಲ್ಲಿಸಿ ಪ್ರಯಾಣಿಕರನ್ನ ಕೆಳಗಿಳಿಸಿದ್ದಾರೆ. ಇದಾದ ಕೆಲವೇ ಕ್ಷಣಗಳಲ್ಲಿ ಬೆಂಕಿ ಇಡೀ ಬಸ್ ವ್ಯಾಪಿಸಿದೆ. ವಿಚಾರ ತಿಳಿಯುತ್ತಿದ್ದಂತೆ ಮಂಡ್ಯ ಅಗ್ನಿಶಾಮಕ ದಳದ ಅಧಿಕಾರಿಗಳು, ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದ್ದಾರೆ. ಡಿಎಸ್‌ಪಿ ರಾಘವೇಂದ್ರ ನೇತೃತ್ವದಲ್ಲಿ ಬೆಂಕಿ ನಂದಿಸಲಾಯಿತು. ಆದ್ರೆ ಅಗ್ನಿಶಾಮಕ ತಂಡ ಬೆಂಕಿ ನಂದಿಸುವಷ್ಟರಲ್ಲಿ ಬಸ್ ಬಹುತೇಕ ಸುಟ್ಟು ಕರಕಲಾಗಿತ್ತು ಎಂದು ಸ್ಥಳೀಯರು ತಿಳಿಸಿದ್ದಾರೆ. ಬಳಿಕ ಟ್ರಾವೆಲ್ಸ್ ಸಂಸ್ಥೆ ಪ್ರಯಾಣಿಕರಿಗೆ ಬೇರೆ ಬಸ್ ವ್ಯವಸ್ಥೆ ಮಾಡಿ ಕಳುಹಿಸಿದೆ. ಮಂಡ್ಯದ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



### ರಾತ್ರೋರಾತ್ರಿ ತಲೆ ಎತ್ತಿದ ಕೆಂಪೇಗೌಡರ

# ಪ್ರತಿಮೆ




» ತೆರವಿಗೆ ಪೊಲೀಸರ ಸೂಚನೆ, ವಿವಾದ ಸೃಷ್ಟಿ

**ಮೈಸೂರು:** ಮೈಸೂರು-ಟಿ ನರಸೀಪುರ ರಸ್ತೆಯ ಲಲಿತ್ ಮಹಲ್ ಮೈದಾನ ಪಕ್ಕದಲ್ಲಿರುವ ನಾಡಪ್ರಭು ಕೆಂಪೇಗೌಡ ವೃತ್ತದಲ್ಲಿ ರಾತ್ರೋರಾತ್ರಿ ನಾಡಪ್ರಭು ಕೆಂಪೇಗೌಡರ ಕಂಚಿನ ಪ್ರತಿಮೆಯನ್ನು ಪ್ರತಿಷ್ಠಾಪನೆ ಮಾಡಲಾಗಿದ್ದು, ಇದರಿಂತ ಸ್ಥಳದಲ್ಲಿ ಶನಿವಾರ ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಆಲನಹಳ್ಳಿ ಒಕ್ಕಲಿಗ ಯುವಕರ ಸಂಘದ ಸದಸ್ಯರು ಶನಿವಾರ ಬೆಳಗಿನ ಜಾವ 2 ಗಂಟೆ ಸುಮಾರಿಗೆ ಕೆಂಪೇಗೌಡ ವೃತ್ತದಲ್ಲಿ 10 ಅಡಿಗಿಂತ ಹೆಚ್ಚು ಎತ್ತರದ ಕಂಚಿನ ಪ್ರತಿಮೆಯನ್ನು ಪ್ರತಿಷ್ಠಾಪಿಸಿದ್ದಾರೆ. ಈ ವಿಚಾರ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು, ಅನುಮತಿ ಇಲ್ಲದೆ ಪ್ರತಿಮೆ ಇರಿಸಿರುವುದನ್ನು ತೆರವುಗೊಳಿಸಲು ಮುಂದಾದರು. ಈ ವೇಳೆ ಸ್ಥಳದಲ್ಲಿದ್ದ ಕೆಂಪೇಗೌಡರ ಅಭಿಮಾನಿಗಳು ಇದಕ್ಕೆ ವಿರೋಧ ವ್ಯಕ್ತಪಡಿಸಿದರು. ಬಳಿಕ ಪೊಲೀಸರು ಮತ್ತು ಅಭಿಮಾನಿಗಳ ನಡುವೆ ವಾಗ್ವಾದ ನಡೆದು, ಕೆಲಕಾಲ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಯಿತು. ಪುಟ 2

### ಯುವ ಕಾಂಗ್ರೆಸ್ ಘಟಕಕ್ಕೆ ಪ್ರಧಾನ ಕಾರ್ಯದರ್ಶಿಯಾಗಿ

# ಸತೀಶ್ ಜಾರಕಿಹೊಳಿ ಪುತ್ರ ರಾಹುಲ್ ಆಯ್ಕೆ

**ಬೆಳಗಾವಿ:** ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಂಕಾ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿ ಸಂಸದೆ ಆಗುವ ಮೂಲಕ ರಾಷ್ಟ್ರ ರಾಜಕಾರಣಕ್ಕೆ ಎಂಟ್ರಿ ಕೊಟ್ಟಿದ್ದು, ಈಗ ಸತೀಶ್ ಅವರ ಪುತ್ರ ಕೂಡ ರಾಜ್ಯ ರಾಜಕಾರಣಕ್ಕೆ ಅಧಿಕೃತವಾಗಿ ಎಂಟ್ರಿ ಕೊಟ್ಟಿದ್ದಾರೆ.

ಇತ್ತೀಚೆಗೆ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹುದ್ದೆಗೆ ನಡೆದ ಚುನಾವಣೆಯಲ್ಲಿ ಸತೀಶ್ ಜಾರಕಿಹೊಳಿಯವರ ಪುತ್ರ ರಾಹುಲ್ ಜಾರಕಿಹೊಳಿ ಭರ್ಜರಿ ಗೆಲುವು ದಾಖಲಿಸಿದ್ದಾರೆ.

ಆನ್ ಲೈನ್ ಮೂಲಕ ನಡೆದ ಚುನಾವಣೆಯಲ್ಲಿ 1,20,000 ಕ್ಕಿಂತ ಅಧಿಕ ಮತಗಳನ್ನು ಪಡೆದು ರಾಹುಲ್ ಜಾರಕಿಹೊಳಿ ಆಯ್ಕೆ ಆಗಿದ್ದಾರೆ.



ಬೆಳಗಾವಿ ಜಿಲ್ಲೆಯ ಒಂದು ಕ್ಷೇತ್ರದಿಂದ ವಿಧಾನಸಭಾ ಚುನಾವಣೆಯಲ್ಲಿ ರಾಹುಲ್ ಅವರನ್ನು ಕಣಕ್ಕಿಳಿಸುವ ಅವಕಾಶಕ್ಕಾಗಿ ಜಾರಕಿಹೊಳಿ ಕುಟುಂಬ ಕಾಯುತ್ತಿತ್ತು ಎನ್ನಲಾಗಿದ್ದು, 2028 ರ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯಿಂದ ರಾಹುಲ್ ಸ್ಪರ್ಧಿಸುವುದು ಖಚಿತ ಎಂದು ಮೂಲಗಳು ತಿಳಿಸಿವೆ. ಮುಂಬರುವ ಚುನಾವಣಯಲ್ಲಿ ಹುಕ್ಕೇರಿ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ರಾಹುಲ್ ಅವರು ಸ್ಪರ್ಧಿಸಬಹುದು ಎಂದು ಹೇಳಲಾಗತ್ತಿದೆ. ಪ್ರಸ್ತುತ ಈ ಕ್ಷೇತ್ರವನ್ನು ಬಿಜೆಪಿ ಶಾಸಕ ನಿಖಿಲ್ ಕಟ್ಟಿ ಪ್ರತಿನಿಧಿಸುತ್ತಿದ್ದಾರೆ, ನಿಖಿಲ್ ಅವರು ಮಾಜಿ ಸಚಿವ ದಿವಂಗತ ಉಮೇಶ್ ಕಟ್ಟಿ ಅವರ ಪುತ್ರರಾಗಿದ್ದಾರೆ. ಪುಟ 2

# ಯಾರಾಗಬಹುದು ದೆಹಲಿ ಮುಖ್ಯಮಂತ್ರಿ?



**ನವದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಯ ಫಲಿತಾಂಶಗಳು ಪ್ರಕಟವಾಗಿದ್ದು, ಈ ಬಾರಿ 27 ವರ್ಷಗಳ ನಂತರ ರಾಜಧಾನಿಯಲ್ಲಿ ಕಮಲ ಅರಳಿದೆ. ಈ ಚುನಾವಣೆಯಲ್ಲಿ ಬಿಜೆಪಿ ಭಾರಿ ಬಹುಮತದೊಂದಿಗೆ ಗೆದ್ದಿದೆ ಮತ್ತು ಆಡಳಿತಾರೂಢ ಆಮ್ ಆದ್ಮಿ ಪಕ್ಷವು ಕೇವಲ 22 ಸ್ಥಾನಗಳಿಗೆ ಕುಸಿದಿದೆ. 70 ವಿಧಾನಸಭಾ ಸ್ಥಾನಗಳನ್ನು ಹೊಂದಿರುವ ದೆಹಲಿಯಲ್ಲಿ ಬಿಜೆಪಿ 48 ಸ್ಥಾನಗಳನ್ನು ಗೆದ್ದಿದೆ. ಸತತ ಮೂರನೇ ಬಾರಿಗೆ ಕಾಂಗ್ರೆಸ್ ದೆಹಲಿಯಲ್ಲಿ ತನ್ನ ಖಾತೆಯನ್ನು ತೆರೆಯಲೂ ವಿಫಲವಾಗಿದೆ. ಎಎಪಿ ಅಧಿಕಾರಕ್ಕೆ ಬರುವ ಮೊದಲು ಶೀಲಾ ದೀಕ್ಷಿತ್ ನೇತೃತ್ವದಲ್ಲಿ ಸತತ ಮೂರು ಅವಧಿಗೆ ದೆಹಲಿಯನ್ನು ಆಳಿದ್ದ ಕಾಂಗ್ರೆಸ್, ಕಳೆದ ಮೂರು ಚುನಾವಣೆಗಳಲ್ಲಿ ಒಂದೇ ಒಂದು ಸ್ಥಾನಕ್ಕಾಗಿ ಹಂಬಲಿಸತ್ತಿದೆ. ಪುಟ 2

## ನಾಳೆಯಿಂದ ಏರೋ ಇಂಡಿಯಾ

# ಶೋ!

**ಬೆಂಗಳೂರು:** ನಾಳೆಯಿಂದ (ಫೆ.10) 15ನೇ ಆವೃತ್ತಿಯ ಏರೋ ಇಂಡಿಯಾ ಶೋ ಆರಂಭವಾಗಲಿದೆ. ಯಲಹಂಕದ ವಾಯು ನೆಲೆಯಲ್ಲಿ ನಡೆಯಲಿರುವ ಏಷ್ಯಾದ ಅತಿದೊಡ್ಡ ವೈಮಾನಿಕ ಪ್ರದರ್ಶನ ಈ ಬಾರಿ ಹಲವು ದಾಖಲೆಗಳ ನಿರೀಕ್ಷೆಗಳನ್ನ ಹುಟ್ಟಿಸಿದೆ. ರನ್ ಟು ಎ ಬಿಲಿಯನ್ ಆಪರ್ಚುನಿಟೀಸ್ ಎಂಬ ವಿಶಾಲ ಧ್ಯೇಯದೊಂದಿಗೆ 5 ದಿನಗಳ ಕಾಲ ನಡೆಯಲಿರುವ ಈ ಕಾರ್ಯಕ್ರಮಕ್ಕೆ ಯಲಹಂಕ ವಾಯುನೆಲೆ ಸಿದ್ಧವಾಗಿದೆ. ಫೆಬ್ರವರಿ 10 ರಿಂದ 14ರವರೆಗೆ ನಡೆಯಲಿರುವ ಏರ್ ಶೋಗೆ ದೇಶ, ವಿದೇಶದ ಗಣ್ಯರು ಆಗಮಿಸಲಿದ್ದಾರೆ. ದೇಶ, ವಿದೇಶದ ವಾಯುಪಡೆಯ ವಿಮಾನಗಳು ಬಾನಂಗಳದಲ್ಲಿ ಮೋಡಿ ಮಾಡಲು ರೆಡಿಯಾಗಿವೆ. ಪುಟ 2



ಬಾನಂಗಳದಲ್ಲಿ ಮೋಡಿ ಮಾಡಲಿವೆ ಲೋಹದ ಹಕ್ಕಿಗಳು

### ಐಶ್ವರ್ಯ ಕೇಸಲ್ಲೀಗ ಪೊಲೀಸರಿಗೆ ಸಿಡಿಆರ್ ಸಂಕಷ್ಟ?

# ಎಸಿಪಿ ಚಂದನ್‌ಗೆ ತನಿಖೆ ಹೊಣೆ

**ಬೆಂಗಳೂರು:** ಡಿಕೆ ಸುರೇಶ್ ಸಹೋದರಿ ಅಂತಾ ಕೋಟಿ ಕೋಟಿ ವಂಚನೆ ಮಾಡಿದ ಪ್ರಕರಣದ ಸಂಬಂಧ ಆರೋಪಿಯಾಗಿರುವ ಐಶ್ವರ್ಯಗೌಡ ವಿರುದ್ಧ ಮತ್ತೊಂದು ಗಂಭೀರ ಆರೋಪ ಕೇಳಿಬಂದಿದೆ.

ನಾಲ್ವರ ಸಿಡಿಆರ್ ಪಡೆದುಕೊಂಡ ಸಂಬಂಧ ಎಫ್‌ಐಆರ್ ದಾಖಲಾದ ಬೆನ್ನಲ್ಲೇ, ಸಿಡಿಆರ್ ಪಡೆದ ಪ್ರಕರಣದ ತನಿಖೆಗಾಗಿಯೇ ಹೊಸ ತನಿಖಾಧಿಕಾರಿಯನ್ನು ನೇಮಕ ಮಾಡಲಾಗಿದೆ. ಎಸಿಪಿ ಚಂದನ್ ಕುಮಾರ್ ನೇತೃತ್ವದಲ್ಲಿ ತನಿಖೆ ನಡೆಯಲಿದ್ದು, ಪ್ರಾಥಮಿಕ ತನಿಖೆಯಲ್ಲಿ ಐಶ್ವರ್ಯಗೌಡ ರಾಮನಗರದ ಹಲವು ರಾಜಕೀಯ ಮುಖಂಡರ ಸಿಡಿಆರ್ ಕಲೆಕ್ಟ್ ಮಾಡಿರೋದು ಗೊತ್ತಾಗಿದೆ. ಇದಕ್ಕೆ ಕೆಲ ಪೊಲೀಸ್ ಅಧಿಕಾರಿಗಳನ್ನು ಕೂಡ ಬಳಸಿಕೊಂಡು ಅವರ ಜೊತೆಗೆ ಹಣದ ವ್ಯವಹಾರ ನಡೆಸಿದ್ದಾಳೆ. ಯಾವುದೇ ಪ್ರಕರಣದ ತನಿಖಾಧಿಕಾರಿಗೆ ಮಾತ್ರ ಸಿಡಿಆರ್ ಪಡೆಯುವ ಅಧಿಕಾರವಿದ್ದು, ಐಶ್ವರ್ಯಗೌಡ ಹೇಗೆ ರಾಜಕೀಯ ಮುಖಂಡರ ಸಿಡಿಆರ್ ಪಡೆದುಕೊಂಡಿದ್ದಾಳೆ. ಅದನ್ನು ಹೇಗೆ ಯಾವ ಕಾರಣಕ್ಕೆ ಬಳಸಿಕೊಳ್ತಿದ್ಲು ಅನ್ನೋ ಅನುಮಾನ ಪೊಲೀಸರನ್ನ ಕಾಡಿದೆ. ಇದೇ ಕಾರಣಕ್ಕೆ ಎಸಿಪಿ ಚಂದನ್ ಕುಮಾರ್ ನೇತೃತ್ವದಲ್ಲಿ ಸಿಡಿಆರ್ ಪ್ರಕರಣವನ್ನೇ ಪ್ರತ್ಯಕವಾಗಿ ತನಿಖೆಗೆ ಆದೇಶ ನೀಡಲಾಗಿದೆ. ಪುಟ 2



# ಹಣ-ಆಸ್ತಿ ಹಾಳು ಮಾಡಬೇಡವೆಂದು ಬುದ್ಧಿ ಹೇಳಿದ ಪತ್ನಿಯನ್ನೇ ಕೊಂದ ಪತಿ

**ಚಿತ್ರದುರ್ಗ:** ಹಣ-ಆಸ್ತಿ ಕಳೆಯಬೇಡ, ದುಂದುವೆಚ್ಚ ಮಾಡಬೇಡ ಎಂದು ಬುದ್ಧಿ ಹೇಳಿದ ಪತ್ನಿಯನ್ನೇ ಪಾಪಿ ಪತಿ ಉಸಿರುಗಟ್ಟಿಸಿ ಕೊಂದಿರುವ ಪ್ರಕರಣ ಚಿತ್ರದುರ್ಗ ತಾಲ್ಲೂಕಿನ ಮೆದೇಹಳ್ಳಿ ಗ್ರಾಮದಲ್ಲಿ ನಡೆದಿದೆ. ಈ ಗ್ರಾಮದ ಉಮಾಪತಿ ಎಂಬ ಆಸಾಮಿ ಶ್ರೀದೇವಿ (48) ಜೊತೆ ವಿವಾಹವಾಗಿ, ಅನ್ಯೋನ್ಯವಾಗಿದ್ದರು. ಆದರೆ ಉಮಾಪತಿ ತನ್ನ ಜಮೀನು ಮಾರಾಟದಿಂದಾಗಿ ಬಂದ ಹಣವನ್ನೆಲ್ಲಾ ಮನಬಂದಂತೆ ಖರ್ಚು ಮಾಡುತ್ತಾನೆಂಬ ಹಿನ್ನೆಲೆ ಪತ್ನಿ ಶ್ರೀದೇವಿ ಆಗಾಗ್ಗೆ ಎಚ್ಚರಿಸುತಿದ್ದಳು. ಈ ವಿಚಾರಕ್ಕೆ ಇಬ್ಬರ ಮಧ್ಯೆ ಕಲಹ ನಿರಂತರವಾಗಿತ್ತು. ಇನ್ನು ಉಳಿದ ಜಮೀನನ್ನು ತನ್ನ ಹೆಸರಿಗೆ ಹಾಗೂ ಮಗಳ ಹೆಸರಿಗೆ ಮಾಡಿಸಿಕೊಡಿ ಎಂದು ಒತ್ತಾಯ ಸಹ ಮಾಡುತ್ತಿದ್ದರು. ಇದರಿಂದಾಗಿ ಆಕ್ರೋಶಗೊಂಡ ಉಮಾಪತಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ಸ್ಕೆಚ್ ಹಾಕಿ, ಫೆಬ್ರವರಿ 7 ರಂದು ಬೆಳಗ್ಗೆ ಶ್ರೀದೇವಿ ಮನೆಯಲ್ಲಿ ಪೂಜೆ ಮಾಡುತ್ತಿದ್ದಾಗ, ಆಕೆಯ ಸೀರೆಯಿಂದ ಕೊರಳಿಗೆ ಸುತ್ತಿ ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ. ಹೀಗಾಗಿ ಬಾಯಲ್ಲಿ ರಕ್ತ ಬಂದಿದೆ. ಆದರೆ ಈ ಪ್ರಕರಣದಿಂದ ಜಾರಿಕೊಳ್ಳುವ ನಿಟ್ಟಿನಲ್ಲಿ ಉಮಾಪತಿ ಅಕ್ಕಪಕ್ಕದ ಮನೆಯವರನ್ನೆಲ್ಲಾ ಮನೆಗೆ ಕರೆದು, ನನ್ನ ಪತ್ನಿ ಪೂಜೆ ಮಾಡುವಾಗ ನೆಲಕ್ಕೆ ಬಿದ್ದಿದ್ದಾಳೆಂದು ನಂಬಿಸಿ ಆಸ್ಪತ್ರೆಗೆ ದಾಖಲಿಸಿದ್ದ. ಅಷ್ಟರಲ್ಲಿ ಶ್ರೀದೇವಿ ಮೃತಪಟ್ಟಿದ್ದಾರೆಂದು ಧೃಡವಾಗಿತ್ತೆಂದು ಮೃತ ಶ್ರೀದೇವಿಯ ಸಹೋದರ ರಂಗಸ್ವಾಮಿ ಆರೋಪಿಸಿದ್ದಾರೆ. ಈ ಸಂಬಂಧ ಚಿತ್ರದುರ್ಗದ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗ್ರಾಮಾಂತರ ಠಾಣೆ ಪೊಲೀಸರು ಆರೋಪಿ ಉಮಾಪತಿಯನ್ನು ವಶಕ್ಕೆ ಪಡೆದು ತನಿಖೆ ನಡೆಸಿದ್ದಾರೆ.



# ದೆಹಲಿ ಚುನಾವಣಾ ಫಲಿತಾಂಶದಿಂದ ಕೇಜ್ರಿವಾಲ್ ಮುಖವಾಡ ಕಳಚಿಬಿದ್ದಿದೆ

**ಬೆಂಗಳೂರು:** ಭ್ರಷ್ಟಾಚಾರದ ವಿರುದ್ಧ ಆಂದೋಲನ ಮಾಡಿ ದೆಹಲಿಯಲ್ಲಿ ಅಧಿಕಾರಕ್ಕೆ ಬಂದಿದ್ದ ಆಮ್ ಆದ್ಮಿ ಪಕ್ಷದ ಅರವಿಂದ ಕೇಜ್ರಿವಾಲ್ ಅವರ ಮುಖವಾಡ ಚುನಾವಣಾ ಫಲಿತಾಂಶದಿಂದ ಕಳಚಿಬಿದ್ದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹೇಳಿದ್ದಾರೆ. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪಕ್ಷದ ಪರ ದೆಹಲಿ ವಿಧಾನಸಭಾ ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ವಿಜಯೋತ್ಸವ ಆಚರಣೆಯ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದರು. ಈ ವೇಳೆ, ದೆಹಲಿಯಲ್ಲಿ 27 ವರ್ಷಗಳ ನಂತರ ಬಿಜೆಪಿಗೆ ಅಭೂತಪೂರ್ವ ಗೆಲುವು ಲಭಿಸಿದೆ. ಪ್ರಬುದ್ಧ ಮತದಾರರು ದೆಹಲಿ ಅಭಿವೃದ್ಧಿಯ ದೃಷ್ಟಿಯಿಂದ ಬಿಜೆಪಿಯನ್ನು ಗೆಲ್ಲಿಸಿದ್ದಾರೆ. ನರೇಂದ್ರ ಮೋದಿಯವರ ಕೈಯನ್ನು ಬಲಪಡಿಸಲು ಮತದಾರರು ಮತ್ತೊಮ್ಮೆ ನಮಗೆ ಆಶೀರ್ವಾದ ಮಾಡಿದ್ದಾರೆ. ಪಕ್ಷದ ಮುಖಂಡರು, ಕಾರ್ಯಕರ್ತರು, ಮತದಾರರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದಿದ್ದಾರೆ. ಮನೀಷ್ ಸಿಸೋಡಿಯಾ ಅವರೂ ಸೋಲುತ್ತಿದ್ದಾರೆ. ಲಿಕ್ಕರ್, ಶೀಶ್ ಮಹಲ್ ಹಗರಣದ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಆಪ್ ಬಣ್ಣ ಬಯಲಾಗಿದೆ. ಇನ್ನೂ ದೆಹಲಿಯಲ್ಲಿ ಕಾಂಗ್ರೆಸ್ ಪಕ್ಷ ಸತತ 3ನೇ ಬಾರಿಗೆ ಶೂನ್ಯ ಸಂಪಾದನೆ ಮಾಡಿದೆ. ಲೋಕಸಭಾ ಚುನಾವಣೆಯಲ್ಲೂ ಅದು ಶೂನ್ಯ ಸಂಪಾದನೆ ಮಾಡಿತ್ತು. ಹರಿಯಾಣ, ಮಹಾರಾಷ್ಟ್ರದಲ್ಲೂ ಕಾಂಗ್ರೆಸ್ಸಿಗೆ ಮುಖಭಂಗ ಆಗಿತ್ತು ಎಂದು ವ್ಯಂಗ್ಯವಾಡಿದ್ದಾರೆ. ಗ್ಯಾರೆಂಟಿಗಳೆಲ್ಲ ತಾತ್ಕಾಲಿಕ, ಆ ತಾತ್ಕಾಲಿಕ ಗ್ಯಾರೆಂಟಿಗಿಂತ ದೃಢ ನಾಯಕತ್ವ ಕೊಡುವ ನರೇಂದ್ರ, ಮೋದಿಜೀ ನೇತೃತ್ವದ ಬಿಜೆಪಿಯಿಂದ ಮಾತ್ರ ಅಭಿವೃದ್ಧಿ ಸಾಧ್ಯ ಎಂಬುದನ್ನು ದೆಹಲಿ ಮತದಾರರಿಂದ ಮತ್ತೊಮ್ಮೆ ರುಜುವಾತಾಗಿದೆ ಎಂದಿದ್ದಾರೆ.



# ದಿಲ್ಲಿ ಚುನಾವಣೆಯಲ್ಲಿ ಬಿಜೆಪಿ ಕಮಾಲ್

## ಮೋದಿ, ನಡ್ಡಾಗೆ ಪತ್ರದ ಮೂಲಕ ಅಭಿನಂದನೆ ತಿಳಿಸಿದ ಯಡಿಯೂರಪ್ಪ

**ಬೆಂಗಳೂರು:** ದೆಹಲಿಯಲ್ಲಿ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಪ್ರಚಂಡ ಗೆಲುವು ಸಾಧಿಸುವ ಮೂಲಕ ಮತ್ತೆ ಇತಿಹಾಸ ಸೃಷ್ಟಿಸಿದೆ. ಒಂದಲ್ಲಾ, ಎರಡಲ್ಲ ಬರೋಬ್ಬರಿ 27 ವರ್ಷಗಳ ಬಳಿಕ ಬಿಜೆಪಿ ಮಹಾ ಯುದ್ಧವನ್ನೇ ಗೆದ್ದಿದೆ. ಚುನಾವಣೆಯಲ್ಲಿ ದಿಗ್ವಿಜಯ ಸಾಧಿಸುವ ಮೂಲಕ ಕಮಲ ಕಮಾಲ್ ಮಾಡಿದ ಹಿನ್ನಲೆ ಪ್ರಧಾನಿ ನರೇಂದ್ರ, ಮೋದಿ ಮತ್ತು ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾಗೆ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿಎಸ್ ಯಡಿಯೂರಪ್ಪ ಪತ್ರದ ಮೂಲಕ ಅಭಿನಂದನೆ ತಿಳಿಸಿದ್ದಾರೆ.

ಪ್ರಧಾನಿ ಮೋದಿಗೆ ಬರೆದ ಪತ್ರದಲ್ಲೇನಿದೆ?: 27 ವರ್ಷಗಳ ನಂತರ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಐತಿಹಾಸಿಕ ಗೆಲುವು ಸಾಧಿಸಿದ್ದು, ಮೊದಲಿಗೆ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಜಿ ಅವರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಈ ಅಸಾಧಾರಣ ಗೆಲುವು ಪ್ರಧಾನಿ ಮೋದಿಯವರ ನಾಯಕತ್ವ, ಉತ್ತಮ ಆಡಳಿತ ಮತ್ತು ಅಭಿವೃದ್ಧಿಗೆ ಅವರಿಗಿರುವ ಬದ್ಧತೆಯ ಮೇಲಿನ ಅಚಲ ಸಾರ್ವಜನಿಕ ವಿಶ್ವಾಸದ ಸಂಕೇತವಾಗಿದೆ. ಇತ್ತೀಚಿನ ಚುನಾವಣಾ ಫಲಿತಾಂಶಗಳಲ್ಲಿ ಇದು ಸ್ಪಷ್ಟವಾಗಿದ್ದು, ಮತ್ತೊಮ್ಮೆ ಈಗ ದೆಹಲಿ ಬಿಜೆಪಿಯೊಂದಿಗೆ ದೃಢವಾಗಿ ನಿಂತಿರುವುದು ಇದನ್ನು ಸಾಬೀತುಪಡಿಸಿದೆ ಎಂದಿದ್ದಾರೆ.

ಪ್ರಧಾನಿ ಮೋದಿಯವರ ಪ್ರೇರಣಾದಾಯಕ ನಾಯಕತ್ವ ಮತ್ತು ಪಕ್ಷದ ಸಿದ್ಧಾಂತ, ಅಭಿವೃದ್ಧಿ, ಸಾಧನೆಗಳು ಮತ್ತು ಬದ್ಧತೆಗಳನ್ನು ಪ್ರತಿಯೊಬ್ಬ ಮತದಾರರಿಗೂ ತಲುಪಿಸಲು ಹಗಲಿರುಳು ಸಮರೋಪಾದಿಯಲ್ಲಿ ಕೆಲಸ ಮಾಡಿದ ನಮ್ಮ ಲಕ್ಷಾಂತರ ಸಮರ್ಪಿತ ಕಾರ್ಯಕರ್ತರ ದಣಿವರಿಯದ ಪ್ರಯತ್ನಗಳಿಂದ ಈ



ಅಭೂತಪೂರ್ವ ಗೆಲುವು ಸಾಧ್ಯವಾಗಿದೆ.

ದೆಹಲಿಯಲ್ಲಿ ಸಾಧಿಸಿರುವ ಈ ಪ್ರಮುಖ ಗೆಲುವು, ಪಕ್ಷ, ರಾಷ್ಟ್ರ ಮತ್ತು ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ನವಭಾರತ ನಿರ್ಮಾಣದ ನಿಟ್ಟಿನಲ್ಲಿ ಶ್ರಮಿಸುತ್ತಿರುವ ಪ್ರತಿಯೊಬ್ಬ ಭಾರತೀಯನಿಗೆ ಅಪಾರ ಹೆಮ್ಮೆಯ ಕ್ಷಣವಾಗಿದೆ. ಪಕ್ಷದ ಈ ಜನಸಮರ್ಥನೆಯ ವಿಜಯಯಾತ್ರೆ, ಭಾರತದ ಉಜ್ವಲ ಭವಿಷ್ಯಕ್ಕೆ ದ್ಯೋತಕವಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಜೆ.ಪಿ.ನಡ್ಡಾಗೆ ಬರೆದ ಪತ್ರದಲ್ಲೇನಿದೆ?: ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾಗೂ ಬಿಎಸ್ ಯಡಿಯೂರಪ್ಪ ಪತ್ರ ಬರೆದಿದ್ದು, ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ಸಾಧಿಸಿರುವ ಈ ಐತಿಹಾಸಿಕ ವಿಜಯಕ್ಕಾಗಿ ನಮ್ಮ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಜಿ ಅವರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳು! ಪ್ರಧಾನಿ ನರೇಂದ್ರ, ಮೋದಿ ಜಿ ಅವರ ನೇತೃತ್ವದಲ್ಲಿ ಮತ್ತು ಪಕ್ಷದ ಅಧ್ಯಕ್ಷರಾದ ನಿಮ್ಮ ಮಾರ್ಗದರ್ಶನದಲ್ಲಿ ಬಿಜೆಪಿ ದೆಹಲಿಯಲ್ಲಿ ಮತ್ತೆ ಅಧಿಕಾರದ ಚುಕ್ಕಾಣಿ ಹಿಡಿದಿದ್ದು, ಇದು ನಿಜಕ್ಕೂ ಐತಿಹಾಸಿಕ, ಗಮನಾರ್ಹ ಸಾಧನೆಯಾಗಿದೆ ಎಂದಿದ್ದಾರೆ.

ಪಕ್ಷವು ಜನರೊಂದಿಗೆ ಹೊಂದಿರುವ ಆಳವಾದ ಸಂಪರ್ಕ ಮತ್ತು ಪಕ್ಷದ ಸರಿಸಾಟಿಯಿಲ್ಲದ ಸಂಘಟನಾ ಶಕ್ತಿಯನ್ನು ದೆಹಲಿಯಲ್ಲಿನ ಗೆಲುವು ಪ್ರತಿಬಿಂಬಿಸುತ್ತದೆ. ನಮ್ಮ ಲಕ್ಷಾಂತರ ಸಮರ್ಪಿತ ಕಾರ್ಯಕರ್ತರನ್ನು ಹುರಿದುಂಬಿಸಿ, ಪಕ್ಷವನ್ನು ಶಿಸ್ತುಬದ್ಧ, ಸೈದ್ಧಾಂತಿಕ ಶಕ್ತಿಯಾಗಿ ಮುನ್ನಡೆಸುತ್ತಿರುವುದಕ್ಕಾಗಿ ನಿಮಗೂ ವಿಶೇಷವಾಗಿ ನನ್ನ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ನಮ್ಮ ಕಾರ್ಯಕರ್ತರ ದಣಿವರಿಯದ ಪ್ರಯತ್ನಗಳಿಂದಾಗಿ, ಪಕ್ಷದ ಸಂದೇಶ, ನೀತಿ, ನಿಲುವುಗಳು, ಪ್ರತಿ ಮನೆಗೂ ತಲುಪಲು ಸಾಧ್ಯವಾಗಿದೆ. ಇದು ನಿಜಕ್ಕೂ ಪಕ್ಷಕ್ಕೆ ಮತ್ತು ನಮ್ಮ ರಾಷ್ಟ್ರಕ್ಕೆ ಹೆಮ್ಮೆಯ ಕ್ಷಣ ಎಂದು ಪತ್ರ ಬರೆದಿದ್ದಾರೆ.

# ಪ್ರಧಾನಿ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನ ಬಿಜೆಪಿ ಗೆಲ್ಲಿಸಿದ್ದಾರೆ

**ಬೆಂಗಳೂರು:** ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷದ ಆಡಳಿತ ವೈಖರಿ, ಭ್ರಷ್ಟಾಚಾರ ನೋಡಿ ಜನ ರೋಸಿ ಹೋಗಿ, ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನರು ಬಿಜೆಪಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ದೆಹಲಿ ಚುನಾವಣೆ ಫಲಿತಾಂಶದ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ಮೂವತ್ತು ವರ್ಷದ ನಂತರ ಬಿಜೆಪಿ ಅಧಿಕಾರಕ್ಕೆ ಬಂದಿದೆ. ಅಣ್ಣಾ ಹಜಾರೆ ನೇತೃತ್ವದ ಭ್ರಷ್ಟಾಚಾರ ವಿರೋಧಿ ಆಂದೋಲನಕ್ಕೆ ಬೆಂಬಲಿಸಿ ದೆಹಲಿ ಜನರು ಆಪ್‌ಗೆ ಬೆಂಬಲಿಸಿದ್ದರು. ಆದರೆ ಅವರ ಆಡಳಿತ ವೈಖರಿ, ಭ್ರಷ್ಟಾಚಾರ ನೋಡಿ ಜನ ರೋಸಿ ಹೋಗಿದ್ದಾರೆ. ಇನ್ನೊಂದೆಡೆ ದೇಶದೆಲ್ಲೆಡೆ ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನರು ಬಿಜೆಪಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದ್ದಾರೆ. ಆಪ್ ಪ್ರತಿಯೊಂದರಲ್ಲೂ ಸುಳ್ಳು ಹೇಳುವುದು, ಹಲವಾರು ಸಚಿವರು ಭ್ರಷ್ಟಾಚಾರದಲ್ಲಿ ತೊಡಗಿದ್ದು, ತಾವು ಮಾಡದಿರುವ ಕೆಲಸಕ್ಕೆ ಬೇರೆಯವರನ್ನು ದೂಷಿಸುತ್ತಿದ್ದರು. ರಸ್ತೆ, ಕುಡಿಯುವ ನೀರು ಕೊಡಲು ಆಗಿಲ್ಲ. ಆಯುಷ್ಮಾನ್ ಯೋಜನೆ ಜಾರಿಗೊಳಿಸದಿರುವುದು ಬಡವರಿಗೆ ಬೇಸರ ತರಿಸಿದೆ ಎಂದು ಹೇಳಿದರು. ಕಾಂಗ್ರೆಸ್ ಬರೀ ಘೋಷಣೆ ಮೂಲಕ ಅಧಿಕಾರ ನಡೆಸಲು ಸಾಧ್ಯವಿಲ್ಲ. ಈಗ 21ನೇ ಶತಮಾನದಲ್ಲಿ ಯುವಕರು ಎಲ್ಲವನ್ನೂ ಗಮನಿಸುತ್ತಾರೆ. ಕಾಂಗ್ರೆಸ್ ಕೇವಲ ಘೋಷಣೆ ಮಾಡುವುದರಿಂದ ಜನರ ಮನಸ್ಸು ಗೆಲ್ಲಲು ಸಾಧ್ಯವಿಲ್ಲ. ಕಾಂಗ್ರೆಸ್ ಸಾಮಾನ್ಯರ ಭಾವನೆ ಅರ್ಥ ಮಾಡಿಕೊಳ್ಳಬೇಕು. ದೆಹಲಿ ಒಂದು ನಗರದ ರಾಜ್ಯ, ಹೊರ ವಲಯದಲ್ಲಿರುವ ರೈತರು, ಹರಿಯಾಣದ ಜಾಟರು, ಪಂಜಾಬಿನ ಜನರು, ಉತ್ತರ ಪ್ರದೇಶ, ಬಿಹಾರದಿಂದ ಬಂದಿರುವ ದುಡಿಯುವ ವರ್ಗ, ಹಲವಾರು ಅಲ್ಪ ಸಂಖ್ಯಾತ ಕ್ಷೇತ್ರದಲ್ಲಿ ಬಿಜೆಪಿ ಗೆದ್ದಿದೆ. ರಾಷ್ಟ್ರೀಯತೆ ನಂಬಿರುವ ಅಲ್ಪ ಸಂಖ್ಯಾತರು ಬಿಜೆಪಿಗೆ ಬೆಂಬಲ ಸೂಚಿಸಿದ್ದಾರೆ ಎಂದರು. ಈ ಚುನಾವಣೆಯ ಒಟ್ಟು ಪರಿಣಾಮ ಹರಿಯಾಣ ಮಹಾರಾಷ್ಟ್ರ, ದೆಹಲಿ ಚುನಾವಣೆ ಫಲಿತಾಂಶದ ನಂತರ ಬಿಜೆಪಿಯನ್ನು ಶಕ್ತಿಯುತವಾಗಿ ಮಾಡಿರುವುದು, ಇಂಡಿ ಒಕ್ಕೂಟದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಯಾಗಲಿದೆ. ಆಪ್‌ನವರು ತಮ್ಮನ್ನು ಸೋಲಿಸಲು ಕಾಂಗ್ರೆಸ್ ಪ್ರಯತ್ನ ಪಟ್ಟಿತ್ತು ಎಂದು ಮಾತನಾಡುತ್ತಿದ್ದಾರೆ. ಇದನ್ನು ನೋಡಿದರೆ ಇಂಡಿ ಒಕ್ಕೂಟದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಯಾಗುತ್ತದೆ ಎಂದು ಟೀಕಿಸಿದರು.

# ಕರ್ನಾಟಕ ಸೇರಿ ಇಡೀ ದೇಶ ಬಿಜೆಪಿ ಮಯವಾಗಲಿದೆ

**ಕೊಪ್ಪಳ:** ಮುಂದಿನ ದಿನಗಳಲ್ಲಿ ಕರ್ನಾಟಕ ಸೇರಿ ಇಡೀ ದೇಶ ಬಿಜೆಪಿ ಮಯವಾಗಲಿದೆ ಎಂದು ಶಾಸಕ ಜನಾರ್ದನ ರೆಡ್ಡಿ ಹೇಳಿದರು.

ಜಿಲ್ಲೆಯ ಇರಕಲ್ಲಗಡಾ ಗ್ರಾಮದಲ್ಲಿ ಮಾತನಾಡಿದ ಅವರು, ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಗೆಲುವು ವಿಚಾರವಾಗಿ, ಇದು ಪ್ರಧಾನಿ ಮೋದಿ ಅವರ ಜನಪ್ರಿಯತೆ ತೋರಿಸುತ್ತದೆ. ಬರುವ ದಿನದಲ್ಲಿ ಕರ್ನಾಟಕ ಸೇರಿ ಇಡೀ ದೇಶ ಬಿಜೆಪಿ ಮಯವಾಗಲಿದೆ. ಕಾಂಗ್ರೆಸ್ ದೆಹಲಿಯಲ್ಲಿ ಶೂನ್ಯವಾಗಿದೆ. ನಮ್ಮ ರಾಜ್ಯದಲ್ಲಿ ಗ್ಯಾರಂಟಿ ಸುಳ್ಳಿನ ಸರಮಾಲೆ ಮೇಲೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ. ಕಾಂಗ್ರೆಸ್ ಪಕ್ಷ ಕರ್ನಾಟಕ ಸೇರಿ ದೇಶದಲ್ಲಿ ಶೂನ್ಯವಾಗಲಿದೆ ಎಂದು ಹೇಳಿದರು.

ಇದೇ ವೇಳೆ ರಾಜ್ಯ ಬಿಜೆಪಿಯಲ್ಲಿ ಒಳಜಗಳ ವಿಚಾರವಾಗಿ ಮಾತನಾಡಿ, ಪಕ್ಷದ ಹಿರಿಯರು



ಈಗಾಗಲೇ ಬೆಂಗಳೂರಿಗೆ ಬಂದಿದ್ದಾರೆ. ಎಲ್ಲಾ ವಿಚಾರಗಳು ಶೀಘ್ರದಲ್ಲಿಯೇ ಬಗೆಹರಿಯುತ್ತವೆ. ಪಕ್ಷದ ವರಿಷ್ಟರು ಒಳ್ಳೆಯ ತೀರ್ಮಾನ ಮಾಡುತ್ತಾರೆ. ದೆಹಲಿಯ ಚುನಾವಣೆ ಇದೀಗ ಮುಗಿದಿದೆ. ಕೆಲವೇ ದಿನದಲ್ಲಿ ತೀರ್ಮಾನ ಕೈಗೊಳ್ಳುತ್ತಾರೆ ಎಂದರು.

ಇನ್ನೂ ಅವಕಾಶ ಸಿಕ್ಕರೆ ನಾನು ರಾಜ್ಯಾದ್ಯಕ್ಷ ಆಗ್ತೇನೆ ಎನ್ನುವ ರಾಮುಲು ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಆಸೆ ಎಲ್ಲರಿಗೂ ಇರುತ್ತದೆ. ಆದರೆ ಪಕ್ಷದ ಹಿರಿಯರು ತೀರ್ಮಾನ ಮಾಡಬೇಕು. ಮುಡಾ ವಿಚಾರದಲ್ಲಿ ಇಡಿ ವಿಚಾರಣೆ ಇನ್ನೂ ನಡೆಯುತ್ತಿದೆ. ಹೀಗಾಗಿ ಈಗಾಗಲೇ ಅವರು ವಿಜಯೋತ್ಸವ ಆಚರಣೆ ಮಾಡುವ ಅವಶ್ಯಕತೆ ಇಲ್ಲ. ಇಡಿ ಬಹಳ ಗಂಭೀರವಾಗಿ ತನಿಖೆ ನಡೆಸುತ್ತಿದೆ. ಸಿದ್ದರಾಮಯ್ಯ ಒಬ್ಬರೇ ಜೈಲಿಗೆ ಹೋಗುತ್ತಾರೋ ಅಥವಾ ಎಷ್ಟು ಜನ ಹೋಗುತ್ತಾರೋ ಎನ್ನುವ ಕುರಿತು ಮುಂದಿನ ದಿನದಲ್ಲಿ ಗೊತ್ತಾಗಲಿದೆ ಎಂದು ತಿಳಿಸಿದರು.

ಆನೆಗೊಂದಿ ಸೇತುವೆ ಟಿಡಿಎಸ್ ಪರಿಹಾರ ವಿಚಾರವಾಗಿ, ರಾಜ್ಯ ಸರ್ಕಾರ ನಿರ್ಲಕ್ಷ್ಯದಿಂದಲೇ ಈ ಸ್ಥಿತಿ ಬಂದಿದೆ ಎಂದು ಆರೋಪಿಸಿದರು.

# ಜನರ ತೀರ್ಪು ಸ್ವಾಗತಿಸುತ್ತೇವೆ.. ಸೋಲನ್ನ ಹೀನಾಯ ಸೋಲು ಎಂದು ಹೇಳಲ್ಲ

**ಬೆಂಗಳೂರು:** ರಾಷ್ಟ ರಾಜಧಾನಿ ದೆಹಲಿಯ ವಿಧಾನಸಭಾ ಚುನಾವಣೆಯ ಫಲಿತಾಂಶದಲ್ಲಿ ಬಿಜೆಪಿ ಭರ್ಜರಿ ಜಯಗಳಿಸಿದೆ. ಆಡಳಿತಾರೂಢ ಎಎಪಿ ಸೋಲಿನ ಬಗ್ಗೆ ಎಎಪಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಪ್ರತಿಕ್ರಿಯೆ ನೀಡಿದ್ದಾರೆ.



ಕಳೆದ ಎರಡು ವಿಧಾನಸಭಾ ಚುನಾವಣೆಯಲ್ಲಿ ಅಭೂತಪೂರ್ವ ಯಶಸ್ಸು ಕಂಡಿದ್ದ ಆಮ್ ಆದ್ಮಿ ಪಾರ್ಟಿ ಈ ಸಲ ವಿರೋಧ ಪಕ್ಷವಾಗಿ ಹೊರಹೊಮ್ಮಿದೆ. ಈ ಬಗ್ಗೆ ಮುಖ್ಯಮಂತ್ರಿ ಚಂದ್ರು ಅವರು ಮಾತನಾಡಿ, ಈ ಸೋಲನ್ನ ಹೀನಾಯ ಸೋಲು ಅಂತ ಹೇಳುವುದಿಲ್ಲ ಎಂದಿದ್ದಾರೆ.

ಗೆದ್ದಿರೋರಿಗೆ ಮೊದಲು ಅಭಿನಂದನೆ ಸಲ್ಲಿಸುತ್ತೇನೆ. ನಮ್ಮ ಪಕ್ಷ ಸೋತಿರೋದು ನಿಜ. ಅದರೆ, ಇದು ಸಂಪೂರ್ಣವಾದ ಸೋಲಲ್ಲ. ನಮ್ಮ ಪಕ್ಷದವರನ್ನೂ ಜನ ಗೆಲ್ಲಿಸಿದ್ದಾರೆ. ಜನರಲ್ಲಿ ನಮ್ಮ ಪಕ್ಷದ ಮೇಲೆ ನಂಬಿಕೆ ಇದೆ ಎಂದಿದ್ದಾರೆ. ಬಿಜೆಪಿ ಇಡೀ ಸರ್ಕಾರವೇ ದೆಹಲಿಯ ಚುನಾವಣೆಯಲ್ಲಿ ನಿಂತಿತ್ತು. ಜೊತೆಗೆ ಕೇಂದ್ರ, ಸರ್ಕಾರ ತನ್ನ ಅಧೀನದಲ್ಲಿರೋ ಸಂಸ್ಥೆಗಳನ್ನ ಬಳಸಿಕೊಂಡು ನಮ್ಮ ಪಕ್ಷವನ್ನ ಹೇಗಾದ್ರು ಮಾಡಿ ನಿರ್ನಾಮ ಮಾಡಬೇಕು ಅಂತ ಪಣ ತೊಟ್ಟಿದ್ದರು. ಐಟಿ, ಇಡಿ, ಚುನಾವಣಾ ಆಯೋಗವನ್ನ ಬಳಿಸಿಕೊಂಡರು ಎಂದು ಆರೋಪಿಸಿದ್ದಾರೆ. ಹಣ ಬಲ, ತೋಳ್ಬಲದಿಂದ ಬಿಜೆಪಿ ಗೆದ್ದಿದೆ. ಗೆದ್ದ ಪಕ್ಷ ಜನರಿಗೆ ನೀಡಿರುವ ಭರವಸೆಯನ್ನ ಈಡೇರಿಸಬೇಕು. ಅಭಿವೃದ್ಧಿ ಕಾರ್ಯಗಳನ್ನ ಮಾಡಬೇಕು. ಸೋಲನ್ನು ನಾವು ಸ್ವೀಕಾರ ಮಾಡುತ್ತೇವೆ ಎಂದು ಎಂದು ತಿಳಿಸಿದ್ದಾರೆ.

# ಬಿಜೆಪಿ ಗೆಲುವು, ರಾಜ್ಯದ ಮುಂದಿನ ಚುನಾವಣೆಗೆ ದಿಕ್ಸೂಚಿ

**ಬೆಂಗಳೂರು:** ದೆಹಲಿ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿರುವುದು ಕರ್ನಾಟಕ ಬಿಜೆಪಿಗೆ ಶಕ್ತಿ ತುಂಬಿದಂತಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ನಗರದಲ್ಲಿ ಮಾತನಾಡಿದ ಅವರು, ದೆಹಲಿ ಚುನಾವಣಾ ಫಲಿತಾಂಶವು ಮುಂದಿನ ಕರ್ನಾಟಕ, ತೆಲಂಗಾಣದ ಚುನಾವಣೆಗೆ ದಾರಿದೀಪವಾಗಲಿದೆ. ಇದು ದೇಶಕ್ಕೆ ಸಿಕ್ಕಿರುವ ಗೆಲುವು. ಡಿಕೆಶಿ ಗ್ಯಾರಂಟಿ ದೆಹಲಿಯಲ್ಲಿ ಠುಸ್ ಪಟಾಕಿ ಆಗಿದೆ ಎಂದು ವ್ಯಂಗ್ಯವಾಡಿದರು.

ಕರ್ನಾಟಕದಲ್ಲಿ 5 ಗ್ಯಾರಂಟಿ ಕೊಟ್ಟು ಅಭಿವೃದ್ಧಿ ಇಲ್ಲವಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಇದೇ ಕೇಜ್ರಿವಾಲ್ 25 ಉಚಿತಗಳನ್ನು ನೀಡಿದ್ದರು. ಅವರ ಸ್ಥಿತಿ ಏನಾಗಿದೆ? ಎಂದು ಪ್ರಶ್ನಿಸಿದರು. ಇದು ದೇಶಕ್ಕೆ ದಿಕ್ಸೂಚಿ ಎಂದು ತಿಳಿಸಿದರು.



ಇದೇ ವೇಳೆ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಅರವಿಂದ್ ಕೇಜ್ರಿವಾಲ್ ಅವರ ದೆಹಲಿ ಸರ್ಕಾರ ಭ್ರಷ್ಟಾಚಾರಕ್ಕೆ ಬಲಿಯಾಗಿದೆ. ಬಿಜೆಪಿ ಇಡೀ ದೇಶದಲ್ಲಿ ಭ್ರಷ್ಟಾಚಾರದ ವಿಚಾರದಲ್ಲಿ ಒಂದೇ ಒಂದು ಆಪಾದನೆಯನ್ನೂ ಹೊತ್ತಿಲ್ಲ. ಕರ್ನಾಟಕದಲ್ಲಿ ನಮ್ಮ ವಿರುದ್ಧ ಶೇ.40 ಕಮೀಷನ್, ಪೇ ಸಿಎಂ ಮತ್ತಿತರ ಆರೋಪ ಮಾಡಿ ಚುನಾವಣಾ ತಂತ್ರ ಹೆಣೆದಿದ್ದ ಕಾಂಗ್ರೆಸ್ಸಿನದು ದೆಹಲಿಯಲ್ಲಿ ಶೂನ್ಯ ಸಂಪಾದನೆಯಾಗಿದೆ. ಈಗ ಅವರು ಖಾತೆ ತೆರೆದಿಲ್ಲ. ಆದರೆ ಕ್ಯಾತೆ ತೆಗೆಯುವುದನ್ನು ಬಿಡುವುದಿಲ್ಲ ಎಂದು ತಿಳಿಸಿದರು.

ಇನ್ನೂ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರು ಮಾತನಾಡಿ, ಕೇಜ್ರಿವಾಲ್ ಪ್ರಾಮಾಣಿಕ ಅಲ್ಲ. ಭ್ರಷ್ಟ ಎಂಬುದು ಜನರಿಗೆ ಮನವರಿಕೆ ಆಗಿದೆ. ಸುಳ್ಳಿನ ಮುಖವಾಡ ಕಳಚಿಬಿದ್ದಿದೆ. ಕೇವಲ ನಕಾರಾತ್ಮಕ ಪ್ರಚಾರದಿಂದ ಚುನಾವಣೆ ಗೆಲ್ಲಲು ಅಸಾಧ್ಯ ಎಂದು ಕಾಂಗ್ರೆಸ್ ಅವಲೋಕನ ಮಾಡಿಕೊಳ್ಳಬೇಕಿದೆ. ಅಂಬೇಡ್ಕರರ ಸಂವಿಧಾನ, ಜನತೆಯ ಸಂವಿಧಾನ ಗೆದ್ದಿದೆ ಎಂದು ವಿಶ್ಲೇಷಿಸಿದರು.

# ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ, ಅಪರಾಧಿಗೆ 20 ವರ್ಷಗಳ ಜೈಲು ಶಿಕ್ಷೆ

**ಮಂಡ್ಯ:** ಅಪ್ರಾಪ್ತ ಬಾಲಕಿಗೆ ಆಮಿಷ ಒಡ್ಡಿ ಅತ್ಯಾಚಾರ ಎಸಗಿದ ಆರೋಪಿಗೆ ಸ್ಥಳೀಯ ನ್ಯಾಯಾಲಯ ಶನಿವಾರ 20 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಪೋಕ್ಸೋ ವಿಶೇಷ



ನ್ಯಾಯಾಲಯದ ನ್ಯಾಯಾಧೀಶ ಬಿ.ದಿಲೀಪ್ ಕುಮಾರ್ ಅವರು ಈ ಆದೇಶ ಹೊರಡಿಸಿದ್ದಾರೆ. ಬೆಳ್ಳೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿತ್ತು. ಪೋಕ್ಸೊ ಕಾಯ್ದೆಯಡಿ ನ್ಯಾಯಾಲಯ ಆರೋಪಿಗೆ 20 ವರ್ಷ ಜೈಲು ಶಿಕ್ಷೆ ಹಾಗೂ 50 ಸಾವಿರ ದಂಡ ವಿಧಿಸಿದೆ. ಸಂತ್ರಸ್ತೆಗೆ 50,000 ರೂಪಾಯಿ ಪರಿಹಾರ ನೀಡುವಂತೆ ಆದೇಶಿಸಿದೆ. ಆರೋಪಿ 2019ರಲ್ಲಿ ಆಮಿಷವೊಡ್ಡುವ ಮೂಲಕ 17 ವರ್ಷದ ಸಂತ್ರಸ್ತೆ ಮೇಲೆ ಅತ್ಯಾಚಾರವೆಸಗಿದ್ದ. ಬಳಿಕ ಆಕೆ ಗರ್ಭಿಣಿಯಾಗಿದ್ದಳು. ಪೊಲೀಸರು ಆರೋಪಿ ವಿರುದ್ಧ ಪೋಕ್ಸೊ ಪ್ರಕರಣ ದಾಖಲಿಸಿಕೊಂಡು, ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

## ಮೊದಲನೇ ಪುಟದಿಂದ...

### ಮುಡಾ ಕೇಸ್‌ನಲ್ಲಿ ಸಿಎಂ ಕುಟುಂಬಸ್ಥರೇ ಸಂತ್ರಸ್ತರು

**ಮುಡಾ ಮಾಜಿ ಆಯುಕ್ತ ಪ್ರಮುಖ ಆರೋಪಿ:** ಮುಡಾದ ಮಾಜಿ ಆಯುಕ್ತ ನಟೇಶ್ ಈ ಪ್ರಕರಣ ಪ್ರಮುಖ ಆರೋಪಿ. ಭೂ ಮಾಲೀಕ ಎನ್ನಲಾದ ದೇವರಾಜು ಭೂಮಿ ಮಾರುವಾಗ ಸಾಕಷ್ಟು ಮಾಹಿತಿ ಮುಚ್ಚಿಟ್ಟಿದ್ರು. ಭೂಮಿಯನ್ನು ಮುಡಾ ವಶಕ್ಕೆ ಪಡೆದಿದ್ದ ಮಾಹಿತಿಯನ್ನೂ ಮುಚ್ಚಿಟ್ಟಿದ್ರು. ಈ ವಿಷಯ ತಿಳಿಯದೇ ಮಲ್ಲಿಕಾರ್ಜುನ್ ದೇವರಾಜು ಬಳಿಯಲ್ಲಿ ಜಮೀನು ಖರೀದಿ ಮಾಡಿದ್ದಾರೆ. ಆದ್ರೆ ಅಂದಿನ ಮುಡಾ ಆಯುಕ್ತರಾಗಿದ್ದ ನಟೇಶ್ ಸರ್ಕಾರದ ನಡಾವಳಿಯನ್ನು ಸಂಪೂರ್ಣವಾಗಿ ಗಾಳಿಗೆ ತೂರಿದ್ದಾರೆ ಎಂದು ಲೋಕಾಯುಕ್ತ ವರದಿಯಲ್ಲಿ ಉಲ್ಲೇಖಿಸಿರುವುದಾಗಿ ಮೂಲಗಳಿಂದ ತಿಳಿದುಬಂದಿದೆ.

**ಲೋಕಾಯುಕ್ತ ವರದಿಯಲ್ಲಿನ ಸ್ಫೋಟಕ ಅಂಶಗಳೇನು?:** ಸಿಎಂ ಮತ್ತು ಕುಟುಂಬದ ಸದಸ್ಯರು ಈ ಪ್ರಕರಣದಲ್ಲಿ ಸಂತ್ರಸ್ತರಾಗಿದ್ದಾರೆ. ಭೂಮಿ ಖರೀದಿ ಮಾಡುವಾಗ ಆಗಲಿ, ದಾನ ಮಾಡುವಾಗ ಆಗಲಿ ಯಾವುದೇ ಪ್ರಭಾವ ಬೀರಿಲ್ಲ. ಸಿಎಂ ಸಿದ್ದರಾಮಯ್ಯ ಸಹ ಅಧಿಕಾರ ದುರುಪಯೋಗ ಮಾಡಿಕೊಂಡಿರುವುದಾಗಲಿ ಪ್ರಭಾವ ಬೀರಿರುವುದಾಗಲಿ ಸಾಕ್ಷ್ಯ ಸಿಕ್ಕಿಲ್ಲ. ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿಯೂ ಪ್ರಭಾವ ಬೀರಿರೋದಕ್ಕೆ ಸಾಕ್ಷ್ಯಗಳು ಇಲ್ಲ ಎಂದು ಹೇಳಿದೆ.

2004ರಲ್ಲಿ ಮಲ್ಲಿಕಾರ್ಜುನಸ್ವಾಮಿ ಜಮೀನು ಖರೀದಿ ಮಾಡುವಾಗ ಯಾವುದೇ ಕಾನೂನು ತೊಡಕು ಇರಲಿಲ್ಲ. 5 ಲಕ್ಷದ 95,000 ರೂಪಾಯಿ ಹಣಕ್ಕೆ 3 ಎಕರೆ 26 ಗುಂಟೆ ಜಮೀನು ಖರೀದಿ ಮಾಡಿದ್ದಾರೆ. 3 ಎಕರೆ ಜಮೀನು ಖರೀದಿ ಮಾಡುವಾಗ ಯಾವುದೇ ಕಾನೂನು ಬಾಹಿರ, ನೊಂದಣಿ ಶುಲ್ಕದಲ್ಲಿ ಮೋಸ ಮಾಡಿಲ್ಲ. 2010 ರಲ್ಲಿ ಕೂಡ ದಾನ ಪತ್ರ ನೀಡುವಾಗ ಕೂಡ ಕಾನೂನಾತ್ಮವಾಗಿದೆ. ಕೆಸರೆಯ ಜಮೀನನ್ನು ಮುಡಾ ವಶಕ್ಕೆ ಪಡೆಯುವಾಗ ನಿಯಮ ಪ್ರಕಾರವೇ ಇದೆ. ಆದ್ರೆ 14 ಸೈಟುಗಳನ್ನ ಮರು ಹಂಚಿಕೆ ಮಾಡುವಾಗ ಕಾನೂನು ಬಾಹಿರ ಮಾಡಲಾಗಿದೆ ಎಂದು ವರದಿಯಲ್ಲಿ ಉಲ್ಲೇಖವಾಗಿದೆ.

ಸಿಎಂ ಅವರ ಪತ್ನಿ ಇದೇ ಜಾಗದಲ್ಲಿ ಸೈಟ್ ಬೇಕು ಅಂತ ಮನವಿ ಮಾಡಿಲ್ಲ. ಮುಡಾ ಅಧಿಕಾರಿಗಳ ಜೊತೆ ನಡೆದಿರೋ ಪತ್ರ ವ್ಯವಹಾರದಲ್ಲಿ ಕೆಲವೊಂದು ಲೋಪಗಳು ಇದ್ದಾವೆ. ಆದ್ರೆ, ಪಾರ್ವತಿ ಅವರ ಗಮನಕ್ಕೆ ಬಾರದಂತೆ ಕೆಲವೊಂದು ಪತ್ರ ವ್ಯವಹಾರ ನಡೆದಿದೆ. ಮುಡಾದ ಆಯುಕ್ತರು ಮತ್ತು ಅಧಿಕಾರಿಗಳಿಂದ ನಡಾವಳಿಯ ದುರ್ಬಳಕೆ ಆಗಿದೆ. ಮುಡಾದ ಮಾಜಿ ಆಯುಕ್ತ ನಟೇಶ್ ಕೇವಲ 14 ಸೈಟ್‌ಗಳಲ್ಲಿ ಮಾತ್ರವಲ್ಲ ಸಾಕಷ್ಟು ಪ್ರಕರಣಗಳಲ್ಲಿ ಅಕ್ರಮ ಮಾಡಿದಂತೆ ಇದೆ. ಅದರ ಮುಂದುವರಿದ ತನಿಖೆ ಆಗಬೇಕಿದೆ ಎಂದು ಲೋಕಾಯುಕ್ತ ತನ್ನ ಅಂತಿಮ ವರದಿಯಲ್ಲಿ ಉಲ್ಲೇಖಿಸಿದೆ ಎಂದು ತಿಳಿದುಬಂದಿದೆ.

### ನಾಳೆಯಿಂದ ಏರೋ ಇಂಡಿಯಾ ಶೋ!

ಕಾರ್ಯಕ್ರಮವನ್ನು ಭಾರತೀಯ ರಕ್ಷಣಾ ಇಲಾಖೆಯ ಸಚಿವ ರಾಜನಾಥ್ ಸಿಂಗ್ ಉದ್ಘಾಟನೆ ಮಾಡಲಿದ್ದಾರೆ. ಕಾರ್ಯಕ್ರಮದ ಮೊದಲ ಮೂರು ದಿನ ಅಂದರೆ ಫೆಬ್ರವರಿ 10, 11, 12ರವರೆಗೆ ರಕ್ಷಣಾ ಕ್ಷೇತ್ರಕ್ಕೆ ಸಂಬಂಧಿಸಿದ ವ್ಯವಹಾರ ದಿನಗಳಾಗಿರುತ್ತವೆ. 13 ಮತ್ತು 14ರಂದು ಸಾರ್ವಜನಿಕ ವೀಕ್ಷಣೆಗೆ ಅವಕಾಶವನ್ನ ಕಲ್ಪಿಸಲಾಗಿದೆ. ಏರೋಸ್ಪೇಸ್ ವಲಯದಿಂದ ದೊಡ್ಡ ಶ್ರೇಣಿಯ ಮಿಲಿಟರಿ ವೇದಿಕೆಗಳ ವಾಯು ಪ್ರದರ್ಶನ, ವಸ್ತು ಪ್ರದರ್ಶನಗಳನ್ನು ಒಳಗೊಂಡಿದೆ.

**ಏರೋ ಇಂಡಿಯಾ ಶೋ ಹೈಲೈಟ್ಸ್:** ■ ರಕ್ಷಣಾ ಸಚಿವರುಗಳ ಸಮಾವೇಶ, ದೇಶ ವಿದೇಶದ ರಕ್ಷಣಾ ಇಲಾಖೆಯ ಉನ್ನತ ಶ್ರೇಣಿಯ ಅಧಿಕಾರಿಗಳು ಭಾಗಿ. ■ ಮೊದಲ ಮೂರು ದಿನ ಉದ್ಯಮದ ವೃತ್ತಿಪರರು, ನೀತಿ ನಿರೂಪಕರು, ಹೂಡಿಕೆದಾರರಿಗೆ ಮೀಸಲು. ■ ಸಿಇಒ ದುಂಡು ಮೇಜಿನ ಸಭೆ, ಮಂಥನ್ ಸ್ಟಾರ್ಟ್‌ಅಪ್ ಕಾರ್ಯಕ್ರಮ. ■ ಏರೋಸ್ಪೇಸ್ ಕಂಪನಿಗಳ ವ್ಯಾಪಾರ ಮೇಳ. ■ ಆತ್ಮನಿರ್ಭರ್ ಯೋಜನೆಯಡಿ ಭಾರತೀಯ ರಕ್ಷಣಾ ಉತ್ಪಾದನೆ ಜಗತ್ತಿಗೆ ಪರಿಚಯಿಸುವುದು. ■ ಭಾರತದಲ್ಲಿ ಉತ್ಪಾದನೆಯ ಉಪಕರಣಗಳನ್ನ ಇತರ ದೇಶಗಳಿಗೆ ಮಾರಾಟ ಮಾಡುವ ಕುರಿತು ಒಡಂಬಡಿಕೆಗಳು. ■ ಭಾರತೀಯ ನವೋದ್ಯಮಗಳ ಪ್ರಚಾರಕ್ಕಾಗಿ, ಅಭಿವೃದ್ಧಿಗಾಗಿ ಉತ್ಪನ್ನಗಳನ್ನ ವಿಶೇಷ ಐಡೆಕ್ಸ್ ಪೆವಿಲಿಯನ್‌ನಲ್ಲಿ ಪ್ರದರ್ಶನ ■ ದೇಶಿಯ ನಿರ್ಮಿತ ಯುದ್ಧ ವಿಮಾನಗಳ ಪ್ರದರ್ಶನ ■ ಡೈನಾಮಿಕ್ ಏರೋಬ್ಯಾಟಿಕ್ ಪ್ರದರ್ಶನಗಳು, ಲೈವ್ ತಂತ್ರಜ್ಞಾನ ಪ್ರದರ್ಶನಗಳು ■ ರಕ್ಷಣಾ ವೈಮಾನಿಕ ಕ್ಷೇತ್ರದಲ್ಲಿ ಯುದ್ಧ ವಿಮಾನಗಳು, ಉಪಕರಣಗಳು ಸೇರಿ ಉತ್ಪನ್ನಗಳ ಖರೀದಿಗೂ ಹಲವು ದೇಶಗಳೊಂದಿಗೆ ಒಪ್ಪಂದಗಳಾಗುವ ನಿರೀಕ್ಷೆ. ಏರೋಸ್ಪೇಸ್ ಮತ್ತು ರಕ್ಷಣೆಯಲ್ಲಿ ಸ್ವದೇಶಿಕರಣವನ್ನ ಉತ್ತೇಜಿಸುವುದು, ಅತ್ಯಾಧುನಿಕ ತಂತ್ರಜ್ಞಾನಗಳು, ಉತ್ಪನ್ನಗಳನ್ನು ಪ್ರದರ್ಶನ ಮಾಡಲಾಗುತ್ತದೆ. ಇಗಾಗಲೇ 700ಕ್ಕೂ ಪ್ರದರ್ಶಕರು ನೋಂದಣಿ ಮಾಡಿಕೊಂಡಿದ್ದು, ರಕ್ಷಣಾ ವ್ಯವಸ್ಥೆಗೆ ಸಂಬಂಧಪಟ್ಟಂತೆ ತಮ್ಮ ಉತ್ಪನ್ನಗಳನ್ನು ಪ್ರದರ್ಶನ ಮಾಡಲು ತಯಾರಿಗಳು ನಡೆಯುತ್ತಿವೆ. ಏರ್ ಶೋನಲ್ಲಿ ಯಾವುದೇ ಸಮಸ್ಯೆಗಳಾಗದಂತೆ ಪಾಲಿಕೆ, ಜಿಲ್ಲಾಡಳಿತ ಎಲ್ಲಾ ವ್ಯವಸ್ಥೆಗಳನ್ನು ಮಾಡಿಕೊಂಡಿದೆ.

### ಸತೀಶ್ ಜಾರಕಿಹೊಳಿ ಪುತ್ರ ರಾಹುಲ್ ಆಯ್ಕೆ

ಈಗಾಗಲೇ ಸತೀಶ್ ಜಾರಕಿಹೊಳಿ ಅವರ ಎಲ್ಲಾ ಸಹೋದರರು ರಾಜಕೀಯಕ್ಕೆ ಎಂಟ್ರಿಯಾಗಿದ್ದು, ಕಳೆದ ಲೋಕಸಭಾ ಚುನಾವಣೆಯಲ್ಲಿ ಸತೀಶ್ ಅವರ ಪುತ್ರಿ ಮತ್ತು ರಾಹುಲ್ ಅವರ ಸಹೋದರಿ ಪ್ರಿಯಾಂಕಾ ಜಾರಕಿಹೊಳಿ ಅವರು ಚಿಕ್ಕೋಡಿ ಕ್ಷೇತ್ರದಿಂದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ, ಗೆಲುವು ಸಾಧಿಸಿದ್ದರು. ಈ ಮೂಲಕ ಪುತ್ರಿಯನ್ನೂ ರಾಜಕೀಯಕ್ಕೆ ಕರೆತಂದಿದ್ದರು.

ಇದೀಗ ಸತೀಶ ಜಾರಕಿಹೊಳಿ ಅವರು ಪುತ್ರ ರಾಹುಲ್ ಜಾರಕಿಹೊಳಿ ಅವರು ಯುವ ಕಾಂಗ್ರೆಸ್ ಘಟಕಕ್ಕೆ ಪ್ರಧಾನ ಕಾರ್ಯದರ್ಶಿಯಾಗುವ ಮೂಲಕ ಅಧಿಕೃತವಾಗಿ ರಾಜಕೀಯ ಪ್ರವೇಶಿಸಿದ್ದಾರೆ.

ಈಗಾಗಲೇ ಮಗಳನ್ನ ಸಂಸದೆಯನ್ನಾಗಿ ಮಾಡಿರುವ ಸತೀಶ್ ಜಾರಕಿಹೊಳಿ ಅವರು ತಮ್ಮ ಪುತ್ರ ರಾಜಕೀಯ ಭವಿಷ್ಯ ರೂಪಿಸಲು ಮಾಸ್ಟಪ್ಲ್ಯಾನ್ ಮಾಡಿದ್ದಾರೆ. ಹೀಗಾಗಿ ಆರಂಭದಲ್ಲಿಯೇ ಮಗನಿಗೆ ಪಕ್ಷ ಸಂಘಟನೆಯ ಜವಾಬ್ದಾರಿಯನ್ನ ನೀಡಿದ್ದು, ಪಕ್ಷ ಸಂಘಟನೆಯ ಜೊತೆ ಜನರ ಮನ ಗೆಲ್ಲುವ ಅವಕಾಶವನ್ನ ಸತೀಶ್ ಜಾರಕಿಹೊಳಿ ಅವರು ಸೃಷ್ಟಿಸಿದ್ದಾರೆನ್ನಲಾಗಿದೆ,

ಎಂಜಿನಿಯರಿಂಗ್ ಪದವೀಧರರಾದ ರಾಹುಲ್, ಲೋಕಸಭಾ ಚುನಾವಣೆಯಲ್ಲಿ ಪ್ರಿಯಾಂಕಾ ಪರ ಸಕ್ರಿಯವಾಗಿ ಪ್ರಚಾರ ಮಾಡಿದ್ದರು. ಪ್ರಿಯಾಂಕಾ ಅವರ ಗೆಲುವಿನಲ್ಲಿ ರಾಹುಲ್ ಅವರು ಪ್ರಮುಖ ಪಾತ್ರ ವಹಿಸಿದ್ದರು

### ಬಿಹಾರದತ್ತ ಬಿಜೆಪಿಯ ಚಿತ್ತ

ಹಿರಿಯ ಬಿಜೆಪಿ ಶಾಸಕ ಮತ್ತು ಬಿಹಾರದ ಮಾಜಿ ಉಪಮುಖ್ಯಮಂತ್ರಿ ತರ್ಕಿಶೋರ್ ಪ್ರಸಾದ್, ರಾಜ್ಯದಲ್ಲಿ ಎನ್‌ಡಿಎ ಅಧಿಕಾರವನ್ನು ಉಳಿಸಿಕೊಳ್ಳುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಕೇಂದ್ರ ಸಚಿವ ಜಿತನ್ ರಾಮ್ ಮಾಂಝಿ ಮಾತನಾಡಿ, ದೆಹಲಿಯ ಗೆಲುವು ಬಿಹಾರದಲ್ಲಿ ಮುಂದೆ ಏನಾಗಲಿದೆ ಎಂಬುದರ ಮುನ್ಸೂಚನೆ ಎಂದು ಬಣ್ಣಿಸಿದರು.

ಆದರೆ ರಾಷ್ಟ್ರೀಯ ಜನತಾ ದಳ ಈ ಹೇಳಿಕೆಯಲ್ಲಿ ತಳ್ಳಿ ಹಾಕಿದೆ, ದೆಹಲಿ ಚುನಾವಣಾ ಫಲಿತಾಂಶಗಳು ಬಿಹಾರದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಪ್ರತಿಪಾದಿಸಿದೆ. ಆರ್‌ಜೆಡಿ ವಕ್ತಾರ ಮೃತ್ಯುಂಜಯ್ ತಿವಾರಿ ಮಾತನಾಡಿ, ಬಿಹಾರದ ಮತದಾರರು ಬದಲಾವಣೆಯನ್ನು ಬಯಸುತ್ತಾರೆ ಎಂದು ಹೇಳಿದರು. ಜಾರ್ಖಂಡ್‌ನ ಫಲಿತಾಂಶಗಳು ಇಲ್ಲಿ ಪರಿಣಾಮ ಬೀರುತ್ತವೆ. ದೆಹಲಿ ಚುನಾವಣೆ ಬಿಹಾರದ ಮೇಲೆ ಪರಿಣಾಮ ಬೀರುವುದಿಲ್ಲ ಎಂದರು.

ಮುಂಬರುವ ಬಿಹಾರ ಚುನಾವಣೆಗಳು ಎನ್‌ಡಿಎಗೆ ನಿರ್ಣಾಯಕ ಪರೀಕ್ಷೆಯಾಗಲಿದ್ದು, 2024 ರ ಲೋಕಸಭಾ ಚುನಾವಣೆಗೆ ಮುನ್ನ ಮುಖ್ಯಮಂತ್ರಿ ನಿತೀಶ್ ಕುಮಾರ್ ಮೈತ್ರಿಕೂಟಕ್ಕೆ ಮರಳಿದ್ದರಿಂದ ಗಮನಾರ್ಹವಾಗಿ ಲಾಭವಾಯಿತು. ಎನ್‌ಡಿಎ ಬಿಹಾರದ 40 ಲೋಕಸಭಾ ಸ್ಥಾನಗಳಲ್ಲಿ 30 ಸ್ಥಾನಗಳನ್ನು ಪಡೆದುಕೊಂಡಿದ್ದು, ರಾಜ್ಯ ಚುನಾವಣೆಗೆ ಮುನ್ನ ತನ್ನ ವಿಶ್ವಾಸವನ್ನು ಹೆಚ್ಚಿಸಿಕೊಂಡಿದೆ.

ದೆಹಲಿಯಲ್ಲಿ 70 ಸ್ಥಾನಗಳಲ್ಲಿ 48 ಸ್ಥಾನಗಳನ್ನು ಗೆದ್ದು ಆಮ್ ಆದ್ಮಿ ಪಕ್ಷದ (ಎಎಪಿ) ದಶಕದ ಆಳ್ವಿಕೆಯನ್ನು ಕೊನೆಗೊಳಿಸಿದ ಬಿಜೆಪಿಯ ನಿರ್ಣಾಯಕ ಗೆಲುವು ಪಕ್ಷದ ನೈತಿಕತೆಯನ್ನು ಹೆಚ್ಚಿಸಿದೆ. ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ತಮ್ಮ ನವದೆಹಲಿ ಸ್ಥಾನವನ್ನು ಬಿಜೆಪಿಯ ಪರ್ವೇಶ್ ವರ್ಮಾ ವಿರುದ್ಧ ಕಳೆದುಕೊಂಡರು.

ಫೆಬ್ರವರಿ 5 ರಂದು ದೆಹಲಿ ವಿಧಾನಸಭಾ ಚುನಾವಣೆ ನಡೆದಿತ್ತು. ಮತದಾನಕ್ಕೆ 72 ಗಂಟೆಗಳ ಮೊದಲು ಸಂಬಳ ಪಡೆಯುವ ನೌಕರರಿಗೆ 12 ಲಕ್ಷ ರೂ.ಗಳವರೆಗೆ ತೆರಿಗೆ ವಿನಾಯಿತಿ ನೀಡುವ ಘೋಷಣೆಯು ಬಿಜೆಪಿಗೆ ಮತ್ತೊಂದು ಮಾಸ್ಟರ್‌ಸ್ಟ್ರೋಕ್ ಆಗಿ ಪರಿಣಮಿಸಿತು. ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ತೆರಿಗೆ ವಿನಾಯಿತಿ ಘೋಷಣೆಯಿಂದ ಬಿಜೆಪಿಗೆ ಖಂಡಿತವಾಗಿಯೂ ಲಾಭವಾಗಿದೆ.

### ಯಾರಾಗಬಹುದು ದೆಹಲಿ ಮುಖ್ಯಮಂತ್ರಿ?

ಸುಮಾರು ಮೂರು ದಶಕಗಳ ನಂತರ ದೆಹಲಿಯಲ್ಲಿ ಪಕ್ಷವು ಮತ್ತೆ ಅಧಿಕಾರಕ್ಕೆ ಬರುತ್ತಿರುವುದರಿಂದ ಈ ಗೆಲುವು ಬಿಜೆಪಿಗೆ ವಿಶೇಷವಾಗಿದೆ.

1993 ರ ಆರಂಭದಲ್ಲಿ, ಮದನ್ ಲಾಲ್ ಖುರಾನಾ ನೇತೃತ್ವದಲ್ಲಿ ಬಿಜೆಪಿ ಸರ್ಕಾರ ರಚನೆಯಾಯಿತು ಆದರೆ ಅಂದಿನಿಂದ ದೆಹಲಿಯಲ್ಲಿ ಅಧಿಕಾರ ಪಡೆಯಲು ಬಿಜೆಪಿ ನಿರಂತರವಾಗಿ ಹೆಣಗಾಡುತ್ತಿದೆ. ಏತನ್ಮಧ್ಯೆ, ಬಿಜೆಪಿ 1999, 2014, 2019 ಮತ್ತು 2024 ರ ಲೋಕಸಭಾ ಚುನಾವಣೆಗಳನ್ನು ಗೆದ್ದಿತು.

ಕಳೆದ ಮೂರು ಲೋಕಸಭಾ ಚುನಾವಣೆಗಳಲ್ಲಿಯೂ ಸಹ, ನರೇಂದ್ರ, ಮೋದಿ ಅವರ ನೇತೃತ್ವದಲ್ಲಿ ಬಿಜೆಪಿ ನಿರಂತರವಾಗಿ ಕೇಂದ್ರದಲ್ಲಿ ಅಧಿಕಾರವನ್ನು ವಶಪಡಿಸಿಕೊಂಡಿದೆ, ಆದರೂ ರಾಜಧಾನಿಯಲ್ಲಿ ತನ್ನದೇ ಆದ ಮುಖ್ಯಮಂತ್ರಿಯನ್ನು ಹೊಂದುವ ಬಿಜೆಪಿಯ ಕನಸು ನನಸಾಗಲಿಲ್ಲ, ಅದು ಈಗ ನನಸಾಗುತ್ತಿದೆ.

ಇದೆಲ್ಲದರ ನಡುವೆ, ದೆಹಲಿಯ ಮುಂದಿನ ಮುಖ್ಯಮಂತ್ರಿ ಯಾರು ಎಂಬ ಚರ್ಚೆ ಆರಂಭವಾಗಿದೆ. ಫೆಬ್ರವರಿ 8 ರ ಶನಿವಾರ ಫಲಿತಾಂಶಗಳು ಹೊರಬಂದ ನಂತರ, ಪ್ರಧಾನಿ ಮೋದಿ ಅವರು ಗೃಹ ಸಚಿವ ಅಮಿತ್ ಶಾ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಸೇರಿದಂತೆ ಹಿರಿಯ ಬಿಜೆಪಿ ನಾಯಕರೊಂದಿಗೆ ಸಭೆ ನಡೆಸಿದರು.

ಗೃಹ ಸಚಿವ ಶಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ದೆಹಲಿಯ ಎಲ್ಲಾ ಏಳು ಲೋಕಸಭಾ ಸದಸ್ಯರೊಂದಿಗೆ ಸಭೆ ನಡೆಸಿದ್ದಾರೆ ಎಂದು ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ.ಆಮ್ ಆದ್ಮಿ ಪಕ್ಷ (ಎಎಪಿ) ಗಿಂತ ಭಿನ್ನವಾಗಿ, ಬಿಜೆಪಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಮುಖ್ಯಮಂತ್ರಿ ಅಭ್ಯರ್ಥಿ ಇಲ್ಲದೆ ಸ್ಪರ್ಧಿಸಿತು.

ಈಗ ಯಾರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲಾಗುತ್ತದೆ ಎಂಬುದು ಪ್ರಶ್ನೆ. ಸದ್ಯಕ್ಕೆ, ಪರ್ವೇಶ್ ವರ್ಮಾ ಅವರಲ್ಲದೆ, ದೆಹಲಿ ಸಿಎಂ ಹುದ್ದೆಗೆ ಕೇಜ್ರಿವಾಲ್ ಅವರನ್ನು ಸೋಲಿಸಿದ ವೀರೇಂದ್ರ, ಸಚ್‌ದೇವ, ವಿಜೇಂದ್ರ ಗುಪ್ತಾ, ಸತೀಶ್ ಉಪಾಧ್ಯಾಯ, ಆಶಿಶ್ ಸೂದ್ ಮತ್ತು ಜಿತೇಂದ್ರ, ಮಹಾಜನ್, ಬನ್ಸುರಿ ಸ್ವರಾಜ್ ಮತ್ತು ಮನೋಜ್ ತಿವಾರಿ ಕೂಡ ರೇಸ್‌ನಲ್ಲಿದ್ದಾರೆ.

ರಾಜಸ್ಥಾನದಲ್ಲಿ ಭಜನ್ ಲಾಲ್ ಶರ್ಮಾ, ಮಧ್ಯಪ್ರದೇಶದಲ್ಲಿ ಮೋಹನ್ ಯಾದವ್ ಮತ್ತು ಛತ್ತೀಸ್‌ಗಢದಲ್ಲಿ ವಿಷ್ಣು ದೇವ್ ಸಾಯಿ ಅವರನ್ನು ಮುಖ್ಯಮಂತ್ರಿಗಳನ್ನಾಗಿ ಮಾಡುವ ಮೂಲಕ ಬಿಜೆಪಿ ಎಲ್ಲರನ್ನೂ ಅಚ್ಚರಿಗೊಳಿಸಿದ್ದನ್ನೂ ಕಾಣಬಹುದು ಹಾಗಾಗಿ ಇಂಥವರನ್ನೇ ಮುಖ್ಯಮಂತ್ರಿಯನ್ನಾಗಿ ಮಾಡಬಹುದು ಎಂದು ಹೇಳಲು ಸಾಧ್ಯವಿಲ್ಲ.

### ರಾತ್ರೋರಾತ್ರಿ ತಲೆ ಎತ್ತಿದ ಕೆಂಪೇಗೌಡರ ಪ್ರತಿಮೆ

ನಗರ ಪಾಲಿಕೆಯಿಂದ ಅನುಮತಿ ಪಡೆಯದೆಯೇ ಏಕಾಏಕಿ ಪ್ರತಿಮೆ ಇರಿಸಿರುವುದು ಸರಿಯಲ್ಲ ಎಂದು ಪೊಲೀಸರು ಹೇಳಿದರು. ಮೂರು ತಿಂಗಳ ಹಿಂದೆಯೇ ಇಲ್ಲಿ ಪ್ರತಿಮೆ ಪ್ರತಿಷ್ಠಾಪಿಸಲಾಗಿದ್ದು, ಯಾವುದೇ ಕಾರಣಕ್ಕೂ ತೆರವು ಮಾಡಲು ಬಿಡುವುದಿಲ್ಲ ಎಂದು ಅಭಿಮಾನಿಗಳು ಪಟ್ಟು ಹಿಡಿದರು.

ಬಳಿಕ ಸ್ಥಳಕ್ಕೆ ಶಾಸಕ ಕೆ. ಹರೀಶ್ ಗೌಡ ಧಾವಿಸಿ ಎಂಸಿಸಿಯಿಂದ ಅನುಮತಿ ಪಡೆದು, ಪ್ರತಿಮೆಯನ್ನು ಸ್ಥಾಪಿಸುವ ಭರವಸೆ ನೀಡಿದರು. ಬಳಿಕ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಯಿತು.

### ಎಸಿಪಿ ಚಂದನ್‌ಗೆ ತನಿಖೆ ಹೊಣೆ

ಎಸಿಪಿ ಚಂದನ್‌ಗೆ ತನಿಖೆ ಹೊಣೆ: ಅಕ್ರಮವಾಗಿ ಸಿಡಿಆರ್ ಪಡೆದ ಪ್ರಕರಣದ ತನಿಖೆಯನ್ನು ವಿಜಯನಗರ ಉಪ ವಿಭಾಗದ ಎಸಿಪಿ ಚಂದನ್ ಕುಮಾರ್ ಅವರಿಗೆ ಪಶ್ಚಿಮ ವಿಭಾಗದ ಡಿಸಿಪಿ ಎಸ್. ಗಿರೀಶ್ ವಹಿಸಿದ್ದಾರೆ. ಬ್ಯಾಟರಾಯನಪುರ ಉಪ ವಿಭಾಗದ ಎಸಿಪಿ ದೂರುದಾರರಾಗುರುವ ಕಾರಣ ತನಿಖೆ ಹೊಣೆ ಚಂದನ್ ಅವರ ಹೆಗಲಿಗೆ ಬಿದ್ದಿದೆ. ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ನಟ ದರ್ಶನ್ ಹಾಗೂ ಅವರ ತಂಡದ ವಿರುದ್ಧ ಎಸಿಪಿ ಚಂದನ್ ತನಿಖೆ ನಡೆಸಿದ್ದರು.

### ಮಹಾ ಕುಂಭಮೇಳಕ್ಕೆ ತೆರಳಿದ ಡಿಕೆಶಿ

ಇದಾದ ನಂತರ ಸೋಮವಾರ (ಏ.10) ಏರ್ ಶೋನಲ್ಲಿ ಸಿಎಂ, ನಾನು ಭಾಗಿಯಾಗುತ್ತಿದ್ದೇವೆ. ಗೋಬಲ್ ಇನ್ವೆಸ್ಟರ್ ಸಭೆ ಇದೆ, ಅದರಲ್ಲೂ ಭಾಗಿಯಾಗುತ್ತಿದ್ದೇನೆ. ನಾಲ್ಕೈದು ದಿನ ಅಭಿವೃದ್ಧಿ ಕೆಲಸ ಇದೆ ಎಂದು ಹೇಳಿದರು. ಯುವಕರಿಗೆ ಸ್ಫೂರ್ತಿಯಾಗಿರುವ ಯುವ ಉದ್ಯಮಿ, ಡಿಕೆಶಿ ಪುತ್ರಿ ಐಶ್ವರ್ಯ ಫೆ.7ರಂದು ಮಹಾಕುಂಭ ಮೇಳಕ್ಕೆ ಭೇಟಿ ನೀಡಿದ್ದರು. ಸೋಶಿಯಲ್ ಮೀಡಿಯಾದಲ್ಲಿ ಆ ಸುಂದರ ಕ್ಷಣಗಳ ವೀಡಿಯೋವನ್ನು ಅವರು ಹಂಚಿಕೊಂಡಿದ್ದಾರೆ. ಮಹಾಕುಂಭ 2025 ಪದಗಳಿಗೆ ಮೀರಿದ ಅನುಭವ. ವಿಶ್ವದ ಅತಿದೊಡ್ಡ ಕೂಟಗಳಲ್ಲಿ ಒಂದಾದ ಸಂಪೂರ್ಣ ಶಕ್ತಿ, ಏಕತೆ ಮತ್ತು ಆಧ್ಯಾತ್ಮಿಕ ಆಳವು ನನ್ನನ್ನು ಮಂತ್ರಮುಗ್ಧಗೊಳಿಸಿದೆ ಎಂದು ಐಶ್ವರ್ಯ ಬರೆದಿದ್ದಾರೆ. ಅಷ್ಟೇ ಅಲ್ಲ, ಭಕ್ತಿ ಮತ್ತು ಸಾಮೂಹಿಕ ಪ್ರಜ್ಞೆಯು ನಿಜವಾಗಿಯೂ ದೈವಿಕವೆನಿಸುವ ವಾತಾವರಣವನ್ನು ಸೃಷ್ಟಿಸಿತು ಎಂದು ಐಶ್ವರ್ಯ ಹೇಳಿದ್ದಾರೆ.

ಸಂಜೆ ಮುಗಿಲು
ಭಾನುವಾರ
9.2.2025



ಅನಗತ್ಯ ಕಿರುಕುಳ ತಪ್ಪಿಸಲು ನಿಯಮಗಳ ಪಾಲನೆಗೆ ಸೂಚನೆ | ಕಿರುಕುಳ ನೀಡಿದರೆ ಸಹಾಯವಾಣಿಗೆ ಮಾಹಿತಿ ನೀಡಿ

# ಮೈಕ್ರೋ ಫೈನಾನ್ಸ್‌ಗಳ ದಬ್ಬಾಳಿಕೆ ತಡೆಗೆ ಸರ್ಕಾರದ ಕ್ರಮ

**ಮಂಡ್ಯ:** ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರುತಮ್ಮ ಅವಶ್ಯಕತೆಗಳಿಗಾಗಿ ಸಣ್ಣ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದು,ಮರುಪಾವತಿಸುವಲ್ಲಿ ವಿಳಂಬ ಮಾಡಿದ ಸಾಲಗಾರರ ಮೇಲೆ ಅನಧಿಕೃತ ಲೇವಾದೇವಿದಾರರು,ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ದಬ್ಬಾಳಿಕೆ,ದೌರ್ಜನ್ಯಗಳನ್ನು ಸರ್ಕಾರಗಂಭೀರವಾಗಿ ಪರಿಗಣಿಸಿದ್ದು,ದೌರ್ಜನ್ಯತಡೆಗೆ ಹಲವು ಕ್ರಮಗಳನ್ನು ತೆಗೆದುಕೊಂಡಿದೆ.

ತುರ್ತು ವೈದ್ಯಕೀಯಚಿಕಿತ್ಸೆ, ಮಕ್ಕಳ ವಿದ್ಯಾಭ್ಯಾಸ, ಮದುವೆಇನ್ನಿತರಖರ್ಚಿಗಾಗಿತುರ್ತಾಗಿ ಕೈ ಸಾಲ ಪಡೆಯುವ ಪದ್ಧತಿರೂಢಿಯಲ್ಲಿದೆ.ಬಹುತೇಕರು ಪಡೆದ ಸಾಲವನ್ನು ವಾಪಸ್ಸು ನೀಡುತ್ತಾರೆ. ಆದರೆ ಕೆಲವು ವ್ಯಕ್ತಿಗಳು ಸಾಮಾಜಿಕ,ವೈಯಕ್ತಿಕಅಥವಾ ಉತ್ಪಾದಕವಲ್ಲದ ಕಾರ್ಯಗಳಿಗಾಗಿ ಹಣಖರ್ಚು ಮಾಡುವುದರಿಂದ, ಮರುಪಾವತಿಕ್ಷಮತೆಕಡಿಮೆಇರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾಲ ನೀಡಿದವರು ಮರು ವಸೂಲಿಗಾಗಿ ಒತ್ತಾಯಿಸುತ್ತಾರೆ. ಕೆಲವೆಡೆಇದು ಕಿರುಕುಳವಾಗಿ ಬೆಳೆಯುತ್ತಿರುವುದನ್ನು ಸರ್ಕಾರಗಂಭೀರವಾಗಿ ಪರಿಗಣಿಸಿದೆ.

**ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ:** ಕಳೆದ ಜನವರಿ 25 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕರ್ನಾಟಕ ವಲಯದಅಧ್ಯಕ್ಷರು, ಭಾರತೀಯರಿಸರ್ವ ಬ್ಯಾಂಕ್ (ಖಃಐ) ನ ಪ್ರಾಂತೀಯ ನಿರ್ದೇಶಕರು, ಹಾಗೂ ಸಾ-ಧನ್ (ಖಂ-ಆಊಂಓ),ಎಕೆಎಂಐ,ಎಂಎಫ್ಐಎನ್ ಮತ್ತು ಪ್ರಮುಖ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು , ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ ಸಂಚಾಲಕರು, ಅಧಿಕಾರಿಗಳು , ಪೊಲೀಸ್, ಕಂದಾಯ, ಸಹಕಾರ ಹಾಗೂ ಆರ್ಥಿಕಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ. ಕಿರುಕುಳವನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ್ದಾರೆ.



### ಕರ್ನಾಟಕದ ಅಧಿನಿಯಮಗಳು

ಕರ್ನಾಟಕ ಲೇವಾದೇವಿದಾರರ ಅಧಿನಿಯಮ–1961ಅಡಿಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. ಈ ಅಧಿನಿಯಮದಡಿಯಲ್ಲಿ 2024ರ ಡಿಸೆಂಬರ್ 31 ರವರೆಗೆ 20,425 ಸಂಸ್ಥೆಗಳು ನೋಂದಣಿಯಾಗಿವೆ. ಅದರಲ್ಲಿ 6590 ಲೇವಾದೇವಿದಾರರು, 6772 ಪಾನ್ ಬ್ರೋಕರ್‌ಗಳು, 7063 ಹಣಕಾಸಿನ ಸಂಸ್ಥೆಗಳು ಇವೆ. ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧಕಾಯಿದೆ–2004 ಪ್ರಕಾರ ಭದ್ರತಾ ಸಾಲಗಳಿಗೆ ವರ್ಷಕ್ಕೆ ಶೇ.14 ಹಾಗೂ ಭದ್ರತೆಇಲ್ಲದ ಸಾಲಗಳಿಗೆ ವರ್ಷಕ್ಕೆಗರಿಷ್ಠ ಶೇ.16 ಗರಿಷ್ಠ ಬಡ್ಡಿದರವನ್ನು ಲೇವಾದೇವಿದಾರರಿಗೆ ನಿಗದಿಪಡಿಸಲಾಗಿದೆ. ಇಂತಹ ಮಾಹಿತಿಗಳನ್ನು ಸಾರ್ವಜನಿಕವಾಗಿ ಫಲಕಗಳ ಮೂಲಕ ಪ್ರದರ್ಶಿದಲು ಸಂಸ್ಥೆಗಳು ಹಾಗೂ ಸಂಬಂಧಿಸಿದ ಕಚೇರಿಗಳಿಗೆ ತಿಳಿಸಲಾಗಿದೆ. ಸಾಲಗಾರರು ಇವುಗಳನ್ನು ಸೂಕ್ಷ್ಮವಾಗಿ ಗಮನಿಸಿ ಸಾಲ ಪಡೆಯುವ ಮುನ್ನ ಲೇವಾದೇವಿ ಸಂಸ್ಥೆಗಳ ಅಧಿಕೃತ ನೋಂದಣಿ ಪತ್ರ, ಬಡ್ಡಿದರ, ವಸೂಲಿ ಪ್ರಕ್ರಿಯೆ ಇತ್ಯಾದಿಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಪ್ರಕ್ರಿಯೆಗಳಿಂದ ಸಾಲ ಮರುಪಾವತಿ ಸಂದರ್ಭದಲ್ಲಿನ ಕಿರುಕುಳ ತಪ್ಪಿಸಲು ಸಾಧ್ಯವಾಗುತ್ತದೆ.

### ಸೂಕ್ಷ್ಮ ಹಣಕಾಸು ಸಂಸ್ಥೆಗಳು ಎಂದರೇನು?

3 ಲಕ್ಷರೂ.ವರೆಗೂಆದಾಯವಿರುವ ಸಾರ್ವಜನಿಕರಿಗೆ ಸಾಲವನ್ನುಒದಗಿಸುವ ವ್ಯವಸ್ಥೆಯನ್ನು ಮೈಕ್ರೋ ಫೈನಾನ್ಸ್ಎಂದು ಘೋಷಿಸಲಾಗಿದೆ. ಬ್ಯಾಂಕುಗಳಲ್ಲದ ಸಹಕಾರ ಸಂಘಗಳು, ಎನ್‌ಬಿಎಫ್‌ಸಿಗಳು, ಸರ್ಕಾರೇತರ ಸಂಸ್ಥೆಗಳು, ಟ್ರಸ್ಟ್‌ಗಳು, ಸಣ್ಣಅಂಗಡಿ ಮಾಲೀಕರು, ಇನ್ನಿತರರು ಸಾಲ ನೀಡುತ್ತಾರೆ. ಸಹಕಾರಿ ಸಂಸ್ಥೆಗಳ ಮೇಲ್ವಿಚಾರಣೆಯನ್ನು ಸಹಕಾರ ಇಲಾಖೆ. ಬ್ಯಾಂಕ್‌ಅಲ್ಲದಆರ್ಥಿಕ ಸಂಸ್ಥೆಗಳ (ಎನ್‌ಬಿಎಫ್‌ಸಿ) ಮೇಲ್ವಿಚಾರಣೆಯನ್ನು ಭಾರತೀಯರಿಸರ್ವ್ ಬ್ಯಾಂಕ್ (ಆರ್‌ಬಿಐ) ಮೂಲಕ ನೋಂದಣಿ ಮತ್ತು ಮೇಲ್ವಿಚಾರಣೆ ಮಾಡಲಾಗುತ್ತಿದೆ. ಸಾ-ಧನ್ ಮತ್ತು ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್ ವರ್ಕ್ ಸಂಸ್ಥೆಗಳನ್ನು ಭಾರತೀಯರಿಸರ್ವ್ ಬ್ಯಾಂಕ್ (ಖಃಐ) ಸ್ವಯಂ ನಿಯಂತ್ರಣಾ ಸಂಸ್ಥೆಗಳನ್ನಾಗಿ ನೇಮಿಸಿದೆ.ನಿಗದಿತ ಉತ್ತಮ ಲೇವಾದೇವಿ ಪದ್ದತಿಗಳನ್ನು ಅನುಷ್ಠಾನಗೊಳಿಸಲು ಈ ಸಂಸ್ಥೆಗಳನ್ನು ರಚಿಸಲಾಗಿದೆ. ಕರ್ನಾಟಕರಾಜ್ಯದಲ್ಲಿ ಕೇವಲ 31 ಮೈಕ್ರೋ ಫೈನಾನ್ಸ್ ಇಂಡಸ್ಟ್ರಿಗಳು ಅಸ್ತಿತ್ವದಲ್ಲಿ ಇವೆ. ಈ 31 ಸಂಸ್ಥೆಗಳು ಅಸೋಸಿಯೇ?ನ್ ಆಫ್‌ಕರ್ನಾಟಕ ಮೈಕ್ರೋ ಫೈನಾನ್ಸ್ ಇನಸ್ಟಿಟ್ಯೂಷನ್ (ಂಏಒಖ) ಸದಸ್ಯತ್ವ ಪಡೆದಿವೆ. ರಾಜ್ಯದಲ್ಲಿ ಈ ಸಂಸ್ಥೆಗಳ 3090 ಶಾಖೆಗಳಿದ್ದು 37,967 ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. 1,09,88,332 ಖಾತೆಗಳಲ್ಲಿ 59,367.76 ಕೋಟಿರೂ. ಬಾಕಿ ಉಳಿದಿದೆ. ನಿಯಮಗಳನ್ನು ಪಾಲಿಸದ ಹಣಕಾಸು ಸಂಸ್ಥೆಗಳ ಬಗ್ಗೆ ಮೇಲ್ವಿಚಾರಣಾ ಸಂಸ್ಥೆಗಳ ಮೂಲಕ ಭಾರತೀಯರಿಸರ್ವ್ ಬ್ಯಾಂಕಿಗೆ ವರದಿ ನೀಡಲಾಗುತ್ತದೆ , ಆರ್‌ಬಿಐಒಪ್ಪಿಗೆಯೊಂದಿಗೆ ಸೂಕ್ತ ಶಿಸ್ತಿನ ಕ್ರಮವನ್ನುಜರುಗಿಸಲಾಗುತ್ತದೆ. ದಬ್ಬಾಳಿಕೆಯ ಸಾಲ ಮರುಪಾವತಿಕ್ರಮದಿಂದ ಸಂರಕ್ಷಿಸಲುಅಧಿಕೃತವಾಗಿ ಭಾರತೀಯರಿಸರ್ವ್ ಬ್ಯಾಂಕ್ ಮಾರ್ಗಸೂಚಿಗಳು ಎಲ್ಲಾ ಎನ್‌ಬಿಎಫ್‌ಸಿ-ಎಂಎಫ್‌ಐಗಳು ಬಡ್ಡಿಯದರ, ಮರುಪಾವತಿಯಕಂತು ಮತ್ತು ಅಸಲು ಸಾಲ ಮುಂತಾದವುಗಳ ಬಗ್ಗೆ ಫ್ಯಾಕ್ಟ್‌ಶೀಟ್‌ನಲ್ಲಿಸಾಲವಿತರಣೆಯಸಮಯದಲ್ಲಿಪ್ರತಿಯೊಬ್ಬಸಾಲಗಾರನಿಗೆಮಾಹಿತಿಒದಗಿಸಬೇಕು.

ಬಡಜನರಅವಶ್ಯಕತೆಯನ್ನು ಬಂಡವಾಳ ಮಾಡಿಕೊಳ್ಳುವ ಕೆಲವು ವ್ಯಕ್ತಿಗಳು,ಅನಧಿಕೃತ ಲೇವಾದೇವಿದಾರರುಜನರತುರ್ತು ಅವಶ್ಯಕತೆಗೆ ಹಣ ನೀಡಿ, ಹೆಚ್ಚು ಬಡ್ಡಿ ವಿಧಿಸಿ ಶೋಷಣೆ ಮಾಡುತ್ತಾರೆ. ಅಂತಹ ವ್ಯಕ್ತಿಗಳು ಅಥವಾ ಸಂಸ್ಥೆಗಳ ವಿರುದ್ಧ ಸಾರ್ವಜನಿಕರು ಸಹಾಯವಾಣಿ ಸಂಖ್ಯೆಗಳಿಗೆ ದೂರು ನೀಡಬಹುದು. ಸೂಕ್ಷ್ಮ ಹಣಕಾಸು ಸಂಸ್ಥೆ ,ಮನಿ ಲೆಂಡಿಂಗ್ ಸಂಸ್ಥೆಗಳ ನಿಯಮ ಉಲ್ಲಂಘನೆಗಳ ಕುರಿತು ಭಾರತೀಯರಿಸರ್ವ್ ಬ್ಯಾಂಕ್ ಸಹಾಯವಾಣಿ ಸಂಖ್ಯೆ 14448 ಗೆ ಮಾಹಿತಿ ನೀಡಬಹುದು. ರಾಜ್ಯ ಸರ್ಕಾರವು ಮೈಕ್ರೋ ಫೈನಾನ್ಸ್ ಸಾಲಗಾರರಿಗೆಎಲ್ಲರೀತಿಯ ಕಾನೂನು ರಕ್ಷಣೆ ನೀಡಲು ಕ್ರಮವಹಿಸಿದೆ ನೊಂದ ವ್ಯಕ್ತಿಗಳು ರಾಜ್ಯದಏಕೀಕೃತ ಸಹಾಯವಾಣಿ ಸಂಖ್ಯೆ: 112 ಅಥವಾ 1902 ಸಂಪರ್ಕಿಸಬಹುದು.

**ಡಾ.ಶಾಲಿನಿ ರಜನೀಶ್** ಮುಖ್ಯ ಕಾರ್ಯದರ್ಶಿಗಳು,ಕರ್ನಾಟಕ ಸರ್ಕಾರ

### ಸ್ವಸಹಾಯ ಗುಂಪುಗಳಲ್ಲಿ ಸಾಲ

ಮಹಿಳಾ ಸ್ವ-ಸಹಾಯ ಗುಂಪುಗಳಿಂದ ಹಲವು ಕಡೆ ಬಳಕೆ ಸಾಲವನ್ನು ಪಡೆಯುವ ವ್ಯವಸ್ಥೆಇದೆ. ಇವುಗಳಲ್ಲಿ ಶೇ. 99 ಯಶಸ್ವಿಯಾಗಿ ಮರುಪಾವತಿಕೂಡಆಗುತ್ತವೆ. ಬ್ಯಾಂಕುಗಳಲ್ಲಿ ಇರುವಂತೆದಾಖಲಾತಿಒದಗಿಸುವ, ಜಾಮೀನು ನೀಡುವ ಹಾಗೂ ತಮ್ಮ ಆಸ್ತಿಗಳ ಅಡಮಾನ ಮಾಡುವಕ್ಲಿಷ್ಟ ವಿಧಾನಇಲ್ಲಿರುವುದಿಲ್ಲ. ಸರಳ ವಿಧಾನ ಅನುಸರಿಸಿ ಸಾಲ ಸಿಗುವುದರಿಂದ ಜನರುಇಂತಹ ವ್ಯವಸ್ಥೆಗಳಿಗೆ ಹೆಚ್ಚಾಗಿ ಮೊರೆ ಹೋಗುತ್ತಾರೆ.

## ವಿಧಾನಸೌಧಆವರಣದಲ್ಲಿ ಪುಸ್ತಕ ಮೇಳ

**ಮಂಡ್ಯ:** ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನಜನತೆಗೆಅತೀಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತುಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರ ವರೆಗೆ ವಿಧಾನಸೌಧದಆವರಣದಲ್ಲಿ ಪುಸ್ತಕ ಮೇಳ ವನ್ನು ಹಮ್ಮಿಕೊಳ್ಳಲಾಗಿದೆ. ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ನಾಡಿನ ಪ್ರಕಾಶಕರು / ಮಾರಾಟಗರಾರು ನಿಗದಿತಅರ್ಜಿ ನಮೂನೆಯನ್ನು ಮುಖ್ಯಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು, ಇವರಿಂದಅಥವಾ ವಿಧಾನ ಸಭೆ ಸಚಿವಾಲಯದ ವೆಬ್ ಸೈಟ್ www.kla.kar.nic.inನಲ್ಲಿಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಮೇಳದಲ್ಲಿ ಭಾಗವಹಿಸುವ ಪ್ರಕಾಶಕರು/ ಮಾರಾಟಗಾರರು ಮಳಿಗೆಯೊಂದಕ್ಕೆ ರೂ.1,000/-ಗಳ ಭದ್ರತಾಠೇವಣಿಡಿ.ಡಿಯನ್ನು ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸುವುದು. ಭರ್ತಿ ಮಾಡಿದಅರ್ಜಿಯನ್ನುಡಿ.ಡಿ.ಯೊಂದಿಗೆ 2025 ನೇ ಫೆಬ್ರವರಿ 12 ರಂದು ಸಂಜೆ 5.00 ಗಂಟೆಯೊಳಗೆ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರಿಗೆ ಸಲ್ಲಿಸಬಹುದುಎಂದುಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳಾದ ಶ್ರೀಮತಿ ಎಂ.ಕೆ. ವಿಶಾಲಾಕ್ಷಿಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6ನೇ ತರಗತಿ ಪ್ರವೇಶಕ್ಕೆ ಅರ್ಜಿ

**ಚಾಮರಾಜನಗರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯ 2025-26ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶೇ.25ರಷ್ಟು ಮೀಸಲಾತಿ ಇರುತ್ತದೆ. ಅರ್ಜಿಯನ್ನು ವೆಬ್ ಸೈಟ್ https://sevasindhuservices.karnataka.gov.in ನಲ್ಲಿ ಮಾರ್ಚ್ 10ರೊಳಗೆ ಸಲ್ಲಿಸಬೇಕು. ಪ್ರವೇಶ ಪರೀಕ್ಷೆಯು (ತಾತ್ಕಾಲಿಕ) ಏಪ್ರಿಲ್ 13ರಂದು ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮೊ.ಸಂ 9740052437, ಕೊಳ್ಳೇಗಾಲ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೊ.ಸಂ 7829587596, ಯಳಂದೂರು ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೊ.ಸಂ 7259980509, ಚಾಮರಾಜನಗರ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೊ.ಸಂ 9620886393 ಹಾಗೂ ಗುಂಡ್ಲುಪೇಟೆ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೊ.ಸಂ 8217593163 ಸಂಪರ್ಕಿಸಬಹುದು. ಆಸಕ್ತ ಅಲ್ಪಸಂಖ್ಯಾತರ ಪೋಷಕರು, ವಿದ್ಯಾರ್ಥಿಗಳು ಎಲ್ಲಾ ದಾಖಲೆಗಳೊಂದಿಗೆ ಹತ್ತಿರವಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಜಿಲ್ಲಾ ಅಥವಾ ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿ, ಅಧಿಸೂಚನೆ, ಪ್ರವೇಶ ಕೈಪಿಡಿ ಹಾಗೂ ಇತರೆ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ https://dom.karnataka.gov.in ಗೆ ಭೇಟಿ ನೀಡಬಹುದು.

## ಫೆ.14 ರಂದು ಸಾಮಾನ್ಯ ಪರೀಕ್ಷೆ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಹುಳಿಯಾರಿನ ಸುತ್ತಮುತ್ತಲ ಪಿ.ಯು.ಕಾಲೇಜಿನ ದ್ವಿತೀಯ ಪಿ.ಯು.ಸಿ.ವಿದ್ಯಾರ್ಥಿಗಳ ಫೆ.14 ರ ಶುಕ್ರವಾರ 50 ಅಂಕಗಳ ಸಾಮಾನ್ಯ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ಈ ಪರೀಕ್ಷೆಯು 1 ಘಂಟೆಯದ್ದಾಗಿದ್ದು 50 ಪ್ರಶ್ನೆಗಳನ್ನು ಒಳಗೊಂಡಿರುತ್ತದೆ ಪ್ರತಿ ಪ್ರಶ್ನೆಗೆ 4 ಉತ್ತರಗಳಿರುತ್ತವೆ. ಸರಿಯಾದ ಉತ್ತರಕ್ಕೆ ಓಎಂಆರ್ ಶೀಟಿನಲ್ಲಿ ಶೇಡ್ ಮಾಡುವ ಮೂಲಕ ಉತ್ತರಿಸಬೇಕಾಗಿರುತ್ತದೆ. ಪ್ರಥಮ ಬಹುಮಾನ 3 ಸಾವಿರ ರೂ. ದ್ವಿತೀಯ ಬಹುಮಾನ 2 ಸಾವಿರ ರೂ, ತೃತೀಯ ಬಹುಮಾನ 1 ಸಾವಿರ ರೂ. 10 ವಿದ್ಯಾರ್ಥಿಗಳಿಗೆ ಸಮಾದಾನಕರ ಬಹುಮಾನ 200 ರೂಗಳನ್ನು ಹಾಗೂ ಭಾಗವಹಿಸಿದವರೆಲ್ಲರಿಗೂ ಪ್ರಮಾಣ ಪತ್ರ ನೀಡಲಾಗುತ್ತದೆ. ಫೆ.13 ರ ವಳಗೆ ಹೆಸರು ನೊಂದಾಯಿಸಿಕೊಳ್ಳುವುದು. ದೂರವಾಣಿ ಸಂಖ್ಯೆ 9844144493 ಕರೆ ಮಾಡಬಹುದು,

## ಜಯಂತಿ ಆಚರಣೆಗೆ ಕರೆ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಫೆ, 10 ರಂದು ಶ್ರೀ ಕಾಯಕ ಶರಣರ ಜಯಂತಿ ಹಾಗೂ ಫೆ. 15ರಂದು ಶ್ರೀ ಸಂತ ಸೇವಾಲಾಲ್ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸಲಹೆ ನೀಡಲಾಯಿತು. ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಜಯಂತ್ ಅವರು ಫೆ. 5ರ ಬುಧವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಕಾಯಕ ಶರಣರ ಜಯಂತಿ ಹಾಗೂ ಶ್ರೀ ಸಂತ ಸೇವಾಲಾಲ್ ಜಯಂತಿ ಆಚರಿಸುವ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಮಾತನಾಡಿದರು. ಶ್ರೀ ಕಾಯಕ ಶರಣರ ಜಯಂತಿ ಹಾಗೂ ಶ್ರೀ ಸಂತ ಸೇವಾಲಾಲ್ ಜಯಂತಿಯನ್ನು ನಗರದ ಕಂದಾಯ ಭವನದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಆಚರಿಸಬೇಕು, ಈ ಎರಡೂ ಜಯಂತಿ ಕಾರ್ಯಕ್ರಮಗಳಲ್ಲಿ ಉಪನ್ಯಾಸ ನೀಡಲು ಉಪನ್ಯಾಸಕರನ್ನು ಆಹ್ವಾನಿಸಬೇಕು, ಕುಡಿಯುವ ನೀರು ಹಾಗೂ ಉಪಹಾರದ ವ್ಯವಸ್ಥೆ ಸೇರಿದಂತೆ ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಅವರು ಸ್ವಾಗತಿಸಿ, ವಂದಿಸಿದರು.

## ಮಾದಕ ವಸ್ತುಗಳು ಮನುಷ್ಯನಿಗೆ ಅಪಾಯಕಾರಿ: ಪದ್ಮರೇಖಾ

**ರಾಮನಗರ:** ಕುತೂಹಲಕ್ಕಾಗಿ ಮಾದಕ ವಸ್ತುಗಳನ್ನು ಬಳಸಿ, ನಂತರದಲ್ಲಿ ಅದರ ದುಶ್ಚಟಗಳಿಗೆ ಬಲಿಯಾಗುವ ಹದಿಹರೆಯದವರ ಸಂಖ್ಯೆ ಇತ್ತೀಚೆಗೆ ಹೆಚ್ಚುತ್ತಿದೆ ಎಂದು ಮನೋವೈದ್ಯಕೀಯ ಸಾಮಾಜಿಕ ಕಾರ್ಯಕರ್ತರಾದ ಪದ್ಮರೇಖಾ ಅವರು ಹೇಳಿದರು.

ಅವರು ಫೆ. 7ರ ಶುಕ್ರವಾರ ಅಂಗರಹಳ್ಳಿಯ ತೊರೆದೊಡ್ಡಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ಆಯೋಜಿಸಲಾಗಿದ್ದ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ಯಾವ ವಸ್ತುಗಳನ್ನು ಮನುಷ್ಯ ಸೇವಿಸಿದಾಗ ನಶೆ ಬರುತ್ತದೆಯೊ ಅದನ್ನು ಮಾದಕ ವಸ್ತು ಎನ್ನುತ್ತೇವೆ ಹಾಗೂ ಮದಕ ವಸ್ತುಗಳನ್ನು ತಮ್ಮ ಜೀವನದಲ್ಲಿ ಪ್ರತಿನಿತ್ಯ ಸೇವಿಸುವವರನ್ನು ಮಾದಕ ವ್ಯಸನಿಯರು ಎನ್ನಲಾಗುತ್ತದೆ, ಬೀಡಿ, ಸಿಗರೇಟ್, ಮದ್ಯಪಾನ, ಗಾಂಜಾ, ಕೊಕೇನ್ ಹಾಗೂ ಇತ್ಯಾದಿಗಳು ಮಾದಕ ವಸ್ತುಗಳಾಗಿರುತ್ತದೆ. ಮಾದಕ ವಸ್ತುಗಳಲ್ಲಿ ಎರಡು ವಿಭಾಗಗಳಿರುತ್ತದೆ ಮೊದಲನೆಯದಾಗಿ ಕಾನೂನು ಬದ್ಧ ಮಾದಕ ವಸ್ತುಗಳು ಎರಡನೆಯದಾಗಿ ಕಾನೂನು ಬದ್ಧವಲ್ಲದ ಮಾದಕ ವಸ್ತುಗಳಾಗಿರುತ್ತವೆ. ಇವುಗಳನ್ನು ಮಾನವರು ಸೇವಿಸುವುದರಿಂದ ದೇಹದ ಎಲ್ಲಾ ಅಂಗಗಳ ಮೇಲೆ ಪರಿಣಾಮ ಬೀರುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ತಾವು ವಾಸಿಸುತ್ತಿರುವ ಅಕ್ಕಪಕ್ಕದ ಮನೆಗಳಲ್ಲಿ ವಾಸಿಸುತ್ತಿರುವವರಿಗೆ ಹಾಗೂ ಮಾದಕ ವಸ್ತುಗಳನ್ನು ಸೇವಿಸುತ್ತಿರುವವರಿಗೆ ಮಾದಕ ವಸ್ತುಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು. ಕಾರ್ಯಕ್ರಮದಲ್ಲಿ ತೊರೆದೊಡ್ಡಿಯ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಜಯಶ್ರೀ, ಶಿಕ್ಷಕಿ ರಮ್ಯ, ಮೇಲ್ವಿಚಾರಕರಾದ ಶೃತಿ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಉಷಾ ಕಲ್ಯಾಣಿ, ಸೇವಾ ಪ್ರತಿನಿಧಿ ಭಾರತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿಬ್ಬಂದಿ ಉಷಾಬಾಯಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮನಸ್ಸನ್ನು ಹತೋಟಿಯಲ್ಲಿಟ್ಟುಕೊಳ್ಳಲು ಸಲಹೆ

**ರಾಮನಗರ:** ಮಾದಕ ವಸ್ತುಗಳ ಸೇವನೆ ಮಾಡುವವರಿಂದ ಹದಿಹರೆಯದ ಯುವಜನರು ಪ್ರೇರಿತರಾಗಬಾರದು, ತಮ್ಮ ಮನಸ್ಸನ್ನು ಹತೋಟಿಯಲ್ಲಿಟ್ಟುಕೊಳ್ಳಬೇಕೆಂದು ಉತ್ತಮ ಶಿಕ್ಷಣ ಪಡೆಯುವತ್ತ ಚಿತ್ತ ಹರಿಸಬೇಕು ಎಂದು ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಸಲಹೆಗಾರರು ಫಯಾಜ್ ಅಹಮದ್ ಅವರು ಹೇಳಿದರು. ಐಜೂರಿನ ಸರ್ಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ಆಯೋಜಿಸಲಾಗಿದ್ದ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಮಾತನಾಡಿದರು. ಡ್ರಗ್ಸ್, ಬೀಡಿ, ಸಿಗರೇಟ್, ಗಾಂಜಾಗಳಂತಹ ಮಾದಕ ವಸ್ತುಗಳ ಸೇವನೆಯಿಂದ ನಮ್ಮ ದೇಹದಲ್ಲಿನ ಆರೋಗ್ಯದ ಜೊತೆಯಲ್ಲಿ ಮಾನಸಿಕ ಆರೋಗ್ಯದ ಸಮಸ್ಯೆಯಿಂದ ಬಳಲುತ್ತೇವೆ. ಈ ಬಗ್ಗೆ ಮಕ್ಕಳು ತಮ್ಮ ಪರಿಸರದಲ್ಲಿ ಜಾಗೃತಿಯನ್ನು ಮೂಡಿಸಬೇಕು ಎಂದರು. ಮಾದಕ ವಸ್ತುಗಳು ಯಾವುದೆಂದು ತಿಳಿಸಿಕೊಟ್ಟ ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಸಮಾಜ ಕಾರ್ಯಕರ್ತರು ಚಂದ್ರಶೇಖರ್ ಅವರು ಅಪರಿಚಿತ ವ್ಯಕ್ತಿಗಳಿಂದ ತಿಂಡಿ ತಿನಿಸುಗಳನ್ನು ತೆಗೆದುಕೊಂಡು ಸೇವಿಸಬಾರದು, ಅಂಗಡಿ ಮುಂಗಟ್ಟುಗಳಲ್ಲಿ ಸಿಗುವ ಆಹಾರ ಪದಾರ್ಥಗಳನ್ನು ಸೇವಿಸದೆ ಮನೆಯಲ್ಲಿ ತಯಾರಿಸಿದ ಆಹಾರ ಸೇವಿಸುವ ಮೂಲಕ ಆರೋಗ್ಯವಂತರಾಗಿರಬೇಕು ಎಂದು ತಿಳಿಸಿದರು. ಈಗಾಗಲೇ ಮಾದಕ ದ್ರವ್ಯಗಳ ಬಳಕೆಯನ್ನು ಮಾಡುತ್ತಿರುವವರು ಯಾರಾದರು ಇದ್ದರೆ ಅಂತಹವರಿಗೆ ಮಾದಕ ವಸ್ತುಗಳ ಬಗ್ಗೆ ಹರಿವು ಮೂಡಿಸಿ ರಾಮನಗರದಲ್ಲಿರುವ ಜಿಲ್ಲಾಸ್ಪತ್ರೆಗೆ ಕರೆ ತರಲು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಐಜೂರು ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರಾದ ಮಮತಾ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಉಷಾ ಕಲ್ಯಾಣಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿಬ್ಬಂದಿ ಉಷಾಬಾಯಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿಕೆ

## ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು

**ಮಂಡ್ಯ:** ಜಿಲ್ಲೆಯು ಪ್ರವಾಸೋದ್ಯಮಕ್ಕೆ ಅತಿ ಸೂಕ್ತವಾಗಿದ್ದು, ಪರಿಸರ ಪ್ರವಾಸಿಗರನ್ನು ಹೆಚ್ಚು ಆಕರ್ಷಿಸುವ ಸ್ಥಳಗಳು ಇದ್ದು ಅವುಗಳನ್ನು ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ತಿಳಿಸಿದರು.

ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಸಿದ್ದ ಜಿಲ್ಲಾ ಪ್ರವಾಸೋದ್ಯಮ ಪರಿಣಿತ ವ್ಯಕ್ತಿಗಳ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸುವ ಸಂಬಂಧ ಈಗಾಗಲೇ ಪ್ರವಾಸೋದ್ಯಮ ಅಭಿರುಚಿ ಮತ್ತು ಪರಿಣಿತರ ಎರಡು ಸಭೆಗಳನ್ನು ಆಯೋಜಿಸಲಾಗಿದ್ದು , ಪ್ರವಾಸೋದ್ಯಮ ಅಭಿರುಚಿ ಮತ್ತು ಪರಿಣಿತರು ಜಿಲ್ಲೆಯಲ್ಲಿ ಅಭಿವೃದ್ಧಿಪಡಿಸಬೇಕಾಗಿರುವ ಪ್ರವಾಸೋದ್ಯಮ ಸ್ಥಳಗಳನ್ನು ಗುರುತಿಸಿ ಅನೇಕ ಸಲಹೆಗಳನ್ನು ನೀಡಿದ್ದು ಅನುದಾನ ಆಧಾರಿತವಾಗಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದು ತಿಳಿಸಿದರು.

ಜಿಲ್ಲೆಯ ಪ್ರವಾಸೋದ್ಯಮದ ಕುರಿತು ಮಾಹಿತಿಯನ್ನು ನೀಡುವ ಪ್ರತ್ಯೇಕ ಜಾಲತಾಣವನ್ನು ಅಭಿವೃದ್ಧಿ ಪಡಿಸಲಾಗಿದ್ದು ಇನ್ನು ಕೆಲವೇ ದಿನಗಳಲ್ಲಿ ಜಾಲತಾಣ ಕಾರ್ಯ ನಿರ್ವಹಿಸಲಿದೆ ಹಾಗೂ ಹೋರ್ಡಿಂಗ್ ಮೂಲಕ ಪ್ರಚಾರ ನೀಡಿ ಪ್ರವಾಸಿಗರನ್ನು ಹೆಚ್ಚು ಆಕರ್ಷಿಸಲು ಕ್ರಮವಹಿಸಲಾಗಿದೆ ಹಾಗೂ ಮಂಡ್ಯ ಜಿಲ್ಲೆಯ ಪ್ರವಾಸೋದ್ಯಮ ಕುರಿತು ಕಿರುಹೊತ್ತಿಗೆಯನ್ನು ಬಿಡುಗಡೆ ಮಾಡಿದೆ, ಕೃಷ್ಣರಾಜ ಸಾಗರ ಡ್ಯಾಂನ ಹಿನ್ನೀರು ಪ್ರದೇಶದಲ್ಲಿ ವಾಟರ್ ಸ್ಪೋರ್ಟ್ಸ್ ಸ್ಥಾಪಿಸಲಾಗುವುದು ಎಂದು ತಿಳಿಸಿದರು.

ಕರ್ನಾಟಕ ಸಂಘದ ಅಧ್ಯಕ್ಷರಾದ ಜಯಪ್ರಕಾಶ್ ರವರು ಮಾತನಾಡಿ, ಜಿಲ್ಲೆಯಲ್ಲಿರುವ ಶಾಸನಗಳನ್ನು ನಗರದ ಸೂಕ್ತ ಸ್ಥಳದಲ್ಲಿ ಸಂರಕ್ಷಿಸಬೇಕು, ಬಸರಾಳು ಮಲ್ಲಿಕಾರ್ಜುನ ಸ್ವಾಮಿ ದೇವಾಲಯ, ಹೋಯ್ಸಳರ ಕಾಲದ ದೇವಸ್ಥಾನಗಳನ್ನು ಸಂರಕ್ಷಣೆ ಮಾಡಬೇಕು , ಮಂಡ್ಯದಲ್ಲಿ ಥೀಮ್ ಪಾರ್ಕ್ ಸ್ಥಾಪಿಸಬೇಕು , ಕನ್ನಡದ ಹೆಸರಾಂತ ಕವಿ ಕೆ.ಎಸ್. ನರಸಿಂಹಸ್ವಾಮಿ ಮತ್ತು ಸ್ವಾತಂತ್ರ್ಯ ಹೋರಾಟಗಾರರಾದ ಮರಿಯಪ್ಪ ನವರ ಮನೆಗಳನ್ನು ವಸ್ತುಸಂಗ್ರಹಾಲಯ ಮಾಡಲು ಕ್ರಮವಹಿಸಬೇಕು ಎಂದು ಸಭೆಗೆ ತಿಳಿಸಿದರು.

ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಶಾಸ್ತ್ರ ವಿಭಾಗದ ವಿಶ್ರಾಂತ ಪ್ರಾಧ್ಯಾಪಕರಾದ ಪ್ರೊ ರಂಗರಾಜು ಮಾತನಾಡಿ ಜಿಲ್ಲೆಯಲ್ಲಿ ವಿದೇಶಗರನ್ನು ಆಕರ್ಷಿಸುವ ಪ್ರವಾಸೋದ್ಯಮ ಸ್ಥಳಗಳಿದ್ದು ಇದರಿಂದ ಸ್ಥಳೀಯರನ್ನು ಆರ್ಥಿಕವಾಗಿ ಸಬಲರಾಗುವ ಅವಕಾಶ ನೀಡಿದಂತಾಗುತ್ತದೆ, ಪಾಂಡವಪುರದ ಬಳಿ ಹಾರೋಹಳ್ಳಿಯಲ್ಲಿ ಫ್ರಾನ್ಸ್ ದೇಶದ 25 ಸಮಾಧಿಗಳಿದ್ದು ಇವುಗಳನ್ನು ಅಭಿವೃದ್ಧಿಪಡಿಸಬೇಕು ಮತ್ತು ಟಿಪ್ಪು ಕಾಲದ ಬ್ರಿಟಿಷರ ಸಮಾಧಿಗಳು ಲಭ್ಯವಿದ್ದು ಅವುಗಳನ್ನು ಸಹ ಅಭಿವೃದ್ಧಿಪಡಿಸಿ ಹೆಚ್ಚು ಪ್ರಚುರಪಡಿಸಿದಲ್ಲಿ ವಿದೇಶಿ ಪ್ರವಾಸಿಗರನ್ನು ಆಕರ್ಷಿಸಬಹುದು, ಭೂವರಹನಾತನ ಶಿಲ್ಪ ಕಲೆ ರಾಷ್ಟ್ರದಲ್ಲಿ ಪ್ರಥಮ ಶಿಲ್ಪಕಲೆಯಾಗಿದೆ , ಕುಂತಿಬೆಟ್ಟದಲ್ಲಿ ರಾಕ್ ಕ್ಲೈಬಿಂಗ್ , ಹೊಸಹೊಳಲು, ಗೋವಿಂದನ ಹಾರ, ಕಿಕ್ಕೇರಿ ಮತ್ತು ಗವಿಹಾಳ ಗಳಲ್ಲಿ ವಾಟರ್ ಸ್ಪೋರ್ಟ್ಸ್ ಸ್ಥಾಪಿಸಬಹುದು. ಜಿಲ್ಲೆಯಲ್ಲಿ 25 ರಿಂದ 30 ಹೋಯ್ಸಳರ ಕಾಲದ ದೇವಸ್ಥಾನಗಳಿದ್ದು ಅವುಗಳನ್ನು ಅಭಿವೃದ್ಧಿ ಪಡಿಸಬೇಕು, ಕರಿಘಟ್ಟ ಮತ್ತು ತೊಣ್ಣುರುಗಳಲ್ಲಿರುವ ಅಲೆಮನೆ ಪ್ರವಾಸೋದ್ಯಮ ಪಟ್ಟಿಗೆ ಸೇರಿಸಬೇಕು ಎಂದು ಸಭೆಗೆ ತಿಳಿಸಿದರು.

ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಶಾಸ್ತ್ರ ವಿಭಾಗದ ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಮಹದೇವು ರವರು ಮಾತನಾಡಿ ಜಿಲ್ಲೆಯಲ್ಲಿರುವ ಪ್ರತಿಯೊಂದು ಪ್ರವಾಸೋದ್ಯಮ ಸ್ಥಳಗಳು ಅದರದೆ ಆದ ಪ್ರಮುಖ್ಯತೆಯನ್ನು ಹೊಂದಿವೆ. ಮೂರು ಸುತ್ತಿನ ಕೋಟೆಯನ್ನು ಸಂರಕ್ಷಿಸಬೇಕು, ಕಾವೇರಿ ನದಿ ಕುಡಿಯುವ ನೀರಿನಲ್ಲಿ ಅಸ್ತಿ ಬೀಡಲಾಗುತ್ತಿದೆ ಇದಕ್ಕೆ ಪರ್ಯಾಯ ಸ್ಥಳವನ್ನು ನೀಡಬೇಕು, ಪಶ್ಚಿಮ ವಾಹಿನಿ ಮತ್ತು ಪಶ್ಚಿಮ ಭಾಗದಲ್ಲಿ ಪಾರ್ಕ್ ನಿರ್ಮಾಣ ಮಾಡಬೇಕು ತೊಣ್ಣೂರು ಬಳಿ ವಾಟರ್ ಸ್ಪೋರ್ಟ್ಸ್ ಸ್ಥಾಪಿಸಬೇಕು ಎಂದು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿರುವ ಶಾಸನಗಳನ್ನು ಸಂರಕ್ಷಿಸಲು ಕ್ರಮವಹಿಸಲಾಗುವುದು, ಕನ್ನಡದ ಕವಿ ಕೆ.ಎಸ್.ನರಸಿಂಹಸ್ವಾಮಿ ಮನೆಯನ್ನು ವಸ್ತು ಸಂಗ್ರಹಾಲಯ ಮಾಡುವ ಕಾರ್ಯ ಪ್ರಗತಿಯಲ್ಲಿದೆ , ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದ ಹಿಂಭಾಗ ಮತ್ತು ತೊಣ್ಣೂರುಗಳಲ್ಲಿ ವಾಟರ್ ಸ್ಪೋರ್ಟ್ಸ್ ಸ್ಥಾಪಿಸಲು ಸ್ಥಳ ಪರಿಶೀಲನೆ ಮಾಡಿ ಕ್ರಮವಹಿಸಲಾಗುವುದು, ಹೊಯ್ಸಳರ ಕಾಲದ ದೇವಸ್ಥಾನಗಳನ್ನು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಪ್ರವಾಸೋದ್ಯಮ ಪಟ್ಟಿಯಲ್ಲಿ ಇಲ್ಲದಿದ್ದರೆ ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ದೇವಸ್ಥಾನಗಳ ಅಭಿವೃದ್ಧಿಗೆ ಕ್ರಮವಹಿಸಲಾಗುವುದು , ಕಾವೇರಿ ನದಿ ಕುಡಿಯುವ ನೀರಿನಲ್ಲಿ ಅಸ್ತಿ ಬಿಡುತ್ತಿರುವ ಬಗ್ಗೆ ಅಸ್ತಿ ಬಿಡಲು ಪರ್ಯಾಯವಾಗಿ ಮಾಡಬೇಕಾದ ಕ್ರಮದ ಬಗ್ಗೆ ಸಮಿತಿ ರಚಿಸಿದ್ದು ಸಮಿತಿ ವರದಿ ನೀಡಿದ್ದು ಸದರಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು. ಜನಪದ ವಸ್ತು ಸಂಗ್ರಹಾಲಯ ಸ್ಥಾಪನೆ ಮಾಡಲು ಮತ್ತು ಜಿಲ್ಲೆಯಲ್ಲಿನ ಪ್ರವಾಸೋದ್ಯಮ ಸ್ಥಳಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಿ ದೇಶ, ವಿದೇಶಿಗರನ್ನು ಆಕರ್ಷಿಸುವಂತಹ ಪ್ರವಾಸಿ ಯೋಜನೆಗಳನ್ನು ರೂಪಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಸಭೆಯಲ್ಲಿ, ಹರವು ದೇವೇಗೌಡ, ಸತ್ಯಭಾಮ, ಸಣ್ಣಸ್ವಾಮಿಗೌಡ , ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ರಾಘವೇಂದ್ರ ಉಪಸ್ಥಿತರಿದ್ದರು.

## ವಿಮಾ ಸೌಲಭ್ಯದ ಕುರಿತು ತರಬೇತಿ

**ಮಂಡ್ಯ:** ತೆಂಗು ಅಭಿವೃದ್ಧಿ ಮಂಡಳಿ, ಬೆಂಗಳೂರು ವತಿಯಿಂದ ತೆಂಗು ಸುರಕ್ಷಾ ವಿಮಾ ಯೋಜನೆಯಡಿ ತೆಂಗಿನ ಮರ ಏರುವವರಿಗೆ ವಿಮ ಸೌಲಭ್ಯ ಕುರಿತುಮಾಹಿತಿ ನೀಡಲು ಫೆಬ್ರುವರಿ 13 ರಂದು ಮದ್ದೂರು ಎಪಿಎಂಸಿ ಆವರಣದಲ್ಲಿ ಬೆಳಗ್ಗೆ 11 ಗಂಟೆಗೆ ಒಂದು ದಿನದ ತರಬೇತಿಯನ್ನು ಆಯೋಜಿಸಲಾಗಿದೆ. ರೈತರು ಈ ತರಬೇತಿಯಲ್ಲಿ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳುವಂತೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸವಿತ ಮಹರ್ಷಿಗಳ ತತ್ವಗಳನ್ನು ಅಳವಡಿಸಿಕೊಳ್ಳಿ

**ಮಂಡ್ಯ:** ಸವಿತ ಮಹರ್ಷಿಗಳ ಮಾರ್ಗದರ್ಶನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಮಂಡ್ಯತಾಲ್ಲುಕು ತಹಶೀಲ್ದಾರ್ ಡಾ.ಶಿವಕುಮಾರ್ ಬಿರಾದಾರ್‌ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತ್, ಮಂಡ್ಯ ಮತ್ತುಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ನಗರದಕರ್ನಾಟಕ ಸಂಘದಲ್ಲಿಆಯೋಜಿಸಲಾಗಿದ್ದ ಶ್ರೀ ಸವಿತ ಮಹರ್ಷಿಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು. ಸವಿತ ಮಹರ್ಷಿಗಳು ಎಲ್ಲರು ಸನ್ಮಾರ್ಗದಲ್ಲಿ ನಡೆಯುವಂತೆ, ಸಮಾಜವನ್ನುತಿದ್ದಿ ಏಳಿಗೆಯ ಕೆಲಸ ಮಾಡಿದ್ದಾರೆಅವರ ಮಾರ್ಗದರ್ಶನಮನುಕುಲಕ್ಕೆ ಆದರ್ಶಎಂದು ತಿಳಿಸಿದರು.

ವಿಶ್ರಾಂತ ಪ್ರಾಂಶುಪಾಲರಾದ ಡಾ.ಶಿವಕುಮಾರ್ ಎಸ್ ಬಿ ರವರಉಪನ್ಯಾಸ ನೀಡಿ, ಸವಿತಾ ಮಹರ್ಷಿಯುರಥಸಪ್ತಮಿಯ ದಿನ ಮಾಘ ಮಾಸದ ಶುಕ್ಲ ಪಕ್ಷದಲ್ಲಿ ಜನಿಸಿದರು.ಧಾರ್ಮಿಕವಾಗಿ ಶಿವನ ಎಡಗಣ್ಣನ್ನುಚಂದ್ರನಿಗೆ ಬಲಗಣ್ಣನ್ನು ಸೂರ್ಯನಿಗೆ ಹೋಲಿಸಲಾಗುತ್ತದೆ. ಶಿವನ ಬಲಗಣ್ಣಿನಿಂದ ಜನಿಸಿದವನೇ ಸವಿತಾ ಮಹರ್ಷಿಎಂದು ಪ್ರತಿತಿಯಿದೆ ಸವಿತಾ ಸಮಾಜದವರನ್ನು ಸೂರ್ಯ ವಂಶಕ್ಕೆ



ಸೇರಿದವರೆಂದು ಹೆಮ್ಮೆಯಿಂದ ಹೇಳಬಹುದು,12ನೇ ಶತಮಾನದಲ್ಲಿಜಗಜ್ಯೋತಿ ಬಸವಣ್ಣನವರಿಗೆಆಶ್ರಯ ನೀಡಿದದೊರೆ ಸವಿತಾ ಸಮಾಜದ ಬಿಜ್ಜಳ ದೊರೆಎಂಬುದು ಹೆಮ್ಮೆಯ ಸಂಗತಿಯಾಗಿದೆಎಂದರು.

ಸವಿತ ಮಹರ್ಷಿಗಳು ಸೂರ್ಯನ ನೇರ ಸಂದರ್ಶಕರು , ಸೂರ್ಯನ ಮಾತನ್ನು ಪ್ರತಿಪಾದಿಸಿದವರು, ಚತುರ್ವೇದಗಳಲ್ಲಿ ಒಂದಾದ ಸಾಮವೇದವನ್ನು ಸವಿತ ಮಹರ್ಷಿಗಳು ಬರೆದಿದ್ದಾರೆ. ಸವಿತಾ ಮಹರ್ಷಿಗಳು ಸಮಾಜಮುಖಿಯಾಗಿ ಬೆಳೆದು ದಾರಿದೀಪವಾಗಿದ್ದಾರೆ. ಇಂತಹ ಮಹಾತ್ಮರ ಜಯಂತಿಗಳನ್ನು ಆಚರಿಸುವ ಮೂಲಕ ಸರಕಾರಇವರ ಆದರ್ಶಗಳ ಹಾದಿಯಲ್ಲಿ ನಡೆಯಲು ನಮಗೆ ಬೆಳಕು ತೋರಿಸಿದೆ. ಸವಿತಾ ಸಮಾಜದ ಬಂಧುಗಳು ಮಹರ್ಷಿಗಳ ಆದರ್ಶಗಳನ್ನು ತಮ್ಮಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು, ಸವಿತಾ ಸಮಾಜ ಪೌರಾಣಿಕ ಮಹತ್ವ ಹೊಂದಿರುವ ಸಮಾಜವಾಗಿದೆಎಂದು ಹೇಳಿದರು. ಕಾರ್ಯಕ್ರಮವನ್ನು ಶ್ರೀಮತಿ ಅನುಪಮ ನಿರೂಪಿಸಿದರು ಹಾಗೂ ಬಸವರಾಜುರವರು ನಾಡಗೀತೆಯನ್ನು ಪ್ರಸ್ತುತಪಡಿಸಿದರು. ಕಾರ್ಯಕ್ರಮದಲ್ಲಿಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಾಹಯಕ ನಿರ್ದೇಶಕಡಾ.ಬಿ.ವಿ. ನಂದೀಶ್, ಸಮುದಾಯದ ಮುಖಂಡರುಗಳಾದ ಕೆಂಪರಾಜು, ಸುರೇಶ್, ಬಸವರಾಜು, ರಾಜಣ್ಣ , ಜಯರಾಂ ಸಂದೇಶ್ ಹಾಗೂ ಇತರರುಕಾರ್ಯಕ್ರಮದ ಲ್ಲಿಉಪಸ್ಥಿತರಿದ್ದರು.

## 21ರವರೆಗೆ ಖಾದಿ ಉತ್ಸವ -2025

**ಮಂಡ್ಯ:** ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಹಾಗೂ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಖಾದಿ ಉತ್ಸವ -2025 ರಾಜ್ಯ ಮಟ್ಟದ ಖಾದಿ ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟವನ್ನು ಫೆಬ್ರವರಿ 7 ರಿಂದ 21 ರವರೆಗೆ ಹಮ್ಮಿಕೊಳ್ಳಲಾಗಿದೆ.

ಫೆಬ್ರವರಿ 7 ರಂದು ಮಧ್ಯಾಹ್ನ 1 ಗಂಟೆಗೆ ಖಾದಿ ಉತ್ಸವ - 2025 ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಮಂಡ್ಯ ವಿಶ್ವವಿದ್ಯಾನಿಲಯ ಆವರಣದಲ್ಲಿ ನಡೆಯಲಿದೆ.

ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ವಸ್ತು ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮದ ಸಚಿವರಾದ ಶರಣಬಸಪ್ಪ ದರ್ಶನಪೂರ ರವರು ಖಾದಿ ಮಳಿಗೆಗಳನ್ನು ಉದ್ಘಾಟಿಸಲಿದ್ದಾರೆ. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮ ಉದ್ಯೋಗ ಮಂಡಳಿ ಅಧ್ಯಕ್ಷ ಮತ್ತು ಮಸ್ಕಿ ವಿಧಾನಸಭಾ ಕ್ಷೇತ್ರ ಶಾಸಕರಾದ ಬಸನಗೌಡ ತುರುವಿಹಾಳ ರವರು ಪ್ರಾತ್ಯಕ್ಷತೆಯ ಉದ್ಘಾಟನೆ ನೆರವೇರಿಸಲಿದ್ದಾರೆ. ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ ಅವರು ಕಾರ್ಯಕ್ರಮದ ಗೌರವ ಉಪಸ್ಥಿತಿ ವಹಿಸಲಿದ್ದು, ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಕಾರ್ಯಕಮದಲ್ಲಿ ಮುಖ್ಯ ಅತಿಥಿಗಳಾಗಿ ವಿಧಾನ ಪರಿ?ತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ಕೆ. ವಿವೇಕಾನಂದ, ವಿಧಾನ ಸಭಾ ಶಾಸಕರುಗಳಾದ ಪಿ.ಎಂ. ನರೇಂದ್ರಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ,ನಗರಸಭೆ ಅಧ್ಯಕ್ಷ ಎಂ ವಿ ಪ್ರಕಾಶ್, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ನಯೀಮ್ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ವಿ.ಅನ್ಬುಕುಮಾರ್, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ರಮಣ್ ದೀಪ್ ಚೌಧರಿ, ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಂದಿನಿ ಕೆ.ಆರ್.ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿ.ಟಿ. ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ, ಖಾದಿ ಮತ್ತು ಗ್ರಾಮೋದ್ಯೋಗ ಆಯೋಗದ ರಾಜ್ಯ ನಿರ್ದೇಶಕ ಬಸವರಾಜ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಟಿ.ದಿನೇಶ್. ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ಅರುಣ್ ಕುಮಾರ್ ಎನ್ ಭಾಗವಹಿಸಲಿದ್ದಾರೆ.

## ಪುಸ್ತಕ ಮೇಳ

**ಚಿಕ್ಕಬಳ್ಳಾಪುರ:** ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನ ಜನತೆಗೆ ಅತಿ ಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತು ಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 03 ರವರೆಗೆ ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳವನ್ನು ಏರ್ಪಡಿಸಲಾಗುವುದು. ಈ ಪುಸ್ತಕ ಮೇಳದಲ್ಲಿ ನಾಡಿನ ಪ್ರಕಾಶಕರು, ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ.1000-00ಗಳ ಭದ್ರತಾ ಠೇವಣಿ ಡಿ.ಡಿ.ಯನ್ನು ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು, ಇವರ ಹೆಸರಿನಲ್ಲಿ ಸಲ್ಲಿಸುವುದು. ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಪ್ರಕಾಶಕರು, ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು, ಅಥವಾ ವಿಧಾನ ಸಭೆ ಸಚಿವಾಲಯದ ವೆಬ್‌ಸೈಟ್‌ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ ಫೆಬ್ರವರಿ 12 ರಂದು ಸಂಜೆ 5 ರೊಳಗೆ ಸಚಿವಾಲಯ, ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ, ಸಚಿವಾಲಯ, ವಿಧಾನಸೌಧ, ಬೆಂಗಳೂರು, ಮೂಲಕ ಸಲ್ಲಿಸಲು ಕೋರಿದೆ. ನಿರ್ಮಿಸಲಾಗುವ 75 ಮಳಿಗೆಗಳನ್ನು ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು-560001 ದೂ:080-22381350 ಅನ್ನು ಸಂಪರ್ಕಿಸಬಹುದು.

## ಸಹಕಾರ ಸಂಘಗಳ 2024-25ನೇ ಸಾಲಿನ ಲೆಕ್ಕಪರಿಶೋಧನೆ

**ಚಿಕ್ಕಬಳ್ಳಾಪುರ:** ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 63 ಮತ್ತು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ನಿಯಮ 29-ಬಿ(8) ರನ್ವಯ ಯಾವುದೇ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 8-ಬಿ(8) ರನ್ವಯ ಯಾವುದೇ ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನಾ ಫರ್ಮ್ ನ್ನು ನೇಮಕ ಮಾಡಿಕೊಂಡ ಬಗ್ಗೆ, ವಾರ್ಷಿಕ ಮಹಾಸಭೆಯ ದಿನಾಂಕದಿಂದ 07 ದಿನಗಳೊಳಗಾಗಿ ಇಲಾಖಾ ಲೆಕ್ಕಪರಿಶೋಧಕರಿಗೆ ಅಥವಾ ಸನ್ನದು ಲೆಕ್ಕಪರಿಶೋಧನಾ ಸಂಸ್ಥೆಗೆ ಮತ್ತು ಸಹಕಾರ ಲೆಕ್ಕಪರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ.ಆದರೆ ಜಿಲ್ಲೆಯ ಬಹುಪಾಲು ಸಹಕಾರ ಸಂಘಗಳ ಮತ್ತು ಸೌಹಾರ್ದ ಸಹಕಾರಿಗಳು ಇಲಾಖಾ ಲೆಕ್ಕಪರಿಶೋಧಕರ/ಸನ್ನದು ಲೆಕ್ಕಪರಿಶೋಧನಾ ಸಂಸ್ಥೆಗೆ ನೇಮಕಾತಿ ಬಗ್ಗೆ ಕಚೇರಿಗೆ ಮಾಹಿತಿ ಸಲ್ಲಿಸಿರುವುದಿಲ್ಲ. ಆದ್ದರಿಂದ ಈವರೆಗೂ ಸದರಿ ಮಾಹಿತಿಯನ್ನು ಸಲ್ಲಿಸದ ಸಹಕಾರ ಸಂಘಗಳು ಪ್ರಕಟಣೆಯಾದ 07 ದಿನಗಳೊಳಗಾಗಿ ವಾರ್ಷಿಕ ಮಹಾಸಭೆಯಲ್ಲಿ ಇಲಾಖಾ ಲೆಕ್ಕಪರಿಶೋಧಕರನ್ನು/ಸನ್ನದು ಲೆಕ್ಕಪರಿಶೋಧನಾ ಸಂಸ್ಥೆಯನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ವಾರ್ಷಿಕ ಮಹಾಸಭೆಯ ನಡಾವಳಿಯೊಂದಿಗೆ ಉಪ ನಿರ್ದೇಶಕರ ಕಚೇರಿ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ, ಮನೆ ನಂ. 192, ನಗರ್ತಪೇಟೆ, 15ನೇ ವಾರ್ಡ್, ಚಿಕ್ಕಬಳ್ಳಾಪುರ-562101. ದೂರವಾಣಿ ಸಂಖ್ಯೆ: 08156-271505ಗೆ ಸಲ್ಲಿಸಬೇಕು. ಇಲ್ಲವಾದಲ್ಲಿ ಸಹಕಾರ ಸಂಘಗಳ ಅಧಿನಿಯಮ 1960 ರ ಕಲಂ 63(2) ರಂತೆ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರಿಗೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಸಂಘದ ಲೆಕ್ಕಪತ್ರಗಳ ಪರಿಶೋಧನೆಯನ್ನು ಮಾಡಲು ಲೆಕ್ಕಪರಿಶೋಧಕರನ್ನು ಇಲಾಖೆಯಿಂದ ನೇಮಕ ಮಾಡಲಾಗುವುದು.

## ಬಿದಿರಾಂಬಿಕಾ ದೇವಿಗೆ ಸುವರ್ಣ ಮುಖಭಾವ ಸಮರ್ಪಣೆ



**ತಿಪಟೂರು:** ತಾಲ್ಲೂಕಿನ ಕಸಬಾ ಹೋಬಳಿಯ ಗೌಡನಕಟ್ಟೆ ಗ್ರಾಮದ ಶ್ರೀ ಬಿದಿರಾಂಬಿಕಾ ದೇವಿಗೆ ಸುವರ್ಣ ಮುಖಭಾವವನ್ನು (ಚಿನ್ನ ಲೇಪಿತ) ಸಮರ್ಪಣೆ ಮಾಡಲಾಯಿತು. ಎಮ್. ಆರ್ ಶಿವರುದ್ರಶಾಸ್ತ್ರಿ ಪೂಜಾ ಕೈಂಕರ್ಯದೊಂದಿಗೆ ಗುಡಿಗೌಡ ಜೆ.ಪಿ ರಾಜು ಮುಖಂಡತ್ವದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ನಡೆಯಿತು.

## ಯೂತ್ ಕಾಂಗ್ರೆಸ್‌ಗೆ ಮಣಿಕಂಠ, ಯೋಗೀಶ್, ನಿದರ್ಶ್ ಆಯ್ಕೆ

**ಹುಳಿಯಾರು:** 2024 ರ ಸೆಪ್ಟೆಂಬರ್ 22 ರಂದು ಯೂತ್ ಕಾಂಗ್ರೆಸ್ ಚುನಾವಣೆಯ ಫಲಿತಾಂಶ ಶುಕ್ರವಾರ ರಾತ್ರಿ ಪ್ರಕಟವಾಗಿದ್ದು ಚಿಕ್ಕನಾಯಕನಹಳ್ಳಿ ಕ್ಷೇತ್ರದ ಯೂತ್ ಕಾಂಗ್ರೆಸ್ ಅಧ್ಯಕ್ಷರಾಗಿ ಹುಳಿಯಾರು ಹೋಬಳಿಯ ನಂದಿಹಳ್ಳಿ ಗ್ರಾಮದ ಮಣಿಕಂಠ, ಚಿಕ್ಕನಾಯಕನಹಳ್ಳಿ ಬ್ಲಾಕ್‌ನ ಯೂತ್ ಕಾಂಗ್ರೆಸ್ ಅದ್ಯಕ್ಷರಾಗಿ ಜೆ.ಸಿ.ಪರದ ನಿದರ್ಶ್ ಸಣ್ಣಗಿರಿ ಹಾಗೂ ಹುಳಿಯಾರು ಬ್ಲಾಕ್‌ನ ಯೂತ್ ಕಾಂಗ್ರೆಸ್ ಅಧ್ಯಕ್ಷರಾಗಿ ಹುಳಿಯಾರಿನ ಎಚ್.ಆರ್.ಯೋಗೀಶ್ ಆಯ್ಕೆಯಾಗಿದ್ದಾರೆ. ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಒಟ್ಟು 3045 ಯೂತ್ ಕಾಂಗ್ರೆಸ್ ಮತದಾರರಿದ್ದು 593 ಮತಗಳು ತಿರಸ್ಕೃತವಾಗಿದ್ದು 628 ಮತಗಳನ್ನು ಹೋಲ್ಟ್ ಮಾಡಲಾಗಿದ್ದು 1824 ಮತಗಳು ಸ್ವೀಕೃತವಾಗಿವೆ. ಮಣಿಕಂಠ 1625 ಮತಗಳನ್ನು, ನಿದರ್ಶ್ ಸಣ್ಣಗಿರಿ 710 ಮತಗಳನ್ನು, ಎಚ್.ಆರ್.ಯೋಗೀಶ್ 773 ಮತಗಳನ್ನು ಪಡೆದಿದ್ದಾರೆ.

# ಪ್ರಾಥಮಿಕ ಕೃಷಿ ಸಹಕಾರ ಸಂಘಕ್ಕೆ ಆಯ್ಕೆ



**ಹುಳಿಯಾರು:** ಹುಳಿಯಾರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಮುಂದಿನ ಐದು ವರ್ಷಗಳ ಅವಧಿಗೆ ಆಡಳಿತ ಮಂಡಳಿಗೆ 12 ಮಂದಿ ನಿರ್ದೇಶಕರುಗಳನ್ನು ಚುನಾವಣೆ ಮೂಲಕ ಆಯ್ಕೆ ಮಾಡಲಾಯಿತು.

ಸಾಮಾನ್ಯ ಕ್ಷೇತ್ರದಿಂದ ಟಿ.ಜೆ.ಜಗದೀಶ್, ಎಸ್.ರೇವಣ್ಣ, ಎಚ್.ಎ.ಕಿರಣ್‌ಕುಮಾರ್, ಬಿ.ಪರಮೇಶ್, ಟಿ.ಎಸ್.ದಯಾನಂದ, ಮಹಿಳಾ ಮೀಸಲು ಕ್ಷೇತ್ರದಿಂದ ಎನ್.ಜಿ.ಮಂಜುಳಾ, ಕೆಂಚಮ್ಮ, ಹಿಂದುಳಿದ ವರ್ಗ ಬಿ ಕ್ಷೇತ್ರದಿಂದ ಎಂ.ಅಶೋಕ್, ಹಿಂದುಳಿದ ವಗ ಎ ಕ್ಷೇತ್ರದಿಂದ ಎಸ್.ಪುಟ್ಟರಾಜು, ಪರಿಶಿಷ್ಟ ಪಂಗಡ ಕ್ಷೇತ್ರದಿಂದ ಪಿ.ಶಿವಣ್ಣ, ಪರಿಶಿಷ್ಟ ಜಾತಿ ಕ್ಷೇತ್ರದಿಂದ ಕರಿಯಾನಾಯ್ಕ, ಸಾಲಗಾರಲ್ಲದ ಕ್ಷೇತ್ರದಿಂದ ಎಚ್.ಎನ್.ಕಿರಣ್‌ಕುಮಾರ್ ಆಯ್ಕೆಯಾಗಿದ್ದಾರೆ.

ಸಾಲಗಾರರ ಕ್ಷೇತ್ರದ ಪರಿಶಿಷ್ಟ ಪಂಗಡಕ್ಕೆ ದಿವಾಕರ, ಎಚ್ .ಡಿ.ದುರ್ಗರಾಜು, ಪಿ.ಶಿವಣ್ಣ ಸ್ಪರ್ಧಿಸಿದ್ದರು. ಈ ಮೂವರಿಗೆ 178 ಸಮಾನ ಮತಗಳು ಲಭಿಸಿದ್ದವು. ಲಾಟರಿ ಮೂಲಕ ವಿಜೇತರನ್ನು ಆಯ್ಕೆ ಮಾಡಲಾಗಿ ಪಿ.ಶಿವಣ್ಣ ಅದೃಷ್ಟಶಾಲಿಯಾದರು. ಎಚ್. ಎಸ್.ಪುಟ್ಟರಾಜು 375 ಮತಗಳನ್ನು ಪಡೆದು ಹೆಚ್ಚು ಮತಗಳನ್ನು ಪಡೆಯವರ ಪಟ್ಟಿಯಲ್ಲಿ ಮೊದಲಸ್ಥಾನ, ಎನ್.ಜಿ.ಮಂಜುಳಾ 329 ಮತಗಳನ್ನು ಪಡೆದು ಎರಡನೇ ಸ್ಥಾನ, ಟಿ.ಜಿ.ಜಗದೀಶ್ 276 ಮತಗಳನ್ನು ಪಡೆದು ಮೂರನೇ ಸ್ಥಾನದಲ್ಲಿದ್ದಾರೆ.

ಚುನಾವಣಾ ಅಧಿಕಾರಿ ಶ್ರೀನಿವಾಸ್, ಹುಳಿಯಾರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಸಿಇಒ ಶಿವಣ್ಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಧರ್ಮಸ್ಥಳ ಸಂಸ್ಥೆಯಿಂದ ಹೊಲಿಗೆ ತರಬೇತಿ

**ಹುಳಿಯಾರು:** ಹುಳಿಯಾರು ವಲಯದ ವಿಜಯನಗರ ಕಾರ್ಯಕ್ಷೇತ್ರದ ವಿಘ್ನೇಶ್ವರ ಜ್ಞಾನ ವಿಕಾಸ ಕೇಂದ್ರದಲ್ಲಿ ಮಾತೃಶ್ರೀ ಹೇಮಾವತಿ ಅಮ್ಮನವರ ಕನಸಿನ ಕೂಸದ ಜ್ಞಾನ ವಿಕಾಸ ಕಾರ್ಯಕ್ರಮ ಅಡಿಯಲ್ಲಿ ಹೊಲಿಗೆ ತರಬೇತಿ ಕಾರ್ಯಕ್ರಮದ ಸಮಾರೋಪ ಕಾರ್ಯಕ್ರಮ ಶನಿವಾರ ನಡೆಯಿತು.ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿಗಳಾದ ರಾಮಚಂದ್ರ, ಮಾತನಾಡಿ ಈ ಕಾರ್ಯಕ್ರಮದಲ್ಲಿ 3 ತಿಂಗಳು ಉಚಿತವಾಗಿ ತರಬೇತಿ ನೀಡಲಾಗಿದೆ ಮಹಿಳೆಯರು ಸ್ವಾವಲಂಬನೆಯಿಂದ ಸ್ವಉದ್ಯೋಗ ಮಾಡಲು ಹೊಲಿಗೆ ತರಬೇತಿ ಉತ್ತಮ ಕಾರ್ಯಕ್ರಮ. ಪ್ರತಿಯೊಬ್ಬ ಮಹಿಳೆ ತನ್ನದೇ ಆದ ಕೌಶಲ್ಯವನ್ನು ಹೊಂದಿರುತ್ತಾರೆ. ಕೆಲ ಮಹಿಳೆಯರು ಅದನ್ನು ಜೀವನದ ಆಧಾರವಾಗಿ ಮಾಡಿಕೊಂಡಿರುತ್ತಾರೆ ಎಂದು ಮಾಹಿತಿ ನೀಡಿದರು. ಮಹಿಳೆಯರ ಬದುಕನ್ನು ಬೆಳಗಿಸುವ ವಿಶೇಷ ಯೋಜನೆಯೇ ಜ್ಞಾನ ವಿಕಾಸ ಕಾರ್ಯಕ್ರಮ ಮಹಿಳೆಯರು ಸಾಮಾಜಿಕವಾಗಿ ಆರ್ಥಿಕವಾಗಿ ಶೈಕ್ಷಣಿಕವಾಗಿ ಅಭಿರುದ್ದಿ ಹೊಂದಿದಾಗ ಮಾತ್ರ ಮಹಿಳೆಯರು ಸಮಾಜದ ಮುಖ್ಯ ವಾಹಿನಿಗೆ ಬರಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಮಹಿಳೆಯರ ಸರ್ವತೋಮುಖ ಅಭಿರುದ್ದಿಯಲ್ಲಿ ಧರ್ಮಸ್ಥಳ ಗ್ರಾಮಭಿರುದ್ಧಿ ಯೋಜನೆ ಶ್ರಮ. ಮಹಿಳೆಯರಿಗೆ ಸ್ವ ಉದ್ಯೋಗಕ್ಕೆ ಅವಕಾಶಗಳನ್ನು ಹೇಗೆ ಬಳಸಿಕೊಳ್ಳಬೇಕು ಹಾಗೂ ಮಹಿಳೆ ತರಬೇತಿಗಳನ್ನು ಒದಗಿಸಿ ಕೊಳ್ಳುವ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ತರಬೇತಿ ಪಡೆದ 20 ಸದಸ್ಯರು, ತರಬೇತುದಾರರಾದ ನಾಗವೇಣಿ, ವಲಯದ ಮೇಲ್ವಿಚಾರಕರಾದ ಚೈತ್ರ, ಜ್ಞಾನ ವಿಕಾಸ ಸಮನ್ವಯಧಿಕಾರಿ ಸುನಿತಾ, ಸೇವಾಪ್ರತಿನಿಧಿ ವಿಜಯ, ವಿಎಲ್‌ಇ ಪಂಕಜ ಹಾಜರಿದ್ದರು.



# ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆ ಈಡೇರಿಕೆಗಾಗಿ ಆಗ್ರಹಿಸಿ ಮುಷ್ಕರ



**ಆನೇಕಲ್:** ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆ ಗಳು ಮತ್ತು ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಆದೇಶದ ಮೇರೆಗೆ ಜಿಲ್ಲೆಯಲ್ಲೂ ಫೆ. 10ರಿಂದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಅಧ್ಯಕ್ಷ ಎಸ್.ಎ ಶ್ರೀನಿವಾಸ್ ತಿಳಿಸಿದ್ದಾರೆ.

ಪಟ್ಟಣದ ತಾಲೂಕು ಕಚೇರಿಯಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸುವ ಬಗ್ಗೆ ತಹಶೀಲ್ದಾರ್ ರವರ ಪರವಾಗಿ ಶಿರಸ್ತೇದಾರ್ ಚಂದ್ರಶೇಖರ್ ರವರಿಗೆ ಮನವಿ ಸಲ್ಲಿಸಿ ಮಾತನಾಡಿದರು

2024ರ ಸೆ. 26ರಿಂದ ಅ. 3ರ ವರೆಗೆ ರಾಜ್ಯಾದ್ಯಂತ ಹಮ್ಮಿಕೊಂಡಿದ್ದ ಗ್ರಾಮ ಆಡಳಿತ ಮತ್ತು ಅಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರದ ಸಂದರ್ಭದಲ್ಲಿ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದರಿಂದ ಮುಷ್ಕರ ಹಿಂಪ ಡೆಯಲಾಗಿತ್ತು. ಆದರೆ, ಈವರೆಗೂ ಭರವಸೆ ಈಡೇರಿಸದ ಕಾರಣ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರವನ್ನು ಹಮ್ಮಿಕೊಳ್ಳಲಾಗಿದೆ. ಗ್ರಾಮ ಆಡಳಿತ ಅಧಿಕಾರಿಗಳ ಪ್ರಮುಖ ಬೇಡಿಕೆಗಳಾದ ರಾಜ್ಯಾದ್ಯಂತ ಆಧಾರ ಸೀಡಿಂಗ್ ಪ್ರಕ್ರಿಯೆಯಲ್ಲಿ ಪತ್ತೆಯಾಗಿರುವ 51.5 ಲಕ್ಷ ಮೃತ ಖಾತೆದಾರರ ಪಹಣಿ ದಾಖಲೆ ಅಭಿಯಾನ ಮಾದರಿಯಲ್ಲಿ ವಾರಸುದಾರರ ಹೆಸರುಗಳಿಗೆ ಪೌತಿ ಖಾತೆ ದಾಖಲಿಸುವಂತೆ ಇ ಪೌತಿ ಖಾತಾ ಆಂದೋಲನ ಕೈಬಿಡಬೇಕು. ಚಿಕ್ಕಮಗಳೂರು ಜಿಲ್ಲೆಯಲ್ಲಿ 30 ಗ್ರಾಮ ಆಡಳಿತ ಅಧಿಕಾರಿಗಳ ವಾರ್ಷಿಕ ವೇತನ ಬಡ್ತಿಯನ್ನು ತಡೆದು ನೈಸರ್ಗಿಕ ನ್ಯಾಯ ತತ್ವಗಳನ್ನು ಹಾಗೂ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಹೊರಡಿಸಿರುವ ದಂಡನಾ ಆದೇಶವನ್ನು ಕೂಡಲೇ ಹಿಂಪಡೆಯಬೇಕು. ಅಂತರ್ ಜಿಲ್ಲಾ ವರ್ಗಾವಣೆಯ ಕೆಸಿಎಸ್‌ಆರ್ ನಿಯಮ 16ಎ ರ ಉಪಖಂಡ(2)ನ್ನು ಮರುಸ್ಥಾಪಿಸುವ ಬಗ್ಗೆ ಅಥವಾ ಇತರೆ ಎಲ್ಲಾ ಇಲಾಖೆಗಳಲ್ಲಿರುವಂತೆ ಕಂದಾಯ ಇಲಾಖೆಯಲ್ಲಿ ವರ್ಗಾವಣೆಗಾಗಿ ವಿಶೇಷ ಮಾರ್ಗಸೂಚಿ ರಚಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತ ಕಚೇರಿ, ಗುಣಮಟ್ಟದ ಟೇಬಲ್, ಖುರ್ಚಿ, ಅಲ್ಮೇರಾ, ಮೊಬೈಲ್, ಲ್ಯಾಪ್ಟಾಪ್, ಪ್ರಿಂಟರ್ ಹಾಗೂ ಸ್ಕ್ಯಾನರ್ಗಳನ್ನು ಒದಗಿಸಬೇಕು.ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಿ ಆದೇಶ ನೀಡಬೇಕು.

ಕಂದಾಯ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಎಲ್ಲಾ ವೃಂದಗಳನ್ನು ಒಳಗೊಂಡಂತೆ ನೀಡುತ್ತಿರುವ ಅನುಕಂಪದ ನೇಮಕಾತಿಯ ಹುದ್ದೆಯ ವೃಂದ ಹಾಗೂ ನೇಮಕಾತಿ ತಿದ್ದುಪಡಿ ಮಾಡಬೇಕು. ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಜೀವಹಾನಿ ಸಂಭವಿಸಿದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ಮಂಜೂರು ಮಾಬೇಕು. ಪ್ರಯಾಣ ಭತ್ಯೆಯನ್ನು 500ರಿಂದ 5000 ರೂ. ಹೆಚ್ಚುವರಿ ಮಾಡಬೇಕು. ಬೆಳೆ ಸಮೀಕ್ಷೆ, ಬೆಳೆ ಹಾನಿ ಪರಿಹಾರದ ಕೆಲಸವನ್ನು ಕೃಷಿ, ತೋಟಗಾರಿಕೆ ಇಲಾಖೆಗೆ ನಿರ್ವಹಿಸುವಂತೆ ಆದೇಶಿಸಬೇಕು. ಮ್ಯೂಟೇಶನ್ ಅವಧಿ ದಿನವನ್ನು ವಿಸ್ತರಿಸಬೇಕು.

ಪ್ರೋಟೋಕಾಲ್ ಕೆಲಸದಿಂದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೈಬಿಡಬೇಕು. ಜಾಬ್ ಚಾರ್ಟ್ ನಿಗದಿಪಡಿಸಬೇಕು. ದಫರ್ ಹಾಗೂ ಜಮಾಬಂದಿಯನ್ನು ರದ್ದುಪಡಿಸ ಬೇಕು. ಹಾಗೂ ರಾಜ್ಯದ ಗ್ರಾಮ ಸಹಾಯಕರಿಗೆ ಸೇವಾಭದ್ರತೆಯನ್ನು ಒದಗಿಸುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಆನೇಕಲ್ ತಾಲ್ಲೂಕು ಘಟಕದ ಉಪಾಧ್ಯಕ್ಷ ಮಹಾಂತೇಶ್, ಪ್ರಧಾನ ಕಾರ್ಯದರ್ಶಿ ಚಂದ್ರಪ್ಪ ಮೈಂದೂರು, ಸಂಘಟನ ಕಾರ್ಯದರ್ಶಿ ಶ್ರೀನಿವಾಸ್ ಪಧಾಧಿಕಾರಿಗಳಾದ ಶಶಿಧರ್, ಪಲ್ಲವಿ, ದೀಪಕ್ ಸೇರಿದಂತೆ ಪದಾಧಿಕಾರಿಗಳು ಹಾಗೂ ತಾಲ್ಲೂಕಿನ ಎಲ್ಲ ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು

## ದೆಹಲಿಯಲ್ಲಿ ಬಿಜೆಪಿ ಗದ್ದುಗೆ ಕೋಲಾರದಲ್ಲಿ ಜಿಲ್ಲಾ ಬಿಜೆಪಿ ವತಿಯಿಂದ ವಿಜಯೋತ್ಸವ

**ಕೋಲಾರ:** ರಾಷ್ಟ್ರ ರಾಜಧಾನಿ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷವು ಅಭೂತಪೂರ್ವ ಜಯ ಸಾಧಿಸಿದ ಕಾರಣ ಶನಿವಾರ ಬಿಜೆಪಿ ಕಾರ್ಯಕರ್ತರು ನಗರದ ಬಂಗಾರಪೇಟೆ ವೃತ್ತದಲ್ಲಿರುವ ಬಾಬಾಸಾಬ್ ಅಂಬೇಡ್ಕರ್ ರವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ನಂತರ ಜಿಲ್ಲಾ ಬಿಜೆಪಿ ಕಛೇರಿಯ ಮುಂಭಾಗದಲ್ಲಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿ ಪರಸ್ಪರ ಸಿಹಿ ವಿನಿಮಯ ಮಾಡಿಕೊಂಡು ಪಕ್ಷದ ಪರ ಜಯಘೋಷ ಹಾಕಿದರು.

ಈ ಸಂದರ್ಭದಲ್ಲಿ ಬಿಜೆಪಿ ಪಕ್ಷದ ನೂತನ ಜಿಲ್ಲಾ ಅಧ್ಯಕ್ಷ ಓಂಶಕ್ತಿ ಚಲಪತಿ ಮಾತನಾಡಿ ದೇಶದಲ್ಲಿನ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಯೋಜನೆಗಳಿಂದ ಪಕ್ಷ ದೆಹಲಿಯಲ್ಲಿ ದೊಡ್ಡ ಜಯ ಸಾಧಿಸಿದೆ .ಇದು ಪಕ್ಷದ ಕಾರ್ಯಕ್ರಮಗಳಿಗೆ ಸಿಕ್ಕ ಗೆಲುವು .ಇದರಿಂದ ಕಾರ್ಯಕರ್ತರಲ್ಲಿ ಹುಮ್ಮಸ್ಸು ಹೆಚ್ಚಾಗಿದ್ದು ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿಯೂ ಸಹ ಪಕ್ಷವು ಅಧಿಕಾರಕ್ಕೆ ಬರುತ್ತದೆ .ನಮ್ಮಲ್ಲಿನ ನಾಯಕರ ಮತ್ತು ಕಾರ್ಯಕರ್ತರ ಕುಂದುಕೊರತೆಗಳನ್ನು ನಿವಾರಿಸಿಕೊಂಡು ಪಕ್ಷವು ಬಲಿಷ್ಠವಾಗುತ್ತದೆ ಎಂದರು.

ಕೋಲಾರ ಜಿಲ್ಲೆಯಲ್ಲಿ ಸಹಾ ಆರು ಕ್ಷೇತ್ರಗಳ ಪೈಕಿ ನಾಲ್ಕು ಸ್ಥಾನವನ್ನು ಗೆಲ್ಲುವಲ್ಲಿ ಶ್ರಮ ವಹಿಸಲಾಗುತ್ತದೆ, ಪಕ್ಷದಲ್ಲಿ ಏನೇ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತಂದರೆ ಬಗೆಹರಿಸಲಾಗುವುದು. ಪಕ್ಷದಲ್ಲಿ ಸಾಮಾನ್ಯ ಕಾರ್ಯಕರ್ತನನ್ನು ಗುರುತಿಸಿ ಜವಾಬ್ದಾರಿ ನೀಡಿದ್ದಾರೆ .ಕಾರ್ಯಕರ್ತನ ಸ್ಥಾನ ಶಾಶ್ವತವಾಗಿರುತ್ತದೆ. ನಾನು ಜಿಲ್ಲಾಧ್ಯಕ್ಷನಾದರೂ ನಾನು ಒಬ್ಬ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ. ದೇಶದಲ್ಲಿ 18 ಕೋಟಿ ಸದಸ್ಯತ್ವ ಪಡೆದು ಹೆಚ್ಚು ರಾಜ್ಯಗಳಲ್ಲಿ ಆಡಳಿತ ನಡೆಸುತ್ತಿರುವ ಏಕೈಕ ಪಕ್ಷ ಬಿಜೆಪಿಯಾಗಿದ್ದು ಸಕ್ರಿಯವಾಗಿ ನಾವೆಲ್ಲ ಒಗ್ಗಟ್ಟಾಗಿ ಪಕ್ಷ ಕಟ್ಟುವತ್ತ ದುಡಿಯೋಣ ಎಂದರು. ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಎಸ್.ಬಿ ಮುನಿವೆಂಕಟಪ್ಪ, ಬಿ.ವಿ ಮಹೇಶ್, ಜಿಲ್ಲಾ ಉಪಾಧ್ಯಕ್ಷರಾದ ವಿಜಯಕುಮಾರ್, ಹೊಸರಾಯಪ್ಪ, ನಗರ ಘಟಕದ ಅಧ್ಯಕ್ಷ ಸಾ.ಮಾ ಬಾಬು, ಎಸ್ಸಿ ಘಟಕದ ರಾಜ್ಯ ಕಾರ್ಯದರ್ಶಿ ಆರ್.ಎನ್ ಹನುಮಂತಪ್ಪ, ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಅರುಣಮ್ಮ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯೆ ಮಮತಮ್ಮ ಹಿರಿಯ ಮುಖಂಡರಾದ ಜಗದೀಶ್ವಾಚಾರಿ, ಸುರೇಶ್, ಗಾಂಧಿನಗರ ವೆಂಕಟೇಶ್, ಅಲ್ಪಸಂಖ್ಯಾತರ ಘಟಕದ ಅಕ್ಮಲ್ ಪಾಷ, ರಾಜೇಶ್, ನಟರಾಜ್, ನಾಗೇಂದ್ರ, ಹಾರೋಹಳ್ಳಿ ನಾರಾಯಣಸ್ವಾಮಿ ಪದ್ಮಮ್ಮ ರಾಮಚಂದ್ರ, ಮುಂತಾದವರು ಇದ್ದು ವಿಜಯೋತ್ಸವದ ನಂತರ ನಗರದ ಬಂಗಾರಪೇಟೆ ವೃತ್ತದಲ್ಲಿನ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು,

# ಜಿಲ್ಲಾ ಮಟ್ಟದ ಸಿರಿಧಾನ್ಯ ಮೇಳ ಹಾಗೂ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮೇಳ ಹಾಗೂ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವನ್ನು ಫೆಬ್ರವರಿ 10 ರಂದು ಬೆಳಿಗ್ಗೆ 10:30 ಗಂಟೆಗೆ ಬಾಗೇಪಲ್ಲಿ ಸರ್ಕಾರಿ ಜೂನಿಯರ್ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಉಪಸ್ಥಿತಿಯನ್ನು ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ, ತೋಟಗಾರಿಕೆ, ಗಣಿ ಮತ್ತು ಭೂ ವಿಜ್ಞಾನ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ರವರು ವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಾಗೇಪಲ್ಲಿ ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ ಅವರು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ. ಮಲ್ಲೇಶ್ ಬಾಬು, ಶಾಸಕರಾದ ಪಿ.ಇ.ಪ್ರದೀಪ್ ಈಶ್ವರ್, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ಚಿದಾನಂದ ಎಂ. ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ್, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಚಿಕ್ಕಬಳ್ಳಾಪುರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎನ್. ರಮೇಶ್, ಪುರಸಭೆ ಅಧ್ಯಕ್ಷ ಎ. ಶ್ರೀನಿವಾಸ್ ರವರು ಭಾಗವಹಿಸಲಿದ್ದಾರೆ. ಅತಿಥಿಗಳಾಗಿ ಕೃಷಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಜೆ. ರವಿಶಂಕರ್, ಸರ್ಕಾರದ ಕಾರ್ಯದರ್ಶಿಗಳು ಮೂಲಭೂತ ಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಶಮ್ಲಾ ಇಕ್ಬಾಲ್, ಕೃಷಿ ಇಲಾಖೆ ಆಯುಕ್ತರಾದ ವೈ.ಎಸ್.ಪಾಟೀಲ್, ಜಲಾನಯನ ಅಭಿವೃದ್ಧಿ ಇಲಾಖೆಯ ಆಯುಕ್ತರಾದ ಡಾ. ಮಹೇಶ್ ಬಿ. ಶಿರೂರು, ತೋಟಗಾರಿಕೆ ನಿರ್ದೇಶಕ ಡಾ. ಜಿ.ಟಿ. ಪುತ್ರ, ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕ ಮೊಹಮ್ಮದ ಪರವೇಜ ಬಂಥನಾಳ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಎಂ.ಆರ್. ಶಿವಣ್ಣ, ಬಾಗೇಪಲ್ಲಿ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷ ತಿಮ್ಮಂಪಲ್ಲಿ ಚೌಡರೆಡ್ಡಿ ರವರು ಭಾಗವಹಿಸಲಿದ್ದಾರೆ. ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಸರ್ಕಾರಿ ನೌಕರರ ಸಂಘ ಹಾಗೂ ಎಲ್ಲಾ ಕೃಷಿಕ ಸಮಾಜದ ಪದಾಧಿಕಾರಿಗಳು, ಎಲ್ಲಾ ರೈತ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಮಸ್ತ ನಾಗರಿಕರು ಭಾಗವಹಿಸಲಿದ್ದಾರೆ.





ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವತಿಯಿಂದ ಬೆಂಗಳೂರಿನ ಎಂ.ಜಿ.ರಸ್ತೆಯ ಆರ್‌ಎಸ್‌ಎ ಕ್ರಿಕೆಟ್ ಮೈದಾನದಲ್ಲಿ ಅಖಿಲ ಭಾರತ ಪೊಲೀಸ್ ವಲಯ ಟಿ20 ಕ್ರಿಕೆಟ್ ಟೂರ್ನಮೆಂಟ್ -2025 ನ್ನು ಕರ್ನಾಟಕ ರಾಜ್ಯದ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾನಿರ್ದೇಶಕರು, ಗೃಹರಕ್ಷಕ ದಳದ ಕಮಾಂಡೆಂಟ್ ಜನರಲ್, ರಾಜ್ಯ ವಿಪತ್ತು ಪ್ರತಿಕ್ರಿಯೆ ಪಡೆಯ ಮಹಾನಿರ್ದೇಶಕರು, ನಾಗರಿಕ ರಕ್ಷಣಾ ಇಲಾಖೆಯ ನಿರ್ದೇಶಕರಾದ ಪ್ರಶಾಂತ್ ಠಾಕೂರ್ ಉದ್ಘಾಟಿಸಿದರು.

# ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ

**ಬೆಂಗಳೂರು:** ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನ ಜನತೆಗೆ ಅತೀ ಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತು ಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರ ವರೆಗೆ ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ನಾಡಿನ ಪ್ರಕಾಶಕರು/ಮಾರಾಟಗರಾರು ನಿಗದಿತ ಅರ್ಜಿ ನಮೂನೆಯನ್ನು ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು, ಇವರಿಂದ ಅಥವಾ ವಿಧಾನ ಸಭೆ ಸಚಿವಾಲಯದ ವೆಬ್‌ಸೈಟ್ ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಮೇಳದಲ್ಲಿ ಭಾಗವಹಿಸುವ ಪ್ರಕಾಶಕರು/ಮಾರಾಟಗಾರರು ಮಳಿಗೆಯೊಂದಕ್ಕೆ ರೂ.1,000/-ಗಳ ಭದ್ರತಾ ಠೇವಣಿ ಡಿ.ಡಿ.ಯನ್ನು ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸುವುದು. ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ 2025 ನೇ ಫೆಬ್ರವರಿ 12 ರಂದು ಸಂಜೆ 5.00 ಗಂಟೆಯೊಳಗೆ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಮೂಲಕ ಸಲ್ಲಿಸಲು ಅವಕಾಶವಿರುತ್ತದೆ ಎಂದು ವಿಧಾನಸಭೆಯ ಕಾರ್ಯದರ್ಶಿಗಳಾದ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ.

# ಕರ್ನಾಟಕ ವೈಭವ 2025 ಚಾಲನೆ: ಉಪ ರಾಷ್ಟ್ರಪತಿಗಳೊಂದಿಗೆ ರಾಜ್ಯಪಾಲರು ಭಾಗಿ



**ಬೆಂಗಳೂರು:** ರಾಣೆಬೆನ್ನೂರಿನ ಪರಿವರ್ತನಾ ಸಂಸ್ಥೆಯು ಕೆಎಲ್‌ಇ ಸಂಸ್ಥೆಯ ರಾಜರಾಜೇಶ್ವರಿ ಮಹಿಳಾ ಮಹಾವಿದ್ಯಾಲಯದ ಆವರಣದಲ್ಲಿ ಕರ್ನಾಟಕ ವೈಭವ ಕಾರ್ಯಕ್ರಮವನ್ನು ಗೌರವಾನ್ವಿತ ಉಪರಾಷ್ಟ್ರಪತಿಗಳಾದ ಜಗದೀಪ್ ಧನಕರ್ ಅವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಉಪರಾಷ್ಟ್ರಪತಿಯವರ ಪತ್ನಿ ಡಾ.ಸುದೇಶ್ ಧನಕರ್, ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಕರ್ನಾಟಕ ಕಲೆ, ಸಾಹಿತ್ಯ, ಸಂಗೀತ ಮತ್ತು ಕರಕುಶಲತೆಯ ನಾಡು. ತನ್ನ ಐತಿಹಾಸಿಕ ಪರಂಪರೆ, ಸಾಂಸ್ಕೃತಿಕ ವೈವಿಧ್ಯತೆ, ನೈಸರ್ಗಿಕ ಸೌಂದರ್ಯ ಮತ್ತು ಆಧುನಿಕ ತಾಂತ್ರಿಕ ಪ್ರಗತಿಯಿಂದಾಗಿ ಇದು ದೇಶದಲ್ಲಿ ವಿಶೇಷ ಸ್ಥಾನವನ್ನು ಹೊಂದಿದೆ. ಈ ರಾಜ್ಯವು ಹಿಂದಿನ ಮತ್ತು ಭವಿಷ್ಯದ ನಡುವಿನ ಸೇತುವೆಯಾಗಿ ನಿಂತಿದೆ. ಇಲ್ಲಿ ಸಂಪ್ರದಾಯ ಮತ್ತು ಆಧುನಿಕತೆಯ ಅದ್ಭುತ ಸಂಗಮವನ್ನು ಕಾಣಬಹುದು. ಕರ್ನಾಟಕದ ಇತಿಹಾಸ ಅತ್ಯಂತ ಪ್ರಾಚೀನ ಮತ್ತು ವೈಭವಯುತವಾಗಿದೆ. ವಿಜಯನಗರ ಸಾಮ್ರಾಜ್ಯದ ಪ್ರಸಿದ್ಧ ನಗರವಾದ ಹಂಪಿ ಇಂದಿಗೂ ತನ್ನ ಐತಿಹಾಸಿಕ ಅವಶೇಷಗಳ ಮೂಲಕ ಗತಕಾಲದ ವೈಭವದ ಒಂದು ನೋಟವನ್ನು ನೀಡುತ್ತದೆ ಎಂದು ಹೇಳಿದರು. ಕರ್ನಾಟಕದ ಸಂಸ್ಕೃತಿ ಅತ್ಯಂತ ಶ್ರೀಮಂತ ಮತ್ತು ವೈವಿಧ್ಯಮಯವಾಗಿದೆ. ಇಲ್ಲಿನ ಕನ್ನಡ ಭಾಷೆ ಮತ್ತು ಸಾಹಿತ್ಯವು ಭಾರತದ ಭಾಷಾ ಮತ್ತು ಸಾಹಿತ್ಯಿಕ ಪರಂಪರೆಯನ್ನು ಶ್ರೀಮಂತಗೊಳಿಸಿದೆ. ಬಸವಣ್ಣ, ಕುಮಾರ ವ್ಯಾಸ, ಪಂಪ, ರಾಷ್ಟ್ರಕವಿ ಕುವೆಂಪು ಅವರಂತಹ ಮಹಾನ್ ಕವಿಗಳು ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆ ಅವಿಸ್ಮರಣೀಯ. ನಮ್ಮ ರಾಜ್ಯವು ಸಾಂಪ್ರದಾಯಿಕ ನೃತ್ಯ ಮತ್ತು ಸಂಗೀತದ ವಿಶೇಷ ಸಂಪ್ರದಾಯವನ್ನು ಹೊಂದಿದೆ. ಪ್ರಸಿದ್ಧ ಜಾನಪದ ರಂಗಭೂಮಿ ಪ್ರಕಾರವಾದ ಯಕ್ಷಗಾನವು ನೃತ್ಯ, ಸಂಗೀತ ಮತ್ತು ಅಭಿನಯದ ಅದ್ಭುತ ಸಂಯೋಜನೆಯನ್ನು ಪ್ರಸ್ತುತಪಡಿಸುತ್ತದೆ ಎಂದು ಶ್ಲಾಘಿಸಿದರು. ಕರ್ನಾಟಕ ಸಂಗೀತವು ಭಾರತದ ಶಾಸ್ತ್ರೀಯ ಸಂಗೀತ ಸಂಪ್ರದಾಯದ ಪ್ರಮುಖ ಭಾಗವಾಗಿದೆ ಮತ್ತು ಪುರಂದರ ದಾಸ್ ಮತ್ತು ತ್ಯಾಗರಾಜ ಭೀಮಸೇನ್ ಜೋಶಿಯಂತಹ ಶ್ರೇಷ್ಠ ಸಂಯೋಜಕರು ಅದನ್ನು ಹೊಸ ಎತ್ತರಕ್ಕೆ ಕೊಂಡೊಯ್ದಿದ್ದಾರೆ. ಹರಿದಾಸ ಮತ್ತು ಶಿವಶರಣರಂತಹ ಭಕ್ತಿ ಪಂಥಗಳು ಇಲ್ಲಿ ಹುಟ್ಟಿ ಬೆಳೆದವು. ತತ್ತ್ವಜ್ಞಾನವನ್ನು ನೀಡಿದ ಮಹಾತ್ಮ ಬಸವೇಶ್ವರರು ಮತ್ತು ಆಚಾರ್ಯ ಮಾಧವ ಇಲ್ಲಿ ಜನಿಸಿದರು. ಆದಿ ಶಂಕರಾಚಾರ್ಯರು ಮತ್ತು ಶ್ರೀ ರಾಮಾನುಜಾಚಾರ್ಯರು ಇಲ್ಲಿಯೇ ಉಳಿದು ಧರ್ಮ ರಕ್ಷಣೆಗಾಗಿ ಪೀಠಗಳನ್ನು ಸ್ಥಾಪಿಸಿದರು. ಎರಡನೇ ಭಾಸ್ಕರಾಚಾರ್ಯರಂತಹ ಗಣಿತಜ್ಞರು, ವಿಶ್ವೇಶ್ವರಯ್ಯನವರಂತಹ ಇಂಜಿನಿಯರ್‌ಗಳು ಮತ್ತು ಜಕಣಾಚಾರಿಯಂತಹ ಅಮರ ಶಿಲ್ಪಿಗಳು ಈ ಭೂಮಿಯ ಘನತೆಯನ್ನು ಹೆಚ್ಚಿಸಿದ್ದಾರೆ ಎಂದು ಹೇಳಿದರು.

ರಾಣಿ ಅಬ್ಬಕ್ಕ, ಓನಕೆ ಓಬವ್ವ, ರಾಣಿ ಚೆನ್ನ ಭೈರಾದೇವಿ, ಮಲ್ಲಮ್ಮ, ರಾಣಿ ಚೆನ್ನಮ್ಮ ಮುಂತಾದ ನಾಯಕಿಯರು ಇದರ ಹೆಮ್ಮೆಯನ್ನು ಹೆಚ್ಚಿಸಿದ್ದಾರೆ. ಕರ್ನಾಟಕದ ಆರ್ಥಿಕತೆಯು ಬಹು ಆಯಾಮಗಳನ್ನು ಹೊಂದಿದೆ. ಕೃಷಿ, ಕೈಗಾರಿಕೆ ಮತ್ತು ಮಾಹಿತಿ ತಂತ್ರಜ್ಞಾನದಲ್ಲಿ ರಾಜ್ಯವು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ತಿಳಿಸಿದರು.

ಕರ್ನಾಟಕ ವೈಭವ ಉತ್ಸವವು ಕರ್ನಾಟಕ ರಾಜ್ಯದ ಶ್ರೀಮಂತ ಸಾಂಸ್ಕೃತಿಕ, ಸಾಹಿತ್ಯಿಕ ಮತ್ತು ಬೌದ್ಧಿಕ ಪರಂಪರೆಗೆ ಮೀಸಲಾದ ಪ್ರಮುಖ ಉತ್ಸವವಾಗಿದೆ. ಈ ಉತ್ಸವದ ಮೂಲಕ, ವಿದ್ವಾಂಸರು, ಬರಹಗಾರರು, ಕಲಾವಿದರು, ವಿದ್ಯಾರ್ಥಿಗಳು ಮತ್ತು ಜ್ಞಾನದ ಬಗ್ಗೆ ಆಸಕ್ತಿ ಹೊಂದಿರುವ ಜನರು ವಿವಿಧ ವಿಷಯಗಳ ಕುರಿತು ಆಳವಾದ ಚರ್ಚೆಗಳಲ್ಲಿ ಭಾಗವಹಿಸಲು ಮತ್ತು ವಿಚಾರಗಳನ್ನು ವಿನಿಮಯ ಮಾಡಿಕೊಳ್ಳಲು ವೇದಿಕೆಯನ್ನು ಕಲ್ಪಿಸಲಾಗಿದೆ. ಈ ಮೂರು ದಿನಗಳ ಉತ್ಸವವು ವಿವಿಧ ಕಾರ್ಯಕ್ರಮಗಳು ಮತ್ತು ಪ್ರಸ್ತುತಿಗಳ ಮೂಲಕ ಕರ್ನಾಟಕದ ಸಂಪ್ರದಾಯಗಳನ್ನು ಅನುಭವಿಸಲು ಅವಕಾಶವನ್ನು ಒದಗಿಸುತ್ತದೆ ಮತ್ತು ಪ್ರಸ್ತುತ ಮತ್ತು ಭವಿಷ್ಯಕ್ಕಾಗಿ ಕ್ರಿಯಾ ಯೋಜನೆಗಳನ್ನು ಮಾಡಲು ಪ್ರೇರೇಪಿಸುತ್ತದೆ ಎಂದು ಅವರು ಹೇಳಿದರು.



# ಶಿಕ್ಷಣ, ಸಂಶೋಧನೆಗೆ ಒತ್ತು: ಕರ್ನಾಟಕ-ಲಿವರ್ ಪೂಲ್ ವಿ.ವಿ. ಒಡಂಬಡಿಕೆಗೆ ಅಂಕಿತ

**ಬೆಂಗಳೂರು:** ಶಿಕ್ಷಣ ಹಾಗೂ ಸಂಶೋಧನೆಗೆ ಸಂಬಂಧಿಸಿದಂತೆ ಹೆಚ್ಚಿನ ಸಹಭಾಗಿತ್ವ ಉತ್ತೇಜಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮತ್ತು ಲಿವರ್ ಪೂಲ್ ವಿಶ್ವವಿದ್ಯಾಲಯಗಳು ಮಹತ್ವದ ಒಡಂಬಡಿಕೆಗೆ ಇಂದು ಸಹಿ ಹಾಕಿದವು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಭಾರಿ ಮತ್ತು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹಾಗೂ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಅವರ ಸಮ್ಮುಖದಲ್ಲಿ ಮುಖ್ಯಮಂತ್ರಿಯವರ ಅಧಿಕೃತ ನಿವಾಸ ಕಾವೇರಿಯಲ್ಲಿ ಒಡಂಬಡಿಕೆ ಏರ್ಪಟ್ಟಿತು.

ಬ್ರಿಟಿಷ್ ಡೆಪ್ಯುಟಿ ಹೈಕಮಿಷನ್‌ನ ಬ್ರಿಟಿ? ಕೌನ್ಸಿಲ್ ವಿಭಾಗದ ನಿರ್ದೇಶಕ ಜನಕ ಪುಷ್ಪನಾಥನ್, ಮಿಷನ್‌ನ ಉಪ ಮುಖ್ಯಸ್ಥ ಜೇಮ್ಸ್ ಗೋಡ್ಬರ್, ಲಿವರ್ ಪೂಲ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಟಿಮ್ ಜೋನ್ಸ್, ಮತ್ತು ಸಮ-ಕುಲಪತಿ ಪ್ರೊ. ತಾರಿಕ್ ಅಲಿ ಅವರು ಅಂಕಿತಕ್ಕೆ ಸಹಿ ಹಾಕಿದರು.

ಆವಿಷ್ಕಾರ ಕಾರ್ಯಕ್ರಮಗಳು ಹಾಗೂ ಶಿಕ್ಷಣ ಸಹಕಾರಕ್ಕೆ ಸಂಬಂಧಿಸಿದ ಸಹಭಾಗಿತ್ವವನ್ನು ಸದೃಢಗೊಳಿಸುವ ಜೊತೆಗೆ, ಅದನ್ನು ಉನ್ನತ ಸ್ತರಕ್ಕೆ ಕೊಂಡೊಯ್ಯಲು ಜಂಟಿ ಕಾರ್ಯ ತಂಡ ರಚಿಸುವ ಗುರಿಯನ್ನು ಕೂಡ ಒಡಂಬಡಿಕೆ ಹೊಂದಿದೆ.

ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ, ಉನ್ನತ ಶಿಕ್ಷಣ ಪರಿಷತ್‌ನ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಕೆ.ಜಿ.ಚಂದ್ರಶೇಖರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಂಜೆ ಮುಗಿಲು
ಭಾನುವಾರ
9.2.2025



# ಮಾಜಿ ರಾಜ್ಯಪಾಲ ದಿ.ಬಿ.ರಾಚಯ್ಯ ಅವರ ಪತ್ನಿ ಗೌರಮ್ಮ ಅಂತ್ಯಕ್ರಿಯೆ



**ಚಾಮರಾಜನಗರ:** ಮಾಜಿ ರಾಜ್ಯಪಾಲರಾದ ದಿ.ಬಿ.ರಾಚಯ್ಯ ಅವರ ಪತ್ನಿ ಗೌರಮ್ಮ ಅವರ ಅಂತ್ಯಕ್ರಿಯೆಯು ಚಾಮರಾಜನಗರ ತಾಲೂಕಿನ ಆಲೂರು ಗ್ರಾಮದಲ್ಲಿ ನಡೆಯಿತು.

ಚಾಮರಾಜನಗರ ತಾಲ್ಲೂಕಿನಆಲೂರು ಗ್ರಾಮದಲ್ಲಿರುವ ಬಿ.ರಾಚಯ್ಯ ಅವರ ಸ್ಮಾರಕ ಭವನದ ಚಿರಶಾಂತಿಧಾಮದಲ್ಲಿ ವಿಧಿವಿಧಾನಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಮೈಸೂರಿನ ಅಪೋಲೊ ಆಸ್ಪತ್ರೆಯಲ್ಲಿ ಶುಕ್ರವಾರ ನಿಧನರಾದ ಗೌರಮ್ಮ ಅವರ ಪಾರ್ಥೀವ ಶರೀರವನ್ನು ಶುಕ್ರವಾರ ಸಂಜೆ ಆಲೂರು ಗ್ರಾಮಕ್ಕೆ ತಂದು ಅಂತಿಮ ದರ್ಶನಕ್ಕೆ ಇಡಲಾಗಿತ್ತು. ಶುಕ್ರವಾರ ಸಂಜೆ ಸುತ್ತೂರು ಶ್ರೀ ದೇಶೀಕೇಂದ್ರ ಮಹಾಸ್ವಾಮೀಜಿ ಆಗಮಿಸಿ ಅಂತಿಮ ದರ್ಶನ ಪಡೆದರು. ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎಚ್.ಎಂ.ಗಣೇಶ್ ಪ್ರಸಾದ್, ಅನಿಲ್ ಚಿಕ್ಕಮಾದು, ಡಾ.ಯತೀಂದ್ರ ಸಿದ್ದರಾಮಯ್ಯ, ಡಾ.ತಿಮ್ಮಯ್ಯ, ಮಾಜಿ ಶಾಸಕ ಎಸ್.ಬಾಲರಾಜ್, ಜಿಲ್ಲಾಧಿಕಾರಿ ಶಿಲ್ಪಾನಾಗ್, ಎಸ್ಪಿ ಡಾ.ಬಿ.ಟಿ.ಕವಿತಾ ಅವರು ತೆರಳಿ ಗೌರಮ್ಮ ಅವರ ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದರು.

ಗೌರಮ್ಮ ಅವರ ಪುತ್ರ ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ಅವರು ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿದರು. ಮತ್ತೋರ್ವ ಪುತ್ರ ಎ.ಆರ್.ಬಾಲರಾಜು ಸೇರಿದಂತೆ ಪುತ್ರಿಯರು, ಅಳಿಯಂದಿರು, ಸೊಸೆಯಂದಿರು ಇದ್ದರು.

# ಕುಡಿಯುವ ನೀರಿನ ಪೂರೈಕೆಗೆ ಸೂಕ್ತ ಕ್ರಮ



**ಹನೂರು:** ಪಟ್ಟಣದ 7ನೇ ವಾರ್ಡಿನಲ್ಲಿ ತಲೆದೋರಿದ್ದ ಕುಡಿಯುವ ನೀರಿನ ಸಮಸ್ಯೆಯನ್ನು ಮುಖ್ಯಾಧಿಕಾರಿ ಅಶೋಕ್ ಬಗೆಹರಿಸಿದ್ದಾರೆ. ಹನೂರು ಪಟ್ಟಣದ 7ನೇ ವಾರ್ಡಿನ ಗಾಣಿಗರ ಬೀದಿ, ಆಂಜನೇಯ ಬಡಾವಣೆಗಳಿಗೆ ಸೇತುವೆ ಸಮೀಪದ ಕೊಳವೆಬಾವಿಯಿಂದ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿತ್ತು. ಈ ಕೊಳವೆ ಬಾವಿ ಮೂಲಕವೇ ಹೊಸ ಸೇತುವೆ ನಿರ್ಮಾಣ ಮಾಡಬೇಕಿದ್ದರಿಂದ ಈ ಬೋರ್ ಸಂಪರ್ಕವನ್ನು ಕಡಿತಗೊಳಿಸಲಾಗಿತ್ತು. ಇದರಿಂದ ಕಳೆದ ಒಂದು ವಾರದಿಂದ ಏಳನೇ ವಾರ್ಡಿನ ನಿವಾಸಿಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ತೊಂದರೆಯಾಗಿತ್ತು. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಆಂಜನೇಯ ಸ್ವಾಮಿ ದೇವಸ್ಥಾನದ ಸಮೀಪವಿರುವ ಕೊಳವೆಬಾವಿಗೆ ಹೆಚ್ಚುವರಿ ಪೈಪ್ ಬಿಟ್ಟು ನೀರು ಪೂರೈಕೆ ಮಾಡಲು ಪ್ರಯತ್ನ ಮಾಡಿದ್ದರು. ಆದರೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗಿರಲಿಲ್ಲ. ಈ ನಿಟ್ಟಿನಲ್ಲಿ ಮೈಸೂರು ಮಾರಮ್ಮ ದೇವಸ್ಥಾನದ ಮಹದೇವಸ್ವಾಮಿ ರವರ ಮನೆ ಮುಂಭಾಗದ ಕೊಳವೆಬಾವಿಯಿಂದ ಹೊಸ ಪೈಪ್ ಲೈನ್ ಮಾಡಿ 7ನೇ ವಾರ್ಡಿಗೆ ಕುಡಿಯುವ ನೀರು ಪೂರೈಕೆ ಮಾಡುವ ಮೂಲಕ ಸಮಸ್ಯೆ ಬಗೆಹರಿಸಿದ್ದಾರೆ.

ಈ ವೇಳೆ ಪತ್ರಿಕೆಯೊಂದಿಗೆ ಮಾತನಾಡಿದ ಅವರು ಈಗಾಗಲೇ ಬೇಸಿಗೆ ಪ್ರಾರಂಭವಾಗಿರುವುದರಿಂದ ಪಟ್ಟಣದ 13 ವಾರ್ಡಗಳಿಗೂ ಕುಡಿಯುವ ನೀರಿನ ಪೂರೈಕೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಕಳೆದ ವರ್ಷ ಬೇಸಿಗೆಯ ವೇಳೆ ಹರಳೆ ಸಮೀಪದ ನೀರಿನ ಘಟಕದಲ್ಲಿ ಮೋಟಾರ್ ಸುಟ್ಟು ಹೋಗಿ ಸುಮಾರು ಒಂದು ತಿಂಗಳಿಗೂ ಹೆಚ್ಚು ಕಾಲ ಕಾವೇರಿ ನೀರು ಪೂರೈಕೆ ಆಗಿರಲಿಲ್ಲ ಈ ಹಿನ್ನೆಲೆ ಮುಂಜಾಗ್ರತ ಕ್ರಮವಾಗಿ ಬೇಸಿಗೆ ಹಿನ್ನೆಲೆ ಇರುವ ಕೊಳವೆ ಬಾವಿಗಳನ್ನು ದುರಸ್ತಿಪಡಿಸಿ ನೀರು ಪೂರೈಕೆ ಮಾಡಲಾಗುವುದು ವಾರ್ಡ್ ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದರೆ ತಕ್ಷಣವೇ ಪರಿಹರಿಸಲಾಗುವುದು ಎಂದು ತಿಳಿಸಿದರು.

## ಶಿಲಾರೋಹಣ ತರಬೇತಿ ಶಿಬಿರ

**ರಾಮನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಬೆಂಗಳೂರಿನ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯ ಸಂಯುಕ್ತಾಶ್ರಯದಲ್ಲಿ 2025ರ ಮಾರ್ಚ್ 1 ರಿಂದ 5ರ ವರೆಗೆ ಸಾಹಸ ಕ್ರೀಡೆಯಾದ ಶಿಲಾರೋಹಣ (ಟ್ರಕಿಂಗ್ ಕ್ಯಾಂಪ್) ಅನ್ನು ಬಸವನಪುರದ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಕ್ರೀಡಾ ಅಕಾಡೆಮಿಯಲ್ಲಿ ಆಯೋಜಿಸಲಾಗಿದೆ. ರಾಮನಗರ ಜಿಲ್ಲೆಯ 4 ತಾಲ್ಲೂಕಿನ 15 ರಿಂದ 29 ವರ್ಷ ವಯೋಮಿತಿಯ ಯುವಕ/ಯುವತಿಯರಿಗಾಗಿ (ಒಂದು ತಾಲ್ಲೂಕಿಗೆ ಯುವಕ/ ಯುವತಿಯರನ್ನೊಳಗೊಂಡ 10 ಶಿಬಿರಾರ್ಥಿಗಳಂತೆ ಒಟ್ಟು 40 ಶಿಬಿರಾರ್ಥಿಗಳಿಗೆ ಮಾತ್ರ ಅವಕಾಶ) ಶಿಲಾರೋಹಣ ತರಬೇತಿ ಶಿಬಿರವನ್ನು (ಟ್ರಕ್ಕಿಂಗ್ ಕ್ಯಾಂಪ್) ಏರ್ಪಡಿಸಲಾಗಿದೆ. ಶಿಬಿರಾರ್ಥಿಗಳಿಗೆ ಬಸವನಪುರದ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಕ್ರೀಡಾ ಅಕಾಡೆಮಿ ಕೇಂದ್ರದಲ್ಲಿ ವಾಸ್ತವ್ಯವಿರಲು ಮತ್ತು ಊಟೋಪಹಾರದ ವ್ಯವಸ್ಥೆಯನ್ನು ಮಾಡಲು ಇಲಾಖೆಯಿಂದ ಅವಕಾಶ ಮಾಡಿಕೊಡಲಾಗುವುದು. ತರಬೇತಿ ಶಿಬಿರಕ್ಕೆ ಆಗಮಿಸುವಂತಹ ಶಿಬಿರಾರ್ಥಿಗಳು ಫೆ. 10 ರಿಂದ 25ರ ಸಂಜೆ 5 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಮನಗರ ಜಿಲ್ಲೆ ಇಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಮನಗರ ಜಿಲ್ಲೆ ಖುದ್ದಾಗಿ ಭೇಟಿ ಮೂಲಕ ಅಥವಾ ದೂರವಾಣಿ ಸಂಖ್ಯೆ: 7338149456 ರನ್ನು ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಕಾಯಕ ಶರಣರ ಜಯಂತಿ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಕಾಯಕ ಶರಣರ ಜಯಂತಿ ಕಾರ್ಯಕ್ರಮವನ್ನು ಫೆ. 10ರ ಸೋಮವಾರ ಬೆಳಿಗ್ಗೆ 10.30ಕ್ಕೆ ನಗರದ ಕಂದಾಯ ಭವನದ 3ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ:409ರಲ್ಲಿ ಏರ್ಪಡಿಸಲಾಗಿದೆ. ಶ್ರೀ ಕಾಯಕ ಶರಣರ ಜಯಂತಿ ಕಾರ್ಯಕ್ರಮಕ್ಕೆ ಸಮುದಾಯದ ಮುಖಂಡರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಯಮ ಉಲ್ಲಂಘನೆಯಾದಲ್ಲೀ ಸಂಪರ್ಕಿಸಲು ಕರೆ

**ರಾಮನಗರ:** ಕರ್ನಾಟಕ ಲೇವಾದೇವಿದಾರರ ಅಧಿನಿಯಮ 1961 ಕಲಂ 28(1)ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ ಶೇ. 14 ಹಾಗೂ ಭದ್ರತೆ ಇಲ್ಲದೇ ಇರುವ ಸಾಲಗಳಿಗೆ ಗರಿಷ್ಠ ವಾರ್ಷಿಕ ಶೇ. 16 ರಷ್ಟು ಮಾತ್ರ ವಿಧಿಸಬೇಕಾಗಿರುತ್ತದೆ. ಈ ನಿಯಮ ಉಲ್ಲಂಘನೆಯಾದಲ್ಲಿ ಬೆಂಗಳೂರು ಪ್ರಾಂತದ ಸಹಕಾರ ಸಂಘಗಳ ಜಂಟಿ ನಿಬಂಧಕರು ದೂ.ಸಂಖ್ಯೆ: 9900115462, ರಾಮನಗರ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರು ದೂ.ಸಂಖ್ಯೆ: 9900110306 ಅಥವಾ ರಾಮನಗರ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ದೂ.ಸಂಖ್ಯೆ: 9980661855 ಅನ್ನು ಸಂಪರ್ಕಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡುವಂತೆ ರಾಮನಗರ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಪುಸ್ತಕ ಬಹುಮಾನ ಪ್ರಶಸ್ತಿ

**ಬೆಂಗಳೂರು:** ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯಲ್ಲಿ ನಡೆದ ಪುಸ್ತಕಗಳ ಆಯ್ಕೆ ಸಮಿತಿ ಸಭೆಯಲ್ಲಿ ಕೃತಿಗಳು 2022, 2023 ಹಾಗೂ 2024ನೇ ಸಾಲಿನ ಪುಸ್ತಕ ಬಹುಮಾನ ಪ್ರಶಸ್ತಿಗೆ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ. ಬಹುಮಾನ ಪ್ರಶಸ್ತಿಗೆ ರೂ 25,000. ಪುರಸ್ಕೃತರಿಗೆ ನಗದು, ನೆನಪಿನ ಕಾಣಿಕೆ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಬಹುಮಾನ ಪ್ರಶಸ್ತಿ ವಿತರಣಾ ಸಮಾರಂಭವನ್ನು ಮಾರ್ಚ್ ಮಾಹೆಯಲ್ಲಿ ಏರ್ಪಡಿಸಲಾಗುವುದು ಎಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷರಾದ ಡಾ.ಎ.ಆರ್.ಗೋವಿಂದಸ್ವಾಮಿ ತಿಳಿಸಿದ್ದಾರೆ. 2022ನೇ ಸಾಲಿಗೆ ಕಲಬುರಗಿಯ ಡಾ. ಶ್ರೀದೇವಿ .ಎಲ್ ಅವರ ಕಲಬುರುಗಿ ಜಿಲ್ಲೆಯ ಬಂಜಾರ ಮಹಿಳೆಯರ ಸ್ಥಿತಿ ಗತಿ (ಸಂಶೋಧನೆ), ರಾಮು ಎನ್. ರಾಠೋಡ್ ಮಸ್ಕಿ ಅವರ ಜಾಗೋ ಬಂಜಾರ (ಬಂಜಾರ ಭಾಷೆ ಕವನ ಸಂಕಲನ), ಕಾಂತ ರಾಮಪ್ಪ ಜಾಧವ ಅವರ ಪ್ರೋಮಾಸಾಧ (ಜೀವನ ಚರಿತ್ರೆ) ಪುಸ್ತಕಗಳು ಆಯ್ಕೆಯಾಗಿವೆ. 2023 ನೇ ಸಾಲಿಗೆ ಡಿ. ರಾಮಾನಾಯಕ್ ಅವರ ಮಹಾ ಚಲನೆ (ಸಂಸ್ಕೃತಿ), ಶ್ರೀಮತಿ ಇಂದುಮತಿ ಲಮಾಣಿ ಅವರ ಮಠ (ಕಾದಂಬರಿ), ಉಮೇಶ್ ನಾಯ್ಕ್ ಎನ್ ಹುಳಿಯಾರ್ ಅವರ ಗೋರ್ಬೋಲಿಯ ವೊಜಾಳೊ(ವಿಮರ್ಶೆ) ಪುಸ್ತಕಗಳು ಆಯ್ಕೆಯಾಗಿವೆ.

2024 ನೇ ಸಾಲಿಗೆ ಪ್ರೊ. ಕೃಷ್ಣನಾಯಕ್ ಅವರ ವಲಸೆ ಹಕ್ಕಿಯ ಹಾಡು ( ಆತ್ಮಕತೆ), ಡಾ. ಪರಮೇಶ್ ನಾಯಕ್ ಅವರ ಸೋಸಿಯೋ ಎಕನಾಮಿಕ್ಸ್ ಕಲ್ಚರಲ್ ಅಂಡ್ ಪೊಲಿಟಿಕಲ್ ಡೈಮೆನ್ಸನ್ ಆಫ್ ಬಂಜಾರ (ಸಂಶೋಧನೆ), ಸಥೀಶಾ ಗಟ್ಟಿ ಮಂಡೆಲಾ ಅವರ ಘಣ್ ಊಪರ್ ( ಸೃಜನ ಶೀಲ ಕಾವ್ಯ) ಪುಸ್ತಕಗಳು ಆಯ್ಕೆಯಾಗಿವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಹಿಳಾ ಕೇಂದ್ರಿತ ಗ್ಯಾರಂಟಿಗಳ ಅನುಷ್ಠಾನ ಲಿಂಗಸಮಾನತೆ ಉಪಕ್ರಮಕ್ಕೆ ವಿಶ್ವಸಂಸ್ಥೆ ಅಧ್ಯಕ್ಷ ಫಿಲೆಮನ್ ಯಾಂಗ್ ಶ್ಲಾಘನೆ

# ಶಾಸಕ ಸಿ.ಪುಟ್ಟರಂಗಶೆಟ್ಟಿ ರಾಜೀನಾಮೆಗೆ ಆಗ್ರಹ



**ಚಾಮರಾಜನಗರ:** 2019ರಲ್ಲಿ ಬೆಂಗಳೂರಿನ ವಿಧಾನಸೌಧದಲ್ಲಿ ಅಂದಿನ ಸಚಿವ ಸಿ.ಪುಟ್ಟರಂಗಶೆಟ್ಟಿ ಅವರ ಆಪ್ತ ಸಹಾಯಕ ಮೋಹನ್ ಕುಮಾರ್ ಬಳಿ ಪೊಲೀಸರು ಹಣ ವಶಪಡಿಸಿಕೊಂಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಕೋರ್ಟ್ ಮರು ತನಿಖೆಗೆ ಆದೇಶಿಸಿದೆ. ಆದ್ದರಿಂದ ಸಿ.ಪುಟ್ಟರಂಗಶೆಟ್ಟಿ ಅವರು ಕೂಡಲೇ ತಮ್ಮ ಎಂಎ ಸ್ಐಎಲ್ ಅಧ್ಯಕ್ಷ ಹಾಗೂ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಮುಖಂಡ ಮಾಜಿ ಕಾಡಾ ಅಧ್ಯಕ್ಷ ನಿಜಗುಣರಾಜು ಆಗ್ರಹಿಸಿದರು.

ಚಾಮರಾಜನಗರ ದಲ್ಲಿ ಸುದ್ದಿಘೋಷ್ಟಿಯಲ್ಲಿ ಮಾತನಾಡಿದ ಮಾಜಿ ಕಾಡಾ ಅಧ್ಯಕ್ಷ ನಿಜಗುಣರಾಜು,

2019ರ ಜನವರಿ 4 ರಂದು ವಿಧಾನಸೌಧ ಪೊಲೀಸರು ಮೋಹನ್ ಕುಮಾರ್ ಬಳಿ 27.76 ಲಕ್ಷ ವಶಪಡಿಸಿಕೊಂ ಡಿದ್ದರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಿದರು.

ಹಣ ಸೀಜ್ ಮಾಡಿದ ವೇಳೆ ಸಿ.ಪುಟ್ಟರಂಗಶೆಟ್ಟಿ ಅವರು ಈ ಹಣಕ್ಕೂ ನನಗೂ ಸಂಬಂಧವಿಲ್ಲ ಎಂದು ಹೇಳಿದ್ದರು. ಈ ಪ್ರಕರಣದ ತನಿಖೆ ಸಂಬಂಧ ಲೋಪದೋಷಗಳಿವೆ ಎಂದು ಹೇಳಿ ಲೋಕಾಯುಕ್ತ ನ್ಯಾಯಾಲಯ ಮರು ತನಿಖೆಗೆ ಆದೇಶಿಸಿದೆ ಎಂದರು.ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಅಧಿಕಾರ ದುರ್ಬಳಕೆ ತಪ್ಪಿಸಬೇಕು. ಸಿಎಂ ಸಿದ್ದರಾಮಯ್ಯ ಅವರು ಕೂಡ ಸಿ.ಪುಟ್ಟರಂಗಶೆಟ್ಟಿ ಅವರನ್ನು ಎಂಎಸ್ಐಎಲ್ ಹಾಗೂ ಶಾಸಕರ ಸ್ಥಾನದಿಂದ ವಜಾಗೊಳಿಸಬೇಕು. ಪುಟ್ಟರಂಗಶೆಟ್ಟಿ ಅವರು ಕ್ಷೇತ್ರಕ್ಕೆ ಅನುದಾನ ತರುವಲ್ಲಿ ವಿಫಲರಾಗಿದ್ದು ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತವಾಗಿದೆ ಎಂದು ಹೇಳಿದರು.

ಸಿ.ಪುಟ್ಟರಂಗಶೆಟ್ಟಿ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಮುಖಂಡರಾದ ಸಿ.ಎನ್.ಬಾಲರಾಜ್, ವೇಣುಗೋಪಾಲ್, ಶಿವಣ್ಣ ಇದ್ದರು.

# ಒಳಚರಂಡಿ ಯೋಜನೆ: ಸರ್ವ ಸದಸ್ಯರ ಒಪ್ಪಿಗೆ



**ಹನೂರು:** ಪಟ್ಟಣ ಪಂಚಾಯಿತಿ ವ್ಯಾಪ್ತಿಯ 13 ವಾರ್ಡ್ ಗಳಲ್ಲಿನ ಒಳಚರಂಡಿ ಯೋಜನೆಯ 81 ಕೋಟಿ ಅಂದಾಜು ಪಟ್ಟಿಗೆ ಪಟ್ಟಣ ಪಂಚಾಯಿತಿಯ ಸರ್ವ ಸದಸ್ಯರು ಒಪ್ಪಿಗೆ ಸೂಚಿಸಿದರು.

ನಂತರ ಪಟ್ಟಣ ಪಂಚಾಯಿತಿ ಅಧ್ಯಕ್ಷ ಮುಮ್ತಾಜ್ ಬಾನು ಮಾತನಾಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ನಿವಾಸಿಗಳಿಗೆ ಅನುಕೂಲ ಕಲ್ಪಿಸಿಕೊಡುವ ನಿಟ್ಟಿನಲ್ಲಿ ತುರ್ತು ಸಭೆ ಕರೆಯಲಾಗಿದ್ದು ಮೂರು ವಿಷಯಗಳನ್ನು ತೆಗೆದುಕೊಳ್ಳಲಾಗಿದೆ. ಪ್ರಮುಖವಾಗಿ ಒಳ ಚರಂಡಿ ನಿರ್ಮಾಣ ಮಾಡಲು 81 ಕೋಟಿಗೆ ಅಂದಾಜು ಪಟ್ಟಿ ತಯಾರಿಸಲಾಗಿದೆ. ಒಳಚರಂಡಿ ಕಾಮಗಾರಿ ಪೂರ್ಣಗೊಂಡರೆ ಪಟ್ಟಣದಲ್ಲಿ ಚರಂಡಿ ಸಮಸ್ಯೆಯೇ ಇರುವುದಿಲ್ಲ ಇದರಿಂದ ಪಟ್ಟಣದ ನಾಗರಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸಮಗ್ರ ಅಭಿವೃದ್ಧಿಗೆ ಎಲ್ಲಾ ಸದಸ್ಯರ ಸಹಕಾರವಿದೆ.ಉದ್ದೇಶಿತ ಒಳಚರಂಡಿ ನಿರ್ಮಾಣ ಮಾಡಲು ತಯಾರಿಸಿರುವ ಅಂದಾಜು ಪಟ್ಟಿಗೆ ಸರ್ವ ಸದಸ್ಯರು ಅನುಮೋದನೆ ನೀಡಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಅಶೋಕ್ ಮಾತನಾಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಯುಜಿಡಿ, ನೂತನ ಕಚೇರಿ ನಿರ್ಮಾಣ ಎಲ್ಲಾ ವಾರ್ಡ್ ಗಳಲ್ಲಿಯೂ ಸಿಸಿ ರಸ್ತೆ ನಿರ್ಮಾಣ, ವಿನೂತನ ಮಾದರಿಯ ಬೀದಿ ದೀಪ ಹಾಗೂ ಕುಡಿಯುವ ನೀರಿಗೆ 265 ಕೋಟಿಗಳ ಕ್ರಿಯಾಯೋಜನೆ ತಯಾರು ಮಾಡಿ ಜಿಲ್ಲಾಧಿಕಾರಿಗಳಿಗೆ ಕಳುಹಿಸಿ ಕೊಡಲಾಗಿದೆ. ಕ್ಯಾಬಿನೆಟ್ ಸಭೆಯಲ್ಲಿ ಅನುಮತಿ ದೊರೆತು ಅನುದಾನ ಬಿಡುಗಡೆಯಾದರೆ ಪಟ್ಟಣದ ಹದಿಮೂರು ವಾರ್ಡ್ಗಳಲ್ಲಿಯೂ ಸಮಗ್ರ ಅಭಿವೃದ್ಧಿಯಾಗಲಿದೆ ಎಂದು ತಿಳಿಸಿದರು.

ನಾಮ ನಿರ್ದೇಶಿತ ಸದಸ್ಯ ಬಸವರಾಜು ಮಾತನಾಡಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಯಾಗಿ ಅಶೋಕ್ ರವರು ಅಧಿಕಾರವಹಿಸಿಕೊಂಡ ನಂತರ ಪಟ್ಟಣದಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದೆ. ಪ್ರಸಕ್ತ ಸಾಲಿನಲ್ಲಿ ಒಂದು ಕೋಟಿಗೂ ಹೆಚ್ಚು ತೆರಿಗೆ ಸಂಗ್ರಹ ಮಾಡುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಅಭಿವೃದ್ಧಿ ಮಾಡಲು ನಮ್ಮೆಲ್ಲರ ಸಹಕಾರ ಇರುತ್ತದೆ ಎಂದು ತಿಳಿಸಿದರು.

ಪಟ್ಟಣ ಪಂಚಾಯಿತಿ ಸದಸ್ಯ ಗಿರೀಶ್ ಮಾತನಾಡಿ ಪಟ್ಟಣದಲ್ಲಿ 68 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಮುಗಿದಿದ್ದು ಕಾಮಗಾರಿ ಪ್ರಾರಂಭಿಸಬೇಕು. ಮುಂದಿನ ತಿಂಗಳು ಶ್ರೀ ಬೆಟ್ಟಳ್ಳಿ ಮಾರಮ್ಮ ಜಾತ್ರಾ ಮಹೋತ್ಸವ ಪ್ರಾರಂಭವಾಗುವುದರಿಂದ ಅವಾರ್ಡ್ ಗಳಲ್ಲಿ ಕೆಲಸ ಪ್ರಾರಂಭ ಮಾಡುವುದು ಬೇಡ ಜಾತ್ರೆ ಮುಗಿದ ನಂತರ ಕೆಲಸ ಪ್ರಾರಂಭಿಸಲಿ ಎಂದು ಸಲಹೆ ನೀಡಿದರು. ಪಟ್ಟಣ ಪಂಚಾಯಿತಿ ಸದಸ್ಯ ಸಂಪತ್ ಕುಮಾರ್ ಮಾತನಾಡಿ 23 ಲಕ್ಷ ವೆಚ್ಚದಲ್ಲಿ ಅಂಬೇಡ್ಕರ್ ಭವನದ ಮುಂದುವರೆದ ಕಾಮಗಾರಿಗೆ ಅನುದಾನ ಮೀಸಲಿಟ್ಟಿದೆ. ಆದರೆ ಟೆಂಡರ್ ಪ್ರಕ್ರಿಯೆ ಮುಗಿಯದೆ ಇರುವುದರಿಂದ ಅನುದಾನ ಬಳಕೆ ಆಗುತ್ತಿಲ್ಲ, ಎರಡನೇ ವಾರ್ಡಿನಿಂದ ಮೂರನೇ ವಾರ್ಡಿಗೆ ಸಂಪರ್ಕ ಕಲ್ಪಿಸುವ ಸೇತುವೆ ಕಾಮಗಾರಿಗೆ ಹೆಚ್ಚಿನ ಅನುದಾನ ಕೊಡಿಸುವ ಮೂಲಕ ಕಾಮಗಾರಿ ಪ್ರಾರಂಭಿಸಬೇಕು ಎಂದು ಮನವಿ ಮಾಡಿದರು. ಸಭೆಯಲ್ಲಿ ಪಟ್ಟಣದ 13 ವಾರ್ಡಗಳಲ್ಲಿ ಕೈಗೊಂಡಿರುವ 68 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಅನುಮೋದನೆ ಹಾಗೂ ಪಟ್ಟಣದಲ್ಲಿರುವ ಪ್ಯಾಸೆಂಜರ್ ಆಟೋಗಳನ್ನು ಖಾಸಗಿ ಬಸ್ ನಿಲ್ದಾಣ ಹಾಗೂ ಕೆಎಸ್ ಆರ್ ಟಿಸಿ ಬಸ್ ನಿಲ್ದಾಣದ ಮುಂಭಾಗ ನಿಲ್ಲಿಸಿಕೊಳ್ಳಲು ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಯಿತು.

ಸಭೆಯಲ್ಲಿ ಉಪಾಧ್ಯಕ್ಷ ಆನಂದ್ ಕುಮಾರ್ ಸದಸ್ಯರಾದ ಸೋಮಶೇಖರ್, ಸುದೇಶ್, ಮಹೇಶ್ ನಾಯಕ್, ಪವಿತ್ರ ಮಂಜುಳಾ, ರೂಪ, ಮಹೇಶ್ ನಾಮ ನಿರ್ದೇಶಿತ ಸದಸ್ಯರುಗಳಾದ ಬಸವರಾಜು, ಮಹಾದೇಶ್, ನವೀನ್ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಆಕ್ಸಿಜನ್ ದುರಂತದ ಸಂತ್ರಸ್ತರಿಗೆ ನ್ಯಾಯಕ್ಕೆ ಆಗ್ರಹಿಸಿ ಫೆ.10 ರಂದು ಬೃಹತ್ ಪ್ರತಿಭಟನೆ

**ಚಾಮರಾಜನಗರ:** 2021ರಲ್ಲಿ ಜಿಲ್ಲಾಸ್ಪತ್ರೆಯಲ್ಲಿ ನಡೆದ ಆಕ್ಸಿಜನ್ ದುರಂತಕ್ಕೆ ಸಂಬಂಧಿಸಿದಂತೆ ಸಂತ್ರಸ್ತರಿಗೆ ನ್ಯಾಯ ಕೊಡಿಸುವಂತೆ ಆಗ್ರಹಿಸಿ ಫೆ.10 ರಂದು ನಗರದ ಲ್ಲಿ ಬೃಹತ್ ಪ್ರತಿಭಟನೆ ಹಮ್ಮಿ ಕೊಳ್ಳಲಾಗಿದೆ ಎಂದು ಎಸ್ ಡಿ ಪಿ ಐ ರಾಜ್ಯ ಸಮಿತಿ ಸದಸ್ಯ ಅನ್ಸಾರ್ ಅಹಮ್ಮದ್ ತಿಳಿಸಿದರು. ಚಾಮರಾಜನಗರ ದಲ್ಲಿ ಸುದ್ದಿಘೋಷ್ಟಿಯಲ್ಲಿ ಮಾತನಾಡಿ, ಆಕ್ಸಿಜನ್ ದುರಂತದಲ್ಲಿ 36 ಮಂದಿ ಮೃತಪಟ್ಟಿದ್ದರು. ಈ ಘಟನೆ ನಡೆದು 4 ವರ್ಷ ಕಳೆದರೂ ದುರಂತದಲ್ಲಿ ಮೃತಪಟ್ಟ ಕುಟುಂಬಸ್ಥರಿಗೆ ಯಾವುದೇ ನ್ಯಾಯ ಸಿಕ್ಕಿಲ್ಲ. ಕುಟುಂಬದ ಒಬ್ಬರಿಗೆ ಸರ್ಕಾರಿ ನೌಕರಿ ದೊರೆತಿಲ್ಲ. ಅಲ್ಲದೇ ಈ ಘಟನೆಗೆ ಕಾರಣಕರ್ತರಾದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಿಲ್ಲ ಎಂದು ಹೇಳಿದರು. ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸಂತ್ರಸ್ತರನ್ನು ಕರೆಯಿಸಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದರೆ ನ್ಯಾಯ ಕೊಡಿಸುವುದಾಗಿ ಭರವಸೆ ನೀಡಿದ್ದರು. ಈಗ ಕಾಂಗ್ರೆಸ್ ಅಧಿಕಾರದಲ್ಲಿದ್ದು ಸಂತ್ರಸ್ತರಿಗೆ ಹೊರಗುತ್ತಿಗೆ ನೌಕರಿ ನೀಡಿ ಕೈ ತೊಳೆದುಕೊಂಡಿದೆ. ಆದ್ದರಿಂದ ಮಹದೇಶ್ವರಬೆಟ್ಟದಲ್ಲಿ ನಡೆಯುವ ಕ್ಯಾಬಿನೆಟ್ ಸಭೆಯಲ್ಲಿ ಈ ಸಂಬಂಧ ಚರ್ಚಿಸಿ ಸಂತ್ರಸ್ತರಿಗೆ ಸರ್ಕಾರಿ ನೌಕರಿ ಕೊಡಬೇಕು ಎಂದು ಆಗ್ರಹಿಸಿದರು.2015ರಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 170 ಕೋಟಿ ಖರ್ಚು ಮಾಡಿ ಜಾತಿಗಣತಿ ಸರ್ವೆ ನಡೆಸಿತ್ತು. ಆದರೆ, ಜಾತಿಗಣತಿ ಅಧ್ಯಯನ ನಡೆಸಿ 10 ವರ್ಷ ಕಳೆದರೂ ಇನ್ನೂ ಜಾರಿಯಾಗಿಲ್ಲ. ಸಿದ್ದರಾಮಯ್ಯ ಅವರು ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯದೇ ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಜಾತಿಗಣತಿ ವರದಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.



## ಶಂಕುಸ್ಥಾಪನೆ

**ನಗರದ ಅಶೋಕಪುರಂ ದೊಡ್ಡಗರಡಿಡಾ.ಬಿ.ಆರ್.ಅಂಬೇಡ್ಕರ್ ಸಮುದಾಯಭವನಕ್ಕೆಇಂದು ಶಂಕುಸ್ಥಾಪನೆ ಭೂಮಿಪೂಜೆ ನೆರವೇರಿಸಲಾಯಿತು.ದೊಡ್ಡಗರಡಿ ಸಂಘದಅಧ್ಯಕ್ಷರಾದ ಆರ್.ಸಿ.ಮಹೇಶ್ ಅವರಅಧ್ಯಕ್ಷತೆಯಲ್ಲಿಉಸ್ತಾದ್ ಫೈಲ್ವಾನ್ ಪುಟ್ಟಸ್ವಾಮಿ, ಖಲೀಫ್ ಪೈಲ್ವಾನ್, ಬಿ.ಸಿದ್ದಯ್ಯ, ಆದಿಕರ್ನಾಟಕ ಮಹಾಸಂಸ್ಥೆಯಅಧ್ಯಕ್ಷರಾದ ಸಿದ್ದರಾಜು.ಪಿ (ಸುನಿಲ್), ಉಪಾಧ್ಯಕ್ಷರಾದ ಶಿವಸ್ವಾಮಿ, ಕಾರ್ಯದರ್ಶಿರಾಜ್ ಮೊಗ, ದೊಡ್ಡಗರಡಿಉಪಾಧ್ಯಕ್ಷರಾದ ಶಿವರುದ್ರ, ಕಾರ್ಯದರ್ಶಿ ದೊರೆಸ್ವಾಮಿ, ಮಾಜಿ ಮೇಯರ್ ಪುರುಷೋತ್ತಮ್, ವೆಂಕಟಸ್ವಾಮಿ, ಗಂಗಾಧರ್, ಸಿದ್ದೇಶ್, ವಿಜಯಕುಮಾರ್, ಈಶ್ವರ್.ಸಿ, ಸುರೇಶ್ ಕುಮಾರ್ ಹಾಗೂ ಅಶೋಕಪುರಂ ಸರ್ವಸದಸ್ಯರನ್ನುಕಾಣಬಹುದು.**



**ಕೆ.ಆರ್.ಕ್ಷೇತ್ರದ ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್ಅವರನ್ನುಅವರಜನ್ಮದಿನದ ಹಿನ್ನಲೆಯಲ್ಲಿಅಶೋಕಪುರಂಆದಿಕರ್ನಾಟಕ ಮಹಾಸಂಸ್ಥೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.ಅಧ್ಯಕ್ಷರಾದ ಸಿದ್ದರಾಜು.ಪಿ (ಸುನಿಲ್), ಉಪಾಧ್ಯಕ್ಷರಾದ ಶಿವಸ್ವಾಮಿ, ಮುಖಂಡರಾದ ಆರ್.ಸಿ.ಮಹೇಶ್, ಸಿದ್ದೇಶ್, ರಾಜ್ಮೊಗ, ಹಿರಿಯರಾದ ಮಹಾಲಿಂಗು, ಷಣ್ಮುಗ, ವೆಂಕಟಸ್ವಾಮಿ, ಬಿಲ್ಲಯ್ಯ, ಸಿದ್ದರಾಜು, ಕೃಷ್ಣಮೂರ್ತಿ ಚಿತ್ರದಲ್ಲಿದ್ದಾರೆ.**

# ಸುಸ್ಥಿರ ಅಭಿವೃದ್ಧಿ ಗುರಿ ಸಾಧನೆಗೆ ಕೈಗೊಂಡ ಕ್ರಮಗಳಿಗೆ ಮೆಚ್ಚುಗೆ



**ಬೆಂಗಳೂರು:** ಮಹಿಳೆಯರನ್ನು ಪ್ರಮುಖ ಫಲಾನುಭವಿಗಳನ್ನಾಗಿ ಕೇಂದ್ರೀಕರಿಸಿ ರಾಜ್ಯದಲ್ಲಿ ಜಾರಿಗೊಳಿಸಿರುವ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೂಲಕ ಕರ್ನಾಟಕ ಸಾಧಿಸಿರುವ ಲಿಂಗ ಸಮಾನತೆಯ ಉಪಕ್ರಮಗಳಿಗೆ ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಅಧ್ಯಕ್ಷ ಕ್ಯಾಮರೂನ್‌ನ ಫಿಲೆಮನ್ ಯಾಂಗ್ ಮೆಚ್ಚುಗೆ ಸೂಚಿಸಿದ್ದಾರೆ.

ಅವರು ಇಂದು ಬೆಂಗಳೂರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ನಗರದ ಖಾಸಗಿ ಹೋಟೆಲ್ ತಾಜ್ ವೆಸ್ಟೆಂಡ್‌ನಲ್ಲಿ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಸ್ವಸಹಾಯ ಗುಂಪಿನ ಮಹಿಳೆಯರು ರೇಷ್ಮೆ ಗೂಡುಗಳಿಂದ ತಯಾರಿಸಿದ ಪುಷ್ಪಗುಚ್ಛದೊಂದಿಗೆ ಸ್ವಾಗತಿಸಿದರು. ಒಂದು ಜಗತ್ತು ಹಲವು ಸಾಧ್ಯತೆಗಳನ್ನು ಬಿಂಬಿಸುವ ಕರ್ನಾಟಕ ಕುರಿತಾದ ಪುಸ್ತಕವನ್ನು ನೀಡಿದರು. ಸುಸ್ಥಿರ ಅಭಿವೃದ್ಧಿ ಗುರಿಗಳ (ಎಸ್‌ಡಿಜಿ) ಸಾಧನೆಯಲ್ಲಿ ಕರ್ನಾಟಕವು ಉನ್ನತ ಸ್ಥಾನ ಪಡೆಯಲು ಸಾಧ್ಯವಾಗಿರುವ ಬಗ್ಗೆ ವಿಶ್ವಸಂಸ್ಥೆಯ ಅಧ್ಯಕ್ಷರು ಆಸಕ್ತಿಯಿಂದ ಹೆಚ್ಚು ಮಾಹಿತಿ ಹಾಗೂ ವಿವರಗಳನ್ನು ಬಯಸಿದರು. ಗ್ಯಾರಂಟಿ ಯೋಜನೆಗಳಲ್ಲಿ ಮಹಿಳೆಯರ ಕೈಗೆ ನಗದು ಹಣ ನೀಡುವ ಗೃಹಲಕ್ಷ್ಮಿ, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಅವಕಾಶ ನೀಡುವ ಶಕ್ತಿ, ಕಾರ್ಮಿಕ ಕ್ಷೇತ್ರದಲ್ಲಿ ಮಹಿಳೆಯರ ಭಾಗವಹಿಸುವಿಕೆಯ ದರವನ್ನು ಸುಧಾರಿಸಲು ಕೈಗೊಂಡಿರುವ ಕ್ರಮಗಳು, ಹಸಿವು ಮತ್ತು ಅಪೌಷ್ಟಿಕತೆಯನ್ನು ತಡೆಗಟ್ಟಲು ತಲಾವಾರು ಪೋಷಕಾಂಶ ನೀಡಿಕೆ, ಕೌಶಲ್ಯದ ಮೂಲಕ ಉದ್ಯೋಗ ಗಳಿಕೆ, ಅಡುಗೆ ಅನಿಲ ಪೂರೈಕೆ, ಉಚಿತ ವಿದ್ಯುತ್ ಪೂರೈಕೆ ಕುರಿತ ಕಾರ್ಯಕ್ರಮಗಳ ವಿವರಗಳನ್ನು ಮುಖ್ಯ ಕಾರ್ಯದರ್ಶಿಗಳು ನೀಡಿದರು.

ಮಹಿಳೆಯರು ಸ್ವಸಹಾಯ ಗುಂಪುಗಳನ್ನು ಸಂಘಟಿಸಲು, ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಮೌಲ್ಯವರ್ಧನೆಗೆ ಪ್ರೋತ್ಸಾಹ, ವಿಷಕಾರಿ ಮುಕ್ತ ವಾತಾವರಣಕ್ಕಾಗಿ ಸಮಗ್ರ ಮತ್ತು ಸಾವಯವ ಕೃಷಿಗೆ ಪ್ರೋತ್ಸಾಹ ಕ್ರಮಗಳು ಸಮಗ್ರ ಹವಾಮಾನ ಬದಲಾವಣೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲು ಸಹಾಯ ಮಾಡುತ್ತದೆ ಎಂದು ಸಂತಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಸಾಮಾಜಿಕ–ಆರ್ಥಿಕ ಮತ್ತು ರಾಜಕೀಯ ಸಮಾನತೆಯನ್ನು ಉತ್ತೇಜಿಸಲು ಮಹಿಳಾ ಪರ ಕಾರ್ಯಕ್ರಮಗಳನ್ನು ಮುನ್ನಡೆಸುತ್ತಿರುವ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕಾಳಜಿಯನ್ನು ವಿಶ್ವಸಂಸ್ಥೆಯ ಅಧ್ಯಕ್ಷರು ಶ್ಲಾಘಿಸಿದರು. ಮುಂಬರುವ ವಿಶ್ವಸಂಸ್ಥೆಯ ಕಾರ್ಯಾಗಾರಗಳಲ್ಲಿ ಕರ್ನಾಟಕದ ಯಶೋಗಾಥೆಗಳನ್ನು ಹಂಚಿಕೊಳ್ಳಬೇಕೆಂದು ಅವರು ಸಲಹೆ ನೀಡಿದರು. ಇದರಿಂದ ಇತರ ದೇಶಗಳು ಸಹ ಈ ಅತ್ಯುತ್ತಮ ಅಭ್ಯಾಸಗಳನ್ನು ಅಳವಡಿಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

**ನವೀಕರಿಸಬಹುದಾದ ಇಂಧನ ಉತ್ಪಾದನೆ ರಾಜ್ಯಕ್ಕೆ ಅಗ್ರಸ್ಥಾನ:** ಒಟ್ಟು ಇಂಧನ ಉತ್ಪಾದನೆಯಲ್ಲಿ ಶೇ.40 ರಷ್ಟು ಪಾಲು ನವೀಕರಿಸಬಹುದಾದ ಮೂಲಗಳಿಂದ ಬರುತ್ತಿರುವುದರಿಂದ ಕರ್ನಾಟಕವು ಶುದ್ಧ ಮತ್ತು ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ದೇಶದಲ್ಲಿಯೇ ಅಗ್ರಸ್ಥಾನ ಪಡೆದಿರುವುದಕ್ಕೆ ವಿಶ್ವಸಂಸ್ಥೆಯ ಅಧ್ಯಕ್ಷರು ಸಂತೋಷ ವ್ಯಕ್ತಪಡಿಸಿದರು.

ಮಾಹಿತಿ ತಂತ್ರಜ್ಞಾನ, ತಂತ್ರಾಂಶ ಅಭಿವೃದ್ಧಿ, ಕೃತಕ ಬುದ್ಧಿ ಮತ್ತೆ (ಎಐ), ಸಂಶೋಧನೆ ಮತ್ತು ನಾವೀನ್ಯತೆಗಾಗಿ ಜಾಗತಿಕ ಸಾಮರ್ಥ್ಯ ಕೇಂದ್ರಗಳ ಸ್ಥಾಪನೆಯಲ್ಲಿ ಕರ್ನಾಟಕವು ಸಾಧಿಸಿರುವ ಪ್ರಗತಿಯನ್ನು ವಿಶ್ವಸಂಸ್ಥೆಯ ಮೆಚ್ಚಿದರು. ಇತರ ದೇಶಗಳಿಗೆ ಡಿಜಿಟಲ್ ರೂಪಾಂತರವನ್ನು ಉತ್ತೇಜಿಸುವ ಸಲುವಾಗಿ ಸಹಾಯದ ಅಗತ್ಯವಿದ್ದು, ರಾಜ್ಯದ ಬೆಂಬಲವನ್ನು ಕೋರಿದರು. ರಾಜ್ಯ, ಜಿಲ್ಲೆ ಮತ್ತು ಗ್ರಾಮ ಪಂಚಾಯತ್ ಮಟ್ಟದಲ್ಲಿ ಸುಸ್ಥಿರ ಅಭಿವೃದ್ಧಿ ಸೂಚಕಗಳ ಪ್ರಗತಿಯನ್ನು ಮೇಲ್ವಿಚಾರಣೆ ಮಾಡಲು ಕರ್ನಾಟಕ ರಚಿಸಿದ ಸುಸ್ಥಿರ ಅಭಿವೃದ್ಧಿ ಗುರಿಗಳ (ಎಸ್‌ಡಿಜಿ) ಡ್ಯಾಶ್‌ಬೋರ್ಡ್ ವೀಕ್ಷಿಸಿ ಶ್ಲಾಘಿಸಿದರು.

# ಮಾದಿಗ ಸಮುದಾಯಕ್ಕೆ ಅನ್ಯಾಯ



**ಮಂಡ್ಯ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಮಾದಿಗ ಸಮುದಾಯಕ್ಕೆ ಅನ್ಯಾಯ ಆಗಿದೆ ಎಂದು ಮಾದಿಗ ಸಮುದಾಯ ಮುಖಂಡ ಅನ್ನದಾನಿ ಆರೋಪಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಮಾದಿಗರ ಸಮುದಾಯ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸರ್ಕಾರವು ಹಿರಿಯ ನ್ಯಾಯಾಧೀಶ ಎ.ಜೆ.ಸದಾಶಿವ ಆಯೋಗಕ್ಕೆ ಮೋಸ ಮಾಡುವ ನಿರ್ಧಾರ ಮಾಡಲಾಗಿದೆ, ಏಕೆಂದರೆ ಮತ್ತೊಂದು ಆಯೋಗ ರಚಿಸುವ ಅಗತ್ಯವೇನಿತ್ತು ಎಂದು ಪ್ರಶ್ನಿಸಿದರು.

ನಮ್ಮ ಸಮಾಜಕ್ಕೆ ಅನ್ಯಾಯ ಮಾಡಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಈಗಾಗಲೇ ಸಂಕಷ್ಟವನ್ನು ಅನುಭವಿಸಿದ್ದೀರಾ ಇನ್ನಾದರೂ ಎಚ್ಚೆತ್ತುಕೊಳ್ಳಬೇಕು. ಸಚಿವ ಮಲ್ಲಿಕಾರ್ಜುನ ಖರ್ಗೆ ಅವರಿಗೆ ನಮ್ಮ ಸಮುದಾಯದವರು ಮಲತಾಯಿ ಮಕ್ಕಳಾಗಿದ್ದೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸರ್ಕಾರವು ನಾಗಮೋಹನ್ದಾಸ್ ಆಯೋಗ ರಚನೆ ಮಾಡುವುದಾದರೂ ಏನಿತ್ತು, ಕಮಿಟಿಯ ರಿಪೋರ್ಟ್ ಇದ್ದರೂ ಸಹ ನಮ್ಮ ಸಮುದಾಯಕ್ಕೆ ಅನ್ಯಾಯ ಮಾಡಲಾಗಿದೆ. ಹಾಗಾಗಿ ಎ.ಜೆ.ಸದಾಶಿವ ಆಯೋಗ ಜಾರಿ ಮಾಡಬೇಕು ಎಂದರು.

ಮಾದಿಗ ಸಮುದಾಯದ ಮುಖಂಡ ಸಿ.ಕೆ.ಪಾಪಯ್ಯ ಮಾತನಾಡಿ, ಇವತ್ತು ತೆಲಂಗಾಣದಲ್ಲಿ ಮುಖ್ಯಮಂತ್ರಿ ಅವರು ಅಧಿವೇಶನದಲ್ಲಿ ಒಳ ಮೀಸಲಾತಿ ಜಾರಿ ಮಾಡಿದೆ. ಆದರೆ, ಕರ್ನಾಟಕ ರಾಜ್ಯಕ್ಕೆ ಒಂದು ನ್ಯಾಯ ಇದಿಯಾ, ಇಂತಹ ತಾರತಮ್ಯ ಒಪ್ಪುವುದಿಲ್ಲ ಎಂದರು.

ಸಭೆಯಲ್ಲಿ ಮುಖಂಡರಾದ ಕನ್ನಲಿ ಪುಟ್ಟಸ್ವಾಮಿ, ಸಿ.ಶೇಖರ್, ಚಾಮನಹಳ್ಳಿ ರಾಜು, ಕೃಷ್ಣ ಭಾಗವಹಿಸಿದ್ದರು.

# ಸಂಜೆ ಟಿಪ್ಸ್

## ಆರ್ಥಿಕ ವರ್ಷ 25ರ ಮೂರನೇ ತ್ರೈಮಾಸಿಕದಲಿ ರೂ.57 ಕೋಟಿ ನಿವ್ವಳ ಲಾಭ ದಾಖಲಿಸಿದ ಜೆಕೆ ಟೈರ್

ಭಾರತೀಯ ಟೈರ್ ಇಂಡಸ್ಟ್ರಿಯ ಪ್ರಮುಖ ಸಂಸ್ಥೆ ಆಗಿರುವ ಜೆಕೆ ಟೈರ್ ಇಂಡಸ್ಟ್ರೀಸ್ ಲಿಮಿಟೆಡ್ (ಜೆಕೆ ಟೈರ್) ಇಂದು ಆರ್ಥಿಕ ವರ್ಷ 2025ರ ಮೂರನೇ ತ್ರೈಮಾಸಿಕದ ತನ್ನ ಲೆಕ್ಕಪರಿಶೋಧನೆ ಮಾಡದ ಫಲಿತಾಂಶಗಳನ್ನು ಪ್ರಕಟಿಸಿದೆ. ಈ ಫಲಿತಾಂಶದ ಕುರಿತು ಮಾತನಾಡಿರುವ ಜೆಕೆ ಟೈರ್ ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ (ಸಿಎಮ್ಡಿ) ಡಾ.ರಘುಪತಿ ಸಿಂಘಾನಿಯಾ ಅವರು, ''ಈ ತ್ರೈಮಾಸಿಕದಲ್ಲಿ ಜೆಕೆ ಟೈರ್ ಸಂಸ್ತೆಯು ರಿಪ್ಲೇಸ್ ಮೆಂಟ್ ಮಾರುಕಟ್ಟೆಯಲ್ಲಿ ಆರೋಗ್ಯಕರ ಬೆಳವಣಿಗೆಯನ್ನು ಕಂಡಿದೆ. ಹೆಚ್ಚುತ್ತಿರುವ ಕಚ್ಚಾ ವಸ್ತುಗಳ ಬೆಲೆ, ನಿರ್ದಿಷ್ಟವಾಗಿ ನೈಸರ್ಗಿಕ ರಬ್ಬರ್ ಗೆ ಬೆಲೆ ಹೆಚ್ಚಾಗಿರುವುದರಿಂದ ಮಾರ್ಜಿನ್ ಮೇಲೆ ಭಾರಿ ಪರಿಣಾಮ ಉಂಟಾಗಿದೆ. ಅದರಿಂದಾಗಿಯೇ ಕೆಲವು ಬೆಲೆ ಪರಿಷ್ಕರಣೆ ಮತ್ತು ವೆಚ್ಚ ನಿರ್ವಹಣೆಗೆ ಕ್ರಮ ತೆಗೆದುಕೊಳ್ಳಬೇಕಾಗಿ ಬಂದಿದ್ದು, ಅದರಿಂದಾಗಿ ತಕ್ಕ ಮಟ್ಟಿಗೆ ಸಮಸ್ಯೆ ಪರಿಹಾರವಾಗಿದೆ. ಮುಂದೆ ನೋಡುವುದಾದರೆ ರಿಪ್ಲೇಸ್ ಮೆಂಟ್ ಮಾರುಕಟ್ಟೆಯಲ್ಲಿ ಉಂಟಾಗಿರುವ ಬೇಡಿಕೆಯು ಆಶಾದಾಯಕವಾಗಿದೆ ಮತ್ತು ಒಇಎಂ ವಲಯವು ಚೇತರಿಕೆಯ ಹಾದಿಯಲ್ಲಿದೆ. ಜೊತೆಗೆ, ರಫ್ತು ಮಾರುಕಟ್ಟೆಗಳು ರೂಪಾಯಿ/ ಡಾಲರ್ ನೀತಿಯಿಂದ ಹೊಸ ಅವಕಾಶಗಳು ತೆರೆದುಕೊಳ್ಳಲಿವೆ'' ಎಂದು ಹೇಳಿದರು. ಜೆಕೆ ಟೈರ್ ಸಂಸ್ಥೆಯು ವಿಭಾಗಗಳಾದ್ಯಂತ ತನ್ನ ಉತ್ಪನ್ನ ಶ್ರೇಣಿಯ ಪ್ರೀಮಿಯಮೀಕರಣದ ಮೇಲೆ ಗಮನ ಕೇಂದ್ರೀಕರಿಸುತ್ತಿದೆ ಹಾಗೂ ಈ ಕ್ರಮವು ಕಂಪನಿಯ ಲಾಭದಾಯಕತೆಗೆ ಸಹಾಯ ಮಾಡುತ್ತದೆ.ಜೆಕೆ ಟೈರ್ ನ ಅಂಗಸಂಸ್ಥೆಗಳಾದ ಕ್ಯಾವೆಂಡಿಶ್ ಇಂಡಸ್ಟ್ರೀಸ್ ಲಿಮಿಟೆಡ್ ಜೆಕೆ ಟೋರ್ನಲ್, ಮೆಕ್ಸಿಕೋ ಸಂಸ್ಥೆಗಳು ಕಂಪನಿಯ ಒಟ್ಟಾರೆ ಆದಾಯ ಮತ್ತು ಲಾಭದಾಯಕತೆಗೆ ಉತ್ತಮ ಕೊಡುಗೆಗಳನ್ನು ನೀಡುವುದನ್ನು ಮುಂದುವರೆಸಿದೆ.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

**34. ಖ್ಯಾತ ಸಾಹಿತಿ ಪು ತಿ ನರಸಿಂಹಚಾರ್‌ರವರ ಹುಟ್ಟೂರು ಯಾವುದು ?**

## ಬಾಳೆಹಣ್ಣಿನ ಹಲ್ವಾ

### ಪಾಕ ಶಾಲೆ



**ಬೇಕಿರುವ ಸಾಮಗ್ರಿ**

ಬಾಳೆಹಣ್ಣಿನ ಹಲ್ವಾ (ತುಂಬಾ ಹಣ್ಣಾಗಿರಬೇಕು), ಕದಳಿ/ಏಲಕ್ಕಿ ಬಾಳೆಹಣ್ಣು 3 ಕೆಜಿ, ಎರಡು ಕಪ್ ಸಕ್ಕರೆ, 1 ಚಮಚ ಏಲಕ್ಕಿ ಪುಡಿ, ಅರ್ಧ ಕಪ್ ತುಪ್ಪ, ಗೋಡಂಬಿ (ನಿಮ್ಮ ಆಯ್ಕೆಗೆ ಬಿಟ್ಟದ್ದು)

**ಮಾಡುವ ವಿಧಾನ**

ಒಂದು ದಪ್ಪ ತಳವಿರುವ ಪಾತ್ರೆಯಲ್ಲಿ ಬಾಳೆ ಹಣ್ಣಿನ ಸಿಪ್ಪೆ ಸುಲಿದು ಹಾಕಿ ಕಡಿಮೆ ಉರಿಯಲ್ಲಿ ಬೇಯಿಸಿ. ಆಗಾಗ ತಿರುಗಿಸುತ್ತಾ ಸ್ವಲ್ಪ-ಸ್ವಲ್ಪ ತುಪ್ಪ ಹಾಕುತ್ತಾ ಮಿಕ್ಸ್ ಮಾಡುತ್ತಾ ಇರಬೇಕು. ಹೀಗೆ ಮಿಶ್ರಣ ಗಟ್ಟಿಯಾಗು ವವರೆಗೆ ಮಾಡುತ್ತಾ ಇರಬೇಕು. ನಂತರ ಏಲಕ್ಕಿ ಪುಡಿ ಹಾಗೂ ತುಪ್ಪದಲ್ಲಿ ಫ್ರೈ ಮಾಡಿದ ಗೋಡಂಬಿ ಹಾಕಿ ಮತ್ತೊಮ್ಮೆ ಮಿಕ್ಸ್ ಮಾಡಿ.

## ಮುಗ್ಧ ಆಸ್ತಿಕರ ಅಂಧಶ್ರದ್ಧೆಗೆ; ಪಾಖಂಡಿ ನಾಸ್ತಿಕರ ಅಪಭ್ರಂಶಗಳಿಗೆ ಸಾಕ್ಷಿಯಾಗುತ್ತಿದೆ ಮಹಾ ಕುಂಭಮೇಳ!

### ಆಸ್ತಿಕ್ಯವಾದ



● ವೇಣು

editor.sanjemugilu2017@gmail.com

ಮಹಾ ಮಹಾ ಕುಂಭಮೇಳದ ವಿಷಯದಲ್ಲಿ ಆಸ್ತಿಕರ ಮತ್ತು ನಾಸ್ತಿಕರ ವರ್ತನೆಗಳು ಸ್ವಲ್ಪ ಅತಿರೇಕವಾಗುತ್ತಿದೆ.

ಮಹಾ ಕುಂಭಮೇಳದ ಪುಣ್ಯ ಸ್ನಾನದ ವಿಚಾರವಾಗಿ ಸಹಜ ಪ್ರಜ್ಞೆ ಮರೆತು ಸಮೂಹ ಸನ್ನಿಗೆ ಒಳಗಾದ ಅಂಧಶ್ರದ್ಧಾಚಾರಿಗಳು ಒಂದೆಡೆಯಾದರೆ; ಈ ಪುಣ್ಯ ಆಚರಣೆಗಳ ವಿಚಾರಗಳೇ ತಲೆಗತ್ತದ ಸ್ವಯಂಘೋಷಿತ ಬುದ್ಧಿಜೀವಿಗಳೆಸರಿನ ನಾಸ್ತಿಕ ಮಂಡೂಕಗಳು ಮತ್ತೊಂದೆಡೆ. ಇವರ ಅತಿರೇಕದ ವರ್ತನೆಯಿಂದ ಈ ಪುಣ್ಯ ಸ್ನಾನದ ನಿಜವಾದ ಫಲಾನುಭವಿಗಳಿಗೆ ಎದುರಾಗುತ್ತಿರುವ ತೊಂದರೆಗಳು ಒಂದೆರಡಲ್ಲ.

ಭೌತಿಕ ಜೀವನದಿಂದ ವಿಮುಖರಾಗಿ ಆಧ್ಯಾತ್ಮ ಸಾಧನೆಯಡೆಗೆ ಸಾಗಲು ಪ್ರಯತ್ನಿಸುತ್ತಿರುವವರಿಗೆ ಈ ಪವಿತ್ರ ಮಹಾಕುಂಭದ ಪುಣ್ಯ ಸ್ನಾನ ಖಂಡಿತ ಲಾಭದಾಯಕ. ಆಸ್ತಿಕ್ಯ ಮನೋಭಾವದಿಂದ ಅಧ್ಯಯನ ಮಾಡಿದರೆ, ಈ ಪವಿತ್ರ ಸ್ನಾನಕ್ಕೆ ಪುರಾಣಾದಿ ಗ್ರಂಥಗಳಲ್ಲಿ ವೈಜ್ಞಾನಿಕ ಹಿನ್ನಲೆಯ ಉಲ್ಲೇಖಗಳಿದೆ.

ಹೌದು! ನಾಸ್ತಿಕ ಮಂಡೂಕಗಳು ಹೇಳುವಂತೆ ಸಂಗಮದಲ್ಲಿ ಮಿಂದೆದ್ದ ಮಾತ್ರಕ್ಕೆ ನಾವು ನಮ್ಮ ಸ್ವಯಂಕೃತ ಪಾಪಗಳಿಂದ ಮುಕ್ತರಾಗುತ್ತೇವೆಂಬುದು ಮೂರ್ಖತನ. ಏಕೆಂದರೆ, ಅಲ್ಲಿ ಮಿಂದೆದ್ದು ಮತ್ತೆ ಅರಿಷಡ್ವರ್ಗಗಳ ಬಲೆಯಲ್ಲಿ ಸಿಲುಕಿದರೆ ಯಾವ ಅಮೃತ ಸ್ನಾನಕ್ಕೂ ಅರ್ಥವಿರುವುದಿಲ್ಲ. ಅಲ್ಲಿ ಮಿಂದೆದ್ದ ನಂತರ ಹೊಸ ಧಾರ್ಮಿಕ ಜೀವನ ಸಾಗಿಸಿದರಷ್ಟೇ ಆ ಸ್ನಾನ ಸಾರ್ಥಕ.

ಆ ಪವಿತ್ರ ಸ್ಥಳಕ್ಕೆ ತೆರಳಿರುವವರ ಪೈಕಿ ಎಷ್ಟೋ ಜನ ಸಾಧು ಸಂತರಾಗಿ ಬದಲಾದವರೂ ಇದ್ದಾರೆ, ಆಗದವರೂ ಇದ್ದಾರೆ. ಧನಾತ್ಮಕ ಕಂಪನವನ್ನು ಸಾಕ್ಷಾದನುಭವಿಸಿದವರೂ ಇದ್ದಾರೆ, ಯಾವ ಅನುಭವವೂ ಆಗದೆ ಮೊನಾಲಿಸಾಳನ್ನು ಕಂಡುಬಂದವರೂ ಇದ್ದಾರೆ. ಅವೆಲ್ಲಾ ಅವರವರ ಯೋಗ-ಯೋಗ್ಯತೆಗೆ ಸಂಬಂದಿಸಿದ ಸೂಕ್ಷ್ಮ ಅನುಭವ. ಆಧ್ಯಾತ್ಮಿಕವಾಗಿ ಏನಾದರೂ ಸಾಧಿಸಬೇಕೆನ್ನುವ ಹಂಬಲ ಇರುವವರಿಗಷ್ಟೇ ಈ ವೈಭವಗಳು ಆನಂದವನ್ನುಂಟು ಮಾಡುತ್ತದೆ. ಕಾಮಾಲೆ ಕಣ್ಣಿನಿಂದ ನೋಡುವವರಿಗೆ ಇವೆಲ್ಲಾ ಅತಿರೇಕ ಅನ್ನಿಸುತ್ತದೆ. ಈ ಕಾಮಾಲೆ ಖಾಯಿಲೆಯವರಿಗೆ ತಮಗೆ ಅರ್ಥವಾಗದ ವಿಷಯಗಳ ಬಗ್ಗೆ ನಕಾರಾತ್ಮಕವಾಗಿ ಟೀಕಿಸುವ ಖಯಾಲಿ, ಈ ಖಯಾಲಿಗೆ ಔಷಧಿ ಕಂಡುಹಿಡಿಯಲು ಸಾಧ್ಯವೇ?

**ಮಂಡೂಕಗಳೇ ನಿಜ ಹೇಳಿ...** ಆಸ್ತಿಕರನ್ನು ಟೀಕಿಸುವುದೇ ಪ್ರವೃತ್ತಿ ಮಾಡಿ ಕೊಂಡಿಕೊಂಡಿರುವ ನಾಸ್ತಿಕರೆಲ್ಲರೂ ಸಾಚಾಗಳಾ? ಸನಾತನ ಧರ್ಮವನ್ನು ಟೀಕಿಸುವುದು ಒಂದು ದಂಧೆಯಾಗಿ ಮಾರ್ಪಟ್ಟಿಲ್ಲವೇ? ಇದೇ ದಂಧೆಯಿಂದ ಎಷ್ಟೋ ನಿರುದ್ಯೋಗಿಗಳು ಹೊಟ್ಟೆಹೊರೆಯುತ್ತಿಲ್ಲವೇ?

ಜ್ಞಾನವಿಲ್ಲದ ಭಕ್ತಿ ಅಂಧಶ್ರದ್ಧೆ, ಈ ಅಂಧ ಶ್ರದ್ಧೆಯಿಂದ ಮಹಾ ಕುಂಭಮೇಳದಲ್ಲಿ ಕೆಲವು ಅಚಾತುರ್ಯಗಳಾಗಿರಬಹುದು, ಇದಕ್ಕೆ ಯಾರು ಹೊಣೆ? ಅಲ್ಲಿನ ರಾಜ್ಯ ಸರ್ಕಾರವೇ? ಅಥವಾ ಕೇಂದ್ರ ಸರ್ಕಾರವೇ? ಅಥವಾ ಅಲ್ಲಿ ನೆರೆದಿರುವ ಸಾಧು ಸಂತರೇ? ಕೋಟ್ಯಾಂತರ ಸಂಖ್ಯೆಯಲ್ಲಿ ನೆರೆದಿರುವ ಜನಸಂದಣಿಯಲ್ಲಿ ಗತಿಸುವ ಆಕಸ್ಮಿಕಗಳನ್ನು ನಿಯಂತ್ರಿಸುವುದು ಅಷ್ಟು ಸುಲಭದ ಮಾತಲ್ಲ.

ಬೆರಳೆಣಿಕೆ ತಪ್ಪುಗಳನ್ನು ಮುಂದಿಟ್ಟುಕೊಂಡು ಮಾಹಾ ಕುಂಭಮೇಳವನ್ನೇ ನಿಷೇಧಿಸಲು ಆಗ್ರಹಿಸುತ್ತಿದ್ದೀರಲ್ಲಾ ಇದರಿಂದ ನಿಮಗೇನು ಲಾಭ ಮಂಡುಕಗಳೇ? ನಿಷೇಧಿಸುವಲ್ಲಿ ಸಫಲವಾದರೆ ಅನ್ಯಧರ್ಮದವರಿಂದ ಒಂದಷ್ಟು ಭಿಕ್ಷೆ ಸಿಗಬಹುದೆಂಬ ಭಿಕಾರಿತನವೇ?

ಆಸ್ತಿಕರು ಅಂಧಶ್ರದ್ಧೆಯಿಂದ ಹೊರಬರಲು ಪ್ರಯತ್ನಿಸುತ್ತೇವೆ. ನೀವು ಬೆಗ್ಗರ್ ವೃತ್ತಿ ಮತ್ತು ಧರ್ಮದ ಹೆಸರಲ್ಲಿ ಸುಲಿಗೆ ದಂಧೆ ಬಿಟ್ಟು ಸ್ವಾಭಿಮಾನದಿಂದ ಬಾಳಲು ಯತ್ನಿಸುವಿರಾ? ಮೆದುಳಿನ ರಿಸೀವರ್ ಸ್ವಿಚ್-ಆಫ್ ಆದ ಮೇಲೆಯೇ ನಾಸ್ತೀಕತೆ ಸ್ವಿಚ್-ಆನ್ ಆಗುವುದೆಂಬ ವಿಷಯ ತಿಳಿದರೂ ನಿಮ್ಮಿಂದ ಬದಲಾವಣೆ ನಿರೀಕ್ಷಿಸುತ್ತಿರುವುದಕ್ಕೆ ಕ್ಷಮೆ ಇರಲಿ.







## ಅಕ್ಕಿ ತೊಳೆದ ನೀರಿನ ಈ ಉಪಯೋಗ

### ಹೆಲ್ತ್ ಟಿಪ್ಸ್



ಅಕ್ಕಿ ತೊಳೆದ ನೀರು ಆರೋಗ್ಯದ ದೃಷ್ಟಿಯಿಂದ ಅತ್ಯುತ್ತಮವಾಗಿದೆ. ಮಾತ್ರವಲ್ಲ, ಇದನ್ನು ಗೃಹೋಪಯೋಗಿ ಕೆಲಸಗಳಿಗಾಗಿಯೂ ಬಳಸಬಹುದು.

ಅಕ್ಕಿ ತೊಳೆದ ನೀರನ್ನು ವ್ಯರ್ಥ ಮಾಡದೆ ಅದನ್ನು ಸದುಪಯೋಗ ಪಡಿಸಿಕೊಳ್ಳುವುದು ಹೇಗೆ ಎಂದು ತಿಳಿಯಲು ಮುಂದೆ ಓದಿ...

ಮನೆಯಲ್ಲಿ ಸಣ್ಣ ಮಕ್ಕಳಿದ್ದರೆ ಅಕ್ಕಿ ತೊಳೆದ ನೀರನ್ನು ಸ್ವಲ್ಪ ಬಿಸಿ ಮಾಡಿ ಮಕ್ಕಳ ಸೊಂಟದ ಭಾಗದಿಂದ ಆ ನೀರನ್ನು ಸುರಿದರೆ ಕಾಲುಗಳಿಗೆ ಶಕ್ತಿ ಬರುತ್ತದೆ.

ಅಕ್ಕಿ ತೊಳೆದ ನೀರಿನಲ್ಲಿ ಉತ್ಕರ್ಷಣ ನಿರೋಧಕಗಳು ಹೇರಳವಾಗಿದ್ದು ಇದು ಮುಖದಲ್ಲಿ ರಂಧ್ರಗಳನ್ನು ಬಿಗಿಗೊಳಿಸಿ, ಕಾಂತಿಯುತ ಚರ್ಮವನ್ನು ನೀಡುವಲ್ಲಿ ಪರಿಣಾಮಕಾರಿ ಆಗಿದೆ.

ಅಕ್ಕಿ ತೊಳೆದ ನೀರಿನಿಂದ ಹೇರ್ ವಾಶ್ ಮಾಡುವುದರಿಂದ ಕೂದಲು ಉದುರುವಿಕೆಯಿಂದ ಪರಿಹಾರ ದೊರೆಯುತ್ತದೆ. ಮಾತ್ರವಲ್ಲ, ಕಾಂತಿಯುತವಾದ ಸುಂದರ ಕೇಶರಾಶಿ ಹೊಂದಲು ಇದು ಪರಿಣಾಮಕಾರಿ ಆಗಿದೆ.

ಅಕ್ಕಿ ತೊಳೆದ ನೀರು ಪೋಷಕಾಂಶಗಳಿಂದ ತುಂಬಿದ್ದು ಇದನ್ನು ಗಿಡಕ್ಕೆ ಹಾಕುವುದರಿಂದ ಸಸ್ಯವು ಸೊಂಪಾಗಿ ಬೆಳೆಯುತ್ತದೆ.

ಅಕ್ಕಿ ತೊಳೆದ ನೀರಿನಲ್ಲಿ ನೈಸರ್ಗಿಕ ಪಿಷ್ಟವಿರುತ್ತೆ. ಕಾಟನ್ ಬಟ್ಟೆಗಳನ್ನು ಈ ನೀರಿನಲ್ಲಿ ಬಟ್ಟೆಯನ್ನು ನೆನೆಸಿ ವಾಶ್ ಮಾಡುವುದರಿಂದ ಬಟ್ಟೆಗಳಿಗೆ ಗರಿಗರಿಯಾದ ಲುಕ್ ದೊರೆಯುತ್ತದೆ.

ಅಕ್ಕಿ ತೊಳೆದ ನೀರನ್ನು ಸ್ವಲ್ಪ ಬಿಸಿ ಮಾಡಿ ಜಿಡ್ಡಿನಿಂದ ಕಲೆಗಟ್ಟಿರುವ ಪಾತ್ರೆ ತೊಳೆಯುವುದರಿಂದ ಪಾತ್ರೆಯಲ್ಲಿ ಜಿಡ್ಡು ಮಾಯವಾಗಿ ಫಳಫಳ ಹೊಳೆಯುತ್ತದೆ.

## ವಿಚ್ಛೇದನದ ಬಗ್ಗೆ ಮೊದಲ ಬಾರಿ ಪ್ರತಿಕ್ರಿಯಿಸಿದ ನಾಗಚೈತನ್ಯ!



ಅಕ್ಕಿನೇನಿ ನಾಗಚೈತನ್ಯ ತಾಂಡೆಲ್ ಚಿತ್ರದ ಮೂಲಕ ಪ್ರೇಕ್ಷಕರ ಮುಂದೆ ಬಂದರು. ಫೆಬ್ರವರಿ 7 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರಕ್ಕೆ ಸಕಾರಾತ್ಮಕ ವಿಮರ್ಶೆಗಳು ಬರುತ್ತಿವೆ. ವಿಶೇಷವಾಗಿ ಈ ಚಿತ್ರದಲ್ಲಿ ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ತಮ್ಮ ಅತ್ಯುತ್ತಮ ಅಭಿನಯದಿಂದ ಪ್ರೇಕ್ಷಕರನ್ನು ಮೋಡಿ ಮಾಡಿದರು. ಒಟ್ಟಾರೆಯಾಗಿ, ತಾಂಡೆಲ್ ಚಿತ್ರವು ಉತ್ತಮ ಓಪನಿಂಗ್ಸ್ ತಂದುಕೊಟ್ಟಿದೆ. ಉತ್ತಮ ಪಾಸಿಟಿವ್ ಟಾಕ್ ಗಳಿಸಿರುವ ಈ ಚಿತ್ರ ಈಗ ಇನ್ನಷ್ಟು ಕಲೆಕ್ಷನ್ ಗಳಿಸುವ ಹಂತಕ್ಕೆ ತಲುಪಿದೆಯಂತೆ. ಈ ಚಿತ್ರ ಬಿಡುಗಡೆಯಾಗುವ ಮೊದಲು ಚೈತನ್ಯ ಸರಣಿ ಪ್ರಚಾರಗಳ ಮೂಲಕ ಪ್ರೇಕ್ಷಕರನ್ನು ಮೆಚ್ಚಿಸಿದರು. ತಾಂಡೆಲ್ ಚಿತ್ರದ ಯಶಸ್ಸಿನ ಬಗ್ಗೆ ಚೈತನ್ಯ, ಸಾಯಿ ಪಲ್ಲವಿ ಮತ್ತು ನಿರ್ದೇಶಕ ಚಂದು ಮೊಂಡೇಟಿ ಸಂತೋಷ ವ್ಯಕ್ತಪಡಿಸಿದರು. ಆದರೆ, ಇತ್ತೀಚಿನ ಸಂದರ್ಶನವೊಂದರಲ್ಲಿ ನಾಗ ಚೈತನ್ಯ ತಮ್ಮ ಮೊದಲ ಮದುವೆ ಮತ್ತು ವಿಚ್ಛೇದನದ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ನಿರ್ಧಾರ ತೆಗೆದುಕೊಳ್ಳುವ ಮೊದಲು ಸಮಂತಾಗೆ ವಿಚ್ಛೇದನ ನೀಡುವ ಬಗ್ಗೆ ನೂರು ಬಾರಿ ಯೋಚಿಸಿದ್ದೆ ಎಂದು ಅವರು ಹೇಳಿದ್ದಾರೆ..

ನಾವು ಬಹಳ ಗೌರವಯುತವಾಗಿ ವಿಚ್ಛೇದನ ಘೋಷಣೆ ಮಾಡಿದ್ದೇವೆ. ನಾವು ಗೌಪ್ಯತೆಯನ್ನು ಸಹ ಕೇಳಿದೆವು. ಆದರೆ ಅದು ಮನರಂಜನೆಯಂತೆ ಮಾರ್ಪಟ್ಟಿದೆ. ವಿಘಟನೆಯ ಪರಿಣಾಮಗಳೇನು ಮತ್ತು ಯಾವ ರೀತಿಯ ನೋವನ್ನು ಅನುಭವಿಸಬೇಕಾಗುತ್ತದೆ ಎಂದು ನನಗೆ ತಿಳಿದಿದೆ. ನಾನು ಕೂಡ ಒಂದು ಮುರಿದ ಕುಟುಂಬದಿಂದ ಬಂದವನು. ನಾವು ರಾತ್ರೋರಾತ್ರಿ ಏನನ್ನೂ ನಿರ್ಧರಿಸಲಿಲ್ಲ. ಅಂತಹ ನಿರ್ಧಾರ ತೆಗೆದುಕೊಳ್ಳುವ ಮೊದಲು ಸಾವಿರ ಬಾರಿ ಯೋಚಿಸಿದ್ದೇವೆ. ನಾವಿಬ್ಬರೂ ಪರಸ್ಪರ ಒಪ್ಪಿಗೆಯಿಂದ ಬೇರ್ಪಟ್ಟಿದ್ದೇವೆ. ಎಂದು ಚೈತನ್ಯ ಹೇಳಿದರು.

ತಮ್ಮ ಮದುವೆಯ ಸಮಯದಲ್ಲಿ ಶೋಭಿತಾ ಬಗ್ಗೆ ಮಾಡಿದ ಕಾಮೆಂಟ್‌ಗಳಿಗೂ ಅವರು ಪ್ರತಿಕ್ರಿಯಿಸಿದರು. ಇನ್‌ಸ್ಟಾಗ್ರಾಮ್ ಮೂಲಕ ಉಂಟಾದ ಪರಿಚಯ ನಂತರ ಪ್ರೀತಿಗೆ ತಿರುಗಿ ಮದುವೆಗೆ ಕಾರಣವಾಯಿತು.. ನನ್ನ ಹಿಂದಿನ ಜೀವನಕ್ಕೂ ಈಗಿನ ಜೀವನಕ್ಕೂ ಯಾವುದೇ ಸಂಬಂಧವಿಲ್ಲ.. ಆದರೆ ಆ ಸಮಯದಲ್ಲಿ ನನ್ನನ್ನು ತುಂಬಾ ಟೀಕಿಸಲಾಯಿತು ಎಂದು ದುಃಖಿತರಾದರು.

## ಬಾಳೆ ಹಣ್ಣಿನ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್



ಸಾಮಾನ್ಯವಾಗಿ ನಾವು ಅತಿ ಹೆಚ್ಚು ಹಣ್ಣಾದ ಬಾಳೆ ಹಣ್ಣನ್ನು ತಿನ್ನಲು ಹೋಗುವುದಿಲ್ಲ. ಅದನ್ನು ನೇರವಾಗಿ ಹೊರಗಡೆ ಎಸೆಯಲು ಮುಂದಾಗುತ್ತೇವೆ.

ಆದರೆ ಇದರಿಂದ ನಮ್ಮ ಚರ್ಮಕ್ಕೆ ಎಷ್ಟು ಉಪಯೋಗ ಇದೆ ಗೊತ್ತೇ? ನಮ್ಮ ವಯಸ್ಸಾದ ಮುಖ್ಯ ಪ್ರಕ್ರಿಯೆಯನ್ನು ಸೂಚಿಸುವ ಹಲವಾರು ಚಿಹ್ನೆಗಳನ್ನು ಇದು ಚರ್ಮದಿಂದ ಮಾಯ ಮಾಡುತ್ತದೆ. ಚರ್ಮದಲ್ಲಿ ಕಂಡುಬರುವ ಸತ್ತ ಜೀವಕೋಶಗಳ ನಿವಾರಣೆಯಲ್ಲಿ ಕೂಡ ಇದು ಪ್ರಮುಖವಾಗಿ ಕೆಲಸ ಮಾಡುತ್ತದೆ.

ಎರಡು ಚೆನ್ನಾಗಿ ಮಾಗಿದ ಬಾಳೆಹಣ್ಣು ತೆಗೆದುಕೊಂಡು ಚೆನ್ನಾಗಿ ಕಿವುಚಿ.

ಇದಕ್ಕೆ ಕೆಲವು ಹನಿಗಳಷ್ಟು ಜೇನುತುಪ್ಪ ಮತ್ತು ಗಟ್ಟಿ ಮೊಸರನ್ನು 2 ಚಮಚ ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. ನಿಮ್ಮ ಚರ್ಮದ ಆರೋಗ್ಯವನ್ನು ಹೆಚ್ಚಿಸಲು ನೀವು ಇದಕ್ಕೆ ಬೇಕಾದರೆ ಓಟ್ಸ್ ಕೂಡ ಸೇರಿಸಬಹುದು.

ನಿಮ್ಮ ಮುಖದ ಮೇಲೆ ಮತ್ತು ಕುತ್ತಿಗೆಯ ಭಾಗದಲ್ಲಿ ಇದನ್ನು ಬ್ರಶ್ ಸಹಾಯದಿಂದ ಅನ್ವಯಿಸಿ. ನಿಮ್ಮ ಕಣ್ಣುಗಳ ಭಾಗದಲ್ಲಿ ಹಾಗೆ ಬಿಟ್ಟು ಹದಿನೈದರಿಂದ ಇಪ್ಪತ್ತು ನಿಮಿಷಗಳು ಕಳೆದ ನಂತರ ಉಗುರು ಬೆಚ್ಚಗಿನ ನೀರಿನಿಂದ ತೊಳೆದುಕೊಳ್ಳಿ. ಮುಖದ ಮೇಲೆ ಕಂಡುಬರುವ ಮೊಡವೆಗಳಿಗೆ ಒಂದು ಸುಲಭವಾದ ಪರಿಹಾರ ಇದು. ನಿಂಬೆಹಣ್ಣು ಮತ್ತು ಜೇನುತುಪ್ಪವನ್ನು ಬಾಳೆಹಣ್ಣಿನ ಜೊತೆ ಸೇರಿಸಿ ಮಿಶ್ರಣ ಮಾಡಿ ಹಚ್ಚಿಕೊಂಡು ಚರ್ಮದ ಉರಿಯೂತವನ್ನು ಸುಲಭವಾಗಿ ಕಡಿಮೆ ಮಾಡಿಕೊಳ್ಳಬಹುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಖರ್ಚಿನ ಬಗ್ಗೆ ನಿಯಂತ್ರಣ ಅಗತ್ಯ, ಕೆಲಸದಲ್ಲಿ ಒತ್ತಡ ಜಾಸ್ತಿ, ದೂರ ಪ್ರಯಾಣ, ವಿರೋಧಿಗಳಿಂದ ತೊಂದರೆ.

**ವೃಷಭ:** ನೂತನ ವ್ಯವಹಾರಗಳಲ್ಲಿ ಆಸಕ್ತಿ, ಹಿತ ಶತ್ರುಗಳಿಂದ ತೊಂದರೆ, ಸ್ಥಳ ಬದಲಾವಣೆ, ರಾಜ ವಿರೋಧ.

**ಮಿಥುನ:** ಮಕ್ಕಳಿಗೆ ಅನಾರೋಗ್ಯ, ಗುರಿ ಸಾಧಿಸಲು ಶ್ರಮ ಪಡುವಿರಿ, ಅಕಾಲ ಭೋಜನ, ಬಾಕಿ ವಸೂಲಿ.

**ಕಟಕ:** ಆಪ್ತರನ್ನು ದ್ವೇಷಿಸುವಿರಿ, ನೆಮ್ಮದಿ ಇಲ್ಲದ ಜೀವನ, ಪುಣ್ಯಕ್ಷೇತ್ರ ದರ್ಶನ, ಮಾತಿನಿಂದ ಅನರ್ಥ.

**ಸಿಂಹ:** ಎಲ್ಲಿ ಹೋದರು ಅಶಾಂತಿ, ಗುರು ಹಿರಿಯರಲ್ಲಿ ಭಕ್ತಿ, ಅಲಸ್ಯ ಮನೋಭಾವ, ಆದಾಯಕ್ಕಿಂತ ಖರ್ಚು ಜಾಸ್ತಿ.

**ಕನ್ಯಾ:** ಅಲ್ಪ ಕಾರ್ಯ ಸಿದ್ದಿ, ದೃಷ್ಟಿ ದೋಷದಿಂದ ತೊಂದರೆ, ಚಂಚಲ ಮನಸ್ಸು, ದೂರಲೋಚನೆ, ಸಲ್ಲದ ಅಪವಾದ.

**ತುಲಾ:** ಸಜ್ಜನ ವಿರೋಧ, ಧನವ್ಯಯ, ಕೋಪ ಜಾಸ್ತಿ, ಮನೋವ್ಯಥೆ, ಸ್ತ್ರೀ ಸಂಬಂಧ ವ್ಯವಹಾರಗಳಲ್ಲಿ ಎಚ್ಚರ.

**ವೃಶ್ಚಿಕ:** ಅಧಿಕಾರಿಗಳಲ್ಲಿ ಕಲಹ, ಅನಾರೋಗ್ಯ, ಕೆಲಸ ಕಾರ್ಯಗಳಲ್ಲಿ ವಿಘ್ನ, ಆಕಸ್ಮಿಕ ಧನವ್ಯಯ.

**ಧನಸ್ಸು:** ಹಿರಿಯರಿಂದ ಬೋಧನೆ, ಸ್ಥಳ ಬದಲಾವಣೆ, ಉನ್ನತ ಶಿಕ್ಷಣದಲ್ಲಿ ಯಶಸ್ಸು, ಹಣಕಾಸಿನ ಪರಿಸ್ಥಿತಿ ಉತ್ತಮ.

**ಮಕರ:** ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಮಾತಿನ ಮೇಲೆ ನಿಗಾ ಇರಲಿ, ಹಿತ ಶತ್ರು ಭಾದೆ, ಮನಸ್ಸಿನಲ್ಲಿ ದುಗುಡ.

**ಕುಂಭ:** ಕಾರ್ಯ ಬದಲಾವಣೆ, ಖಾಸಗಿ ಕಂಪನಿಯಿಂದ ಸಹಾಯ, ಕಪ್ಪು ಬಣ್ಣದ ವ್ಯಕ್ತಿಯಿಂದ ಸಹಾಯ, ತಾಳ್ಮೆ ಅಗತ್ಯ.

**ಮೀನ:** ಅನ್ಯರಿಗೆ ಉಪಕಾರ ಮಾಡುವಿರಿ, ಉದ್ಯೋಗದಲ್ಲಿ ಹೆಚ್ಚಿನ ಜವಾಬ್ದಾರಿ, ಅವಕಾಶಗಳು ಕೈ ತಪ್ಪುವುದು.

## ವಿಶ್ವ ವಿವಾಹ ದಿನ

ವಿಶ್ವ ವಿವಾಹ ದಿನವನ್ನು ಪ್ರತಿ ವರ್ಷ ಫೆಬ್ರವರಿಯಲ್ಲಿ ಎರಡನೇ ಭಾನುವಾರದಂದು ಆಚರಿಸಲಾಗುತ್ತದೆ, ಕೆಲವೊಮ್ಮೆ ಸೇಂಟ್ ವ್ಯಾಲೆಂಟೈನ್ಸ್ ಡೇ ಜೊತೆಜೊತೆಯಲ್ಲೇ ಆಚರಿಸಲಾಗುತ್ತದೆ. ಈ ವರ್ಷ, ಇದು ಫೆಬ್ರವರಿ 9 ರಂದು ನಡೆಯುತ್ತದೆ. ವಿಶ್ವ ವಿವಾಹ ದಿನವು ಅಧಿಕೃತವಾಗಿ 1983 ರಲ್ಲಿ ಯುನೈಟೆಡ್ ಸ್ಟೇಟ್ಸ್ ಆಫ್ ಅಮೇರಿಕಾದಲ್ಲಿ ಪ್ರಾರಂಭವಾಯಿತು. ಕ್ಯಾಥೋಲಿಕ್ ಚರ್ಚಿನಿಂದ ಜನಪ್ರಿಯಗೊಳಿಸಲ್ಪಟ್ಟ ವಿಶ್ವ ವಿವಾಹ ದಿನದ ಉದ್ದೇಶವು ವಿವಾಹದ ಸೌಂದರ್ಯವನ್ನು ಒತ್ತಿಹೇಳುವುದು ಮತ್ತು ಗಂಡ ಮತ್ತು ಹೆಂಡತಿಯರ ನಿಷ್ಠೆ ಮತ್ತು ತ್ಯಾಗಗಳಿಗಾಗಿ ಅವರನ್ನು ಗೌರವಿಸುವುದು.

ವಿಶ್ವ ವಿವಾಹ ದಿನವು ವೈವಾಹಿಕ ಒಕ್ಕೂಟದ ಭರವಸೆ ಮತ್ತು ಕ್ರಿಸ್ತನ ದೃಷ್ಟಿಯಲ್ಲಿ ಕಾನೂನುಬದ್ಧವಾಗಿ ವಿವಾಹಿತ ದಂಪತಿಗಳಾಗುವ ಸೌಂದರ್ಯವನ್ನು ಎತ್ತಿ ತೋರಿಸುತ್ತದೆ. ಹೋರಾಡುತ್ತಿರುವ ದಂಪತಿಗಳ ವೈವಾಹಿಕ ಜೀವನವನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ಉಪಕ್ರಮವಾದ ವರ್ಲ್ಡ್‌ವೈಡ್ ಮ್ಯಾರೇಜ್ ಎನ್ಕೌಂಟರ್ನಿಂದ ಇದನ್ನು ಕ್ರಮಗೊಳಿಸಲಾಯಿತು. ವಿಶ್ವ ವಿವಾಹ ದಿನವು ವಿವಾಹದ ನೀತಿಯನ್ನು ಪ್ರಚಾರ ಮಾಡುತ್ತದೆ ಮತ್ತು ಗಂಡ ಮತ್ತು ಹೆಂಡತಿಯರತ್ಯಾಗಮತ್ತು ನಿಷ್ಠೆಯನ್ನು ಗೌರವಿಸುತ್ತದೆ. ಕ್ಯಾಥೋಲಿಕ್ ದಂಪತಿಗಳು ಭಾನುವಾರದ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸುವ ಮೂಲಕ ಮತ್ತು ವಿವಾಹ ಸಂಸ್ಥೆಯ ಮೌಲ್ಯಗಳಿಗೆ ತಮ್ಮನ್ನು ತಾವು ಮರು ಬದ್ಧಗೊಳಿಸುವ ಮೂಲಕ ದಿನವನ್ನು ಆಚರಿಸುತ್ತಾರೆ. ವಿಶ್ವ ವಿವಾಹ ದಿನವು ವರ್ಲ್ಡ್‌ವೈಡ್ ಮ್ಯಾರೇಜ್ ಎನ್ಕೌಂಟರ್ನ ಒಂದು ಭಾಗವಾಗಿದೆ, ಇದು ದಂಪತಿಗಳು ಆನಂದದಾಯಕ ಮತ್ತು ಸಂತೋಷದ ವಿವಾಹಗಳನ್ನು ಆನಂದಿಸಲು ಸಹಾಯ ಮಾಡುವ ಧ್ಯೇಯವನ್ನು ಹೊಂದಿರುವ ಧರ್ಮಪ್ರಚಾರಕವಾಗಿದೆ. ಈ ದಿನವು ಪತಿ ಮತ್ತು ಪತ್ನಿಯನ್ನು ಕುಟುಂಬದ ಅಡಿಪಾಯವೆಂದು ಆಚರಿಸುತ್ತದೆ ಮತ್ತು ಕುಟುಂಬವನ್ನು ಸಮಾಜದ ಮೂಲ ಘಟಕವೆಂದು ನೋಡುತ್ತದೆ. ಇದಲ್ಲದೆ, ವಿಶ್ವ ವಿವಾಹ ದಿನವು ವಿವಾಹದ ನಿಷ್ಠೆ, ಭಕ್ತಿ, ತ್ಯಾಗ, ಬದ್ಧತೆ ಮತ್ತು ಸಂತೋಷದ ಸೌಂದರ್ಯವನ್ನು ಗೌರವಿಸುತ್ತದೆ.

ಇತಿಹಾಸದುದ್ದಕ್ಕೂ, ವಿವಾಹದ ವ್ಯಾಖ್ಯಾನವು ಅಗಾಧವಾದ ವಿಕಸನಕ್ಕೆ ಒಳಪಟ್ಟಿದೆ. ಏಕಪತ್ನಿ ವಿವಾಹಗಳು ಮುಂಬರುವ ಪೀಳಿಗೆಗೆ ಖಂಡಿತವಾಗಿಯೂ ಒಂದು ರಹಸ್ಯ ಸಂಸ್ಥೆಯಂತೆ ಧ್ವನಿಸುತ್ತದೆ, ಆದರೆ ಇದು ಹೊಸ ಪರಿಕಲ್ಪನೆಯಾಗಿದೆ. 1882 ರವರೆಗೆ ಅಮೇರಿಕದಲ್ಲಿ ಬಹುಪತ್ನಿತ್ವವನ್ನು ಕಾನೂನುಬಾಹಿರವೆಂದು ಪರಿಗಣಿಸಲಾಗಿಲ್ಲ. ಕ್ಯಾಥೋಲಿಕ್ ಚರ್ಚ್ಗೆ, ವೈವಾಹಿಕ ಜೀವನವು ಇಬ್ಬರು ವ್ಯಕ್ತಿಗಳ ಒಕ್ಕೂಟಕ್ಕಿಂತ ಹೆಚ್ಚಿನದಾಗಿದೆ. ಬದಲಾಗಿ, ಇದು ಮಾನವೀಯತೆಯ ಅಡಿಪಾಯ ಮತ್ತು ನಾಗರಿಕತೆಯ ತೊಟ್ಟಿಲು. ಈ ದಿನವು ಸಮುದಾಯವು ತಮ್ಮ ವೈವಾಹಿಕ ಜೀವನವನ್ನು ಸಂತೋಷ ಮತ್ತು ನಂಬಿಕೆಯಿಂದ ನಡೆಸುವಂತೆ ಮತ್ತು ಕುಟುಂಬ ಜೀವನವನ್ನು ಅವರ ಜೀವನದ ದೊಡ್ಡ ಆದ್ಯತೆಯನ್ನಾಗಿ ಮಾಡಿಕೊಳ್ಳುವಂತೆ ಒತ್ತಾಯಿಸುತ್ತದೆ.

ವಿಶ್ವ ವಿವಾಹ ದಿನದ ಮೂಲಕ, ಆಧುನಿಕ ಸಮಾಜದಲ್ಲಿ ಕುಟುಂಬ ಮೌಲ್ಯಗಳ ಕ್ಷೀಣತೆಯ ಮೇಲೆ ವಿಶೇಷ ಬೆಳಕು ಚೆಲ್ಲಲಾಗುತ್ತದೆ. ಈ ದಿನವು ಪ್ಯಾರಿಷ್ಗಳು ವಿವಾಹಿತ ದಂಪತಿಗಳೊಂದಿಗೆ ಪ್ರತಿ ಹಂತದಲ್ಲೂ ಜೊತೆಗೂಡಿ ಚರ್ಚ್ ಪವಿತ್ರ ಜೀವನದಲ್ಲಿ ಸೇರಲು ಮನವೊಲಿಸಲು ಕರೆ ನೀಡುತ್ತದೆ. ಇದು ವಿವಾಹ ಸಂಸ್ಥೆಯಲ್ಲಿ ಉದಯೋನ್ಮುಖ ವೈವಿಧ್ಯತೆಯ ಆಚರಣೆ ಮತ್ತು ದೇವರ ಸೃಷ್ಟಿಗಳ ಹಿರಿಮೆಗೆ ಸೇರಿಸುವ ವಿವಿಧ ಪರಂಪರೆಗಳು ಮತ್ತು ಜನಾಂಗಗಳ ಸಂಯೋಜನೆಯಾಗಿದೆ.

# ಲೋಕಸಭೆಯಲ್ಲಿ ಹೊಸ ಆದಾಯ ತೆರಿಗೆ ಮಸೂದೆ ಮಂಡನೆ: ನಿರ್ಮಲಾ ಸೀತಾರಾಮನ್



**ನವದೆಹಲಿ:** ಹೊಸ ಆದಾಯ ತೆರಿಗೆ ಮಸೂದೆಯನ್ನು ಶುಕ್ರವಾರ ಕ್ಯಾಬಿನೆಟ್ನಲ್ಲಿ ಅಂಗೀಕರಿಸಲಾಗಿದೆ ಮತ್ತು ಮುಂಬರುವ ವಾರದಲ್ಲಿ ಲೋಕಸಭೆಯಲ್ಲಿ ಪರಿಚಯಿಸಲಾಗುವುದು, ನಂತರ ಅದನ್ನು ಸಂಸದೀಯ ಸಮಿತಿಗೆ ಕಳುಹಿಸಲಾಗುವುದು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಶನಿವಾರ ಹೇಳಿದ್ದಾರೆ.

''ಶುಕ್ರವಾರ ಕ್ಯಾಬಿನೆಟ್ ಹೊಸ ಆದಾಯ ತೆರಿಗೆ ಮಸೂದೆ ಪ್ರಸ್ತಾಪಕ್ಕೆ ಅನುಮೋದನೆ ನೀಡಿತು. ಮುಂಬರುವ ವಾರದಲ್ಲಿ ಇದನ್ನು ಲೋಕಸಭೆಯಲ್ಲಿ ಪರಿಚಯಿಸಲಾಗುವುದು ಎಂದು ನಾನು ಭಾವಿಸುತ್ತೇನೆ. ಅದರ ನಂತರ ಅದು ಸಮಿತಿಗೆ ಹೋಗುತ್ತದೆ, ಮತ್ತು ಪ್ರಕ್ರಿಯೆಗಳು ನಿಮಗೆ ತಿಳಿದಿರುವಂತೆ, ಸಮಿತಿಯು ತನ್ನ ಶಿಫಾರಸುಗಳನ್ನು ನೀಡುತ್ತದೆ, ಅದು ಹಿಂತಿರುಗುತ್ತದೆ ಮತ್ತು ನಂತರ ಸರ್ಕಾರವು ಕ್ಯಾಬಿನೆಟ್ ಮೂಲಕ ಈ ತಿದ್ದುಪಡಿಗಳನ್ನು ತೆಗೆದುಕೊಳ್ಳಬೇಕೇ ಅಥವಾ ಅವುಗಳಲ್ಲಿ ಕೆಲವು ಅಥವಾ ಹೆಚ್ಚಿನದನ್ನು ಸೇರಿಸಬೇಕೇ ಎಂದು ನಿರ್ಧಾರ ತೆಗೆದುಕೊಳ್ಳುತ್ತದೆ '' ಎಂದು ನಿರ್ಮಲಾ ಸೀತಾರಾಮನ್ ಹೇಳಿದರು.

ಮಸೂದೆಯು ಸಂಸತ್ತಿಗೆ ಮರಳಿದ ನಂತರ, ಅದರ ಬಿಡುಗಡೆಯ ದಿನಾಂಕದ ಬಗ್ಗೆ ಸರ್ಕಾರ ಕರೆ ನೀಡುತ್ತದೆ ಎಂದು ಅವರು ಹೇಳಿದರು. ''ಅದರ ನಂತರವೇ ಅದು ಮತ್ತೆ ಸಂಸತ್ತಿಗೆ ಹೋಗುತ್ತದೆ. ಆದ್ದರಿಂದ ಅದರ ನಂತರ ಸಂಸತ್ತು ಅದನ್ನು ಅಂಗೀಕರಿಸಿದ ನಂತರ, ಅದನ್ನು ಯಾವಾಗ ಉತ್ತಮವಾಗಿ ಹೊರತರಬೇಕೆಂದು ನಾವು ನಿರ್ಧರಿಸುತ್ತೇವೆ. ಇದು ಯಾವಾಗ ಹೊರಬರುತ್ತದೆ ಎಂಬ ಪ್ರಶ್ನೆಯನ್ನು ನೀವು ನನ್ನನ್ನು ಕೇಳುತ್ತಿದ್ದರೂ, ನಾನು ಇನ್ನೂ ಮೂರು ನಿರ್ಣಾಯಕ ಹಂತಗಳನ್ನು ದಾಟಬೇಕಾಗಿದೆ'' ಎಂದು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ ಮಂಡಳಿಯ ಸಭೆಯ ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಹೊಸ ಆದಾಯ ತೆರಿಗೆ ಮಸೂದೆಯ ಅನುಷ್ಠಾನ ದಿನಾಂಕದ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದರು.

# ಅಭಿವೃದ್ಧಿ, ಉತ್ತಮ ಆಡಳಿತಕ್ಕೆ ಸಿಕ್ಕ ಜಯ- ಮೋದಿ



**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷದ (ಬಿಜೆಪಿ) ದೊಡ್ಡ ಗೆಲುವನ್ನು ಪ್ರಧಾನಿ ನರೇಂದ್ರ ಮೋದಿ ಶನಿವಾರ ಶ್ಲಾಘಿಸಿದ್ದಾರೆ. ಅಭಿವೃದ್ಧಿ ಮತ್ತು ಉತ್ತಮ ಆಡಳಿತ ಗೆದ್ದಿದೆ ಎಂದು ಬಣ್ಣಿಸಿದ್ದಾರೆ.

ಈ ಬಗ್ಗೆ ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಪ್ರಧಾನಿ ಮೋದಿ, ಬಿಜೆಪಿಗೆ ಐತಿಹಾಸಿಕ ಗೆಲುವು ನೀಡಿದ್ದಕ್ಕಾಗಿ ದೆಹಲಿಯ ನನ್ನ ಎಲ್ಲಾ ಸಹೋದರ ಸಹೋದರಿಯರಿಗೆ ಅಭಿನಂದನೆಗಳು. ನಿಮ್ಮೆಲ್ಲರಿಗೂ ನನ್ನ ಹೃದಯಾಂತರಾಳದಿಂದ ಕೃತಜ್ಞತೆ. ದೆಹಲಿಯ ಸರ್ವತೋಮುಖ ಅಭಿವೃದ್ಧಿ, ಜನರ ಜೀವನವನ್ನು ಉತ್ತಮಗೊಳಿಸಲು ಸಿಗುವ ಯಾವುದೇ ಅವಕಾಶವನ್ನು ಬಿಟ್ಟುಕೊಡುವುದಿಲ್ಲ ಎಂದು ಖಾತರಿಪಡಿಸುತ್ತೇವೆ ಎಂದಿದ್ದಾರೆ.

ವಿಕಸಿತ ಭಾರತವನ್ನು ನಿರ್ಮಿಸುವಲ್ಲಿ ದೆಹಲಿ ಪ್ರಮುಖ ಪಾತ್ರ ವಹಿಸುತ್ತದೆ. ಪಕ್ಷಕ್ಕೆ ಇಷ್ಟು ದೊಡ್ಡದ ಮಟ್ಟದ ಜನಾದೇಶ ಬರುವಲ್ಲಿ ಹಗಲಿರುಳು ಶ್ರಮಿಸಿದ ಪಕ್ಷದ ನನ್ನ ಎಲ್ಲಾ ಕಾರ್ಯಕರ್ತರ ಬಗ್ಗೆ ನನಗೆ ತುಂಬಾ ಹೆಮ್ಮೆ ಇದೆ. ಈಗ ನಾವು ದೆಹಲಿಯ ಜನರಿಗೆ ಸೇವೆ ಸಲ್ಲಿಸಲು ಇನ್ನಷ್ಟು ಶ್ರಮವಹಿಸಿ ಸಮರ್ಪಣಾ ಭಾವದಿಂದ ಕೆಲಸ ಮಾಡುತ್ತೇವೆ ಎಂದು ಪ್ರಧಾನಿ ಹೇಳಿದ್ದಾರೆ.

## ಆಗಸ್ಟ್‌ನಿಂದ ಬಾಂಗ್ಲಾದೇಶದಲ್ಲಿ 23 ಹಿಂದೂಗಳ ಸಾವು: 152 ದೇವಾಲಯಗಳ ಮೇಲೆ ದಾಳಿ

**ನವದೆಹಲಿ:** 2024ರ ಆಗಸ್ಟ್ನಿಂದ ನೆರೆಯ ಬಾಂಗ್ಲಾದೇಶದಲ್ಲಿ ಒಟ್ಟು 23 ಹಿಂದೂಗಳ ಸಾವಾಗಿದೆ ಮತ್ತು 152 ಹಿಂದೂ ದೇವಾಲಯಗಳ ಮೇಲಿನ ದಾಳಿ ಆಗಿದೆ ಎಂದು ವರದಿಗಳು ಉಲ್ಲೇಖಿಸಿವೆ ಎಂದು ಸಂಸತ್ಗೆ ಕೇಂದ್ರ ಸರ್ಕಾರ ಶುಕ್ರವಾರ ತಿಳಿಸಿದೆ. ನಿನ್ನೆಯ ಲೋಕಸಭೆಯಲ್ಲಿ ಬಾಂಗ್ಲಾದೇಶದಲ್ಲಿ ಕಳೆದ 2 ತಿಂಗಳಲ್ಲಿ ಹಿಂದೂ ದೇವಾಲಯಗಳ ಮೇಲಿನ ದಾಳಿ ಮತ್ತು ಘಟನೆಯಲ್ಲಿ ಗಾಯಗೊಂಡ, ಸತ್ತ ಹಿಂದೂಗಳ ಸಂಖ್ಯೆ, ಅವರಿಗೆ ಉಂಟಾಗಿರುವ ಕಿರುಕುಳದ ಪ್ರಕರಣಗಳ ವಿವರಗಳ ಬಗ್ಗೆ ಸರ್ಕಾರವನ್ನು ಕೇಳಲಾಯಿತು. ಈ ಪ್ರಶ್ನೆಗೆ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ಲಿಖಿತ ಪ್ರತಿಕ್ರಿಯೆಯಲ್ಲಿ ಉತ್ತರಿಸಿದರು. ಕಳೆದ ಎರಡು ತಿಂಗಳ ಅವಧಿಯಲ್ಲಿ (ನವೆಂಬರ್ 26, 2024 ರಿಂದ ಜನವರಿ 25, 2025 ರವರೆಗೆ) ಬಾಂಗ್ಲಾದೇಶದಲ್ಲಿ ಹಿಂದೂಗಳ ವಿರುದ್ಧ 76 ದಾಳಿ ಘಟನೆಗಳು ವರದಿಯಾಗಿವೆ. ಆಗಸ್ಟ್ನಿಂದ 23 ಹಿಂದೂಗಳು ಮೃತಪಟ್ಟಿದ್ದಾರೆ ಮತ್ತು ಹಿಂದೂ ದೇವಾಲಯಗಳ ಮೇಲೆ 152 ದಾಳಿಯ ಘಟನೆಗಳಾಗಿವೆ. ಬಾಂಗ್ಲಾದೇಶದಲ್ಲಿ ಹಿಂದೂಗಳು ಮತ್ತು ಇತರ ಅಲ್ಪಸಂಖ್ಯಾತರ ವಿರುದ್ಧದ ಹಿಂಸಾಚಾರದ ಘಟನೆಗಳನ್ನು ಭಾರತ ಸರ್ಕಾರ ಗಮನಿಸಿದೆ. ಹಾಗೇ ಬಾಂಗ್ಲಾದೇಶದ ಸರ್ಕಾರದೊಂದಿಗೆ ತನ್ನ ಕಳವಳವನ್ನು ಹಂಚಿಕೊಂಡಿದೆ ಎಂದು ಸದನಕ್ಕೆ ವಿವರಿಸಿದರು. 2024ರ ಡಿಸೆಂಬ‌ರ್ 9ರಂದು ನಮ್ಮ ವಿದೇಶಾಂಗ ಕಾರ್ಯದರ್ಶಿ ಬಾಂಗ್ಲಾದೇಶಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಹಿಂದೂಗಳು ಮತ್ತು ಇತರ ಅಲ್ಪಸಂಖ್ಯಾತರ ರಕ್ಷಣೆಗೆ ಸಂಬಂಧಿಸಿದಂತೆ ಭಾರತದ ನಿರ್ಧಾರಗಳನ್ನು ಪುನರುಚ್ಚರಿಸಲಾಗಿದೆ. ಡಿಸೆಂಬರ್ 10ರಂದು ಬಾಂಗ್ಲಾದೇಶದ ಸರ್ಕಾರವು ಪತ್ರಿಕಾಗೋಷ್ಠಿಯಲ್ಲಿ ಅಲ್ಲಿನ ಅಲ್ಪಸಂಖ್ಯಾತರ ವಿರುದ್ಧದ ದಾಳಿಗಳಿಗೆ ಸಂಬಂಧಿಸಿದ ಒಟ್ಟು 88 ಪ್ರಕರಣಗಳಲ್ಲಿ 70 ಜನರನ್ನು ಬಂಧಿಸಲಾಗಿದೆ ಎಂದು ಘೋಷಿಸಿದೆ. ಪೊಲೀಸ್ ತನಿಖೆಗಳು ತರುವಾಯ 1,254 ಘಟನೆಗಳನ್ನು ಪರಿಶೀಲಿಸಿದೆ ಎಂದು ಬಾಂಗ್ಲಾ ಸರ್ಕಾರ ಹೇಳಿದೆ.

## ಅಮೆರಿಕದಲ್ಲಿ ಮತ್ತೊಂದು ವಿಮಾನ ದುರಂತ: 10 ಮಂದಿ ಸಾವು

**ಅಲಾಸ್ಕಾ,:** ಪಶ್ಚಿಮ ಅಲಾಸ್ಕಾದಲ್ಲಿ ಸಣ್ಣ ವಿಮಾನವೊಂದು ಪತನಗೊಂಡಿದೆ. ಪ್ರಯಾಣಿಕ ವಿಮಾನದಲ್ಲಿದ್ದ ಎಲ್ಲಾ 10 ಜನರು ಸಾವನ್ನಪ್ಪಿದ್ದಾರೆ ಎಂದು ಅಮೆರಿಕದ ಕೋಸ್ಟ್ ಗಾರ್ಡ್ ಹೇಳಿದೆ.ಅಲಾಸ್ಕಾದ ಪಶ್ಚಿಮ ಕರಾವಳಿಯಲ್ಲಿ ನಿಯಂತ್ರಣ ಕಳೆದುಕೊಂಡು ನಾಪತ್ತೆಯಾದ ವಿಮಾನ ಪತನವಾಗಿರುವ ಸ್ಥಳವನ್ನು ಅಮೆರಿಕದ ಕೋಸ್ಟ್ ಗಾರ್ಡ್ ಶುಕ್ರವಾರ ಪತ್ತೆ ಹಚ್ಚಿದೆ. ಅಲಾಸ್ಕಾದ ಕೋಸ್ಟ್ ಗಾರ್ಡ್ ಘ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ್ದು, ವಿಮಾನವು ನೋಮ್ನಿಂದ ಆಗ್ನೇಯಕ್ಕೆ 34 ಮೈಲುಗಳಷ್ಟು ದೂರದಲ್ಲಿ ಕಂಡು ಬಂದಿದೆ ಎಂದು ಹೇಳಿದೆ.



ವಿಮಾನದಲ್ಲಿದ್ದ ಎಲ್ಲರೂ ಮೃತಪಟ್ಟಿದ್ದಾರೆ ಎಂದು ನಂಬಲಾಗಿದೆ ಎಂದು ಕೋಸ್ಟ್ ಗಾರ್ಡ್ ಅಧಿಕಾರಿಗಳು ತಿಳಿಸಿದ್ದಾರೆ. ಕಳಪೆ ಹವಾಮಾನ ಮತ್ತು ಕಡಿಮೆ ಗೋಚರತೆಯಿಂದಾಗಿ ವಿಮಾನ ನಿಯಂತ್ರಣ ಕಳೆದುಕೊಂಡು ಪತನವಾಗಿದೆ. ಅಗ್ನಿಶಾಮಕ ಸಿಬ್ಬಂದಿ ನೋಮ್ನಿಂದ ಟಾಪ್ಕಕ್ವರೆಗೆ ತೀವ್ರ ಹುಡುಕಾಟ ನಡೆಸಿತು. ಇನ್ನು ಯುಎಸ್ ಕೋಸ್ಟ್ ಗಾರ್ಡ್ ಫ್ಲೈಟ್ ಸಿಬ್ಬಂದಿ ವಾಯುಪ್ರದೇಶದಲ್ಲಿ ಶೋಧ ಕೈಗೊಂಡಿತ್ತು.ಅಲಾಸ್ಕಾ ಸಾರ್ವಜನಿಕ ಸುರಕ್ಷತೆ ಇಲಾಖೆಯ ಪ್ರಕಾರ, ಬೆರಿಂಗ್ ಏರ್ ನಿರ್ವಹಿಸುವ ಟರ್ಬೊಪ್ರಾಪ್ ಸೆಸ್ನಾ ಕಾರವಾನ್ ಗುರುವಾರ ಮಧ್ಯಾಹ್ನ ಕಾಣೆಯಾಗಿದೆ ಎಂದು ವರದಿಯಾಗಿತ್ತು. ಸ್ಥಳೀಯ ಕಾಲಮಾನ ಶುಕ್ರವಾರ ಬೆಳಗ್ಗೆ 9 ಗಂಟೆಗೆ ವಿಮಾನದಲ್ಲಿದ್ದ ಪ್ರತಿಯೊಬ್ಬರ ಕುಟುಂಬಗಳಿಗೆ ಸೂಚನೆ ನೀಡಲಾಗಿದೆ ಎಂದು ನೋಮ್ ಸ್ವಯಂಸೇವಕ ಅಗ್ನಿಶಾಮಕ ಇಲಾಖೆ ತಿಳಿಸಿದೆ. ಅಲಾಸ್ಕಾ ಸ್ಟೇಟ್ ಟ್ರೂಪರ್ ಲೆಫ್ಟಿನೆಂಟ್ ಬೆನ್ ಎಂಡ್ರೆಸ್ ಅವರು ಮಾತನಾಡಿ, ವಿಮಾನದಲ್ಲಿದ್ದವರೆಲ್ಲ ವಯಸ್ಕರು ಎಂದು ಹೇಳಿದರು

## ಕೆನಡಾ ಪ್ರಜೆ ಭಾರತದಿಂದ ಗಡೀಪಾರು

**ಗುವಾಹಟಿ:** ಅಮೆರಿಕದಲ್ಲಿ ಅಕ್ರಮವಾಗಿ ನೆಲೆಸಿದ್ದ 104 ಜನ ಭಾರತೀಯರನ್ನು ಬುಧವಾರ ಅಮೆರಿಕದ ಮಿಲಿಟರಿ ವಾಹನದಲ್ಲಿ ಅಮೃತ್ಸರ್ಗೆ ಕರೆ ತರಲಾಗಿತ್ತು. ಇದರ ಬೆನ್ನಲ್ಲೇ ಇದೀಗ ಭಾರತದಲ್ಲಿ ಅಕ್ರಮವಾಗಿ ನೆಲೆಸಿದ್ದ ಕೆನಡಾ ನಾಗರೀಕನನ್ನು ಆತನ ದೇಶಕ್ಕೆ ವಾಪಸ್ ಕಳುಹಿಸಲಾಗಿದೆ. ಅಸ್ಸೋಂನಲ್ಲಿ ಪ್ರವಾಸಿ ವೀಸಾದಲ್ಲೇ ನೆಲೆಸಿದ್ದ ಕೆನಡಾ ಪ್ರಜೆ ವಿರುದ್ಧ ಧಾರ್ಮಿಕ ಮತಾಂತರದ ಆರೋಪ ಕೂಡ ಕೇಳಿಬಂದಿದೆ. ಹಾಗೇ ಆತನ ಪ್ರವಾಸಿ ವೀಸಾದ ಅವಧಿ ಮುಗಿದ ಹಿನ್ನೆಲೆ ಆತನನ್ನು ಅಸ್ಸೋಂನ ಜೋರ್ಹಟ್ ಜಿಲ್ಲೆಯಲ್ಲಿ ಬಂಧಿಸಿ, ಗಡಿಪಾರು ಮಾಡಲಾಗಿದೆ. ಬ್ರಾಂಡೋನ್ ಜೋಯೆಲ್ ಡೆವಾಲ್ಟ್ ಬಂಧಿತ ಕೆನಡಾ ಪ್ರಜೆಯಾಗಿದ್ದು, ಗಡೀಪಾರು ಮಾಡಲಾಗಿದೆ.ಪೊಲೀಸ್ ಅಧಿಕಾರಿಗಳು ಹೇಳುವಂತೆ ಕೆನಡಾ ಪ್ರಜೆ ವೀಸಾ ಅವಧಿ ಜನವರಿ 17ಕ್ಕೇ ಮುಗಿದಿದೆ. ಆತ ವೀಸಾ ನವೀಕರಣಕ್ಕೆ ಅರ್ಜಿ ಸಲ್ಲಿಸಿದ್ದಾನೆ. ಆದರೆ, ಆತ ಮತಾಂತರ ಚಟುವಟಿಕೆಯಲ್ಲಿ ತೊಡಗಿರುವ ಕುರಿತು ದೂರು ಬಂದಿದೆ. ಸ್ಥಳೀಯರು ಈತ ಬಲವಂತವಾಗಿ ಮತಾಂತರ ಮಾಡುತ್ತಿದ್ದಾನೆ ಎಂದು ಆರೋಪಿಸಿದ್ದಾರೆ ಎಂದು ಜೋರ್ಹತ್ ಎಸ್ಪಿ ಶ್ವೇತಂಕ್ ಮಿಶ್ರಾ ತಿಳಿಸಿದ್ದಾರೆ.ಬ್ರಾಂಡೊನ್, ಅಕ್ರಮವಾಗಿ ಮತಾಂತರ ಮತ್ತು ಜೋರ್ಹಟ್ನಲ್ಲಿನ ಮಿಷನ್ ಕ್ಯಾಂಪಸ್ ಗ್ರೇಸ್ ಚರ್ಚ್ನಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿದ್ದ. ಈತ ಸ್ಥಳೀಯ ಜನರನ್ನು ಮತಾಂತರಗೊಳಿಸಲು ಯೂಟ್ಯೂಬ್ ಚಾನಲ್ ಅನ್ನು ಕೂಡ ನಡೆಸುತ್ತಿದ್ದಾರೆ. ಈ ಯೂಟ್ಯೂಬ್ ಚಾನಲ್ ಅನ್ನು ಇದೀಗ ಡಿಆಕ್ಟಿವೇಟ್ ಮಾಡಲಾಗಿದೆ. ಆತನ ವಿರುದ್ಧ ಸಾಕಷ್ಟು ಸಾಕ್ಷ್ಯಗಳು ಲಭ್ಯವಾಗಿವೆ ಎಂದರು.

# ನನ್ನ ಸಲಹೆ ನಿರ್ಲಕ್ಷಿಸಿದರು: ಅಣ್ಣಾ ಹಜ಼ಾರೆ ವಾಗ್ದಾಳಿ



**ಹೊಸದಿಲ್ಲಿ:** ನನ್ನ ಸಲಹೆಯನ್ನು ನಿರ್ಲಕ್ಷಿಸಿ, ಅರವಿಂದ್ ಕೇಜ್ರಿವಾಲ್ ಹಣ-ಅಧಿಕಾರದ ಮದವೇರಿಸಿಕೊಂಡಿದ್ದರು ಎಂದು ಶನಿವಾರ ಅಣ್ಣಾ ಹಜ಼ಾರೆ ವಾಗ್ದಾಳಿ ನಡೆಸಿದರು.

ದಿಲ್ಲಿ ವಿಧಾನಸಭಾ ಚುನಾವಣಾ ಫಲಿತಾಂಶದ ಕುರಿತು ಪ್ರತಿಕ್ರಿಯಿಸಿರುವ ಅಣ್ಣಾ ಹಜ಼ಾರೆ, ''ಅಭ್ಯರ್ಥಿಯ ನಡತೆ ಹಾಗೂ ಚಿಂತನೆಗಳು ಶುದ್ಧವಾಗಿರಬೇಕು ಎಂದು ನಾನು ಯಾವಾಗಲೂ ಹೇಳಿದ್ದೇನೆ. ಆತನ ಜೀವನವು ದೂಷಣೆಯಿಂದ ಹೊರತಾಗಿರಬೇಕು ಹಾಗೂ ತ್ಯಾಗದಿಂದ ತುಂಬಿರಬೇಕು. ಇಂತಹ ಗುಣಗಳಿಂದ ಮಾತ್ರ ಆತ ಮತದಾರರ ವಿಶ್ವಾಸ ಗಳಿಸಬಲ್ಲ'' ಎಂದು ಹೇಳಿದರು.

''ನಾನು ಇದನ್ನು ಆತನಿಗೆ (ಅರವಿಂದ್ ಕೇಜ್ರಿವಾಲ್) ಹೇಳಿದೆ. ಆದರೆ, ಆತ ಅದಕ್ಕೆ ಕಿವಿಗೊಡಲಿಲ್ಲ. ಕೊನೆಗೆ, ಆತ ಮದ್ಯದ ಮೇಲೆ ಗಮನ ಹರಿಸಿದ. ಈ ವಿಷಯ ಮುನ್ನೆಲೆಗೆ ಬಂದಿದ್ದು ಏಕೆ? ಆತ ಹಣ ಮತ್ತು ಅಧಿಕಾರದಿಂದ ಮದವೇರಿಸಿಕೊಂಡಿದ್ದ'' ಎಂದು ಅವರು ಕುಟುಕಿದರು.

''ರಾಜಕೀಯದಲ್ಲಿ ಆರೋಪಗಳನ್ನು ಮಾಡಲಾಗುತ್ತದೆ. ಆದರೆ, ನಾನು ತಪ್ಪಿತಸ್ಥನಲ್ಲ ಎಂದು ನಿರೂಪಿಸಬೇಕಾಗುತ್ತದೆ. ಸತ್ಯವು ಸತ್ಯವಾಗಿಯೇ ಉಳಿಯುತ್ತದೆ. ಸಭೆಯೊಂದು ನಡೆದಾಗ, ನಾನು ಪಕ್ಷದ ಭಾಗವಾಗಕೂಡದು ಎಂದು ನಿರ್ಧರಿಸಿದೆ. ಆ ದಿನದಿಂದಲೇ ನಾನು ಹೊರಗುಳಿದೆ'' ಎಂದೂ ಅಣ್ಣಾ ಹಜ಼ಾರೆ ಹೇಳಿದರು.

# ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷ ಕಳೆದುಕೊಂಡ ಮತ ಪ್ರಮಾಣ ಎಷ್ಟು



**ಹೊಸದಿಲ್ಲಿ:** ರಾಷ್ಟ್ರ ರಾಜಧಾನಿಯಲ್ಲಿ ಅರವಿಂದ್ ಕೇಜ್ರಿವಾಲ್ ನೇತೃತ್ವದ ಆಮ್ ಆದ್ಮಿ ಪಕ್ಷದ ಹತ್ತು ವರ್ಷಗಳ ಆಡಳಿತ ಅಂತ್ಯಗೊಂಡಿದ್ದು, ಎರಡು ಚುನಾವಣೆಗಳಲ್ಲಿ ಭಾರೀ ಬಹುಮತದೊಂದಿಗೆ ಆಯ್ಕೆಯಾಗಿದ್ದ ಎಎಪಿ ಈ ಬಾರಿ ಹೀನಾಯ ಸೋಲು ಕಂಡಿದೆ. ಕಳೆದ ಚುನಾವಣೆಗಳಿಗೆ ಹೋಲಿಸಿದರೆ ಪಕ್ಷ ಶೇಕಡ 10ರಷ್ಟು ಮತಗಳನ್ನು ಕಳೆದುಕೊಂಡಿರುವುದು ಈ ಬಾರಿಯ ಸೋಲಿಗೆ ಪ್ರಮುಖ ಕಾರಣ. ಆಮ್ ಆದ್ಮಿ ಪಕ್ಷ ಹಾಗೂ ಬಿಜೆಪಿ ಕಳೆದ ಮೂರು ಚುನಾವಣೆಗಳಲ್ಲಿ ಪಡೆದ ಮತಗಳ ಅಂತರದ ವಿವರ ಇಲ್ಲಿದೆ.

2025ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಶೇಕಡ 45.76ರಷ್ಟು ಮತಗಳನ್ನು ಪಡೆದಿದ್ದು, ಆಮ್ ಆದ್ಮಿ ಪಕ್ಷ ಶೇಕಡ 43.55 ಹಾಗೂ ಕಾಂಗ್ರೆಸ್ ಪಕ್ಷ ಶೇಕಡ 6.36ರಷ್ಟು ಪಾಲು ಗಳಿಸಿವೆ. ಕಳೆದ ಚುನಾವಣೆಯಲ್ಲಿ 62 ಸ್ಥಾನಗಳನ್ನು ಗೆದ್ದಿದ್ದ ಆಮ್ ಆದ್ಮಿ ಪಕ್ಷದ ಮತಗಳಿಕೆ ಶೇಕಡ 53.57ರಷ್ಟಾಗಿತ್ತು. ಈ ಬಾರಿ ಕೇವಲ 22 ಸ್ಥಾನಗಳನ್ನು ಗೆದಿದ್ದು, ಶೇಕಡ 10ರಷ್ಟು ಮತ ಕಳೆದುಕೊಂಡಿರುವುದರಿಂದ 40 ಸ್ಥಾನಗಳು ನಷ್ಟವಾಗಿವೆ. ಕಳೆದ ಚುನಾವಣೆಯಲ್ಲಿ ಅಂದರೆ 2020ರಲ್ಲಿ ಬಿಜೆಪಿಯ ಗಳಿಕೆ ಶೇಕಡ 38.51 ಆಗಿದ್ದು, ಈ ಬಾರಿ ಶೇಕಡ 7ರಷ್ಟು ಅಧಿಕ ಮತ ಪಡೆದು 40 ಸ್ಥಾನಗಳನ್ನು ಹೆಚ್ಚುವರಿಯಾಗಿ ಬುಟ್ಟಿಗೆ ಹಾಕಿಕೊಂಡಿದೆ. ಕಾಂಗ್ರೆಸ್ ಪಕ್ಷ ತನ್ನ ಮತ ಗಳಿಕೆಯನ್ನು ಶೇಕಡ 4.6ರಿಂದ 6.36ಕ್ಕೆ ಹೆಚ್ಚಿಸಿಕೊಂಡು ಆಮ್ ಆದ್ಮಿ ಸೋಲಿನಲ್ಲಿ ಪ್ರಮುಖ ಪಾತ್ರ ವಹಿಸಿದೆ.

# ಕಾಂಗ್ರೆಸ್‌ಗೆ ಹಿನ್ನಡೆ: ಮೂರನೇ ಬಾರಿ ಶೂನ್ಯ ಸಂಪಾದನೆ



**ನವದೆಹಲಿ:** ಕೈಕೊಟ್ಟ ಮಿತ್ರಪಕ್ಷಗಳಿಂದಾಗಿ ಅನಿವಾರ್ಯ ಏಕಾಂಗಿ ಸ್ಪರ್ಧೆ, ಮೂರನೇ ಬಾರಿಯೂ ಕೈಹಿಡಿಯದ ಸಾಂಪ್ರದಾಯಿಕ ಮತ ಬ್ಯಾಂಕ್ನಿಂದಾಗಿ ಉತ್ತಮ ಸಾಧನೆಯ ನಿರೀಕ್ಷೆ ಹೊರತಾಗಿಯೂ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸತತ ಮೂರನೇ ಬಾರಿ ಶೂನ್ಯ ಸಂಪಾದನೆ ಮಾಡಬೇಕಾಯಿತು. ಆಮ್ ಆದ್ಮಿ ಪಕ್ಷ ಏಕಾಂಗಿಯಾಗಿ ಸ್ಪರ್ಧಿಸುವುದಾಗಿ ಘೋಷಿಸಿದ್ದು, ಇಂಡಿಯಾ ಒಕ್ಕೂಟವಾದ ಟಿಎಂಸಿ, ಸಮಾಜವಾದಿ ಪಕ್ಷಗಳು ಆಪ್ ಅನ್ನು ಬೆಂಬಲಿಸಲು ನಿರ್ಧರಿಸಿದ್ದರಿಂದ ಕಾಂಗ್ರೆಸ್ ಸ್ವತಂತ್ರವಾಗಿ ಸ್ಪರ್ಧಿಸುವುದು ಅನಿವಾರ್ಯವಾಯಿತು.

ರಾಷ್ಟ್ರೀಯಮಟ್ಟದಲ್ಲಿ ಬಿಜೆಪಿ ವಿರುದ್ಧ ಒಂದಾಗಿದ್ದ ಇಂಡಿಯಾ ಬ್ಲಾಕ್ ಪಕ್ಷಗಳೇ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಪರಸ್ಪರ ವಾಗ್ದಾಳಿಗಿಳಿಯಬೇಕಾಯಿತು. ಇನ್ನು ಕಾಂಗ್ರೆಸ್ನ ಬಹುದೊಡ್ಡ ವೋಟ್ಬ್ಯಾಂಕ್ ಆದ ಮುಸ್ಲಿಮರು ಮತ್ತು ದಲಿತರು ಆಪ್ ಜತೆಗೇ ನಿಂತರು. ಈ ಚುನಾವಣೆಯಲ್ಲಿ ಆಪ್ ಗೆದ್ದಿರುವ 22 ಸ್ಥಾನಗಳಲ್ಲಿ 14ರಲ್ಲಿ ಮುಸ್ಲಿಮರು ಮತ್ತು ದಲಿತರೇ ನಿರ್ಣಾಯಕರು. ಸಾಕಷ್ಟು ಪ್ರಯತ್ನದ ಹೊರತಾಗಿಯೂ ಈ ಮತ ಬ್ಯಾಂಕ್ ಸೆಳೆಯಲು ಕಾಂಗ್ರೆಸ್ಗೆ ಸಾಧ್ಯವಾಗಲಿಲ್ಲ. ಕಳೆದ ಬಾರಿಗೆ ಹೋಲಿಸಿದರೆ ಒಂದರಿಂದ ಒಂದೂವರೆ ಪರ್ಸೆಂಟ್ನಷ್ಟು ಮತಗಳನ್ನಷ್ಟೇ ಹೆಚ್ಚಿಸಿಕೊಳ್ಳುವುದು ಸಾಧ್ಯವಾಯಿತು.

ಆಪ್ ವಿರುದ್ಧ ಇದ್ದ ದೊಡ್ಡ ಪ್ರಮಾಣದ ಆಡಳಿತ ವಿರೋಧಿ ಅಲೆಯ ಲಾಭ ಪಡೆಯಲೂ ಕಾಂಗ್ರೆಸ್ ವಿಫಲವಾಯಿತು. ಬಿಜೆಪಿ ಆಪ್ ಸರ್ಕಾರದ ಉಚಿತಗಳನ್ನು ಮುಂದುವರಿಸಿಕೊಂಡು ಮತ್ತೊಂದಿಷ್ಟು ಹೊಸ ಉಚಿತಗಳನ್ನು ಘೋಷಿಸಿ ಡಬಲ್ ಎಂಜಿನ್ ಸರ್ಕಾರದ ಭರವಸೆ ನೀಡಿದ್ದು ಕಾಂಗ್ರೆಸ್ಗೆ ಮುಳುವಾಯಿತು.

# ಎಣ್ಣೆಯಿಂದ ಹೃದಯಾಘಾತ, ಪಾರ್ಶ್ವವಾಯು ಹೆಚ್ಚಳ!



**ದೆಹಲಿ:** ಅಡುಗೆ ಮಾಡುವಾಗ ಎಣ್ಣೆ ಬಳಸಲೇಬೇಕು, ಎಣ್ಣೆ ಇಲ್ಲದೆ ತರಕಾರಿಗಳು ನಿಷ್ಪ್ರಯೋಜಕ, ಬಹುತೇಕ ಪ್ರತಿಯೊಂದು ಬೇಯಿಸಿದ ಆಹಾರಕ್ಕೂ ಎಣ್ಣೆ ಬಳಸಬೇಕಾಗುತ್ತದೆ, ಆದರೆ ಇಂದು ನಾವು ಅಂತಹ ಒಂದು ಎಣ್ಣೆಯ ಬಗ್ಗೆ ನಿಮಗೆ ಹೇಳುತ್ತೇವೆ, ಅದನ್ನು ಬಳಸಿ ಸಾವಿರಾರು ಜನರು ಪ್ರಾಣ ಕಳೆದುಕೊಂಡಿದ್ದಾರೆ.

ಕೇರಳ ಆಯುರ್ವೇದ ವಿಶ್ವವಿದ್ಯಾಲಯ ಸಂಶೋಧನಾ ಕೇಂದ್ರದ ಪ್ರಕಾರ, ಪ್ರತಿ ವರ್ಷ 2 ಮಿಲಿಯನ್ ಸಾವುಗಳಿಗೆ ಸಂಸ್ಕರಿಸಿದ ಎಣ್ಣೆ ಕಾರಣವಾಗಿದೆ. ಸಂಸ್ಕರಿಸಿದ ಎಣ್ಣೆಯು ಡಿಎನ್ಎ ಹಾನಿ, ಆರ್ಎನ್ಎ ನಾಶ, ಹೃದಯಾಘಾತ, ಪಾರ್ಶ್ವವಾಯು, ಮಿದುಳಿನ ಹಾನಿ, ಪಾರ್ಶ್ವವಾಯು, ಮಧುಮೇಹ, ಅಧಿಕ ರಕ್ತದೊತ್ತಡ, ದುರ್ಬಲತೆ, ಕ್ಯಾನ್ಸರ್, ಮೂಳೆಗಳು ದುರ್ಬಲಗೊಳ್ಳುವುದು, ಕೀಲು ನೋವು, ಬೆನ್ನು ನೋವು, ಮೂತ್ರಪಿಂಡ ಹಾನಿ, ಯಕೃತ್ತಿನ ಹಾನಿ, ಕೊಲೆಸ್ಟ್ರಾಲ್, ದೃಷ್ಟಿ ಮಂದವಾಗುವುದು, ಲ್ಯುಕೋರಿಯಾ, ಬಂಜೆತನ, ನರಹುಲಿಗಳು, ಚರ್ಮ ರೋಗಗಳು ಇತ್ಯಾದಿಗಳಿಗೆ ಕಾರಣವಾಗುತ್ತದೆ.

ಬೀಜಗಳಿಂದ ಅವುಗಳ ಸಿಪ್ಪೆಯೊಂದಿಗೆ ಎಣ್ಣೆಯನ್ನು ಹೊರತೆಗೆಯಲಾಗುತ್ತದೆ. ಈ ಪ್ರಕ್ರಿಯೆಯ ಸಮಯದಲ್ಲಿ, ಎಣ್ಣೆಯಲ್ಲಿರುವ ಯಾವುದೇ ಕಲ್ಮಶಗಳನ್ನು ಸ್ವಚ್ಛಗೊಳಿಸಿ ಸಂಸ್ಕರಿಸಲಾಗುತ್ತದೆ, ಇದರಿಂದಾಗಿ ಎಣ್ಣೆ ರುಚಿ, ವಾಸನೆ ಮತ್ತು ಬಣ್ಣರಹಿತವಾಗಿರುತ್ತದೆ.

ನೀರು, ಉಪ್ಪು, ಕಾಸ್ಟಿಕ್ ಸೋಡಾ, ಸಲ್ಫರ್, ಪೊಟ್ಯಾಸಿಯಮ್, ಆಮ್ಲ ಮತ್ತು ಇತರ ಅಪಾಯಕಾರಿ ಆಮ್ಲಗಳನ್ನು ಬಳಸಲಾಗುತ್ತದೆ, ಇದರಿಂದಾಗಿ ಅದರಿಂದ ಕಲ್ಮಶಗಳನ್ನು ತೆಗೆದುಹಾಕಲಾಗುತ್ತದೆ. ಈ ಪ್ರಕ್ರಿಯೆಯಲ್ಲಿ, ಡಾಂಬರಿನಂತಹ ಘನತ್ಯಾಜ್ಯವನ್ನು ಉತ್ಪಾದಿಸಲಾಗುತ್ತದೆ, ಇದನ್ನು ಟೈರ್ಗಳ ತಯಾರಿಕೆಯಲ್ಲಿ ಬಳಸಲಾಗುತ್ತದೆ. ಈ ಎಣ್ಣೆ ಆಮ್ಲದಿಂದಾಗಿ ವಿಷಕಾರಿಯಾಗಿದೆ ಎಂದು ಸಂಶೋಧಕರು ಎಚ್ಚರಿಕೆ ನೀಡಿದ್ದಾರೆ.

# ತಮಿಳುನಾಡಿನಲ್ಲಿ ವಿಭಜನಕಾರಿ ಕಾರ್ಯಸೂಚಿ ಅರ್ಥ ಮಾಡಿಕೊಳ್ಳಬೇಕು: ಸ್ಟಾಲಿನ್ ವಾಗ್ದಾಳಿ



**ಚೆನ್ನೈ:** ತಮಿಳುನಾಡಿನಲ್ಲಿ ವಿಭಜನಕಾರಿ ಕಾರ್ಯಸೂಚಿ ನಡೆಯುವುದಿಲ್ಲ ಎಂಬುದನ್ನು ಬಿಜೆಪಿ ಅರ್ಥ ಮಾಡಿಕೊಳ್ಳಬೇಕು ಎಂದು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ವಾಗ್ದಾಳಿ ನಡೆಸಿದರು.

ಕೇಂದ್ರ ಬಜೆಟ್ ನಲ್ಲಿ ತಮಿಳುನಾಡನ್ನು ನಿರ್ಲಕ್ಷಿಸಿರುವುದರ ವಿರುದ್ಧ ಚೆನ್ನೈನ ಸಮೀಪ ಆಯೋಜಿಸಲಾಗಿದ್ದ ಪ್ರತಿಭಟನಾ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಸ್ಟಾಲಿನ್, ''ತಮಿಳುನಾಡಿನಲ್ಲಿ ವಿವಿಧ ನಂಬಿಕೆಗಳು ಹಾಗೂ ಜಾತಿಗಳೊಂದಿಗೆ ಶಾಂತಿಯುತವಾಗಿ ಸಹಜೀವನ ನಡೆಸುತ್ತಿರುವ ಜನರು ತಮ್ಮನ್ನು ತಾವು ತಮಿಳು ಎಂದು ಮಾತ್ರ ಗುರುತಿಸಿಕೊಂಡಿದ್ದು, ಅವರೆಂದಿಗೂ ವಿಭಜನಕಾರಿ ಶಕ್ತಿಗಳನ್ನು ಒಪ್ಪಿಕೊಳ್ಳುವುದಿಲ್ಲ ಎಂಬುದನ್ನು ಬಿಜೆಪಿ ಅರ್ಥ ಮಾಡಿಕೊಳ್ಳದಿದ್ದರೆ, ಅದು ತನ್ನನ್ನು ತಾನು ಶಿಸ್ತಿಗೊಳಪಡಿಸಿಕೊಳ್ಳಬೇಕಾದ ಅನಿವಾರ್ಯತೆಗೊಳಗಾಗಲಿದೆ'' ಎಂದು ಎಚ್ಚರಿಸಿದರು.

ತಮಿಳುನಾಡು ರಾಜ್ಯಪಾಲ ಆರ್.ಎನ್.ರವಿ ಹಾಗೂ ತಮಿಳುನಾಡು ಬಿಜೆಪಿ ಮುಖ್ಯಸ್ಥ ಕೆ.ಅಣ್ಣಾಮಲೈ ವಿರುದ್ಧವೂ ತೀವ್ರ ವಾಗ್ದಾಳಿ ನಡೆಸಿದ ಡಿಎಂಕೆ ಮುಖ್ಯಸ್ಥರೂ ಆದ ಸ್ಟಾಲಿನ್, ಅವರಿಬ್ಬರೂ ಡಿಎಂಕೆಯ ಪ್ರಮುಖ ಪ್ರಚಾರಕರು ಎಂದು ಗೇಲಿ ಮಾಡಿದರು. ದಿಲ್ಲಿಯಲ್ಲಿರುವವರು ಇವರಿಬ್ಬರನ್ನು ಬದಲಿಸಬಾರದು ಎಂದು ವ್ಯಂಗ್ಯವಾಗಿ ಮನವಿಯನ್ನೂ ಮಾಡಿದರು. ತಮಿಳುನಾಡಿನ ಮೂಲಸೌಕರ್ಯ ಯೋಜನೆಗಳು ಹಾಗೂ ನೈಸರ್ಗಿಕ ವಿಕೋಪಗಳಿಗೆ ತುತ್ತಾದ ಜನರಿಗೆ ಪುನರ್ವಸತಿ ಹಾಗೂ ಪರಿಹಾರ ಒದಗಿಸಲು ನಿಧಿ ಒದಗಿಸದೆ ಕೇಂದ್ರ ಸರಕಾರವು ತಮಿಳುನಾಡಿನ ವಂಚಿಸುತ್ತಿದೆ ಎಂದೂ ಅವರು ಆರೋಪಿಸಿದರು.

# ಕೆರಿಬಿಯನ್ ಸಮುದ್ರದಲ್ಲಿ ಭಾರೀ ಭೂಕಂಪ: ಇಪ್ಪತ್ತು ದೇಶಗಳಿಗೆ ಸುನಾಮಿ ಎಚ್ಚರಿಕೆ



**ಅಮೆರಿಕ:** ಮಧ್ಯ ಅಮೆರಿಕದ ದೇಶವಾದ ಹೊಂಡುರಾಸ್ನ ಉತ್ತರಕ್ಕೆ ರಿಕ್ಟರ್ ಮಾಪಕದಲ್ಲಿ 7.6 ತೀವ್ರತೆಯ ಭೂಕಂಪ ಪತ್ತೆಯಾಗಿದೆ. ಪಶ್ಚಿಮ ಕೆರಿಬಿಯನ್ನಲ್ಲಿರುವ ಕೇಮನ್ ದ್ವೀಪಗಳ ಜಾರ್ಜ್ ಟೌನ್ ಬಳಿಯ ಕೆರಿಬಿಯನ್ ಸಮುದ್ರದಲ್ಲಿ ಅದೇ ಪ್ರಮಾಣದ ಭೂಕಂಪ ಸಂಭವಿಸಿದೆ ಎಂದು ತಿಳಿದುಬಂದಿದೆ.

ಮಧ್ಯ ಕೆರಿಬಿಯನ್ ಸಮುದ್ರದಲ್ಲಿ 10 ಕಿಲೋಮೀಟರ್ ಆಳದಲ್ಲಿ ಭೂಕಂಪ ಸಂಭವಿಸಿದ್ದು, ಕೊಲಂಬಿಯಾ, ಕೋಸ್ಟರಿಕಾ, ನಿಕರಾಗುವಾ ಮತ್ತು ಕ್ಯೂಬಾದಲ್ಲಿ ಇದರ ಪರಿಣಾಮಗಳು ಕಂಡುಬಂದಿವೆ. ಸಾಗರ ತಳದಲ್ಲಿ ಭಾರಿ ಭೂಕಂಪ ಸಂಭವಿಸಿದ ನಂತರ ಅಮೆರಿಕದ ಭೂವೈಜ್ಞಾನಿಕ ಸಮೀಕ್ಷೆಗೆ ತಕ್ಷಣವೇ ಮಾಹಿತಿ ನೀಡಲಾಯಿತು. ಇದು ಪೋರ್ಟೊ ರಿಕೊ ಮತ್ತು ಯುಎಸ್ ವರ್ಜಿನ್ ದ್ವೀಪಗಳಿಗೆ ತುರ್ತು ಸುನಾಮಿ ಎಚ್ಚರಿಕೆಗಳನ್ನು ನೀಡಿತು.

ಮುಂದಿನ ಕೆಲವು ಗಂಟೆಗಳ ಕಾಲ ಕರಾವಳಿ ಪ್ರದೇಶಗಳು ಮತ್ತು ಕಡಲತೀರಗಳಲ್ಲಿ ಜನರು ಮತ್ತು ಪ್ರವಾಸಿಗರು ಬಾರದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅದು ಸೂಚಿಸಿದೆ. ಭೂಕಂಪದ ಕೇಂದ್ರಬಿಂದುವು ಕೇಮನ್ ದ್ವೀಪಗಳ ಜಾರ್ಜ್ ಟೌನ್ನಿಂದ ಹೊರಗಿರುವ ಕೆರಿಬಿಯನ್ ಸಮುದ್ರದ ನೀರಿನಲ್ಲಿತ್ತು. ಅಮೆರಿಕದ ಮುಖ್ಯ ಭೂಭಾಗಕ್ಕೆ ಯಾವುದೇ ಸುನಾಮಿ ಬೆದರಿಕೆ ಇಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಕೆರಿಬಿಯನ್ ದೇಶಗಳು ಮತ್ತು ಹೊಂಡುರಾಸ್ ಕೂಡ ಸುನಾಮಿ ಎಚ್ಚರಿಕೆಯೊಂದಿಗೆ ಕಟ್ಟೆಚ್ಚರ ವಹಿಸಲಾಗಿದೆ. ಕರಾವಳಿ ಪ್ರದೇಶಗಳು ಮತ್ತು ದ್ವೀಪಗಳಲ್ಲಿ ವಾಸಿಸುವ ಜನರು ತಕ್ಷಣವೇ ಮುಖ್ಯ ಭೂಭಾಗಕ್ಕೆ ಮರಳುವಂತೆ ಸೂಚಿಸಲಾಗಿದೆ. ಮುಂದಿನ ಕೆಲವು ಗಂಟೆಗಳ ಕಾಲ ಕಡಲತೀರಗಳಿಗೆ ಹೋಗದಂತೆ ಎಚ್ಚರಿಕೆ ನೀಡಲಾಗಿದೆ.

ಸಾಗರದಲ್ಲಿ ಸಂಭವಿಸಿದ ಪ್ರಮುಖ ಭೂಕಂಪದ ಪ್ರಭಾವದಿಂದಾಗಿ ಮುಂದಿನ ಮೂರು ಗಂಟೆಗಳಲ್ಲಿ ಕೇಮನ್ ದ್ವೀಪಗಳು, ಜಮೈಕಾ, ಕ್ಯೂಬಾ, ಮೆಕ್ಸಿಕೊ, ಹೊಂಡುರಾಸ್, ಬಹಾಮಾಸ್, ಹೈಟಿ, ಟರ್ಕ್ಸ್ ಮತ್ತು ಕೈಕೋಸ್, ಸ್ಯಾನ್ ಆಂಡ್ರೆಸ್ ಪ್ರಾವಿಡೆನ್ಸ್, ಬೆಲೀಜ್, ಡೊಮಿನಿಕನ್ ರಿಪಬ್ಲಿಕ್, ಕೊಲಂಬಿಯಾ, ಪನಾಮ, ಪೋರ್ಟೊ ರಿಕೊ, ಕೋಸ್ಟರಿಕಾ, ಅರುಬಾ, ಬೊನೈರ್, ಕುರಾಕಾವೊ, ಯುಎಸ್ ವರ್ಜಿನ್ ದ್ವೀಪಗಳು, ಬ್ರಿಟಿಷ್ ವರ್ಜಿನ್ ದ್ವೀಪಗಳು ಮತ್ತು ಸಬಾಗಳಲ್ಲಿ ಸುನಾಮಿ ಬೆದರಿಕೆ ಉಂಟಾಗುವ ನಿರೀಕ್ಷೆಯಿದೆ.

# ಬುಲೆಟ್ ರೈಲು: ನಿರ್ಮಾಣ ಹಂತದ ಸಬರಮತಿ ನಿಲ್ದಾಣದಲ್ಲಿ ಬೆಂಕಿ ಅವಘಡ



**ಗಾಂಧೀನಗರ:** ಗುಜರಾತ್‌ನ ಅಹಮದಾಬಾದ್ ಜಿಲ್ಲೆಯ ನಿರ್ಮಾಣ ಹಂತದ ಸಬರಮತಿ ಬುಲೆಟ್ ರೈಲು ನಿಲ್ದಾಣದಲ್ಲಿ ಬೆಂಕಿ ಅವಘಡ ಸಂಭವಿಸಿದೆ.

508 ಕಿ.ಮೀ ಮುಂಬೈ-ಅಹಮದಾಬಾದ್ ಬುಲೆಟ್ ರೈಲು ಯೋಜನೆಯ ಭಾಗವಾಗಿರುವ ಸಬರಮತಿ ಬುಲೆಟ್ ರೈಲು ನಿಲ್ದಾಣದಲ್ಲಿ ಶನಿವಾರ ಬೆಳಿಗ್ಗೆ 6:30ರ ಸುಮಾರಿಗೆ ಈ ಅವಘಡ ಉಂಟಾಗಿದೆ. ಅವಘಡದಲ್ಲಿ ಯಾವುದೇ ರೀತಿಯ ಪ್ರಾಣಾಪಾಯ ಸಂಭವಿಸಿಲ್ಲ. ಕೂಡಲೇ ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ದೌಡಾಯಿಸಿದ್ದು, ಒಟ್ಟು 13 ಅಗ್ನಿಶಾಮಕ ದಳದ ವಾಹನಗಳು ಬೆಂಕಿ ನಂದಿಸುವಲ್ಲಿ ಯಶಸ್ವಿಯಾದವು.ಈ ಕುರಿತು ನ್ಯಾಷನಲ್ ಹೈ-ಸ್ಪೀಡ್ ಟ್ರೈನ್ ಕಾರ್ಪೊರೇಷನ್ ಲಿಮಿಟೆಡ್ ಹೇಳಿಕೆ ಬಿಡುಗಡೆ ಮಾಡಿದ್ದು, ರೈಲು ನಿಲ್ದಾಣದ ಛಾವಣಿಯೊಂದರಲ್ಲಿ ಶಟರಿಂಗ್ ಕೆಲಸದಿಂದ ಬಂದ ವೆಲ್ಡಿಂಗ್ ಕಿಡಿಯಿಂದ ಬೆಂಕಿ ಹೊತ್ತಿಕೊಂಡಿದೆ ಎಂದು ಉಲ್ಲೇಖಿಸಿದೆ.

ಸದ್ಯ ಸ್ಥಳದಲ್ಲಿ ಪೊಲೀಸರು ಪರಿಶೀಲನೆ ನಡೆಸುತ್ತಿದ್ದು, ಅವಘಡಕ್ಕೆ ನಿಖರವಾದ ಕಾರಣ ತಿಳಿದು ಬಂದಿಲ್ಲ.ಈ ಬುಲೆಟ್ ರೈಲು ಯೋಜನೆಯಲ್ಲಿ ಗುಜರಾತ್ (352 ಕಿ.ಮೀ) ಮತ್ತು ಮಹಾರಾಷ್ಟ್ರ (156 ಕಿ.ಮೀ) ರಾಜ್ಯಗಳ ಜೊತೆಗೆ ಮುಂಬೈ, ಥಾಣೆ, ವಿರಾರ್, ಬೋಯಿಸರ್, ವಾಪಿ, ಬಿಲಿಮೋರಾ, ಸೂರತ್, ಭರೂಚ್, ವಡೋದರಾ, ಆನಂದ್/ನಾಡಿಯಾಡ್, ಅಹಮದಾಬಾದ್ ಮತ್ತು ಸಬರಮತಿಯಲ್ಲಿ ಒಟ್ಟು 12 ನಿಲ್ದಾಣಗಳನ್ನು ಒಳಗೊಂಡಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಶೂಟಿಂಗ್‌ಗೆ ಬಂದ ನಟಿಯ ತಾಯಿ ಜೊತೆ ಸಾಲ

## ನಿರ್ಮಾಪಕನ ಮೇಲೆ ಎಫ್‌ಐಆರ್

ಸ್ಯಾಂಡಲ್‌ವುಡ್‌ನ 'ರಣಾಕ್ಷ' ಸಿನಿಮಾದ ನಿರ್ಮಾಪಕ ಶಿವರಾಮ್ ಮೇಲೆ ಎಫ್‌ಐಆರ್ ದಾಖಲಾಗಿದೆ. ಹೀರೋಯಿನ್ ಮಾಡ್ತೀನಿ ಅಂತ ಲಕ್ಷಾಂತರ ರೂಪಾಯಿ ವಂಚಿಸಿದ ಆರೋಪದ ಮೇಲೆ ಬೆಂಗಳೂರಿನ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ನಿರ್ಮಾಪಕ ಶಿವರಾಮ್ ಮೇಲೆ ಎಫ್‌ಐಆರ್ ದಾಖಲಾಗಿದೆ.

2023ರಲ್ಲಿ 'ರಣಾಕ್ಷ' ಎಂಬ ಸಿನಿಮಾ ಶೂಟಿಂಗ್ ನಡೆಯುತ್ತಿರುತ್ತದೆ. ಈ ಚಿತ್ರಕ್ಕೆ ಪೂಜಾ ಅವರನ್ನು ಆಯ್ಕೆ ಮಾಡಿರುತ್ತಾರೆ. ಮಗಳ ಸಿನಿಮಾ ಶೂಟಿಂಗ್ ನೋಡಲು ಸೆಟ್ ಬಂದಿದ್ದ ತಾಯಿ ಸುನಂದಾಗೂ ಚಿತ್ರದ ನಿರ್ಮಾಪಕ ಶಿವರಾಮ್ ಪರಿಚಯವಾಗುತ್ತದೆ. ಹೀಗೆ ಶೂಟಿಂಗ್‌ಗೆ ಆರ್ಥಿಕವಾಗಿ ಸಮಸ್ಯೆ ಆಗಿದೆ ಎಂದು ನಟಿಯ ತಾಯಿಯ ಬಳಿ 5 ಲಕ್ಷ ರೂ.ವನ್ನು ಶಿವರಾಮ್ ಪಡೆದಿರುತ್ತಾರೆ. ಆ ನಂತರ ಚಿತ್ರದ ಶೂಟಿಂಗ್ ಕೂಡ ನಡೆಸಿರುತ್ತಾರೆ. ಮುಂದೆ ಸಮಯಕ್ಕೆ ಸರಿಯಾಗಿ ಆ ಹಣವನ್ನು ಶಿವರಾಮ್ ಹಿಂದಿರುಗಿಸಿರುತ್ತಾರೆ. ಕೆಲವು ದಿನಗಳ ಬಳಿಕ ಮತ್ತೆ ನಟಿಯ ತಾಯಿಗೆ ಕರೆ ಮಾಡಿ ಇನ್ನೊಂದಿಷ್ಟು ಹಣ ಸಿಗಬಹುದಾ ಎಂದು ಕೇಳಿದ್ದಾರೆ. ಆ ಸಮಯದಲ್ಲಿ ನಗದು ಹಣವಿರದ ಕಾರಣ ತಮ್ಮ ಬಳಿಯಿದ್ದ 575 ಗ್ರಾಂ ಚಿನ್ನವನ್ನು ಶಿವರಾಮ್‌ಗೆ ನೀಡಿದ್ದಾರೆ. ಶ್ಯೂರಿಟಿಗಾಗಿ ಎರಡು ಚೆಕ್‌ಗಳನ್ನು ನಟಿಯ ತಾಯಿಗೆ ನೀಡಿದ್ದರು. ಆದರೆ ಚೆಕ್ ಅವಧಿ ಮುಗಿದಿದ್ದರೂ ಚಿನ್ನಾಭರಣ ನೀಡದೇ ನಿರ್ಮಾಪಕ ವರಸೆ ಬದಲಿಸಿದ್ದಾರೆ. ಈ ಹಿನ್ನೆಲೆ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ಶಿವರಾಮ್ ವಿರುದ್ಧ ನಟಿಯ ತಾಯಿ ಸುನಂದಾ ಎಫ್‌ಐಆರ್ ದಾಖಲಿಸಿದ್ದಾರೆ.



# ಪ್ರೇಮ್ ಜೊತೆ ಸಿನಿಮಾ ಮಾಡೇ ಮಾಡ್ತೀನಿ: ದರ್ಶನ್

ನಟ ದರ್ಶನ್ ಫೆ.16ರಂದು ಬರ್ತ್‌ಡೇ ಸಂಭ್ರಮವಾಗಿದ್ದು, ಈ ವರ್ಷ ಹುಟ್ಟುಹಬ್ಬ ಆಚರಣೆ ಮಾಡಲ್ಲ ಎಂದು ವಿಡಿಯೋ ಮೂಲಕ ಫ್ಯಾನ್ಸ್‌ಗೆ ಮನವಿ ಮಾಡಿದ್ದಾರೆ. ಇದರೊಂದಿಗೆ ಡೈರೆಕ್ಟರ್ ಪ್ರೇಮ್ ಜೊತೆ ದರ್ಶನ್ ಸಿನಿಮಾ ಬರಲಿದೆಯಾ ಎಂಬ ಪ್ರಶ್ನೆಗೆ ವಿಡಿಯೋ ಮೂಲಕ ಕ್ಲ್ಯಾರಿಟಿ ಕೊಟ್ಟಿದ್ದಾರೆ. ಪ್ರೇಮ್ ಜೊತೆ ಸಿನಿಮಾ ಮಾಡೋದು ನನ್ನ ಗುರುಗಳು ಹಾಗೂ ಸ್ನೇಹಿತೆ ರಕ್ಷಿತಾ ಆಸೆ ಎಂದಿದ್ದಾರೆ.

ಬೆನ್ನು ನೋವಿನಿಂದ ಬಳಲುತ್ತಿರುವ ಹಿನ್ನೆಲೆ ಈ ವರ್ಷ ಬರ್ತ್‌ಡೇಗೆ ನಾನು ಸಿಗೋದಿಲ್ಲ. ತುಂಬಾ ಹೊತ್ತು ನಿಂತುಕೊಳ್ಳೋಕೆ ಆಗಲ್ಲ. ಈ ವರ್ಷ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ ಎಂದು ದರ್ಶನ್ ಸೆಲೆಬ್ರಿಟಿಗಳಿಗೆ ಕ್ಷಮೆಯಾಚಿಸಿದ್ದಾರೆ.

ಯಾವುದೇ ಊಹಾಪೋಹಗಳಿಗೆ ಕಿವಿ ಕೊಡಬೇಡಿ. 101% ಹೌದು ನಾನು ನಿರ್ಮಾಪಕ ಸೂರಪ್ಪ ಬಾಬು ಅವರಿಗೆ ದುಡ್ಡು ವಾಪಸ್ ಕೊಟ್ಟಿದ್ದೇನೆ. ನನ್ನ ಹತ್ತಿರ ಸಿನಿಮಾಗೆ ಬರುವಾಗಲೇ ಅವರಿಗೆ ಸಿಕ್ಕಾಪಟ್ಟೆ ಕಮಿಟ್‌ಮೆಂಟ್ ಇತ್ತು. ಹಾಗಾಗಿ ವಾಪಸ್ ಕೊಟ್ಟೆ. ಮುಂದೆ ನಾವಿಬ್ಬರೂ ಸಿನಿಮಾ ಮಾಡೇ ಮಾಡ್ತೀವಿ ಎಂದಿದ್ದಾರೆ. ಅದಷ್ಟೇ ಅಲ್ಲ, ಮುಂದೆ ನಾನು ಪ್ರೇಮ್ ಒಟ್ಟಾಗಿ ಸಿನಿಮಾ ಮಾಡೇ ಮಾಡುತ್ತೇವೆ. ನನ್ನ ಗುರುಗಳು, ನನ್ನ ಪ್ರೀತಿಯ ಸ್ನೇಹಿತೆಯ ಆಸೆ ಅದು. ಕೆವಿಎನ್ ಪ್ರೊಡಕ್ಷನ್‌ನವರು ಅವರು ಬೇರೆ ಸಿನಿಮಾ ಮಾಡ್ತಿದ್ದಾರೆ. ಮತ್ತೊಂದು ಪ್ರೊಡಕ್ಷನ್ ಅಂದಾಗ ಅವರಿಗೂ ಕಷ್ಟ ಆಗುತ್ತೆ. ಅದಕ್ಕೆ ಯಾರು ಯಾವುದೇ ಪ್ರೊಡಕ್ಷನ್ ಇಲ್ಲದೇ ಸುಮ್ಮನೆ ಇರತಾರಲ್ಲ ಅವರಿಗೆ ಅವಕಾಶ ಕೊಡೋಣ ಅಂತ ಎಂದಿದ್ದಾರೆ.

ನಿಮ್ಮ ಪ್ರೀತಿ, ಅಭಿಮಾನ, ಪ್ರೋತ್ಸಾಹ ನನ್ನ ಮೇಲೆ ಇರೋದಕ್ಕೆ ಯಾವಾಗಲೂ ಚಿರಋಣಿಯಾಗಿರುತ್ತೇನೆ. ಇದನ್ನು ನಾನೆಂದೂ ತೀರಿಸೋಕೆ ಆಗಲ್ಲ ಎಂದಿದ್ದಾರೆ. ಈ ವೇಳೆ, ನಾನು 3 ಜನರಿಗೆ ಥ್ಯಾಂಕ್ಸ್ ಹೇಳಬೇಕು. ಧನ್ವೀರ್ ಯಾವಾಗಲೂ ಪಾಪ ನನ್ನ ಜೊತೆಯಲಿಯೇ ಇರುತ್ತಿದ್ದರು. ನನ್ನ ದೊಡ್ಡ ಬೆಂಬಲವಾಗಿ ನಿಂತರು. 'ಬುಲ್ ಬುಲ್' ರಚಿತಾ ರಾಮ್‌ಗೂ ಥ್ಯಾಂಕ್ಯೂ. ನನ್ನ ಪ್ರಾಣ ಸ್ನೇಹಿತೆ ಆಗಿರುವ ರಕ್ಷಿತಾಗೂ ಥ್ಯಾಂಕ್ಸ್. ನನ್ನ ಎಲ್ಲಾ ಸೆಲೆಬ್ರಿಟಿಗಳಿಗೂ ಧನ್ಯವಾದಗಳು ಎಂದಿದ್ದಾರೆ.

ದರ್ಶನ್ ಹಾಗೂ ನಟಿ ರಕ್ಷಿತಾ ಪ್ರೇಮ್ ಹಲವು ವರ್ಷಗಳಿಂದ ಸ್ನೇಹಿತರು. ಆದರೆ ಇತ್ತೀಚೆಗೆ ದರ್ಶನ್ ಜೊತೆ ಪ್ರೇಮ್ ಸಿನಿಮಾ ಬರಲಿದ್ಯಾ? ಎಂದು ಅನುಮಾನ ವ್ಯಕ್ತಪಡಿಸಿದವರಿಗೆ ದರ್ಶನ್ ವಿಡಿಯೋ ಮೂಲಕ ಕ್ಲ್ಯಾರಿಟಿ ನೀಡಿದ್ದಾರೆ.



# ಈ ವರ್ಷ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ, ಕ್ಷಮೆಯಿರಲಿ

**ಬೆಂಗಳೂರು:** ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಆರು ತಿಂಗಳು ಜೈಲುವಾಸ ಅನುಭವಿಸಿ ಷರತ್ತುಬದ್ಧ ಜಾಮೀನು ಮೇಲೆ ಹೊರಬಂದಿರುವ ನಟ ದರ್ಶನ್ ಮೊದಲ ಬಾರಿ ಸಾರ್ವಜನಿಕವಾಗಿ ಮಾತನಾಡಿದ್ದಾರೆ. ತಮ್ಮ ಸೋಷಿಯಲ್ ಮೀಡಿಯಾ ಅಕೌಂಟ್ ನಲ್ಲಿ ವಿಡಿಯೊ ಸಂದೇಶ ಕಳುಹಿಸಿದ್ದಾರೆ.

ಫೆಬ್ರವರಿ 16 ಚಾಲೆಂಜಿಂಗ್ ಸ್ಟಾರ್ ದರ್ಶನ್ ಹುಟ್ಟುಹಬ್ಬ. ಪ್ರತಿವರ್ಷದಂತೆ ಅವರ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ. ಅವರ ಅಭಿಮಾನಿಗಳಿಗೆ ನೆಚ್ಚಿನ ನಟನ ಹುಟ್ಟುಹಬ್ಬವೆಂದರೆ ಹಬ್ಬದ ರೀತಿ ಸಡಗರ. ಆದರೆ ಈ ವರ್ಷ ನಾನು ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ, ನನಗೆ ವಿಪರೀತ ಕಾಲು ಮತ್ತು ಬೆನ್ನು ನೋವಿದೆ, ಗಂಟೆಗಟ್ಟಲೆ ನಿಂತುಕೊಂಡು ಇರಲು ಸಾಧ್ಯವಾಗುವುದಿಲ್ಲ. ಔಷಧ ತೆಗೆದುಕೊಳ್ಳುತ್ತಿದ್ದೇನೆ, ಅದರ ಪವರ್ ಇರುವವರೆಗೆ 10–15 ದಿನ ನೋವು ಕಡಿಮೆ ಇರುತ್ತದೆ, ಮತ್ತೆ ನೋವು ಆರಂಭವಾಗುತ್ತದೆ, ನನ್ನ ಅನಾರೋಗ್ಯ ಕಾರಣದಿಂದ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲವಷ್ಟೆ, ಯಾರೂ ಬೇಸರ ಮಾಡಿಕೊಳ್ಳಬಾರದು, ಇನ್ನು ಕೆಲವೇ ದಿನಗಳಲ್ಲಿ ನಿಮ್ಮೆಲ್ಲರನ್ನೂ ಭೇಟಿ ಮಾಡುತ್ತೇನೆ ಎಂದಿದ್ದಾರೆ.

**ಸಿನಿಮಾ ಮಾಡುತ್ತೇನೆ:** ಎಂದಿನಂತೆ ಅಭಿಮಾನಿಗಳನ್ನು ಸೆಲೆಬ್ರಿಟಿಗಳು ಎಂದು ಕರೆದಿರುವ ದಾಸ, ನಾನು ಎಂದಿಗೂ ನನ್ನ ಪ್ರೀತಿಯ ಅಭಿಮಾನಿ ಸೆಲೆಬ್ರಿಟಿಗಳಿಗೆ ಮೋಸ ಮಾಡುವುದಿಲ್ಲ. ನನ್ನನ್ನು ನಂಬಿ ಹಣ ಹೂಡಿರುವ ನಿರ್ಮಾಪಕರಿಗೆ ಸಹ ತೊಂದರೆ ಕೊಡುವುದಿಲ್ಲ. ಒಪ್ಪಿಕೊಂಡಿರುವ ಸಿನಿಮಾಗಳನ್ನು ಮಾಡಿ ಮುಗಿಸುತ್ತೇನೆ, ಯಾವುದೇ ಊಹಾಪೋಹಗಳನ್ನು ನಂಬಬೇಡಿ, ಸೂರಪ್ಪ ಬಾಬು ಅವರು ನನ್ನ ಬಳಿಗೆ ಸಿನಿಮಾ ಮಾಡಬೇಕೆಂದು ಬಂದಿದ್ದಾಗ ಅವರಿಗೆ ಸಹ ತುಂಬಾ ಕಮಿಟ್ ಮೆಂಟ್ ಗಳಿದ್ದವು. ಹಾಗಾಗಿ ಅವರ ಜೊತೆ ಸಿನಿಮಾ ಮಾಡಲು ಒಪ್ಪಿಕೊಂಡೆ, ಈ ನಡುವೆ ತುಂಬಾ ವಿಷಯಗಳು ನಡೆದು ವಿಳಂಬವಾಯಿತು, ಸೂರಪ್ಪ ಬಾಬು ಅವರಿಗೆ ಮತ್ತಷ್ಟು ತೊಂದರೆ ಆಗಬಾರದು ಎಂದು ಅವರು ಕೊಟ್ಟ ಮುಂಗಡ ಹಣವನ್ನು ವಾಪಾಸ್ ಕೊಟ್ಟಿದ್ದು ನಿಜ, ಮುಂದೊಂದು ದಿನ ಉತ್ತಮ ಸಬ್ಜೆಕ್ಟ್ ಸಿಕ್ಕಿದರೆ ಸೂರಪ್ಪ ಬಾಬು ಅವರ ಜೊತೆ ಸಿನಿಮಾ ಮಾಡುತ್ತೇನೆ ಎಂದರು.

### ಬೇರೆ ಭಾಷೆಗೆ ಹೋಗಲಾರೆ

**ದರ್ಶನ್ ಬೇರೆ ಭಾಷೆಯ ಚಿತ್ರಗಳಲ್ಲಿ ನಟಿಸುತ್ತಾರೆ ಎಂಬ ವಿಷಯ ಆಗಾಗ ಸುದ್ದಿಯಾಗುತ್ತಿರುತ್ತದೆ. ನನ್ನ ಕೊನೆಯ ಉಸಿರು ಇರುವವರೆಗೂ ಬೇರೆ ಭಾಷೆಯ ಚಿತ್ರಗಳಲ್ಲಿ ನಟಿಸುವುದಿಲ್ಲ, ಕನ್ನಡದ ಜನತೆ ನನಗೆ ಪ್ರೀತಿ, ಆಶೀರ್ವಾದ ನೀಡಿದ್ದಾರೆ, ಇಲ್ಲಿ ಬಿಟ್ಟು ಬೇರೆಲ್ಲೂ ಹೋಗುವುದಿಲ್ಲ. ಇಲ್ಲಿಯೇ ಇದ್ದು ಕನ್ನಡದ ಜನರು ಕೊಟ್ಟಿರುವ ಪ್ರೀತಿ ಉಳಿಸಿ ಕಾಪಾಡಿಕೊಂಡು ಹೋಗುತ್ತೇನೆ ಎಂದರು. ಅಭಿಮಾನಿಗಳ ಪ್ರೀತಿ, ಬೆಂಬಲಕ್ಕೆ ನಾನು ಯಾವಾಗಲೂ ಚಿರಋಣಿ, ನನ್ನ ಕಷ್ಟದ ಸಮಯದಲ್ಲಿ ಏನೇ ಆದರೂ ಸಾಥ್ ಕೊಟ್ಟ ಮೂವರಿಗೆ ನಾನು ಈ ಸಂದರ್ಭದಲ್ಲಿ ವಿಶೇಷವಾಗಿ ಧನ್ಯವಾದ ಹೇಳುತ್ತೇನೆ. ಅದು ನಮ್ಮ ಹೀರೋ ಧನ್ವೀರ್, ಸ್ನೇಹಿತರಾದ ಬುಲ್ ಬುಲ್ ರಚಿತಾ ರಾಮ್ ಮತ್ತು ರಕ್ಷಿತಾ ಎಂದು ಸ್ಮರಿಸಿಕೊಂಡಿದ್ದಾರೆ.**

# KVN ಬ್ಯಾನರ್‌ನಲ್ಲಿ ಝೈದ್ ಖಾನ್ ಅಭಿನಯದ 'ಕಲ್ಟ್'

ಸಚಿವ ಜಮೀರ್ ಅಹ್ಮದ್ ಖಾನ್ ಅವರ ಪುತ್ರ ಝೈದ್ ಖಾನ್, ರಚಿತಾ ರಾಮ್ ಹಾಗೂ ಮಲೈಕಾ ವಸುಪಾಲ್ ನಟನೆಯ ಕಲ್ಟ್ ಚಿತ್ರದ ಚಿತ್ರೀಕರಣ ಭರದಿಂದ ಸಾಗುತ್ತಿದ್ದು, ಈ ನಡುವೆ ಚಿತ್ರದ ಕುರಿದು ಬಿಗ್ ಅಪ್‌ಡೇಟ್ ವೊಂದು ಹೊರಬಂದಿದೆ. ಲೋಕಿ ಸಿನಿಮಾಸ್ ಲಾಂಛನದಲ್ಲಿ ಈ ಸಿನಿಮಾ ನಿರ್ಮಾಣವಾಗುತ್ತಿದ್ದು, ಇದೀಗ ಕೆವಿಎನ್ ಸಂಸ್ಥೆ ಕಲ್ಟ್ ಸಿನಿಮಾದ ಭಾಗವಾಗಿದೆ. ಟಾಕ್ಸಿಕ್, ಜನ ನಾಯಗನ್ ಸಿನಿಮಾಗಳನ್ನು ನಿರ್ಮಿಸುತ್ತಿರುವ ಕೆವಿಎನ್ ಪ್ರೊಡಕ್ಷನ್ಸ್ ಕಲ್ಟ್ ಸಿನಿಮಾ ಅರ್ಪಿಸುತ್ತಿದೆ. ಈ ನಡುವೆ ಫೆಬ್ರವರಿ 11 ರಂದು ನಾಯಕ ಝೈದ್ ಖಾನ್ ಹುಟ್ಟು ಹಬ್ಬವಾಗಿದ್ದು, ಅದೇ ದಿನದಂದು ಕಲ್ಟ್ ಚಿತ್ರದ ಟೀಸರ್ ಬಿಡುಗಡೆ ಮಾಡಲು ಚಿತ್ರತಂಡ ನಿರ್ಧರಿಸಿದೆ. ಜೂನ್ ತಿಂಗಳಿನಲ್ಲಿ ಸಿನಿಮಾ ಬಿಡುಗಡೆ ಮಾಡಲು ಚಿತ್ರತಂಡ ಯೋಜನೆ ಹಾಕಿಕೊಂಡಿದೆ. ಅನಿಲ್ ಕುಮಾರ್ ನಿರ್ದೇಶನವಿರುವ 'ಕಲ್ಟ್' ಚಿತ್ರ, ಆಕ್ಷನ್–ರೊಮ್ಯಾಂಟಿಕ್ ಜಾನರ್ ಚಿತ್ರವಾಗಿದ್ದು, ಚಿತ್ರವು ಸಾಷ್ಟು ನಿರೀಕ್ಷೆ ಹುಟ್ಟಿಸಿದೆ. ಝೈದ್ ಖಾನ್ ನಾಯಕರಾಗಿ ನಟಿಸುತ್ತಿರುವ ಎರಡನೇ ಚಿತ್ರ ಇದಾಗಿದ್ದು, ಮಾಸ್ ಹಾಗೂ ರಗಡ್ ಆಗಿ ಮೂಡಿಬಂದಿದೆ.





# ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣಗೆ ಮದುವೆ ಆಮಂತ್ರಣ ನೀಡಿದ ಡಾಲಿ

ಬ್ಯಾಚುಲರ್ ಆಗಿದ್ದ ನಟ ಡಾಲಿ ಧನಂಜಯ ಅವರು ಇದೇ ಫೆ.16ರಂದು ಮದುವೆಗೆ ಸಜ್ಜಾಗಿದ್ದಾರೆ. ಈ ಹಿನ್ನೆಲೆ ಹೈದರಾಬಾದ್‌ಗೆ ತೆರಳಿ 'ಪುಷ್ಪ 2' ತಂಡವನ್ನು ಭೇಟಿಯಾಗಿ ಮದುವೆ ಆಮಂತ್ರಣ ಪತ್ರಿಕೆಯನ್ನು ಡಾಲಿ ನೀಡಿದ್ದಾರೆ. 'ಪುಷ್ಪ', 'ಪುಷ್ಪ 2' ಸಿನಿಮಾದಲ್ಲಿ ಡಾಲಿ ನಟಿಸಿ ಸೈ ಎನಿಸಿಕೊಂಡಿರೋದ್ರಿಂದ ತಂಡದ ಜೊತೆ ಉತ್ತಮ ಒಡನಾಟ ಇದೆ. ಹಾಗಾಗಿ ಹೈದರಾಬಾದ್‌ಗೆ ಆಗಮಿಸಿ ಅಲ್ಲು ಅರ್ಜುನ್, ಡೈರೆಕ್ಟರ್ ಸುಕುಮಾರ್ ಹಾಗೂ ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣಗೆ ಮದುವೆ ಆಮಂತ್ರಣ ಪತ್ರಿಕೆ ನೀಡಿದ್ದಾರೆ. ಭೇಟಿಯಾಗಿರುವ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ಇನ್ನೂ ಇದೇ ಫೆ.15 ಹಾಗೂ ಫೆ.16ರಂದು ಡಾಕ್ಟರ್ ಧನ್ಯತಾ ಜೊತೆ ಡಾಲಿ ಹಸೆಮಣೆ ಏರಲಿದ್ದಾರೆ. ಮೈಸೂರಿನಲ್ಲಿ ಅದ್ಧೂರಿಯಾಗಿ ನಡೆಯಲಿರುವ ಈ ಮದುವೆಗೆ ರಾಜಕೀಯ ಗಣ್ಯರಿಗೆ ಹಾಗೂ ಸ್ಯಾಂಡಲ್‌ವುಡ್ ಸೆಲೆಬ್ರಿಟಿಗಳು ಬರಲಿದ್ದಾರೆ.

# ಬಾಂಗ್ಲಾ ಪ್ರೀಮಿಯರ್ ಲೀಗ್‌ನಲ್ಲಿ ಅರ್ಧಕ್ಕಿಂತ ಹೆಚ್ಚು ತಂಡಗಳು ಫಿಕ್ಸಿಂಗ್‌ನಲ್ಲಿ ಭಾಗಿ

ಕಳೆದ 2–3 ದಶಕಗಳಲ್ಲಿ ಕ್ರಿಕೆಟ್‌ನಲ್ಲಿ ಮ್ಯಾಚ್ ಫಿಕ್ಸಿಂಗ್ ಮತ್ತು ಸ್ಪಾಟ್ ಫಿಕ್ಸಿಂಗ್‌ನಂತಹ ಭ್ರಷ್ಟಾಚಾರದ ಹಲವು ಪ್ರಕರಣಗಳು ಹಲವು ಬಾರಿ ಬೆಳಕಿಗೆ ಬಂದಿವೆ. ಕಳೆದ 10–15 ವರ್ಷಗಳಿಂದ ಪ್ರವರ್ಧಮಾನಕ್ಕೆ ಬರುತ್ತಿರುವ ಹೊಸ ಟಿ20 ಲೀಗ್‌ಗಳ ಆಗಮನದ ನಂತರ ಈ ಮ್ಯಾಚ್ ಫಿಕ್ಸಿಂಗ್ ಸರ್ವೆ ಸಾಮ್ಯಾನವಾಗಿಬಿಟ್ಟಿದೆ. ಇತ್ತೀಚೆಗಷ್ಟೇ ನಡೆದ ಭಾರತದ ನೆರೆಯ ರಾಷ್ಟ್ರ ಬಾಂಗ್ಲಾದೇಶದ ಟಿ20 ಲೀಗ್‌ನಲ್ಲೂ ಮತ್ತೊಮ್ಮೆ ಮ್ಯಾಚ್ ಫಿಕ್ಸಿಂಗ್ ಹಗರಣ ಮುನ್ನೆಲೆಗೆ ಬಂದಿದೆ. ಮಾಹಿತಿಯ ಪ್ರಕಾರ, ಇತ್ತೀಚೆಗೆ ಮುಕ್ತಾಯಗೊಂಡ ಬಾಂಗ್ಲಾದೇಶ ಪ್ರೀಮಿಯರ್ ಲೀಗ್‌ನಲ್ಲಿ ಹಲವಾರು ಪಂದ್ಯಗಳಲ್ಲಿ ಮ್ಯಾಚ್ ಫಿಕ್ಸಿಂಗ್ ನಡೆದಿದ್ದು, ಇದೀಗ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿ (ಬಿಸಿಬಿ) ಅದರ ತನಿಖೆಯನ್ನು ಪ್ರಾರಂಭಿಸಿದೆ. ಈ ತನಿಖೆಯ ವ್ಯಾಪ್ತಿಯಲ್ಲಿ ಎಷ್ಟು ಆಟಗಾರರು, ಎಷ್ಟು ತಂಡಗಳು ಮತ್ತು ಎಷ್ಟು ಪಂದ್ಯಗಳು ಇವೆ ಎಂಬುದರ ಕುರಿತು ವಿವರ ಇಲ್ಲಿದೆ

ಮ್ಯಾಚ್ ಫಿಕ್ಸಿಂಗ್ ತನಿಖೆ ಆರಂಭ

ಕಳೆದ ಹಲವಾರು ವರ್ಷಗಳಿಂದ ಬಾಂಗ್ಲಾದೇಶದಲ್ಲಿ ಬಿಪಿಎಲ್ ಲೀಗ್ ಅನ್ನು ಆಯೋಜಿಸಲಾಗುತ್ತಿದೆ. ಐಪಿಎಲ್‌ನಂತೆ ಈ ಲೀಗ್‌ನಲ್ಲೂ ಪ್ರಪಂಚದಾದ್ಯಂತದ ಅನೇಕ ಸ್ಟಾರ್ ಆಟಗಾರರು ಆಡುತ್ತಿದ್ದಾರೆ. ಆದಾಗ್ಯೂ, ಈ ಲೀಗ್ ಹಲವು ಬಾರಿ ವಿವಿಧ ಕಾರಣಗಳಿಗಾಗಿ ವಿವಾದಗಳಿಗೆ ಸಿಲುಕಿದೆ. ಈ ವರ್ಷವಂತೂ ಈ ಲೀಗ್ ಸಾಕಷ್ಟು ಕಾರಣಗಳಿಗೆ ಚರ್ಚೆಯಲ್ಲಿತ್ತು. ಅನೇಕ ವಿದೇಶಿ ಆಟಗಾರರಿಗೆ ಹಣ ಪಾವತಿಸದಿರುವುದರಿಂದ ಹಿಡಿದು ಮ್ಯಾಚ್ ಫಿಕ್ಸಿಂಗ್ ಹಗರಣದವರೆಗೆ ಬಿಪಿಎಲ್ ಲೀಗ್ ಸಾಕಷ್ಟು ಕುಖ್ಯಾತಿ ಪಡೆದುಕೊಂಡಿದೆ. ಬಾಂಗ್ಲಾದೇಶದ ಮಾಧ್ಯಮ ವರದಿಗಳ ಪ್ರಕಾರ, ಲೀಗ್‌ನ ಕೆಲವು ಪಂದ್ಯಗಳಲ್ಲಿ ಭ್ರಷ್ಟಾಚಾರ ನಡೆದಿದ್ದು, ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಯು ತನಿಖೆ ಆರಂಭಿಸಿದೆ ಎಂದು ವರದಿಯಾಗಿದೆ.

ಬಾಂಗ್ಲಾದೇಶ ಕ್ರಿಕೆಟ್ ಮಂಡಳಿ ಇತ್ತೀಚೆಗೆ ತನ್ನ ಭ್ರಷ್ಟಾಚಾರ ನಿಗ್ರಹ ಘಟಕದ ಮೂಲಕ ಈ ಆರೋಪಗಳ ತನಿಖೆಯನ್ನು ಪ್ರಾರಂಭಿಸಿದೆ. ಇಷ್ಟು ಮಾತ್ರವಲ್ಲದೆ, ಈ ಆರೋಪಗಳನ್ನು ಸಾಧ್ಯವಾದಷ್ಟು ಬೇಗ ಮತ್ತು ನ್ಯಾಯಯುತ ರೀತಿಯಲ್ಲಿ ತನಿಖೆ ಮಾಡಲು ಎಸಿಯುಗೆ ಸಹಾಯ ಮಾಡಲು ಮಂಡಳಿಯು ಸ್ವತಂತ್ರ ತನಿಖಾ ತಂಡವನ್ನು ಸಹ ರಚಿಸಿದೆ.



### ಎಷ್ಟು ಆಟಗಾರರು, ಎಷ್ಟು ತಂಡಗಳು ಇದರಲ್ಲಿ ಭಾಗಿ?

**ವರದಿಗಳ ಪ್ರಕಾರ, ಪ್ರಸ್ತುತ ಲೀಗ್‌ನಲ್ಲಿ ನಡೆದಿದ್ದ 8 ಪಂದ್ಯಗಳಲ್ಲಿ ಮ್ಯಾಚ್ ಫಿಕ್ಸಿಂಗ್ ನಡೆದಿರುವ ಬಗ್ಗೆ ಎಸಿಯು ತನಿಖೆ ನಡೆಸುತ್ತಿದೆ. ಇದಲ್ಲದೆ 4 ತಂಡಗಳು ಮ್ಯಾಚ್ ಫಿಕ್ಸಿಂಗ್ ಮಾಡಿಕೊಂಡಿರುವ ಆರೋಪ ಕೇಳಿಬಂದಿದೆ. ದರ್ಬಾರ್ ರಾಜ್‌ಶಾಹಿ, ಸಿಲ್ಹೆಟ್ ಸ್ಟ್ರೈಕರ್ಸ್, ಢಾಕಾ ಕ್ಯಾಪಿಟಲ್ಸ್ ಮತ್ತು ಚಿತ್ತಗಾಂಗ್ ಕಿಂಗ್ಸ್ ಮ್ಯಾಚ್ ಫಿಕ್ಸಿಂಗ್ ಆರೋಪ ಹೊತ್ತಿರುವ ತಂಡಗಳಾಗಿವೆ. ಫಿಕ್ಸಿಂಗ್ ಆರೋಪ ಹೊತ್ತಿದ್ದ ಚಿತ್ತಗಾಂಗ್ ಕಿಂಗ್ಸ್ ತಂಡ ಫೆಬ್ರವರಿ 7 ರಂದು ನಡೆದ ಪಂದ್ಯಾವಳಿಯ ಫೈನಲ್ ಪಂದ್ಯವನ್ನು ಆಡಿತ್ತಾದರೂ ತಂಡಕ್ಕೆ ಗೆಲುವು ಸಾಧಿಸಲು ಸಾಧ್ಯವಾಗಲಿಲ್ಲ. ತಂಡಗಳನ್ನು ಹೊರತುಪಡಿಸಿ ಒಟ್ಟು 10 ಆಟಗಾರರು ಈ ಲೀಗ್‌ನಲ್ಲಿ ಫಿಕ್ಸಿಂಗ್ ಮಾಡಿಕೊಂಡಿರುವ ಬಗ್ಗೆ ತನಿಖೆಯ ವ್ಯಾಪ್ತಿಗೆ ಒಳಪಟ್ಟಿದ್ದಾರೆ. ಅದರಲ್ಲಿ ಇಬ್ಬರು ವಿದೇಶಿಯರಾಗಿದ್ದರೆ, 8 ಮಂದಿ ಬಾಂಗ್ಲಾದೇಶದವರು. ಅತ್ಯಂತ ಆಶ್ಚರ್ಯಕರ ಸಂಗತಿಯೆಂದರೆ, ಬಾಂಗ್ಲಾದೇಶದ 8 ಆಟಗಾರರಲ್ಲಿ 6 ಮಂದಿ ದೇಶಕ್ಕಾಗಿ ಅಂತರರಾಷ್ಟ್ರೀಯ ಕ್ರಿಕೆಟ್ ಆಡಿದ್ದಾರೆ ಅಥವಾ ಆಡುತ್ತಿದ್ದಾರೆ. ಈಗ ಎಲ್ಲರ ಕಣ್ಣುಗಳು ಈ ತನಿಖೆಯ ಫಲಿತಾಂಶದ ಮೇಲೆ ನೆಟ್ಟಿವೆ.**

# ಲಂಕಾಗೆ ಲಗಾಮು ಹಾಕಿದ ಭಾರತ : 6 ರನ್‌ಗಳ ರೋಚಕ ಜಯ

**ಚಿಕ್ಕಬಳ್ಳಾಪುರ:** ತಾಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿರುವ ಸಾಯಿಕೃಷ್ಣನ್ ಕ್ರೀಡಾಂಗಣದಲ್ಲಿ ನಡೆದ ವಸುಧೈವ ಕುಟುಂಬಕಂ ತತ್ವದಡಿ ನಡೆದ ಒಂದು ಜಗತ್ತು–ಒಂದು ಕುಟುಂಬ ಕಪ್‌ನ ಟಿ20 ಕ್ರಿಕೆಟ್ ಟೂರ್ನಿಯಲ್ಲಿ ಶ್ರೀಲಂಕಾ ವಿರುದ್ಧ ಭಾರತ ಗೆದ್ದು ಬೀಗಿದೆ.

ಯುವಮಾನವತವಾದಿ ಶ್ರೀ ಸದ್ಗುರು ಮಧುಸೂದನಸಾಯಿ ಆಯೋಜನೆ ಮಾಡಿದ್ದ ಒನ್ ವರ್ಲ್ಡ್–ಒನ್ ಫ್ಯಾಮಿಲಿ ಕಪ್‌ಗಾಗಿ ಭಾರತ ಹಾಗೂ ಶ್ರೀಲಂಕಾ ನಿವೃತ್ತ ಕ್ರಿಕೆಟ್ ಆಟಗಾರರು ಈ ಪಂದ್ಯದಲ್ಲಿ ಸೆಣಸಾಟ ನಡೆಸಿದ್ರು.

ಭಾರತ ತಂಡದಲ್ಲಿ ಇರ್ಫಾನ್ ಪಠಾಣ್, ಯೂಸುಫ್ ಪಠಾಣ್, ನಮನ್ ಒಜಾ, ಎಸ್.ಬದ್ರಿನಾಥ್, ಅಶೋಕ್ ದಿಂಡಾ, ಪಿಯೂಷ್ ಚಾವ್ಲಾ, ವೆಂಕಟೇಶ್ ಪ್ರಸಾದ್, ಸುನಿಲ್ ಜೋಷಿ, ಪಾರ್ಥೀವ್ ಪಟೇಲ್, ಸುಜಿತ್ ಸೋಮಸುಂದರ್, ಮನೋಜ್ ತಿವಾರಿ, ಸ್ಟುವರ್ಟ್ ಬಿನ್ನಿ, ಅಭಿಮನ್ಯು ಮಿಥುನ್ ಭಾಗವಹಿಸಿದ್ದರು.

ಇನ್ನೂ ಶ್ರೀಲಂಕಾ ತಂಡದಿಂದ ನಾಯಕ ಮಾರ್ವಿನ್ ಅಟಪಟ್ಟು, ಉಪಲ್ ತರಂಗ, ರೋಮೇಶ್, ಮಿಲಿಂಡಾ, ಅಸೆಲಾ, ಅರವಿಂದ ಡಿ ಸಿಲ್ವಾ, ನೂವಾನ್, ಅಜೆಂತಾ ಮೆಂಡಿಸ್, ತಿಲಾನ್, ಮುತ್ತಯ್ಯ ಮುರಳೀಧರನ್ ಪಾಲ್ಗೊಂಡಿದ್ದರು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 195 ರನ್ ಗಳಿಸಿತ್ತು. ಟೀಂ ಇಂಡಿಯಾ ಪರ ಯೂಸೂಫ್ ಪಠಾಣ್ 32 ಎಸೆತಗಳಲ್ಲಿ ಸ್ಫೋಟಕ 61 ರನ್ ಗಳಿಸಿದ್ದು, ನಮನ್ ಒಜಾ 27 ಎಸೆತಗಳಲ್ಲಿ 53 ರನ್ ಚಚ್ಚಿದರು. ಇನ್ನೂ 196 ರನ್ ಗುರಿ ಬೆನ್ನತ್ತಿದ ಶ್ರೀಲಂಕಾ ತಂಡ 20 ಓವರ್‌ಗಳಲ್ಲಿ 189 ರನ್ ಗಳಿಸಿ ವಿರೋಚಿತ ಸೋಲು ಕಂಡಿತು.



ಲಂಕಾ ತಂಡ ಉತ್ತಮ ಆರಂಭ ಪಡೆದರು ಬಳಿಕ ಟೀಂ ಇಂಡಿಯಾ ವೇಗಿಗಳ ಅರ್ಭಟಕ್ಕೆ ಸಿಲುಕಿ ಪ್ರಮುಖ ವಿಕೆಟ್‌ಗಳನ್ನು ಕಳೆದುಕೊಂಡು ಸೋಲೊಪ್ಪಿಕೊಂಡಿತು.

## ಸ್ಯಾಂಡಲ್‌ವುಡ್ ಡ್ರಗ್ ಕೇಸ್ ಆರೋಪಿಯಿಂದ ವಂಚನೆ

# ನಂಬಿಸಿ ಕೋಟ್ಯಂತರ ರೂಪಾಯಿ ನಾಮ

**ಬೆಂಗಳೂರು:** ಸ್ಯಾಂಡಲ್‌ವುಡ್ ಡ್ರಗ್ ಕೇಸ್ ದೇಶಾದ್ಯಂತ ಸಾಕಷ್ಟು ಚರ್ಚೆ ಮಾಡಿತ್ತು. ಪರಕರಣದಲ್ಲಿ ಆರೋಪಿ ರಾಹುಲ್ ತೋನ್ಸೆ ಹೆಸರು ಸಹ ಕೇಳಿಬಂದಿತ್ತು. ಸದ್ಯ ಇದೇ ಆರೋಪಿ ಇದೀಗ ಬೆಂಗಳೂರಿನ ಉದ್ಯಮಿ ಓರ್ವರಿಗೆ ಕೊಟ್ಯಂತರ ರೂ. ವಂಚನೆ ಮಾಡಿರುವಂತಹ ಘಟನೆ ನಡೆದಿದ್ದು, ಐವರ ವಿರುದ್ಧ ಬಸವೇಶ್ವರ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

25.5 ಕೋಟಿ ರೂ. ವಂಚನೆ

ಕ್ಯಾಸಿನೋದಲ್ಲಿ ಹೂಡಿಕೆ ಮಾಡಿಸಿ ಲಾಭದ ಆಸೆ ತೋರಿಸಿ ಉದ್ಯಮಿ ವಿವೇಕ್ ಹೆಗ್ಡೆ ಎನ್ನುವವರಿಗೆ 25.5 ಕೋಟಿ ರೂ. ವಂಚನೆ ಮಾಡಲಾಗಿದೆ. ಆರೋಪಿ ರಾಹುಲ್ ತೋನ್ಸೆ, ಆತನ ಅಪ್ಪ ರಾಮಕೃಷ್ಣ ರಾವ್, ತಾಯಿ ರಾಜೇಶ್ವರಿ ಸೇರಿ ಐವರ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಎ1 ರಾಮಕೃಷ್ಣ ರಾವ್ ಬಂಧಿಸಿದ್ದಾರೆ.

ಹೂಡಿಕೆ ನೆಪದಲ್ಲಿ ವಂಚನೆ ಮಾಡಿದ್ದಾನೆಂದು ಈ ಹಿಂದೆ ಇಂದಿರಾನಗರದಲ್ಲಿ ತೋನ್ಸೆ ವಿರುದ್ಧ ನಟಿ ಸಂಜನಾ ಗಲ್ರಾನಿ ದೂರು ನೀಡಿದ್ದರು. ಇದೀಗ ಕ್ಯಾಸಿನೋದಲ್ಲಿ ಹೂಡಿಕೆ ಮಾಡುವುದಾಗಿ ನಂಬಿಸಿ ವಿವೇಕ್ ಹೆಗ್ಡೆ ಮತ್ತು ಅವರ ಸ್ನೇಹಿತರಿಗೆ 25.5 ಕೋಟಿ ರೂ. ವಂಚನೆ ಮಾಡಿದ್ದಾರೆ.



2023ರ ಫೆ.7ರಂದು ವಿವೇಕ್‌ಗೆ ಸ್ನೇಹಿತರ ಮೂಲಕ ರಾಮಕೃಷ್ಣ ಪರಿಚಯವಾಗಿದೆ. ಉದ್ಯಮಿ ಕಚೇರಿಯಲ್ಲಿ ಸಾಲ ನೀಡುವ ಬಗ್ಗೆ ಸಭೆ ಆಗಿತ್ತು. ಶ್ರೀಲಂಕಾ, ದುಬೈನಲ್ಲಿ ಕೆಲ ವ್ಯಾಪಾರಗಳಲ್ಲಿ ಲಾಭವಿದೆ ಅಂದು ನಂಬಿಸಿದ್ದರು. ಮಗಳು ರಕ್ಷಾ, ಅಳಿಯ ಚೇತನ್, ಮಗ ರಾಹುಲ್ ಎಲ್ಲಾ ವ್ಯಾಪಾರ ಮಾಡುತ್ತಾರೆ. ಮೊಬೈಲ್ ಮೂಲಕ ಮಗಳು, ಅಳಿಯ ಜೊತೆ ಮಾತನಾಡಿಸಿದ್ದ ರಾಮಕೃಷ್ಣ, ಸಾಲದ ರೂಪದಲ್ಲಿ ನೀಡುವ ಹಣಕ್ಕೆ 4% ಬಡ್ಡಿ ನೀಡುವುದಾಗಿ ತಿಳಿಸಿದ್ದರು. ಅಳಿಯ, ಮಗಳು ಶ್ರೀಲಂಕಾದ ಕ್ಯಾಸಿನೋದಲ್ಲಿ ಟೇಬಲ್ ಹೊಂದಿದ್ದಾರೆ. ರಾಹುಲ್ ವ್ಯವಹಾರ ನಿರ್ವಹಿಸ್ತಿದ್ದಾನೆ ಎಂದು ನಂಬಿಸಿದ್ದ ರಾಮಕೃಷ್ಣರಾವ್, ಹಲವು ಬಾರಿ ಫೋನ್‌ನಲ್ಲಿ ಮಾತುಕತೆ ನಡೆಸಿ, ಹೆಚ್ಚಿನ ಬಡ್ಡಿಯ ಭರವಸೆ ನೀಡಿದ್ದಾರೆ. ಮೊದಲು ರಾಹುಲ್ ಬ್ಯಾಂಕ್ ಖಾತೆಗೆ 30 ಲಕ್ಷ ರೂಪಾಯಿ ಜಮೆ ಮಾಡಲಾಗಿದೆ. ಜೊತೆಗೆ ದೂರುದಾರರಿಗೆ ಶ್ರೀಲಂಕಾಗೆ ಟಿಕೆಟ್, ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಲಾಗಿದೆ. ಬಳಿಕ ವಿವೇಕ್ ಮತ್ತು ನವೀನ್ ಚಂದ್ರ ಕೊಠಾರಿ ಶ್ರೀಲಂಕಾಗೂ ಹೋಗಿದ್ದರು. ಈ ವೇಳೆ ಬೆಲ್ಲಾ, ಜಿಯೋ ಕ್ಯಾಸಿನೋಗೆ ಕರೆದೊಯ್ದು ನಂಬಿಸಿದ್ದರು.

ಹೀಗೆ ನಾಟಕವಾಡಿ 3.5 ಕೋಟಿ ರೂ. ಹಣ ಹೂಡಿಕೆ ಮಾಡಿಸಿಕೊಂಡು ವಂಚನೆ ಮಾಡಿದ್ದು, ಜೊತೆಗೆ ಹೂಡಿಕೆ ನೆಪದಲ್ಲಿ ವಿವೇಕ್ ಸ್ನೇಹಿತರ ಮೂಲಕ 22 ಕೋಟಿ ರೂ. ನೀಡಲಾಗಿತ್ತು. ಹಣ ವಾಪಸ್ ಕೇಳಿದಾಗ ಆರೋಪಿ ಮೊಬೈಲ್ ನಂಬರ್ ಬ್ಲಾಕ್ ಮಾಡಿದ್ದಾರೆ. ಬಳಿಕ ಉದ್ಯಮಿ ವಿವೇಕ್ ಹೆಗ್ಡೆ ಬಸವೇಶ್ವರ ನಗರ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಸಿಕೊಂಡು ಪ್ರಮುಖ ಆರೋಪಿ ರಾಮಕೃಷ್ಣರಾವ್ ಬಂಧಿಸಿದ್ದು, 10 ದಿನ ಪೊಲೀಸ್ ಕಸ್ಟಡಿಗೆ ಪಡೆದು ವಿಚಾರಣೆ ಮಾಡುತ್ತಿದ್ದಾರೆ.

# ಪೀಣ್ಯ ಮೆಟ್ರೋ ನಿಲ್ದಾಣ ಸ್ಥಳಾಂತರಕ್ಕೆ ಬಿಎಂಆರ್‌ಸಿಎಲ್ ಚಿಂತನೆ

**ಬೆಂಗಳೂರು:** ಪೀಣ್ಯದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿರುವ ಆರೆಂಜ್ ಲೈನ್‌ನ ನಮ್ಮ ಮೆಟ್ರೋ ರೈಲು ನಿಲ್ದಾಣವನ್ನು ಹೊರ ವರ್ತುಲ ರಸ್ತೆ ಗೊರಗುಂಟೆಪಾಳ್ಯ ಸಿಗ್ನಲ್ ಬಳಿಗೆ ಸ್ಥಳಾಂತರಿಸುವ ಬಗ್ಗೆ ಬಿಎಂಆರ್‌ಸಿಎಲ್ ಚಿಂತನೆ ನಡೆಸಿದೆ. ನಮ್ಮ ಮೆಟ್ರೋ ಯೋಜನೆಯ 3ನೇ ಹಂತದಲ್ಲಿ ನಿರ್ಮಾಣವಾಗಲಿರುವ ಜೆಪಿ ನಗರ, 4ನೇ ಹಂತದ ಕೆಂಪಾಪುರವರೆಗಿನ 32.15 ಕಿ.ಮೀ ಆರೆಂಜ್ ಲೈನ್ ಅನ್ನು 300 ಮೀ.ಗಳಷ್ಟು ಕಡಿಮೆ ಮಾಡುವ ಉದ್ದೇಶದಿಂದ ಈ ಚಿಂತನೆಗೆ ಮುಂದಾಗಿದೆ. ಹೊಸ ನಿಲ್ದಾಣವು ಪೀಣ್ಯ ಮತ್ತು ಗೊರಗುಂಟೆಪಾಳ್ಯದಲ್ಲಿ ಅಸ್ತಿತ್ವದಲ್ಲಿರುವ ಮೆಟ್ರೋ ನಿಲ್ದಾಣಗಳಿಗೆ ಎರಡು ಪ್ರತ್ಯೇಕ ಪಾದಚಾರಿ ಮೇಲ್ಸೇತುವೆಗಳ ಮೂಲಕ ಸಂಪರ್ಕ ಕಲ್ಪಿಸಲಿದೆ.




ಇತ್ತೀಚೆಗಷ್ಟೇ ಡಿಸಿಎಂ ಡಿಕೆ ಶಿವಕುಮಾರ್ ಮೆಟ್ರೋ ನಿರ್ಮಾಣ ಸ್ಥಳಗಳಿಗೆ ಗುರುವಾರ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಬಿಎಂಆರ್‌ಸಿಎಲ್ ಅಧಿಕಾರಿಗಳು ಡಿಸಿಎಂ ಅವರ ಬಳಿ ಈ ಪ್ರಸ್ತಾವನೆಯನ್ನು ಮಂಡಿಸಿದ್ದಾರೆ. 3 ಹಂತದ ವಿಸ್ತೃತ ಯೋಜನಾ ವರದಿಯನ್ನು ರಾಜ್ಯ ಸರ್ಕಾರ ಈಗಾಗಲೇ ಅನುಮೋದಿಸಿದೆ. 3ನೇ ಹಂತವು ಎರಡು ಕಾರಿಡಾರ್‌ಗಳನ್ನು ಒಳಗೊಂಡಿದೆ. ಅವುಗಳೆಂದರೆ, ಆರೆಂಜ್ ಲೈನ್ ಮತ್ತು 12.5 ಕಿ.ಮೀ ಹೊಸಹಳ್ಳಿಯಿಂದ ಕಡಬಗೆರೆವರೆಗಿನ ಎರಡನೇ ಕಾರಿಡಾರ್‌ನ್ನು ಒಳಗೊಂಡಿದೆ. ಜೆಪಿ ನಗರ, ಮೈಸೂರು ರಸ್ತೆ, ಸುಮನಹಳ್ಳಿ ಮತ್ತು ಪೀಣ್ಯದಲ್ಲಿ ಇಂಟರ್‌ಚೇಂಜ್ ನಿಲ್ದಾಣಗಳನ್ನು ಯೋಜಿಸಲಾಗಿತ್ತು. ಆದರೆ ಪೀಣ್ಯ ಇಂಟರ್‌ಚೇಂಜ್‌ಗೆ ಸಂಬಂಧಿಸಿದಂತೆ ಮರುಪರಿಶೀಲನೆ ನಡೆಯುತ್ತಿದೆ. ಕಾರಣ ಪೀಣ್ಯದಲ್ಲಿ ಇಂಟರ್ ಚೇಂಜ್ ನಿರ್ಮಾಣಕ್ಕೆ ಅತಿ ಹೆಚ್ಚು ಎತ್ತರಿಸಬೇಕಾದ ಅಗತ್ಯವಿದೆ. ಹೀಗಾಗಿ ದೂರ ಕಡಿಮೆ ಮಾಡುವ ಉದ್ದೇಶದಿಂದ ಗೊರಗುಂಟೆಪಾಳ್ಯಕ್ಕೆ ಸ್ಥಳಾಂತರಿಸಲು ಬಿಎಂಆರ್‌ಸಿಎಲ್ ಚಿಂತನೆ ನಡೆಸುತ್ತಿದೆ.

# ದೆಹಲಿ ಚುನಾವಣಾ ಫಲಿತಾಂಶ ಬಿಜೆಪಿ ಮೇಲಿನ ನಂಬಿಕೆ ವೃದ್ಧಿಸಿದೆ: ಸುಧಾಕರ್ ರೆಡ್ಡಿ

**ಬೆಂಗಳೂರು:** ದೆಹಲಿ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ ಕುರಿತು ರಾಜ್ಯ ಬಿಜೆಪಿ ಸಹ ಉಸ್ತುವಾರಿ ಸುಧಾಕರ್ ರೆಡ್ಡಿ ಸಂತೋಷ ವ್ಯಕ್ತಪಡಿಸಿದ್ದಾರೆ. ದೆಹಲಿಯ ಜನತೆಗೆ ಅಭಿನಂದನೆ ಕೋರಿರುವ ಅವರು, ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಚಿಂತನೆಯನ್ನೇ ಧ್ಯೇಯವಾಗಿಸಿಕೊಂಡ ಗೌರವಾನ್ವಿತ ಪ್ರಧಾನಮಂತ್ರಿ ನರೇಂದ್ರ ಮೋದಿಜೀ ಅವರ ನಾಯಕತ್ವವನ್ನು ದೇಶ ಒಪ್ಪಿಕೊಂಡಿದೆ. ದೇಶದಲ್ಲಿ ಬಿಜೆಪಿ ಮೋದಿಯವರು ನುಡಿದಂತೆ ನಡೆದು ತೋರಿಸುತ್ತಿದ್ದಾರೆ. ಇದರಿಂದ ಬಿಜೆಪಿ ಕುರಿತು ಜನರಲ್ಲಿ ನಂಬಿಕೆ – ವಿಶ್ವಾಸ ವೃದ್ಧಿಸಿದೆ. ಈ ವಿಷಯ ದೆಹಲಿ ಚುನಾವಣೆ ಫಲಿತಾಂಶದ ಮೂಲಕ ಸಾಬೀತಾಗಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಆಪ್ ಪ್ರತಿ ಸಂದರ್ಭದಲ್ಲೂ ಸುಳ್ಳು ಹೇಳುತ್ತಿತ್ತು. ಆಪ್ ಮುಖಂಡರು ಭ್ರಷ್ಟ ಸರ್ಕಾರವನ್ನು ನಡೆಸುತ್ತಿದ್ದರು. ಮುಂದಿನ ದಿನಗಳಲ್ಲಿ ದೆಹಲಿ ಜನತೆಗೆ ಒಳಿತಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅಲ್ಲದೇ ಚುನಾವಣೆಯ ಗೆಲುವಿಗೆ ಕಾರಣಕರ್ತರಾದ ಮತದಾರರು, ಶ್ರಮಿಸಿದ ಪಕ್ಷದ ಕಾರ್ಯಕರ್ತರು, ನಾಯಕರನ್ನು ಅಭಿನಂದಿಸಿದ್ದಾರೆ.





Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com